ಸಂಪುಟ: 04 ಸಂಚಿಕೆ: 63 ಪುಟಗಳು: 08 ಶುಕ್ರವಾರ 17 ಮೇ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

# ಉದಯ ವಾಹಿನಿ

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಉತ್ತಮರು ಆತ್ಮವಿಮರ್ಶೆ ಮಾಡಿಕೊಂಡು ತಮ್ಮನ್ನು ತಾವು ತಿದ್ದಿಕೊಳ್ಳುತ್ತಾರೆ. ಅಧಮರು ಮಾತ್ರವೇ ಪರರ ನಿಂದೆ ಮಾಡುತ್ತಾ ಕೆಳಗಿಳಿಯುತ್ತಾರೆ

## ನೀನೇ ಗೆಲ್ಲುತ್ತಿ: ರಘುಪತಿ ಭಟ್‌ಗೆ ಪಂಜುರ್ಲಿ ದೈವದ ಅಭಯ

• ಉದಯವಾಹಿನಿ, ಉಡುಪಿ

ಪಂಜುರ್ಲಿ ದೈವವು ವಿಧಾನ ಪರಿಷತ್ ಚುನಾವಣೆಗೆ ಸ್ಪರ್ಧಿಸು, ನೀನೇ ಗೆಲ್ಲುತ್ತಿ ಎಂದು ಮಾಜಿ ಶಾಸಕ ರಘುಪತಿ ಭಟ್‌ಗೆ ಅಭಯ ನೀಡಿದೆ. ಮಂಗಳವಾರ ರಾತ್ರಿ ರಘುಪತಿ ಭಟ್ಟರ ಮನೆಯಲ್ಲಿ ಪಂಜುರ್ಲಿ ದೈವದ ನೇಮ ನಡೆದಿದ್ದು, ಈ ಸಂದರ್ಭದಲ್ಲಿ ಭಟ್ಟರು ದೈವದಲ್ಲಿ ವಿಧಾನ ಪರಿಷತ್ ಚುನಾವಣೆಯಲ್ಲಿ ತನ್ನ ಸ್ಪರ್ಧೆಯ ಬಗ್ಗೆ ಪ್ರಶ್ನೆ ಕೇಳಿದರು, ಅದಕ್ಕೆ ದೈವವು ಚುನಾವಣೆಗೆ ಸ್ಪರ್ಧಿಸು, ನೀನೇ ಗೆಲ್ಲುತ್ತಿ ಎಂದಿದೆ ಎನ್ನಲಾಗಿದೆ. ಮೂರು ಬಾರಿ ಶಾಸಕನಾಗಿದ್ದ ತಮಗೆ ಪಕ್ಷದಲ್ಲಿ ಸಿಗಬೇಕಾಗಿದ್ದ ಮನ್ನಣೆ ಗೌರವ ಸಿಗುತ್ತಿಲ್ಲ. ಆದ್ದರಿಂದ ತಾನು ವಿಧಾನ ಪರಿಷತ್ತಿನ ನೈರುತ್ಯ ಪದವೀಧರರ ಕ್ಷೇತ್ರಕ್ಕೆ ಬಂಡಾಯ ಅಭ್ಯರ್ಥಿಯಾಗಿ ಸ್ಪರ್ಧಿಸಿಯೇ ಸಿದ್ಧ ಎಂದು ಹೇಳಿದರು. ಟಿಕೆಟ್ ಸಿಗ್ಲಿಲ್ಲ ಅಂತ ಮೇ 20ರ ವರೆಗೆ ಗಲಾಟೆ ಮಾಡ್ತಾನೆ, ನಂತರ ನಾಮಪತ್ರ ಹಿಂದಕ್ಕೆ ಪಡಿತಾನೆ ಎಂದು ಪಕ್ಷದ ನಾಯಕರು ತಿಳಿದುಕೊಂಡಿದ್ದಾರೆ, ಆದರೆ ಸ್ಪರ್ಧೆಯಿಂದ ಹಿಂದಕ್ಕೆ ಸರಿಯುವುದಿಲ್ಲ. ಗೆದ್ದು ಬಿಜೆಪಿಯ ವಿಧಾನ ಪರಿಷತ್ ಟಿಕೆಟ್ ಸಿಗದಂತೆ ಷಡ್ಯಂತ್ರ ಮಾಡಿದರು, ವಿಧಾನ ಪರಿಷತ್ ಚುನಾವಣೆಯ ಟಿಕೆಟ್ ಘೋಷಣೆಯ ಸಂದರ್ಭದಲ್ಲಿ ನಾಯಕರು ತಮ್ಮನ್ನು ಕರೆದು ಮಾತನಾಡಿಸಲಿಲ್ಲ. ಟಿಕೆಟ್ ನೀಡದ ಬಗ್ಗೆ ಮನವರಿಕೆ ಮಾಡಲಿಲ್ಲ, ಈಗ ಬಂದು ಸ್ಪರ್ಧಿಸಬೇಡಿ ಎನ್ನುತ್ತಿದ್ದಾರೆ ಎಂದು ಕಿಡಿಕಾರಿದರು.

## ಶಿಂಧೆ ರಾಜ್ಯಕ್ಕೆ ಕಾಲಿಡಲಿ ನೋಡೋಣ : ಈಶ್ವರ್ ಖಂಡ್ರೆ

• ಉದಯವಾಹಿನಿ, ಬೀದರ್

ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ರಾಜ್ಯಕ್ಕೆ ಕಾಲಿಡಲಿ ನೋಡೋಣ ಎಂದು ಸಚಿವ ಈಶ್ವರ್ ಖಂಡ್ರೆ ಖಡಕ್ ವಾರ್ನಿಂಗ್ ನೀಡಿದರು. ಮಹಾರಾಷ್ಟ್ರದ ಮಾದರಿಯಲ್ಲೇ ರಾಜ್ಯದಲ್ಲೂ ಆಪರೇಷನ್ ನಡೆಯುತ್ತದೆ ಎಂಬ ಶಿಂಧೆ ಹೇಳಿಕೆಗೆ ಪ್ರತಿಕ್ರಿಯಿಸಿದರು. ಸಂವಿಧಾನಿಕ ಸಿಎಂ ಸ್ಥಾನದಲ್ಲಿದ್ದುಕೊಂಡು ಈ ರೀತಿ ಹೇಳಲು ಶಿಂಧೆಗೆ ನಾಚಿಕೆಯಾಗಬೇಕು. ಬರೀ ರಾಜ್ಯದಲ್ಲಿ ಕಳವು ಮಾಡಬೇಕು ಅನ್ನೋದೇ ಅವರ ಉದ್ದೇಶ ಎಂದು ತಿರುಗೇಟು ನೀಡಿದರು. ಆಪರೇಷನ್ ಕಮಲ ಮಾಡೋಣ ಅನ್ನೋದು ಒಂದು ಹಣ, ಆಸ್ತಿ ಕಸಿದುಕೊಳ್ಳುವ ಕೆಲಸ ಮಾಡೋಕೆ, ಇಂಥೋರಿಗೆ ಛೀಮಾರಿ ಹಾಕೋಣ. ಇಲ್ಲೇನು ಕಾಂಗ್ರೆಸ್‌ನವರು ಗಿರಾಕಿಗಳು ಇದ್ದಾರಾ ಹೊತ್ತುಕೊಂಡು ಹೋಗೋಕೆ. ಅವರಿಗೆ ಇಲ್ಲಿ ಸುಮ್ಮನೆ ಬಿಡುತ್ತಾರಾ ಎಂದು ಟಾಂಗ್ ನೀಡಿದರು.

## ಸಿಇಟಿ ಎಡವಟ್ಟಿಗೆ ಕೆಇಎ ಎಂಡಿ ರಮ್ಯಾ ತಲೆದಂಡ

• ಉದಯವಾಹಿನಿ, ಬೆಂಗಳೂರು

ಸಿಇಟಿ ಪ್ರಶ್ನೆ ಪತ್ರಿಕೆ ಎಡವಟ್ಟಿಗೆ ಕೆಇಎ ಎಂಡಿ ರಾಮ್ಯಾ ಅವರ ತಲೆದಂಡವಾಗಿದೆ. ಕೆಇಎ ಎಂಡಿ ಹುದ್ದೆಯಿಂದ ರಮ್ಯಾ ಅವರನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಕೆಇಎ ಕಾರ್ಯನಿರ್ವಾಹಕ ನಿರ್ದೇಶಕರನ್ನಾಗಿ ಪ್ರಸನ್ನ ಅವರನ್ನು ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಪ್ರಸನ್ನ ತಾಂತ್ರಿಕ ಶಿಕ್ಷಣ ಇಲಾಖೆ ನಿರ್ದೇಶಕರಾಗಿದ್ದರು. ಸಿಇಟಿಯಲ್ಲಿ 50ಕ್ಕೂ ಹೆಚ್ಚು ಪಠ್ಯೇತರ ಪ್ರಶ್ನೆ ಕೇಳಿ ಕೆಇಎ ಎಂಡಿ ರಮ್ಯಾ ವಿವಾದಕ್ಕೀಡಾಗಿದ್ದರು. ಇದರಿಂದ ರಾಜ್ಯ ಸರ್ಕಾರ ತೀವ್ರ ಮುಜುಗರಕ್ಕೀಡಾಗಿತ್ತು. ಕೆಇಎ ಎಂಡಿ ರಮ್ಯಾ ವರ್ಗಾವಣೆಗಾಗಿ ಪೋಷಕರು ಒತ್ತಾಯಿಸಿದ್ದರು. ಪೋಷಕರ ಒತ್ತಡಕ್ಕೆ ಮಣಿದ ರಾಜ್ಯ ಸರ್ಕಾರ ರಮ್ಯಾ ಅವರನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

## ಮೇ.24ರವರೆಗೆ ಆಪ್ತ ಸತೀಶ್ ಬಾಬುಗೆ ನ್ಯಾಯಾಂಗ ಬಂಧನ

• ಉದಯವಾಹಿನಿ, ಬೆಂಗಳೂರು

ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವೀಡಿಯೋ ಪೆನ್‌ಡ್ರೈವ್ ಕೇಸ್‌ನಲ್ಲಿ ಸಂತ್ರಸ್ತೆಯನ್ನು ಅಪಹರಿಸಿದ್ದ ಆರೋಪಿ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣರ ಆಪ್ತ ಸತೀಶ್ ಬಾಬುಗೆ ಮೇ.24ರವರೆಗೆ ನ್ಯಾಯಾಂಗ ಬಂಧನವನ್ನು ವಿಧಿಸಿ ಇಂದು ಕೋರ್ಟ್ ಆದೇಶ ಹೊರಡಿಸಿದೆ. ಮೈಸೂರಿನ ಕೆ.ಆರ್.ನಗರ ಠಾಣೆಯಲ್ಲಿ ದಾಖಲಾಗಿದ್ದ ಈ ಪ್ರಕರಣದಲ್ಲಿ ರೇವಣ್ಣ ಸಹ ಈಗಾಗಲೇ ಷರತ್ತುಬದ್ಧ ಜಾಮೀನಿನ ಮೇಲೆ ಜೈಲಿನಿಂದ ಹೊರಬಂದಿದ್ದಾರೆ. ಆದರೆ ಇದೇ ಪ್ರಕರಣದಲ್ಲಿ ಬಂಧನಕ್ಕೆ ಒಳಗಾಗಿರುವ ಆರೋಪಿ ಸತೀಶ್ ಬಾಬುನನ್ನು ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯ ನ್ಯಾಯಾಂಗ ಬಂಧನ ವಿಧಿಸಿದೆ. ಈ ಕೇಸ್ ಕುರಿತಂತೆ ಇನ್ನೊಬ್ಬ ಆರೋಪಿ ಕೀರ್ತಿ ಎಂಬಾತನ ಹೆಚ್ಚಿನ ವಿಚಾರಣೆಗಾಗಿ ಪೊಲೀಸರ ಕಷ್ಟಡಿಗೆ ನೀಡಿಯೂ ಕೋರ್ಟ್ ಆದೇಶಿಸಿದೆ. ಸಂತ್ರಸ್ತೆಯ ಪುತ್ರ ತನ್ನ ತಾಯಿ ಕಿಡ್‌ನ್ಯಾಪ್ ಆಗಿದ್ದಾರೆ ಎಂದು ರೇವಣ್ಣ ವಿರುದ್ಧ ದೂರು ನೀಡಿದ್ದರು.

# ಅಭಿವೃದ್ಧಿಯ ಅಧ್ಯಾಯ ಜನರ ಆದಾಯ

■ ಬಿಜೆಪಿಯಿಂದ ಶೀಘ್ರವೇ ಸೀತೆಗಾಗಿ ಮಂದಿರ ನಿರ್ಮಾಣ ■ ಅಮಿತ್ ಶಾ ಮಹತ್ವದ ಘೋಷಣೆ ■ ಪಾಕಿಸ್ತಾನದಿಂದ ಬಂದ ಹಿಂದುಗಳಿಗೆ ಸಿಎಎ ಅನ್ವಯ ಭಾರತದ ಪೌರತ್ವ ■ ದೆಹಲಿಯಲ್ಲಿ ಸಂಭ್ರಮ

**ಮೋದಿಯ ಸಹಕಾರ ಅಭಿವೃದ್ಧಿಯ ಭರಪೂರ**

• ಉದಯವಾಹಿನಿ, ಉತ್ತರಪ್ರದೇಶ

ಜೌನ್‌ಪುರದಲ್ಲಿ ನಡೆದ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಭಾಷಣ ಮಾಡುತ್ತಿದ್ದಾಗ ಸಭೆಯಲ್ಲಿದ್ದ ಮೋದಿ, ಉತ್ತರಪ್ರದೇಶ ಸಿಎಂ ಯೋಗಿ ಆದಿತ್ಯಾನಾಥ್ ಅವರ ವೇಷ ತೊಟ್ಟಿದ್ದ ಇಬ್ಬರು ಬಾಲಕರನ್ನು ಗುರುತಿಸಿದ ಪ್ರಧಾನಿ ನರೇಂದ್ರ ಮೋದಿ, ಯೇ ಕ್ಯಾ ಬಡಿಯಾ ಮೇಕ್ ಅಪ್ ಕಿಯಾ ಹೇ(ಅಬ್ಬಾ ಎಂಥಾ ಮೇಕಪ್ ಮಾಡಿದ್ದೀರಿ)' ಎಂದು ಮೆಚ್ಚುಗೆ ವ್ಯಕ್ತಪಡಿಸುವ ಮೂಲಕ ಗಮನ ಸೆಳೆದಿದ್ದಾರೆ. ಬಿಜೆಪಿ ಅಭ್ಯರ್ಥಿಗಳಾದ ಕೃಪಾ ಶಂಕರ್ ಸಿಂಗ್ ಮತ್ತು ಬಿಪಿ ಸರೋಜ್ ಪರ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಮುಂದಿನ ಐದು ವರ್ಷಗಳಲ್ಲಿ ಸಿಎಂ ಯೋಗಿ ಅವರ ಸಹಕಾರದೊಂದಿಗೆ ಇಡೀ ಪೂರ್ವಾಂಚಲ ಪ್ರದೇಶದಲ್ಲಿ ಬದಲಾವಣೆ ಗಾಳಿ ಬೀಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದೆ. ಈ ವೇಳೆ ಅವರು ಸಭೆಯ ನಡುವೆ ವಿಶೇಷ ಉಡುಗೆ ತೊಡುಗೆಯಲ್ಲಿ ಮಿಂಚುತ್ತಿದ್ದ ಇಬ್ಬರು ಬಾಲಕರನ್ನು ಗಮನಿಸಿ ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕಾನೂನು ಸುವ್ಯವಸ್ಥೆ ಜಾರಿ ಕುರಿತು ಉತ್ತರಪ್ರದೇಶ ಮುಖ್ಯಮಂತ್ರಿಯನ್ನು ಶ್ಲಾಘಿಸಿದ ಮೋದಿ, ನೀವು ಸಮಾಜವಾದಿ ಪಾರ್ಟಿಯ ಗೂಂಡಾರಾಜ್'ನ ಹಳೆಯ ದಿನಗಳನ್ನು ನೋಡಿದ್ದೀರಿ. ಯೋಗಿಜಿ ನನ್ನ ಸ್ವಚ್ಛತಾ ಅಭಿಯಾನ'ವನ್ನು ಸರಿಯಾಗಿ ಜಾರಿಗೆ ತಂದಿದ್ದಾರೆ. ಉತ್ತರಪ್ರದೇಶದಲ್ಲಿ ಇದ್ದ ಗ್ಯಾಂಗ್‌ಗಳು, ಗಲಭೆಕೋರರು, ಮಾಫಿಯಾಗಳು, ಅಪಹರಣಕಾರರು ಮತ್ತು ಸುಲಿಗೆಕೋರರ ವಿರುದ್ಧ ಕಠಿಣ ಕ್ರಮ ಜರುಗಿಸಿದ್ದಾರೆ ಎಂದಿದ್ದಾರೆ. ಹತ್ತು ವರ್ಷಗಳ ಹಿಂದೆ ಇಲ್ಲಿ ಜನರು ದೇವರ ಭರವಸೆಯಲ್ಲಿ ಬದುಕುತ್ತಿದ್ದರು. ಕೆಲವು ಕಡೆ ಬಾಂಬ್ ದಾಳಿ, ಕೆಲವು ಕಡೆ ಸ್ಲೀಪರ್ ಸೆಲ್, ಕೆಲವು ಕಡೆ ಕೋಮು ಘರ್ಷಣೆ, ಇನ್ನು ಕೆಲವು ಕಡೆ ಭಯೋತ್ಪಾದನೆಯಿಂದ ಸಂಕಷ್ಟ ಪರಿಸ್ಥಿತಿ ಇತ್ತು. ಸಾವಿರಾರು ತಾಯಂದಿರು ತಮ್ಮ ಮಕ್ಕಳನ್ನು ಕಳೆದುಕೊಂಡರು. ಈ ಹಿಂದಿನ ಸರ್ಕಾರಗಳು ಅಂತಹ ದುಷ್ಟರಿಗೆ ಸಹಕಾರ ನೀಡುತ್ತಿದ್ದವು ಎಂದರು ಮೋದಿ. ಈಗಲೂ ನಿಮ್ಮ ಮೀಸಲಾತಿಯನ್ನು ಕಿತ್ತು ಸಮುದಾಯವೊಂದಕ್ಕೆ ನೀಡಲು ಆ ಪಕ್ಷಗಳು ಚಿಂತಿಸಿವೆ. ಬಜೆಟ್ 15% ಅಲ್ಪಸಂಖ್ಯಾತರ ಹೆಸರಿನಲ್ಲಿ ಹೋಗುತ್ತಿದೆ. 70 ವರ್ಷಗಳಿಂದ ಹಿಂದೂ ಮುಸ್ಲಿಂ ರಾಜಕೀಯ ಮಾಡಿವೆ. ನಾವು ಒಂದಾಗಿ ಹೋಗಬೇಕು, ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಬೇಕು ಎಂದರು.

ಸಿಎಎ ಅಡಿಯಲ್ಲಿ ನಿರಾಶ್ರಿತರಿಗೆ ಪೌರತ್ವ ನೀಡುವ ಕೆಲಸ ಈಗಾಗಲೇ ಪ್ರಾರಂಭವಾಗಿದೆ. ಇವರು ದೇಶದಲ್ಲಿ ನಿರಾಶ್ರಿತರಾಗಿ ದೀರ್ಘಕಾಲ ವಾಸಿಸಿದ್ದಾರೆ. ಇವರು ಧರ್ಮದ ಆಧಾರದ ಮೇಲೆ ಮಾಡಿದ ದೇಶ ವಿಭಜನೆಗೆ ಬಲಿಯಾದವರು. ಆದರೆ ವಿರೋಧ ಪಕ್ಷಗಳಾದ ಎಸ್‌ಪಿ, ಕಾಂಗ್ರೆಸ್ ಕಾನೂನಿನ ಬಗ್ಗೆ ತಪ್ಪು ಮಾಹಿತಿಯನ್ನು ಹರಡುವ ಮೂಲಕ ಗಲಭೆಗಳನ್ನು ಪ್ರಚೋದಿಸುತ್ತಿವೆ. ಈ ನಿರಾಶ್ರಿತರನ್ನು ಕಾಂಗ್ರೆಸ್ ನಿರ್ಲಕ್ಷಿಸಿದೆ. ಅವರು ಉತ್ತರ ಪ್ರದೇಶ ಮತ್ತು ಇಡೀ ದೇಶದಲ್ಲಿ ಗಲಭೆಯನ್ನು ಸೃಷ್ಟಿಸಲು ಪ್ರಯತ್ನಿಸಿದರು ಎಂದು ಮೋದಿ ಆರೋಪಿಸಿದರು.



**1** ಪಿಒಕೆ ಎಂದೆಂದಿಗೂ ಭಾರತದ ಭೂಭಾಗ ಎಂದ ಕೇಂದ್ರ ಗೃಹ ಸಚಿವ ಅಮಿತ್ ಶಾ


**2** ಮುಂಬರುವ ದಿನಗಳಲ್ಲಿ ನಾವು ಅದನ್ನು ಮರಳಿ ಪಡೆಯುತ್ತೇವೆ ಎಂದ ಸಚಿವರು

**3** ಪಶ್ಚಿಮ ಬಂಗಾಳದ ಸೆರಾಂಪೋರ್‌ನ ಚುನಾವಣಾ ಪ್ರಚಾರ ಸಭೆಯಲ್ಲಿ ಭರವಸೆ 4 ಪಿಒಕೆಯಲ್ಲಿ ನಡೆಯುತ್ತಿರುವ ಪ್ರತಿಭಟನೆ ವಿಚಾರ ಪ್ರಸ್ತಾಪಿಸಿ ಈ ಭರವಸೆ ನೀಡಿದ ಶಾ

**ಪ್ರಧಾನಿ ಮೋದಿ ತಮ್ಮ ಚುನಾವಣಾ ಪ್ರಚಾರದ ವೇಳೆ, ಅದೆಷ್ಟು ಅಬ್ಬರದ ಭಾಷಣದಲ್ಲಿ ತೊಡಗಿದ್ದರೂ ಎದುರಿಗೆ ನೆರೆದಿರುವ ಜನರ ಮೇಲೆ ಪ್ರತ್ಯೇಕ ಗಮನ ಇದ್ದೇ ಇರುತ್ತದೆ. ಕೆಲವೊಮ್ಮೆ ಸಭಿಕರ ನಡುವೆ ಏನಾದರೂ ವಿಚಾರಗಳು ಕಂಡು ಬಂದಲ್ಲಿ ತಕ್ಷಣ ಅಲ್ಲೇ ಅದಕ್ಕೆ ಪ್ರತಿಕ್ರಿಯಿಸಿ ಗಮನ ಸೆಳೆದದ್ದೂ ಇದೆ. ಇದೀಗ ಮತ್ತೆ ಅಂತಹದ್ದೇ ಒಂದು ಘಟನೆ ಉತ್ತರಪ್ರದೇಶದಲ್ಲಿ ನಡೆದಿದೆ.**

### ಸೀತಾ ಮಾತೆ ಮಂದಿರ ನಿರ್ಮಾಣ

ಕೇಂದ್ರ ಗೃಹ ಸಚಿವ ಅಮಿತ್ ಶಾ ಮಹತ್ವದ ಘೋಷಣೆಯೊಂದನ್ನು ಬಿಹಾರ ಚುನಾವಣೆ ರ್ಯಾಲಿಯಲ್ಲಿ ಮಾಡಿದ್ದಾರೆ. ರಾಮಮಂದಿರ ಆಯ್ತು ಇನ್ನು ಬಿಹಾರದ ಸೀತಾಮರ್ಹಿಯಲ್ಲಿ ಸೀತಾ ಮಂದಿರವನ್ನು ಮಾಡುತ್ತೇವೆ ಎಂದು ಹೇಳಿದ್ದಾರೆ. ಇದಕ್ಕೆ ಮೋದಿ ಅವರದೇ ನೇತೃತ್ವ ಎಂದು ಹೇಳಿದ್ದಾರೆ. ಬಿಹಾರದಲ್ಲಿ ಲೋಕಚುನಾವಣೆ ಪ್ರಚಾರದಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಒಂದು ಮಹತ್ವದ ಘೋಷಣೆ ಮಾಡಿದ್ದಾರೆ. ಬಿಹಾರದ ಸೀತಾಮರ್ಹಿಯಲ್ಲಿ ಸೀತಾ ಮಾತೆಯ ಮಂದಿರವನ್ನು ಬಿಜೆಪಿ ನಿರ್ಮಿಸಲಿದೆ ಎಂದು ಹೇಳಿದೆ. ರಾಮ ಮಂದಿರ ಆಯಿತು ಇನ್ನು ಸೀತಾ ಮಂದಿರವನ್ನು ನಿರ್ಮಾಣ ಮಾಡುತ್ತೇವೆ ಎಂದು ಹೇಳಿದ್ದಾರೆ. ನಾವು 'ವೋಟ್ ಬ್ಯಾಂಕ್'ಗೆ ಹೆದರುವುದಿಲ್ಲ. . ಅಯೋಧ್ಯೆಯಲ್ಲಿ ರಾಮಲಲ್ಲಾ ಮಂದಿರವನ್ನು ನಿರ್ಮಿಸಿದ ಪ್ರಧಾನಿ ಮೋದಿಗೆ ಈಗ ಉಳಿದಿರುವ ಕೆಲಸವೆಂದರೆ ಮಾ ಸೀತೆಯ ಜನ್ಮಸ್ಥಳದಲ್ಲಿ ದೊಡ್ಡ ಸ್ಮಾರಕವನ್ನು ನಿರ್ಮಿಸುವುದು. ರಾಮನನ್ನು ಮಂದಿರದಿಂದ ಹಾಗೂ ಆತನ ಜನ್ಮಸ್ಥಳದಿಂದ ದೂರವಿಟ್ಟರು. ಆದರೆ ಸೀತೆಯನ್ನು ಆಕೆಯ ಜನ್ಮಸ್ಥಳದಿಂದ ದೂರವಿಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.



### ಜನರ ಆದಾಯ ಹೆಚ್ಚಿಸಿದರು..!

ಮೋದಿ 2014ರಲ್ಲಿ ಪ್ರಧಾನಿ ಕುರ್ಚಿಯಲ್ಲಿ ಕೂರುವ ಹೊತ್ತಿಗೆ ಜಾಗತಿಕ ಮಟ್ಟದಲ್ಲಿ ಭಾರತದ ಅರ್ಥವ್ಯವಸ್ಥೆಯ ಸ್ಥಾನ 11ರಲ್ಲಿತ್ತು. ದೇಶವನ್ನು ಸ್ವಾವಲಂಬಿಯಾಗಿ ರೂಪಿಸಬೇಕು ಎಂಬ ಕನಸು ಕಟ್ಟಿಕೊಂಡು, ಯಾವುದೇ ರಜೆ ಪಡೆಯದೇ, ಅಭಿವೃದ್ಧಿ ಪಥದಲ್ಲಿ ಮುನ್ನಡೆಸಿದ್ದರ ಫಲವಾಗಿ ದೇಶವೀಗ ಜಗತ್ತಿನಲ್ಲೇ 5ನೇ ಬಲಾಢ್ಯ ಆರ್ಥಿಕ ರಾಷ್ಟ್ರವಾಗಿದೆ.

### ಪೌರತ್ವ ತಿದ್ದುಪಡಿ ಕಾಯ್ದೆ ಎಂದರೇನು



2014 ರ ಡಿಸೆಂಬರ್ 31 ಕ್ಕಿಂತ ಮೊದಲು ನೆರೆಯ ಮುಸ್ಲಿಂ ಬಹುಸಂಖ್ಯಾತ ದೇಶಗಳಾದ ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ ವಲಸೆ ಬಂದ ಹಿಂದೂಗಳು, ಸಿಖ್ಖರು, ಕ್ರಿಶ್ಚಿಯನ್ನರು, ಬೌದ್ಧರು, ಜೈನರು ಮತ್ತು ಪಾರ್ಸಿಗಳಿಗೆ ಭಾರತೀಯ ಪೌರತ್ವಕ್ಕೆ ಮಾರ್ಗವನ್ನು ಒದಗಿಸಲು ಸಿಎಎ 1955 ರ ಪೌರತ್ವ ಕಾಯ್ದೆಗೆ ತಿದ್ದುಪಡಿ ಮಾಡಲಾಗಿದೆ. ಸಿಎಎ ಅನುಷ್ಠಾನದ ಬಗ್ಗೆ ಆಡಳಿತಾರೂಢ ಭಾರತೀಯ ಜನತಾ ಪಕ್ಷವು ತನ್ನ ಹಿಂದಿನ ಚುನಾವಣಾ ಪ್ರಣಾಳಿಕೆಯಲ್ಲಿ ಭರವಸೆ ನೀಡಿತ್ತು. ಆದರೆ ಅದರ ನಿಯಮಗಳನ್ನು ತಿಳಿಸಿರಲಿಲ್ಲ. ಕಾಯ್ದೆಯ 2019ರ ತಿದ್ದುಪಡಿಯ ಪ್ರಕಾರ ಡಿಸೆಂಬರ್ 31, 2014 ರವರೆಗೆ ಭಾರತಕ್ಕೆ ಪ್ರವೇಶಿಸಿದ ಮತ್ತು ತಮ್ಮ ಮೂಲ ದೇಶದಲ್ಲಿ ''ಧಾರ್ಮಿಕ ಕಿರುಕುಳ ಅಥವಾ ಭಯ ಅಥವಾ ಧಾರ್ಮಿಕ ಕಿರುಕುಳ'' ಅನುಭವಿಸಿದ ವಲಸಿಗರಿಗೆ ಭಾರತೀಯ ಪೌರತ್ವ ಲಭಿಸುತ್ತದೆ. ಸಿಎಎಗೆ 2019 ರ ತಿದ್ದುಪಡಿ ಮೂಲಕ ಮೇಲೆ ಹೇಳಿರುವ ದೇಶಗಳ ಮುಸ್ಲಿಮೇತರ ವಲಸಿಗರಿಗೆ ಪೌರತ್ವ ನೀಡುವ ಕಾಯುವಿಕೆಯ ಹನ್ನೆರಡು ವರ್ಷಗಳನ್ನು ಕೇವಲ ಆರು ವರ್ಷಗಳಿಗೆ ಇಳಿಸಲಾಗಿದೆ. ಸಿಎಎ ಕುರಿತ ಗುಪ್ತಚರ ಬ್ಯೂರೋ ವರದಿಯ ಪ್ರಕಾರ, ಕಾಯ್ದೆಯ ನಿಯಮಗಳು ಪ್ರಕಟಗೊಂಡ ತಕ್ಷಣವೇ 30,000 ಕ್ಕೂ ಹೆಚ್ಚು ಫಲಾನುಭವಿಗಳು (ವಲಸಿಗರು) ಇದರ ಲಾಭವನ್ನು ಪಡೆಯುತ್ತಾರೆ.

## ಪ್ರಜ್ವಲ್, ಭವಾನಿ ರೇವಣ್ಣ ಮೇಲೆ ದೇವೇಗೌಡರು ಫುಲ್ ಗರಂ

• ಉದಯವಾಹಿನಿ, ಬೆಂಗಳೂರು


ಮಹಿಳೆಯರ ಲೈಂಗಿಕ ದೌರ್ಜನ್ಯ ಮತ್ತು ಅಪಹರಣ ಪ್ರಕರಣದಲ್ಲಿ ಸಿಲುಕಿಕೊಂಡಿರುವ ಪ್ರಜ್ವಲ್ ರೇವಣ್ಣ ಮತ್ತು ಭವಾನಿ ರೇವಣ್ಣ ವಿರುದ್ಧ ಜೆಡಿಎಸ್ ವರಿಷ್ಠ ಎಚ್ ಡಿ ದೇವೇಗೌಡರು ಗರಂ ಆಗಿದ್ದಾರೆ ಎಂದು ತಿಳಿದುಬಂದಿದೆ. ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಎಸ್‌ಐಟಿ ತನಿಖೆಗೆ ಹಾಜರಾಗದೇ ಪ್ರಜ್ವಲ್ ರೇವಣ್ಣ ವಿದೇಶದಲ್ಲಿ ತಲೆಮರೆಸಿಕೊಂಡಿದ್ದಾರೆ. ಇತ್ತ ಮಹಿಳೆಯ ಅಪಹರಣ ಪ್ರಕರಣದಲ್ಲಿ ಎರಡೆರಡು ಬಾರಿ ಎಸ್‌ಐಟಿ ನೋಟಿಸ್ ನೀಡಿದರೂ ಭವಾನಿ ರೇವಣ್ಣ ಕೂಡಾ ಆರೋಗ್ಯದ ನೆಪ ಹೇಳಿ ತಪ್ಪಿಸಿಕೊಂಡಿದ್ದಾರೆ.

ರೇವಣ್ಣ ಜೈಲಿಗೆ ಹೋದರೂ ಪ್ರಜ್ವಲ್ ವಿದೇಶದಿಂದ ಬಂದಿಲ್ಲ. ಈ ಪ್ರಕರಣ ದೇವೇಗೌಡರು ಇಷ್ಟು ದಿನ ಕಷ್ಟಪಟ್ಟು ಗಳಿಸಿದ್ದ ಗೌರವ, ಪ್ರತಿಷ್ಠೆಯನ್ನು ಮಣ್ಣುಪಾಲು ಮಾಡಿದೆ. ಹೀಗಾಗಿ ದೇವೇಗೌಡರು ಸೊಸೆ ಮತ್ತು ಮೊಮ್ಮಗನ ಮೇಲೆ ಗರಂ ಆಗಿದ್ದಾರೆ. ಇದೇ ಕಾರಣಕ್ಕೆ ರೇವಣ್ಣ ಮೂಲಕ ಎಚ್ಚರಿಕೆ ನೀಡಿದ್ದಾರಂತೆ.

ಭವಾನಿ ರೇವಣ್ಣ ಸದ್ಯಕ್ಕೆ ಶಸ್ತ್ರಚಿಕಿತ್ಸೆಗೊಳಗಾಗಿದ್ದು, ರೇವಣ್ಣ ಜೈಲಿನಿಂದ ಬಿಡುಗಡೆಯಾದ ಸಂದರ್ಭದಲ್ಲೂ ಜೊತೆಗಿರಲಿಲ್ಲ. ಕಷ್ಟದ ಸಂದರ್ಭದಲ್ಲೂ ಮಗ, ಸೊಸೆ ಬಂದಿಲ್ಲ ಎನ್ನುವುದು ದೇವೇಗೌಡರ ಅಸಮಾಧಾನಕ್ಕೆ ಕಾರಣವಾಗಿದೆ.

### ಹುಟ್ಟುಹಬ್ಬ ಆಚರಿಸಿಕೊಳ್ಳಲ್ಲ

ದೇವೇಗೌಡರು ಮೇ 18ರಂದು 91 ವರ್ಷ ಪೂರೈಸಿ 92ನೇ ವಸಂತಕ್ಕೆ ಕಾಲಿಡಲಿದ್ದು, ಆದರೆ ಈ ಬಾರಿ ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳದಿರಲು ತೀರ್ಮಾನಿಸಿದ್ದಾರೆ. ಅಭಿಮಾನಿಗಳು ಹಾಗೂ ಜಾತ್ಯತೀತ ಜನತಾದಳ ಪಕ್ಷದ ಕಾರ್ಯಕರ್ತರಲ್ಲಿ ನನ್ನ ವಿನಂತಿ. ಕಾರಣಾಂತರಗಳಿಂದ ನಾನು ಜನ್ಮದಿನ ಆಚರಣೆ ಮಾಡಿಕೊಳ್ಳುತ್ತಿಲ್ಲ ಎಂದರು.



## ಗೃಹ ಖಾತೆ ನಿಭಾಯಿಸಲಾಗದ ಜಿ. ಪರಮೇಶ್ವರ್ ರಾಜೀನಾಮೆ ಸಲ್ಲಿಸಲಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಗೃಹ ಸಚಿವರಿಗೆ ಸೂಕ್ಷ್ಮತೆ, ಹಿರಿತನ ಇದ್ದರೆ ಅವರು ತಮ್ಮ ಹುದ್ದೆಗೆ ರಾಜೀನಾಮೆ ಕೊಡಬೇಕು ಎಂದು ಮಾಜಿ ಡಿಸಿಎಂ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಅವರು ಆಗ್ರಹಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗೃಹ ಇಲಾಖೆಯಲ್ಲಿ ಗರಿಷ್ಠ ಹಸ್ತಕ್ಷೇಪ ಇದೆ.

ಗೃಹ ಸಚಿವರೂ ಸಂಪೂರ್ಣ ಅಸಹಾಯಕರಾಗಿದ್ದಾರೆ ಎಂದು ತಿಳಿಸಿದರು. ಯಾವ ಪೊಲೀಸ್ ಅಧಿಕಾರಿಗಳೂ ಬಿಗಿಯಾಗಿ, ಪ್ರಾಮಾಣಿಕವಾಗಿ ಕೆಲಸ ಮಾಡಲು ಸಾಧ್ಯವಾಗದಂಥ ವ್ಯವಸ್ಥೆ ಇಲ್ಲಿದೆ ಎಂದು ಹೇಳಿದರು. ಈ ಜಡತ್ವವನ್ನು ಹೋಗಲಾಡಿಸಿ ಸರಿಪಡಿಸಲು ಸರಕಾರ ಮುಂದಾಗಬೇಕಿದೆ. ಸಂತ್ರಸ್ತರಿಗೆ ಸಮರ್ಪಕ ಪರಿಹಾರ ಕೊಡಬೇಕು. ಪರಿಹಾರ ಕೊಡಬಾರದ ಸಂದರ್ಭದಲ್ಲಿ ಈ ಸರಕಾರ ಪರಿಹಾರ ಕೊಟ್ಟಿದೆ. ಕಾನೂನು ಕ್ರಮವನ್ನು ಬಿಗಿಗೊಳಿಸಬೇಕು. ಗೃಹ ಸಚಿವರು ರಾಜೀನಾಮೆ ನೀಡಬೇಕು; ಸಿಎಂ, ಗೃಹ ಸಚಿವರ ರಾಜೀನಾಮೆ ಪಡೆದುಕೊಳ್ಳಲಿ ಎಂದು ಅವರು ಆಗ್ರಹಿಸಿದರು. ಕಾಂಗ್ರೆಸ್ ಸರಕಾರವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಒಂದು ವರ್ಷ ಪೂರೈಸುತ್ತಿದೆ. ಈ ಒಂದು ವರ್ಷದ ಅವಧಿಯಲ್ಲಿ ಇಡೀ ಕರ್ನಾಟಕದಲ್ಲಿ ಕೊಲೆ, ಸುಲಿಗೆ, ಮತಾಂಧ ಶಕ್ತಿಗಳ ವಿಜೃಂಭಣೆ, ತುಷ್ಟೀಕರಣದ ರಾಜಕಾರಣ ಸೇರಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ಅವರು ಆರೋಪಿಸಿದರು.

### ವಿಶೇಷ ನ್ಯಾಯಾಲಯ ಸ್ಥಾಪನೆ

ಸೋಮವಾರಪೇಟೆಯಲ್ಲಿ ನಿಶ್ಚಿತಾರ್ಥವಾಗಿದ್ದ ಹುಡುಗನಿಂದಲೇ ಬಾಲಕಿಯ ರುಂಡ ಕಡಿದ ಪ್ರಕರಣ ಸಂಬಂಧ ತ್ವರಿತ ವಿಚಾರಣೆಗಾಗಿ ವಿಶೇಷ ನ್ಯಾಯಾಲಯ ಸ್ಥಾಪಿಸಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು. ಇದೊಂದು ಭೀಕರವಾದ ಘಟನೆ. ಮನುಷ್ಯರು ಯಾರೂ ಒಪ್ಪದಂತಹ ಘಟನೆ. ಇಂತಹ ಘಟನೆ ನಡೆಯಬಾರದಿತ್ತು. ಪ್ರಕರಣದ ವಿಚಾರಣೆಗೆ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್‌ಗಳನ್ನು ನೇಮಕ ಮಾಡಲಾಗುವುದು ಎಂದರು.!



# ಅಂಜಲಿ ಕೊಲೆಗೆ ಪೊಲೀಸರೇ ಕಾರಣ: ಬೊಮ್ಮಾಯಿ ಆರೋಪ

## ರಾಜ್ಯದಲ್ಲಿ ಪೊಲೀಸರನ್ನು ರಾಜಕೀಯ ವಿರೋಧಿಗಳ ದಮನಕ್ಕಾಗಿ ಬಳಕೆ: ಮಾಜಿ ಸಿಎಂ ಕೆಂಡಾಮಂಡಲ

• ಉದಯವಾಹಿನಿ, ಗದಗ

ಅಂಜಲಿ ಕೊಲೆ ಬೆದರಿಕೆ ದೂರು ನೀಡಿದ್ದರೂ ಆರೋಪಿಯನ್ನು ಬಂಧಿಸದೇ ಪೊಲೀಸರು ಪರೋಕ್ಷವಾಗಿ ಅಂಜಲಿ ಕೊಲೆಗೆ ಕಾರಣರಾಗಿದ್ದಾರೆ. ರಾಜ್ಯದಲ್ಲಿ ಪೊಲೀಸರನ್ನು ರಾಜಕೀಯ ವಿರೋಧಿಗಳ ದಮನಕ್ಕಾಗಿ ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಗದಗನಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ ನೇಹಾ ಹಾಗೂ ಅಂಜಲಿ ಹತ್ಯೆ ಪ್ರಕರಣ ಕುರಿತು. ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು. ಈ ಪ್ರಕರಣದಲ್ಲಿ ಸಂಪೂರ್ಣವಾಗಿ ಪೊಲೀಸರ ವೈಫಲ್ಯವಿದೆ. ನೇಹಾ ತರನಾಗಿ ಕೊಲೆ ಮಾಡುವುದಾಗಿ ಹೇಳಿದ್ದಾನೆ. ಈ ಬಗ್ಗೆ ಅಂಜಲಿ ಮನೆಯವರು ದೂರು ಸಹ ನೀಡಿದ್ದಾರೆ. ಪೊಲೀಸರು ಆರೋಪಿಯನ್ನು ಬಂಧಿಸಿದ್ದರೆ ಈ ಕೊಲೆ ತಪ್ಪಿಸಬಹುದಿತ್ತು.

**ಒಂದು ಕಡೆ ಸಾವಿರ ವಿದ್ಯಾರ್ಥಿಗಳ ಮಧ್ಯೆ ನೇಹಾ ಕೊಲೆ ಆಗುತ್ತಾಳೆ. ಮತ್ತೊಂದು ಕಡೆ ಅಂಜಲಿ ಮನೆ ಹೊಕ್ಕು ಕೊಲೆ ಮಾಡುತ್ತಾರೆ ಅಂದರೆ, ಇದು ಗೂಂಡಾ ರಾಜ್ಯ ಅಲ್ಲದೆ ಇನ್ನೇನು? ಇಷ್ಟೇಲ್ಲಾ ಆದರೂ ಸಿಎಂ ಹಾಗೂ ಗೃಹ ಸಚಿವರು ಏನು ಆಗೇ ಇಲ್ಲ ಅನ್ನುವ ರೀತಿಯಲ್ಲಿದ್ದಾರೆ.**

**-ಬಸವರಾಜ ಬೊಮ್ಮಾಯಿ, ಮಾಜಿ ಸಿಎಂ**



ಕೊಲೆಯನ್ನು ತಡೆಯದೇ ಪರೋಕ್ಷವಾಗಿ ಕೊಲೆಗೆ ಪೊಲೀಸರು ಕಾರಣರಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಪೊಲೀಸರನ್ನು ರಾಜಕೀಯ ವಿರೋಧಿಗಳ ಧಮನಕ್ಕಾಗಿ ಬಳಕೆ ಮಾಡುತ್ತಿದ್ದಾರೆ.

### ಸಚಿವರಿಗೆ ಪ್ರಶ್ನೆಗಳ ಸುರಿಮಳೆ

ಗೃಹ ಸಚಿವ ಪರಮೇಶ್ವರ ಅವರಿಗೆ ಪ್ರಶ್ನಿಸಿದ ಬಸವರಾಜ ಬೊಮ್ಮಾಯಿ, ನೇಹಾ ಕೊಲೆ ಆದಾಗ ಬರಲಿಲ್ಲ, ತನಿಖೆ ಚುರುಕುಗೊಳಿಸಲಿಲ್ಲ. ಅಂಜಲಿ ಕೊಲೆ ಆದಾಗಲೂ ಉದಾಸೀನ ಮಾಡುತ್ತಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಮಹಿಳೆ ಮೇಲೆ ಸಾಮೂಹಿಕ ರೇಪ್ ಆದರೂ ತಿರುಗಿ ನೋಡಲಿಲ್ಲ. ಬೆಳಗಾವಿ ಜಿಲ್ಲೆಯಲ್ಲಿ ದಲಿತ ಮಹಿಳೆ ವಿವಸ್ತ್ರಗೊಳಿಸಿದರೂ ನೋಡಲಲಿಲ್ಲ.? ಕಾಂಗ್ರೆಸ್ ಯಾರ ಪರವಾಗಿದ್ದಿರಿ? ರಾಜ್ಯದಲ್ಲಿ ಏನು ನಡೆಯುತ್ತಿದೆ ಎಂದು ಗೃಹ ಸಚಿವರಿಗೆ ಪ್ರಶ್ನೆಗಳ ಸುರಿಮಳೆ ಗೈದರು.

ವಿರೋಧ ಪಕ್ಷದ ಕಾರ್ಯಕರ್ತರ ಮೇಲೆ ಕೇಸ್ ಹಾಕಲು ಪೊಲೀಸರು ನಿರತರಾಗಿದ್ದಾರೆ. ಪೊಲೀಸರು ಇಸ್ಪೀಟು, ಮಟಕಾ, ಕ್ಲಬ್, ಮರಳು ವ್ಯವಹಾರಗಳ ದಂಧೆಯಲ್ಲಿ ಸಂಪೂರ್ಣವಾಗಿ ಶಾಮಿಲಾಗಿದ್ದಾರೆ. ಬಹಳ ಲಂಚ ಕೊಟ್ಟು ಪೋಸ್ಟಿಂಗ್ ಹಾಕಿಸಿಕೊಂಡು ಬಂದಿದ್ದಾರೆ. ಅಧಿಕಾರಿಗಳು, ಇಡೀ ರಾಜ್ಯ ಸರ್ಕಾರವೇ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇಡೀ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಕಾನೂನು ಸುವ್ಯವಸ್ಥೆ ಹದಗೆಡಲು ಕಾರಣ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಗಂಭೀರ ಆರೋಪ ಮಾಡಿದರು.

ರಾಜ್ಯದಲ್ಲಿ ಗೂಂಡಾಗಳು ನಿರ್ಭಿತಿ, ನಿರ್ಭಯವಾಗಿ ಓಡಾಡುತ್ತಿದ್ದಾರೆ. ರಾಜ್ಯದಲ್ಲಿ ಸಾಮಾನ್ಯ ಜನರ, ಹೆಣ್ಣು ಮಕ್ಕಳ ಯಾರ ಪ್ರಾಣಕ್ಕೂ ಸುರಕ್ಷತೆ ಇಲ್ಲ. ರಾಜ್ಯದಲ್ಲಿ ಭಯದ ವಾತಾವರಣ, ಗೂಂಡಾ ವಾತಾವರಣ ಇದೆ. ನೇಹಾ ಪ್ರಕರಣದಲ್ಲಿ ನಾವು ರಾಜಕೀಯ ಮಾಡಿಲ್ಲ. ಹಾಡುಹಗಲೇ ಕಾಲೇಜ್ ಕ್ಯಾಂಪಸ್ ನಲ್ಲಿ ಕೊಲೆ ಆದರೆ, ಸುಮ್ಮನೆ ಕುಳಿತುಕೊಳ್ಳಬೇಕಾ? ಕಾಂಗ್ರೆಸ್ ನವರು ವಿರೋಧ ಪಕ್ಷದಲ್ಲಿದ್ದರೆ ಸುಮ್ಮನೆ ಕೂಡುತ್ತಿದ್ದರಾ ? ಅಂಜಲಿ ಮನೆಗೆ ಹೊಕ್ಕು ಕೊಲೆ ಮಾಡುತ್ತಾರೆ ಅಂದರೆ ಪರಸ್ಥಿತಿ ಎಲ್ಲಿಗೆ ಬಂತು? ಎಲ್ಲಿದೆ ಕಾನೂನು? ಎಲ್ಲಿದೆ ಪೊಲೀಸರ ಭಯ ಎಂದು ಖಾರವಾಗಿ ಪ್ರಶ್ನಿಸಿದರು.

## ಕಾಂಗ್ರೆಸ್ ಅಭ್ಯರ್ಥಿಯಿಂದ ಮತದಾರರಿಗೆ ಗಿಫ್ಟ್: ಬಿಜೆಪಿ ದೂರು

• ಉದಯವಾಹಿನಿ,ಬೆಂಗಳೂರು

ಚುನಾವಣೆ ಸಮಯದಲ್ಲಿ ರಾಜಕೀಯ ಪಕ್ಷಗಳು ಮತದಾರರಿಗೆ ಆಮಿಷವೊಡ್ಡಲು ಅಕ್ರಮವಾಗಿ ಉಡುಗೊರೆಗಳನ್ನು ನೀಡುತ್ತಿರುತ್ತಾರೆ. ಇದೀಗ ಬಿಜೆಪಿ ಆಡಳಿತಾರೂಢ ಕಾಂಗ್ರೆಸ್ ವಿರುದ್ಧ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರು ನೀಡಿದೆ.

ಬೆಂಗಳೂರು ವಿಧಾನಪರಿಷತ್ ಪದವೀಧರರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾದ ರಾಮೋಜಿ ಗೌಡ ಅವರು ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿ ಮತದಾರರಿಗೆ ಆಮಿಷ ಒಡ್ಡುವ ಸಲುವಾಗಿ ಗಿಫ್ಟ್‌ಗಳನ್ನು ಹಂಚುತ್ತಿದ್ದಾರೆ ಎಂದು ಬಿಜೆಪಿ ನಿಯೋಗ ಆಕ್ಷೇಪಿಸಿದೆ.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಇಂದು ಬಿಜೆಪಿ ನಿಯೋಗವು ಮುಖ್ಯ ಚುನಾವಣಾ ಅಧಿಕಾರಿಗೆ ದೂರು ಸಲ್ಲಿಸಿತು. ಈ ಉಡುಗೊರೆಗಳ ಸಮೇತ ಚುನಾವಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದ ಬಿಜೆಪಿ ನಾಯಕರು ಸಾಕ್ಷ್ಯ ಸಮೇತ ದೂರು ನೀಡಿದ್ದಾರೆ.




ಖಾಸಗಿ ಕೊರಿಯರ್ ಏಜೆನ್ಸಿಯ ಗೋದಾಮಿನಲ್ಲಿ ಈ ಉಡುಗೊರೆಗಳನ್ನು ಶೇಖರಿಸಿ ಇಡಲಾಗಿದೆ. ಅವುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸುವಂತೆ ನಿಯೋಗ ಕೋರಿದೆ.

ನಿಯೋಗದಲ್ಲಿ ಶಾಸಕ ಎಸ್.ಸುರೇಶ್ ಕುಮಾರ್, ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಸಿ.ಕೆ.ರಾಮಮೂರ್ತಿ ಮತ್ತು ಪ್ರಮುಖರು ಉಪಸ್ಥಿತರಿದ್ದರು.

ಈ ದಿನದ ದರ | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,402/Gram(24ct) ₹6,785/Gram(22ct) | ಬೆಳ್ಳಿ: ₹86.75/Gram

## ಹಾರ್ಮೋನಿಯಂ ವಾದನ

• ಉದಯವಾಹಿನಿ, ಬೆಂಗಳೂರು



ನಾದಜ್ಯೋತಿ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಸಂಸ್ಥೆಯ ವಜ್ರಮಹೋತ್ಸವ-2024ರ ಪ್ರಯುಕ್ತ ಮಲ್ಲೇಶ್ವರದ ಈಸ್ಟ್ ಪಾರ್ಕ್ ರಸ್ತೆಯಲ್ಲಿರುವ (ಅಂಚೆ ಕಚೇರಿ ಹತ್ತಿರ) ಶ್ರೀ ರಾಮ ಮಂದಿರದಲ್ಲಿ ಮೇ 18, ಶನಿವಾರ ಸಂಜೆ 6-00 ಗಂಟೆಗೆ ಕಲಾಜ್ಯೋತಿ ಪ್ರಶಸ್ತಿ ಪುರಸ್ಕೃತ ವಿದ್ವಾನ್ ಸಿ. ರಾಮದಾಸ್ ಇವರಿಂದ ಹಾರ್ಮೋನಿಯಂ ವಾದನ ಏರ್ಪಡಿಸಿದೆ. ಸಹವಾದ್ಯದಲ್ಲಿ 'ಅನನ್ಯ - ನಾದಜ್ಯೋತಿ ' ಪುರಸ್ಕೃತ ವಿದ್ವಾನ್ ಶಂಕರ ರಾಜನ್ (ಪಿಟೀಲು), ವಿ|| ಕೆ.ವಿ. ರವಿಶಂಕರ್ ಶರ್ಮಾ (ಮೃದಂಗ), ಅನನ್ಯ - ನಾದಜ್ಯೋತಿ ಪುರಸ್ಕೃತ ವಿದ್ವಾನ್ ಆರ್. ಕಾರ್ತಿಕ್ (ಖಂಜರ) ವಾದ್ಯಗಳಲ್ಲಿ ಸಹಕರಿಸಿದ್ದಾರೆ. ಈ ವಿಶೇಷ ಕಾರ್ಯಕ್ರಮದಲ್ಲಿ ಸಂಗೀತಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಲಾವಿದರನ್ನು ಪ್ರೋತ್ಸಾಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಟ್ರಸ್ಟಿನ ಶ್ರೀ ಕಟ್ಟೆ ಸತ್ಯನಾರಾಯಣ ಅವರು ವಿನಂತಿಸಿದ್ದಾರೆ.

## ಉಲ್ಲಂಘಿಸಿದರೆ 3 ವರ್ಷ ಜೈಲು ಶಿಕ್ಷೆ, 10,000 ರೂ.ವರೆಗೆ ದಂಡ

• ಉದಯವಾಹಿನಿ, ಬೆಂಗಳೂರು

ಭ್ರೂಣ ಲಿಂಗ ಪತ್ತೆ ಶಿಕ್ಷಾರ್ಹ ಅಪರಾಧ, ಉಲ್ಲಂಘಿಸಿದರೆ ಮೂರು ವರ್ಷಗಳ ಜೈಲು ಶಿಕ್ಷೆ ಜೊತೆಗೆ ರೂ 10,000 ದವರೆಗೆ ದಂಡ ವಿಧಿಸಲಾಗುತ್ತದೆ. ಹೌದು, ಗರ್ಭ ಪೂರ್ವ ಮತ್ತು ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ನಿಷೇಧ ಕಾಯ್ದೆ 1994ರ ಪ್ರಕಾರ ಭ್ರೂಣ ಲಿಂಗ ಪತ್ತೆಯು ಶಿಕ್ಷಾರ್ಹ ಅಪರಾಧವಾಗಿದೆ. ಭ್ರೂಣ ಲಿಂಗ ಪತ್ತೆ, ಭ್ರೂಣ ಲಿಂಗ ಆಯ್ಕೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ನೀಡುವಂತಿಲ್ಲ. ಉಲ್ಲಂಘಿಸಿದರೆ ಮೂರು ವರ್ಷಗಳ ಜೈಲು ಶಿಕ್ಷೆ ಜೊತೆಗೆ ?10,000 ದವರೆಗೆ ದಂಡ ವಿಧಿಸಲಾಗುತ್ತದೆ.

## ಓರ್ವ ಆರೋಪಿಗೆ ನ್ಯಾಯಾಂಗ ಬಂಧನ ಇನ್ನೋರ್ವ ಪೊಲೀಸ್ ಕಸ್ಟಡಿಗೆ

• ಉದಯವಾಹಿನಿ, ಬೆಂಗಳೂರು

ಜೆಡಿಎಸ್ ಶಾಸಕ ಹೆಚ್.ಡಿ.ರೇವಣ್ಣ ವಿರುದ್ಧ ಮಹಿಳೆ ಕಿಡ್ನ್ಯಾಪ್ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಸತೀಶ್ ಬಾಬುಗೆ ಮತ್ತೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ. ಆರೋಪಿಗಳ ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ ಆರೋಪಿ ಸತೀಶ್ ಬಾಬು ಹಾಗೂ ಆರೋಪಿ ಕೀರ್ತಿಯನ್ನು ಎಸ್ಐಟಿ ಅಧಿಕಾರಿಗಳು ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್ ಗೆ ಹಾಜರುಪಡಿಸಿದ್ದರು. ಈ ವೇಳೆ ಕೋರ್ಟ್ ಸತೀಶ್ ಬಾಬುಗೆ ಮೇ 24ರವರೆಗೆ ನ್ಯಾಯಾಂಗ ಬಂಧನ ವಿಧಿಸಿ ಆದೇಶ ಹೊರಡಿಸಿದೆ. ಅಲ್ಲದೇ ಇನ್ನೋರ್ವ ಆರೋಪಿ ಕೀರ್ತಿಗೆ ಪೊಲೀಸ್ ಕಸ್ಟಡಿಗೆ ನೀಡಿ ಆದೇಶ ಹೊರಡಿಸಲಾಗಿದೆ.

## ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಜೆಡಿಎಸ್ ಶಾಸಕ ಹೆಚ್.ಡಿ.ರೇವಣ್ಣ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಅರ್ಜಿ ವಿಚಾರಣೆ ಆರಂಭವಾಗಿದ್ದು, ಜಾಮೀನು ನೀಡಲು ಎಸ್ ಐಟಿ ಆಕ್ಷೇಪ ವ್ಯಕ್ತಪಡಿಸಿದೆ. ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯದಲ್ಲಿ ಹೆಚ್.ಡಿ.ರೇವಣ್ಣ ಜಾಮೀನು ಅರ್ಜಿ ವಿಚಾರಣೆ ಆರಂಭವಾಗಿದೆ. ಇದೇ ಪ್ರಕರಣದಲ್ಲಿ ರೇವಣ್ಣ ವಿರುದ್ಧ ಸೆಕ್ಷನ್ 376 ಅಡಿ ಎಫ್ಐಆರ್ ದಾಖಲಾಗಿದೆ. ಜಾಮೀನುರಹಿತ ಪ್ರಕರಣ ಕೂಡ ಇದೆ. ಹಾಗಾಗಿ ಜಾಮೀನಿಗೆ ನಮ್ಮ ಆಕ್ಷೇಪಣೆ ಇದೆ ಎಂದು ಎಸ್ ಪಿಪಿ ವಾದ ಮಂಡಿಸಿದ್ದಾರೆ. ಅಲ್ಲದೇ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ರೇವಣ್ಣ ಅವರಿಗೆ 2 ಬಾರಿ ನೋಟಿಸ್ ನೀಡಲಾಗಿದೆ. ಆದಾಗ್ಯೂ ವಿಚಾರಣೆಗೆ ಹಾಜರಾಗಿಲ್ಲ. ಹಾಗಾಗಿ ರೇವಣ್ಣ ಅವರನ್ನು ಎಸ್ಐಟಿ ಕಸ್ಟಡಿಗೆ ನೀಡುವಂತೆ ಎಸ್ಐಟಿ ಪರ ವಕೀಲೆ ಜಾಯ್ನಾ ಕೊಠಾರಿ ಮನವಿ ಮಾಡಿದ್ದಾರೆ. ಈ ವೇಳೆ ರೇವಣ್ಣ ಖುದ್ದು ಹಾಜರಾಗುವಂತೆ ಕೋರ್ಟ್ ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಕೋರ್ಟ್‌ಗೆ ಹಾಜರಾಗಿದ್ದಾರೆ.

## ಬಾತ್ ರೂಮ್‌ನಲ್ಲಿ ಅನುಮಾನಾಸ್ಪದವಾಗಿ ವಿದ್ಯಾರ್ಥಿನಿ ಶವ ಪತ್ತೆ ಪ್ರಕರಣ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ


ಬೆಂಗಳೂರಿನ ಸುಬ್ರಹ್ಮಣ್ಯಪುರ ಪೊಲೀಸ್ ಠಾಣಾ ವ್ಯಾಪ್ತಿಯ ಮನೆಯ ಬಾತ್ ರೂಮ್ ನಲ್ಲಿ ಕತ್ತುಕುಯ್ದ ರೀತಿಯಲ್ಲಿ ವಿದ್ಯಾರ್ಥಿನಿ ಪ್ರಭುಧ್ಯಾ ಶವ ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಶೈಕ್ಷಣಿಕ ವ್ಯವಸ್ಥೆಯನ್ನು ಪ್ರಶ್ನೆ ಮಾಡಿದ್ದಕ್ಕೆ ನನ್ನ ಮಗಳನ್ನು ಹತ್ಯೆ ಮಾಡಲಾಗಿದೆ ಎಂದು ಯುವತಿ ತಾಯಿ ಆರೋಪಿಸಿದ್ದಾರೆ.

ಮಗಳ ಸಾವಿನಿಂದ ಕಂಗೆಟ್ಟಿರುವ ಪ್ರಭುಧ್ಯಾ ತಾಯಿ ಸೌಮ್ಯ, ನನ್ನ ಮಗಳನ್ನು ಭೀಕರವಾಗಿ ಕೊಲೆ ಮಾಡಿದ್ದಾರೆ. ಸೋಫಾ ಮೇಲೆ ಇಟ್ಟು ಹೋಗಿದ್ದ ಆಕೆಯ ಮೊಬೈಲ್ ಕೂಡ ನಾನು ಆಸ್ಪತ್ರೆಗೆ ಹೋಗಿ ಬರುವಷ್ಟರಲ್ಲಿ ಕಾಣೆಯಾಗಿದೆ. ಈ ವ್ಯವಸ್ಥೆಯನ್ನು ಪ್ರಶ್ನೆ ಮಾಡಿದ್ದಕ್ಕೆ ನನ್ನ ಮಗಳಿಗೆ ಈ ಸ್ಥಿತಿ ಬಂದಿದೆ ಎಂದು ಕಣ್ಣೀರಿಟ್ಟಿದ್ದಾರೆ. ನನ್ನ ಮಗಳು ತುಂಬಾ ಧೈರ್ಯವಂತೆ. ಆತ್ಮಹತ್ಯೆ ಮಾಡಿಕೊಳ್ಳುವವಳಲ್ಲ. ಮನೆ ಹಿಂದಿನ ಡೋರ್ ತೆರೆದಿತ್ತು. ನನ್ನ ಮಗಳನ್ನು ಯಾರೋ ಕೊಲೆ ಮಾಡಿದ್ದಾರೆ. ಇಂದಿನ ಶೈಕ್ಷಣಿಕ ವ್ಯವಸ್ಥೆ ಸರಿಯಿಲ್ಲ ಎಂದು ಶೈಕ್ಷಣಿಕ ವ್ಯವಸ್ಥೆ ಬಗ್ಗೆ ಯಾವಗಾಲೂ ಪ್ರಶ್ನಿಸುತ್ತಿದ್ದಳು. ಇದೇ ಕಾರಣಕ್ಕೆ ಮಗಳನ್ನು ಹತ್ಯೆ ಮಡಲಾಗಿದೆ. ಮಗಳ ಸಾವಿಗೆ ನ್ಯಾಯ ಕೊಡಿ ಎಂದು ಗೋಗರೆದಿದ್ದಾರೆ. ಖಾಸಗಿ ಕಾಲೇಜಿನಲ್ಲಿ ದ್ವಿತೀಯ ವರ್ಷದ ಪದವಿ ಓದುತ್ತಿದ್ದ ಪ್ರಭುಧ್ಯಾ ಮನೆಯ ಬಾತ್ ರೂಮ್‌ನಲ್ಲಿ ಕತ್ತು ಕುಯ್ದ ರೀತಿಯಲ್ಲಿ ಶವವಾಗಿ ಪತ್ತೆಯಾಗಿದ್ದಳು.

## 3 ತಿಂಗಳಿಂದ ವಿಲೇವಾರಿ ಆಗದ ಕಸ

• ಉದಯವಾಹಿನಿ, ದೇವನಹಳ್ಳಿ

ತಾಲ್ಲೂಕಿನ ಕನ್ನಮಂಗಲ ಪಾಳ್ಯ ಹಾಗೂ ದೊಡ್ಡಪ್ಪನಹಳ್ಳಿಯಲ್ಲಿರುವ ಕಸದ ತೊಟ್ಟಿಯನ್ನು ಕಳೆದ ಮೂರು ತಿಂಗಳಿಂದ ಸ್ವಚ್ಛಗೊಳ್ಳಿಸಿಲ್ಲ ಎಂದು ಅಲ್ಲಿನ ನಿವಾಸಿಗಳು ಆರೋಪಿಸಿದ್ದಾರೆ. ಕಸವನ್ನು ತೆಗೆದುಕೊಂಡು ಹೋಗದೇ ಕನ್ನಮಂಗಲ ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತೆಯ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಹಣ ಲೂಟಿ ಮಾಡಲಾಗುತ್ತಿದೆ.ಇಡೀ ಗ್ರಾ.ಪಂ ವ್ಯಾಪ್ತಿಯಲ್ಲಿ ಅತೀ ಹೆಚ್ಚು ಜನ ವಾಸಿಸುವ ಪ್ರದೇಶದಲ್ಲಿ ನೈರ್ಮಲ್ಯತೆ ಕಾಪಾಡುತ್ತಿಲ್ಲ ಎಂದು ದೂರಿದ್ದಾರೆ. ದೊಡ್ಡಪ್ಪನಹಳ್ಳಿ



ಉದಯವಾಹಿನಿ ಚಿತ್ರ

ಬಳಿ ಇರುವ ಉರ್ದು ಶಾಲೆಯ ಸಮೀಪ ತೊಟ್ಟಿಯಲ್ಲಿ ಕಸ ತುಂಬಿದ್ದು, ಹತ್ತಿರದಲ್ಲಿಯೇ ಅಂಗನವಾಡಿ ಇದೆ.

ಅದಕ್ಕೆ ಹೊಂದಿಕೊಂಡಂತೆ ಶುದ್ಧ ಕುಡಿಯುವ ನೀರಿನ ಘಟಕವಿದ್ದು, ನೀರು ತರಲು ಹೋದವರು ಮೂಗು ಮುಚ್ಚಿಕೊಂಡು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ. ಶಾಲೆಗೆ ದಾಖಲು ಆಗಲು ಬರುವ ವಿದ್ಯಾರ್ಥಿಗಳು, ಸಣ್ಣ ಮಕ್ಕಳಿಗೆ ತೊಂದರೆಯಾಗುತ್ತಿದ್ದು, ಇಲ್ಲಿ ವಾಸಿಸುವ ಹಿರಿಯ ನಾಗರಿಕರಿಗೆ ಆರೋಗ್ಯ ಸಮಸ್ಯೆ ಬಿಗಡಾಯಿಸಿದ್ದು, ಕೂಡಲೇ ಕಸ ತೆರವು ಮಾಡಿ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡಬೇಕೆಂದು ಆಗ್ರಹಿಸಿದ್ದಾರೆ. ಇಲ್ಲಿಯೇ ವೃದ್ಧಾಶ್ರಮ ಇದ್ದು, ಆಸರೆ ಇಲ್ಲದ ಹಿರಿ ಜೀವಿಗಳು ಬದುಕುತ್ತಿರುವ ಸ್ಥಳದಲ್ಲಿ ಗಬ್ಬು ವಾಸನೆ ನಾರುತ್ತಿದ್ದು, ಸೊಳ್ಳೆ, ಕ್ರಿಮಿ ಕೀಟಗಳಿಂದ ಅವರು ದಿನ ನಿತ್ಯ ಹೇಳಿಕೊಳ್ಳಲು ಆಗದಂತಹ ಬಾಧೆಯನ್ನು ಅನುಭವಿಸುತ್ತಿದ್ದಾರೆ ಎನ್ನುತ್ತಾರೆ ಸ್ಥಳೀಯರು.

# ಡೆಂಗ್ಯೂ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ವಹಿಸಲಾಗಿದೆ

■ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯ ಅಂಗವಾಗಿ ಪೂರ್ವ ವಲಯದ ರಾಮಸ್ವಾಮಿ ಪಾಳ್ಯದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರ ವ್ಯಾಪ್ತಿಯಲ್ಲಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಡೆಂಘೀ ನಿಯಂತ್ರಣಕ್ಕೆ ಈಗಾಗಲೇ ಸಾಕಷ್ಟು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್ ರವರು ತಿಳಿಸಿದರು.

ರಾಷ್ಟ್ರೀಯ ಡೆಂಘೀ ದಿನಾಚರಣೆಯ ಅಂಗವಾಗಿ ಪೂರ್ವ ವಲಯದ ರಾಮಸ್ವಾಮಿ ಪಾಳ್ಯದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಡೆಂಘೀ ಪ್ರಕರಣಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪಾಲಿಕೆ ವ್ಯಾಪ್ತಿಯ ಎಲ್ಲಾ ವಾರ್ಡ್ ಗಳಲ್ಲಿ ಸೊಳ್ಳೆ ನಿಯಂತ್ರಣ ಕುರಿತು ಅರಿವು ಮೂಡಿಸುವ ಹಾಗೂ ಔಷಧಿ ಸಿಂಪಡಣೆಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ಮಳೆ ಬಂದಾಗ ನೀರು ಸಂಗ್ರಹವಾಗಿ ಸೊಳ್ಳೆಗಳ ಸಂತತಿ ಹೆಚ್ಚಾಗಲಿದ್ದು, ಅದನ್ನು ಫಾಗಿಂಗ್ ಮತ್ತು ಔಷಧಿ ಸಿಫಡಿಸುವ ಮೂಲಕ ತಡೆಯಬೇಕು. ಹೂವಿನ ಕುಂಡ, ಬೀಸಾಕಿದ ಟೈರ್, ನೀರು ಸಂಗ್ರಹಿಸುವ ತೊಟ್ಟಿ, ನೀರಿನ ಬಾಟಲ್ ಸೇರಿದಂತೆ ಇನ್ನಿತರೆಡೆ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಈ ಸಂಬಂಧ ಅಂತಹ ಜಾಗದಲ್ಲಿ ನೀರು ಸಂಗ್ರಹವಾಗದಂತೆ ನೋಡಿಕೊಳ್ಳಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

**ಮಳೆ ಬಂದಾಗ ನೀರು ಸಂಗ್ರಹ**

**ಕೊಳಚೆ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಣಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ನಮ್ಮ ಕ್ಲಿನಿಕ್ ವೈದ್ಯರ ತಂಡ ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿ ಮತ್ತು ಸಿಬ್ಬಂದಿಗಳ ತಂಡಗಳನ್ನು ರಚಿಸಿಕೊಂಡು ಮನೆ-ಮನೆ ಭೇಟಿ ನೀಡಿ ಡೆಂಘೀ ಪ್ರಕರಣಗಳ ಪತ್ತೆ ಹಚ್ಚುವ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಹೇಳಿದರು.**

**ನಗರದಲ್ಲಿ ಡೆಂಘೀ ನಿಯಂತ್ರಿಸುವ ನಿಟ್ಟಿನಲ್ಲಿ ಸಾಮಾಜಿಕ ಜಾಲತಾಣ, ಆಯಾ ವಲಯಗಳ ವಾರ್ಡ್ ಮಟ್ಟದಲ್ಲಿ ಜಾಗೃತಿ ಜಾಥಾ ಹಾಗೂ ಪಾಲಿಕೆಯ ಕಸದ ವಾಹನಗಳಲ್ಲಿ ಧ್ವನಿವರ್ಧಕಗಳ ಮೂಲಕ ಡೆಂಘೀ ಬಗ್ಗೆ ನಾಗರೀಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಿಸಲಾಗುತ್ತಿದೆ. ಜೊತೆಗೆ ಮನೆ ಮನೆಗೆ ಡೆಂಗೀ ನಿಯಂತ್ರಣದ ಕುರಿತು ಬಿತ್ತಿಪತ್ರಗಳನ್ನು ವಿತರಿಸಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ.**

ಆಯಾ ವಲಯದ ವಾರ್ಡ್ ಮಟ್ಟದಲ್ಲಿ ಒಂದು ವಾರ್ಡ್ ಗೆ 4 ಔಷಧಿ ಸಿಂಪಡಣೆ ಮಾಡುವ ತಂಡಗಳನ್ನು ನಿಯೋಜನೆ ಮಾಡಿದ್ದು, ತಾತ್ಕಾಲಿಕವಾಗಿ ನೀರು ನಿಲ್ಲುವ ಸ್ಥಳ ಹಾಗೂ ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳನ್ನು ಗುರುತಿಸಿ ಫಾಗಿಂಗ್ ಮತ್ತು ಔಷಧಿ ಸಿಂಪಡಣೆ ಮಾಡಲಾಗುತ್ತದೆ ಎಂದು ಹೇಳಿದರು.

ಈಡೀಸ್, ಈಜಿಪ್ಟೈ ಎಂಬ ಸೊಳ್ಳೆಗಳಿಂದ ಡೆಂಘೀ ರೋಗ ಹರಡುತ್ತದೆ. ಆ ಸೊಳ್ಳೆಗಳು ತೆರೆದಿಟ್ಟ ನೀರಿನ ತೊಟ್ಟಿಗಳು, ಏರ್ ಕೂಲರ್ ಗಳು, ಹೂವಿನ ಕುಂಡದ ತಟ್ಟೆಗಳು, ಬಕೆಟ್‌ಗಳು, ಸೀಮೆಂಟ್ ತೊಟ್ಟಿಗಳು, ತೆಂಗಿನ ಚಿಪ್ಪುಗಳು, ಒಡೆದ ಟೈರ್ ಗಳಲ್ಲಿ ಉತ್ಪತ್ತಿಯಾಗುತ್ತವೆ. ಈ ಸಂಬಂಧ ಪ್ರಾರಂಭಿಕ ಹಂತದಲ್ಲೇ ಸೊಳ್ಳೆ ನಿಯಂತ್ರಣ ಮಾಡಲು ಲಾರ್ವಾ ಉತ್ಪತ್ತಿಯಾಗುವ ತಾಣಗಳನ್ನು ಗುರುತಿಸಿ ನಾಶಪಡಿಸಲಾಗುತ್ತದೆ.

ಈ ವೇಳೆ ಮುಖ್ಯ ಆರೋಗ್ಯಾಧಿಕಾರಿಯಾದ ಡಾ. ಮದನಿ, ಪೂರ್ವ ವಲಯ ಆರೋಗ್ಯಾಧಿಕಾರಿಯಾದ ಡಾ. ಭಾಗ್ಯಲಕ್ಷ್ಮಿ, ಡೆಂಗೀ ನೋಡಲ್ ಅಧಿಕಾರಿಯಾದ ಸುಜಾತಾ, ಆರೋಗ್ಯ ವೈದ್ಯಾಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರರು ಜಾಥಾದಲ್ಲಿ ಪಾಲ್ಗೊಂಡಿದ್ದರು.

**ಮೇ 1 ರಿಂದ 13ನೇ ವರೆಗಿನ ಡೆಂಘೀ ವರದಿ**

| | |
|---|---|
| ಬೊಮ್ಮನಹಳ್ಳಿ | 23 |
| ಪೂರ್ವ | 41 |
| ಮಹದೇವಪುರ | 44 |
| ಆರ್.ಆರ್ ನಗರ | 08 |
| ದಕ್ಷಿಣ | 34 |
| ಪಶ್ಚಿಮ | 16 |
| ಯಲಹಂಕ | 06 |
| ದಾಸರಹಳ್ಳಿ | 00 |
| ಒಟ್ಟು | 172 ಪ್ರಕರಣ |

## ಮೆಟ್ರೋ ಪ್ಲಾಟ್ ಫಾರ್ಮ್‌ಗಳಲ್ಲಿ ಇರುವವರಿಗೆ ದಂಡ

• ಉದಯವಾಹಿನಿ, ಬೆಂಗಳೂರು

ನಗರದ ಮೆಟ್ರೋ ವ್ಯವಸ್ಥೆಯು ನಿಲ್ದಾಣದ ಪ್ಲಾಟ್ ಫಾರ್ಮ್‌ಗಳಲ್ಲಿ ಹೆಚ್ಚು ಕಾಲ ಉಳಿಯುವ ಪ್ರ ಯಾಣಿಕರಿಗೆ ದಂಡ ವಿಧಿಸುತ್ತಿದೆ, ನಿಗದಿಪಡಿಸಿದ 20 ನಿಮಿಷಗಳ ಸಮಯ ಮಿತಿಯನ್ನು ಮೀರುವವರಿಗೆ ಅಧಿಕಾರಿಗಳು ದಂಡ ವಿಧಿಸುತ್ತಿದ್ದಾರೆ.



ಈ ಕ್ರಮವು ಹೊಸ ನಿಯಮ ವಲ್ಲದಿದ್ದರೂ, ನೀತಿಯ ಬಗ್ಗೆ ತಿಳಿದಿಲ್ಲದ ಅನೇಕ ಪ್ರಯಾಣಿಕರನ್ನು ಆಶ್ಚರ್ಯಗೊಳಿಸಿದೆ. ವಿಜಯನಗರ ಮೆಟ್ರೋ ನಿಲ್ದಾಣದಲ್ಲಿ 25 ನಿಮಿಷಗಳ ಕಾಲ ಸ್ಮಾರ್ಟ್ ಕಾರ್ಡ್ ಬಳಸಿ ಪ್ರಯಾಣಿಸಿದ ಪ್ರಯಾಣಿಕನಿಗೆ 50 ರೂಪಾಯಿ ದಂಡ ವಿಧಿಸಲಾಗಿದೆ. ಕಡಿತದ ಬಗ್ಗೆ ವಿಚಾರಿಸಲು ಅವರು ಮೆಟ್ರೋ ಸಿಬ್ಬಂದಿಯನ್ನು ಸಂಪರ್ಕಿಸಿದಾಗ, ಅವಧಿ ಮೀರಿ ಉಳಿದಿದ್ದಕ್ಕಾಗಿ ಅಸ್ತಿತ್ವದಲ್ಲಿರುವ ದಂಡದ ಬಗ್ಗೆ ಅವರಿಗೆ ತಿಳಿಸಲಾಯಿತು.

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ನಿಲ್ದಾಣಗಳಲ್ಲಿ ಜನದಟ್ಟಣೆಯನ್ನು ತಡೆಗಟ್ಟುವ ಉದ್ದೇಶದಿಂದ ಈ ನಿಯ ಮವನ್ನು ಜಾರಿಗೆ ತಂದಿದೆ. ಅರುಣ್ ಕೆ ಎಂಬ ಪ್ರಯಾಣಿಕನು ಭಾರಿ ಮಳೆಯ ಸಮಯದಲ್ಲಿ ತನ್ನ ಮೊಬೈಲ್ ಫೋನ್ ಅನ್ನು ಚಾರ್ಜ್ ಮಾಡಲು ನಿಲ್ದಾಣದಲ್ಲಿ ಕಾಯಲು ನಿರ್ಧರಿಸಿದಾಗ ಇದೇ ರೀತಿಯ ಪರಿಸ್ಥಿತಿಯನ್ನು ಅನುಭವಿಸಿದನು. ನಿರ್ಗಮಿಸಿದಾಗ, ಅವರು ತಮ್ಮ ಸ್ಮಾರ್ಟ್ ಕಾರ್ಡನಲ್ಲಿ ಹೆಚ್ಚುವರಿ 50 ರೂ.ಗಳ ಶುಲ್ಕವನ್ನು ಕಂಡುಕೊಂಡರು, ಇದು ಸಮಯ ಮಿತಿ ಉಲ್ಲಂಘನೆಗೆ ಕಾರಣವಾಗಿದೆ ಎಂದು ಮೆಟ್ರೋ ಅಧಿಕಾರಿಗಳು ಹೇಳಿದ್ದಾರೆ.

**ಬಿಎಂಆರ್‌ಸಿಎಲ್ ಅಧಿಕಾರಿಗಳು ಈ ನೀತಿಯನ್ನು ಸಮರ್ಥಿಸಿಕೊಂಡಿದ್ದು, ಮೆಟ್ರೋ ಪ್ರಾರಂಭವಾದಾಗಿನಿಂದಲೂ ಇದು ಜಾರಿಯಲ್ಲಿದೆ ಎಂದು ಹೇಳಿದ್ದಾರೆ. ಆದಾಗ್ಯೂ, ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ಪ್ರಚಾರ ಮಾಡಬಹುದು ಎಂದು ಅವರು ಒಪ್ಪಿಕೊಂಡರು.**

## ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಬಿಡುಗಡೆ!

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ರೋಗವು ಮತ್ತಷ್ಟು ಹರಡದಂತೆ ತಡೆಯಲು ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ರಾಜ್ಯ ಆರೋಗ್ಯ ಇಲಾಖೆ ತಿಳಿಸಿದೆ.

ಮೇ 13 ರ ಹೊತ್ತಿಗೆ, ಈ ವರ್ಷದ ಜನವರಿ 1 ರಿಂದ ರಾಜ್ಯದಲ್ಲಿ 2,877 ದೃಢಪಡಿಸಿದ ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ, ಇದು ಕಳೆದ ವರ್ಷದ ಇದೇ ಅವಧಿಯಲ್ಲಿ 1,725 ಕ್ಕೆ ಹೋಲಿಸಿದರೆ ಗಮನಾರ್ಹ ಹೆಚ್ಚಳವಾಗಿದೆ.

ಈ ಏರಿಕೆಗೆ ಸ್ಕ್ರೀನಿಂಗ್, ವರದಿ ಮತ್ತು ಪರೀಕ್ಷಾ ಪ್ರಯತ್ನಗಳು ಕಾರಣ ಎನ್ನಲಾಗಿದೆ. ಅಧಿಕಾರಿಗಳ ಪ್ರಕಾರ, ಸೊಳ್ಳೆಯಿಂದ ಹರಡುವ ರೋಗವು ಸೋಂಕಿತ ಈಡಿಸ್ ಸೊಳ್ಳೆಗಳ ಕಡಿತದಿಂದ ಜನರಿಗೆ ಹರಡುತ್ತದೆ. ಮುಂಬರುವ ಮಾನ್ಸೂನ್ ಋತು ಮತ್ತು ಜಿಲ್ಲೆಗಳಾದ್ಯಂತ ಪ್ರಚಲಿತ ಮಳೆಯನ್ನು ಗಮನದಲ್ಲಿಟ್ಟುಕೊಂಡು, ತೀವ್ರವಾದ ಡೆಂಗ್ಯೂ ನಿಯಂತ್ರಣ ಕ್ರಮಗಳು ಅನಿವಾರ್ಯವಾಗಿದೆ ಅಂಥ ತಿಳಿಸಿದ್ದಾರೆ. ಜಿಲ್ಲಾ ಆಸ್ಪತ್ರೆಗಳಲ್ಲಿ ದಾಖಲಾದ ದೃಢಪಡಿಸಿದ ಡೆಂಗ್ಯೂ ಪ್ರಕರಣಗಳ ಮೇಲ್ವಿಚಾರಣೆ ಮತ್ತು ಅನುಸರಣಾ ಭೇಟಿಗಳನ್ನು ಸಹ ನಡೆಸಲಾಗುತ್ತಿದೆ.





ಉದಯವಾಹಿನಿ ಚಿತ್ರ

**ಡೆಂಗ್ಯೂ ನಿಯಂತ್ರಣದಲ್ಲಿ ಅವರ ಪಾತ್ರದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಮನವೊಲಿಸಲು ನಿವಾಸಿ ಕಲ್ಯಾಣ ಸಂಘಗಳ (ಆರ್ ಡಬ್ಲ್ಯುಎ) ಮುಖ್ಯಸ್ಥರು, ನಿರ್ಮಾಣ ಪ್ರದೇಶಗಳ ಮಾಲೀಕರು ಮತ್ತು ವಾಣಿಜ್ಯ ಸಂಕೀರ್ಣಗಳ ಮಾಲೀಕರೊಂದಿಗೆ ಸಭೆ ನಡೆಸಲಾಗುವುದು ಎನ್ನಲಾಗಿದೆ.**

**ಕರ್ನಾಟಕದಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಳ**

ಡೆಂಗ್ಯೂ ಪ್ರಕರಣಗಳ ಚಿಕಿತ್ಸೆ ಮತ್ತು ನಿರ್ವಹಣೆಗೆ ಅಗತ್ಯವಾದ ಔಷಧಿಗಳು, ಲಾರ್ವಿಸೈಡ್, ವೆಕ್ಟರ್ ನಿಯಂತ್ರಣಕ್ಕಾಗಿ ಫಾಗಿಂಗ್ ರಾಸಾಯನಿಕಗಳು ಎಲ್ಲಾ ಹಂತಗಳಲ್ಲಿ ಲಭ್ಯವಿದೆ ಮತ್ತು ವಿವಿಧ ಮಾಧ್ಯಮ ಮೂಲಕ ಡೆಂಗ್ಯೂ ನಿಯಂತ್ರಣ ಕ್ರಮಗಳ ಬಗ್ಗೆ ಮಾಹಿತಿಯನ್ನು ಪ್ರಸಾರ ಮಾಡುವುದು ರೋಗವನ್ನು ಎದುರಿಸಲು ತೆಗೆದುಕೊಂಡ ಇತರ ಕ್ರಮಗಳಲ್ಲಿ ಸೇರಿವೆ.

ಸಮುದಾಯದೊಂದಿಗೆ ಸಂಪರ್ಕ ಸಾಧಿಸಿ, ಡೆಂಗ್ಯೂ ನಿಯಂತ್ರಿಸಿ ಎಂಬ ಧ್ಯೇಯ ವಾಕ್ಯದೊಂದಿಗೆ ಮೇ 16 ರಂದು ರಾಷ್ಟ್ರೀಯ ಡೆಂಗ್ಯೂ ದಿನವನ್ನು ಆಚರಿಸಲು ನಿರ್ಧರಿಸಲಾಗಿದೆ ಮತ್ತು ಅದರಂತೆ, ಸಮುದಾಯ ಮತ್ತು ಸರ್ಕಾರಿ ಇಲಾಖೆಗಳ ಸಹಯೋಗದೊಂದಿಗೆ ಚಟುವಟಿಕೆಗಳನ್ನು ನಡೆಸಲು ಮಾರ್ಗಸೂಚಿ ಸುತ್ತೋಲೆ ಹೊರಡಿಸಲಾಗಿದೆ.

## ದ್ವಿತೀಯ ಪಿಯುಸಿ ಪಾಸಾದ ವಿದ್ಯಾರ್ಥಿಗಳೇ ಗಮನಿಸಿ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

ರಾಜ್ಯದ ದ್ವಿತೀಯ ಪಿಯುಸಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪದವಿಪೂರ್ವ ಶಿಕ್ಷಣ ಇಲಾಖೆ ಮಹತ್ವದ ಮಾಹಿತಿ ನೀಡಿದ್ದು, ಮೂಲ ಅಂಕಪಟ್ಟಿಗಳಲ್ಲಿ ಇರುವ ದೋಷಗಳನ್ನು ಸರಿಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪದವಿಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ದ್ವಿತೀಯ ಪಿಯುಸಿ ತೇರ್ಗಡೆಯಾದ ವಿದ್ಯಾರ್ಥಿಗಳುಮೂಲ ಅಂಕಪಟ್ಟಿಯಲ್ಲಿ ವಿದ್ಯಾರ್ಥಿ ಹೆಸರು, ತಂದೆ, ತಾಯಿ ಹೆಸರುಗಳಲ್ಲಿ ಇರುವ ದೋಷಗಳನ್ನು ತಿದ್ದುಪಡಿ ಮಾಡಿಕೊಳ್ಳಬಹುದಾಗಿದೆ.

ಅಲ್ಲದೆ ಮೂಲ ಅಂಕಪಟ್ಟಿಗಳನ್ನು ಕಳೆದುಕೊಂಡ ವಿದ್ಯಾರ್ಥಿಗಳು ಅಂಕಪಟ್ಟಿಯ ದ್ವಿಪ್ರತಿ ಪಡೆಯಬಹುದಾಗಿದೆ ಎಂದು ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ವಿದ್ಯಾರ್ಥಿಗಳು ನೇರವಾಗಿ ಅಂಕಪಟ್ಟಿ ತಿದ್ದುಪಡಿ ಹಾಗೂ ದ್ವಿಪ್ರತಿ ಅಂಕಪಟ್ಟಿಗಾಗಿ ನೇರವಾಗಿ ಇಲಾಖೆಗೆ ಅರ್ಜಿ ಸಲ್ಲಿಸುವಂತಿಲ್ಲ. ವಿದ್ಯಾರ್ಥಿಗಳು ಕಲಿತ ಕಾಲೇಜು ಮೂಲಕ ಪ್ರಾಂಶುಪಾಲರಿಗೆ ಅರ್ಜಿ ಸಲ್ಲಿಸಬೇಕು. ತಿದ್ದುಪಡಿಗಾಗಿ ಸಲ್ಲಿಸುವ ಎಲ್ಲಾ ಅರ್ಜಿಗಳನ್ನು ಕಡ್ಡಾಯವಾಗಿ ಉಪ ನಿರ್ದೇಶಕರು, ದ್ವಿಪ್ರತಿ ಅಂಕಪಟ್ಟಿ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ ಸಂಪಿಗೆ ರಸ್ತೆ, ಮಲ್ಲೇಶ್ವರಂ ಇಲ್ಲಿಗೆ ಕಾಲೇಜಿನ ಪ್ರಾಂಶುಪಾಲರ ಮೂಲಕ ಸಲ್ಲಿಸಬೇಕು.

## ಪತ್ನಿಗೆ ನೇಣು ಬಿಗಿದುಕೊಂಡಿದ್ದಾಗಿ ಹೆದರಿಸಲು ಹೋಗಿ ಸತ್ತು ಹೋದ ಪತಿ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪತ್ನಿಗೆ ವಿಡಿಯೋ ಕಾಲ್ ಮಾಡಿ ನೇಣುಬಿಗಿದುಕೊಂಡಿದ್ದಾಗಿ ಹೆದರಿಸಲು ಹೋಗಿ ಪತಿ ನಿಜವಾಗಿ ಕೂಡ ಸಾವನ್ನಪ್ಪಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಬಿಹಾರ ಮೂಲದ ಅಮಿತ್ ಕುಮಾರ್ (28) ಮೃತ ದುರ್ದೈವಿ. ಅಮಿತ್ ಕುಮಾರ್ ಜಿಮ್ ಟ್ರೈನರ್ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ. ಅಮಿತ್ ಒಂದು ವರ್ಷದ ಹಿಂದೆ ಜಿಮ್ ಸಮೀಪವೇ ಓರ್ವ ಯುವತಿಯನ್ನು ಪ್ರೀತಿಸಿ ಮದುವೆಯಾಗಿದ್ದ ಎನ್ನಲಾಗಿದೆ. ಈ ನಡುವೆ ಮದುವೆ ಬಳಿಕ ಅಮಿತ್ ಕುಮಾರ್ ಪತ್ನಿ ಫ್ರೆಂಡ್ಸ್ ಜೊತೆಗೆ ಪದೇ ಪದೆ ಫೋನ್ ಕರೆಯಲ್ಲಿ ಹೊತ್ತು ಕಳೆಯುತ್ತಿದ್ದಳು ಎನ್ನಲಾಗಿದೆ. ಇದಕ್ಕೇ ಸಂಬಂಧಪಟ್ಟಂತೆ ಇಬ್ಬರ ನಡುವೆ ಜಗಳ ನಡೆಯುತ್ತಿದೆಯಂತೆ ಇದಲ್ಲದೇ ಪತ್ನಿ ಬೇರೊಂದು ಕಡೆ ವಾಸವಾಗಿದ್ದಳು. ಅದರಂಥೆ ನಿನ್ನೆ ಅಮಿತ್ ಪದೇ ಪದೇ ಕರೆ ಮಾಡಿ ಮನವಿ ಮಾಡುತ್ತಿದ್ದ. ನಿನ್ನೆ ಕೂಡ ವಿಡಿಯೋ ಕಾಲ್‌ನಲ್ಲಿರುವಾಗಲೇ ನೇಣು ಬಿಗಿದುಕೊಂಡಂತೆ ಹೆದರಿಸಿದ್ದಾನೆ. ಈ ವೇಳೆ ಆತ ಈ ವೇಳೆ ಮೊಬೈಲ್ ಕೈ ಜಾರಿದ್ದು, ಅದನ್ನು ಹಿಡಿಯಲೆಂದು ಹೋದಾಗ ಅಚಾನಕ್ ಆಗಿ ಉರುಳು ಬಿಗಿದುಕೊಂಡು ಸಾವನ್ನಪ್ಪಿದ್ದಾನೆ ಎನ್ನಲಾಗಿದೆ. ಸದ್ಯ ಬಾಗಲಗುಂಟೆ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಂಚನಹಳ್ಳಿಯಲ್ಲಿ ಜೋಡಿ ಕರಗದ ವೈಭವ

• ಉದಯವಾಹಿನಿ,ಆನೇಕಲ್



ಉದಯವಾಹಿನಿ ಚಿತ್ರ

ತಾಲ್ಲೂಕಿನ ಮಂಚನಹಳ್ಳಿಯಲ್ಲಿ ಊರಹಬ್ಬದ ಪ್ರಯುಕ್ತ ಮಂಗಳವಾರ ರಾತ್ರಿ ಜೋಡಿ ಕರಗ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು. ಸುತ್ತಮುತ್ತಲ ಗ್ರಾಮಗಳ ಸಹಸ್ರಾರು ಭಕ್ತರು ವೈಭವದ ಜೋಡಿ ಕರಗಕ್ಕೆ ಸಾಕ್ಷಿಯಾದರು.ಆನೇಕಲ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕರಗ ಮಹೋತ್ಸವ ನಡೆಯುವುದು ವಾಡಿಕೆಯಾಗಿದೆ.

ಆದರೆ ಮಂಚನಹಳ್ಳಿಯಲ್ಲಿ ಜೋಡಿ ಕರಗ ನಡೆಯುವುದು ವಿಶೇಷ. ಗಳವಾರ ರಾತ್ರಿ 12ರ ಸುಮಾರಿಗೆ ಜೋಡಿ ಕರಗ ದೇವಾಲಯದಿಂದ ಹೊರ ಬಂದಿತು. ವೀರಕುಮಾರರು ಅಲಗು ಸೇವೆ ಮಾಡಿ ಕರಗ ಬರಮಾಡಿಕೊಂಡರು.

ಗ್ರಾಮದ ವಿವಿಧ ಬೀದಿಗಳಲ್ಲಿ ವಾಧ್ಯದ ವಾದನಕ್ಕೆ ನರ್ತನ ಮಾಡುತ್ತಾ ಕರಗ ಸಂಚರಿಸಿತು. ಬಸವೇಶ್ವರ ದೇವಾಲಯದ ಮುಂಭಾಗದಲ್ಲಿ ಪಲ್ಲಕ್ಕಿ ಮುಂದೆ ಕರಗವು ನೃತ್ಯ ಮಾಡಿತು. ಮೇ 8ರಂದು ಕಂಬದದರಾಯನ ಪ್ರತಿಷ್ಠಾಪನೆಯೊಂದಿಗೆ ಪ್ರಾರಂಭವಾದ ಧಾರ್ಮಿಕ ಕಾರ್ಯಕ್ರಮಗಳು ಜೋಡಿ ಕರಗ ಮಹೋತ್ಸವದೊಂದಿಗೆ ಮುಕ್ತಾಯವಾದವು. ಮಾರಮ್ಮ ದೇವಿ, ಲಗುಮ್ಮಮ್ಮ ದೇವಿ, ಮುತ್ಯಾಲಮ್ಮ ದೇವಿ, ಸೊಪ್ಪಳ್ಳಿ ಯಲ್ಲಮ್ಮ ದೇವಿ, ಸಫಲಮ್ಮ ದೇವಿ, ಕರಗದಮ್ಮ ದೇವಿ ಪಲ್ಲಕ್ಕಿಗಳ ಉತ್ಸವ ಗ್ರಾಮದಲ್ಲಿ ನಡೆಯಿತು. ಊರಹಬ್ಬದ ಅಂಗವಾಗಿ ಲಘುಮಮ್ಮ ದೇವಿ ತಂಡದಿಂದ ಕಾಲಾಟ ಮತ್ತು ಕೀಲು ಕುದುರೆ ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾತಂಡ ಪ್ರದರ್ಶನ ನೀಡಿದವು. ವೀರಗಾಸೆ, ನಂದಿಧ್ವಜ ಕುಣಿತ ನಡೆಯಿತು. ಗ್ರಾಮದ ಮನೆ ಮನೆಗಳ ಮೇಲೆ ನಿಂತು ಜೋಡಿ ಕರಗವನ್ನು ಕಣ್ತುಂಬಿಕೊಂಡರು. ಕರಗಕ್ಕೆ ಮಲ್ಲಿಗೆ ಹೂವುಗಳನ್ನು ಎಸೆಯುವ ಮೂಲಕ ಭಕ್ತರು ತಮ್ಮ ಭಕ್ತಿಯನ್ನು ಸಮರ್ಪಿಸಿದರು.

## ಭಾರಿ ವಾಹನ ಸಂಚಾರ: ಹದಗೆಟ್ಟ ರಸ್ತೆ

• ಉದಯವಾಹಿನಿ, ಹೊಸಕೋಟೆ

ನಿರಂತರ ಭಾರಿ ವಾಹನಗಳ ಓಡಾಟದಿಂದ ದೇವನಗೊಂದಿ-ಐಬಸಿ ರಸ್ತೆಯ ರೈಲ್ವೇಗೇಟ್ ಸಮೀಪದ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿದ್ದು, ಇಲ್ಲಿ ಸಂಚರಿಸುವ ವಾಹನ ಸವಾರರು ಪರದಾಡುವಂತಾಗಿದೆ. ರಸ್ತೆ ಮಾರ್ಗದಲ್ಲಿ ಹಲವು ಕಾರ್ಖಾನೆಗಳಿವೆ. ಇಲ್ಲಿಂದ ಬೇರೆಡೆಗೆ ಪೆಟ್ರೋಲ್, ಡೀಸೆಲ್ ಸಾಗಣೆಗೆ ನಿತ್ಯ ಸಾವಿರಾರು ಭಾರಿ ವಾಹನ ಸಂಚರಿಸುತ್ತವೆ.ಇದರಿಂದ ರಸ್ತೆಯ ಗುಂಡಿಮಯವಾಗಿದೆ. ಈ ಬಗ್ಗೆ ಕ್ರಮ ಕೈಗೊಳ್ಳಬೇಕಿದ್ದ ಅಧಿಕಾರಿಗಳು ಕಣ್ಮುಚ್ಚಿ ಕುಳಿತ್ತಿದ್ದಾರೆ. ದೇವನಗೊಂದಿ ರೈಲ್ವೆ ನಿಲ್ದಾಣದ ದೇವಲಾಪುರದಲ್ಲಿ ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದೆ ಚರಂಡಿ ನೀರು ರಸ್ತೆಯಂಚಿನಲ್ಲಿ ಹರಿಯುತ್ತಿದ್ದು, ಗುಂಡಿಗಳಿಗೆ ನೀರು ತುಂಬಿಕೊಂಡು ಇನ್ನಷ್ಟು ಅಧ್ವಾನವಾಗಿದೆ.

# ಮೇ 18 ರಿಂದ ಕರ್ನಾಟಕಕ್ಕೆ ಈ ಜಿಲ್ಲೆಗಳಿಗೆ ಭಾರೀ ಮಳೆ ಎಚ್ಚರಿಕೆ

■ ಕೆಲವು ಜಿಲ್ಲೆಗಳಿಗೆ 'ಕಿತ್ತಳೆ' ಮತ್ತು ಆರೆಂಜ್ ಎಚ್ಚರಿಕೆ ಕೊಡಲಾಗಿದೆ ಎಂದು ಹವಾ ಮಾನ ಇಲಾಖೆ ಮುನ್ಸೂಚನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಮುದ್ರದಲ್ಲಿ ಚಂಡಮಾರುತದ ಪರಿಚಲನೆ ಇದೆ. ಪ್ರಾಥಮಿಕ ಹಂತದಲ್ಲಿರುವ ಈ ವೈಪರಿತ್ಯದ ಪ್ರಭಾವದಿಂದಾಗಿ ಕರ್ನಾಟಕದಲ್ಲಿ ಮುಂದಿನ ಮೇ 18ರ ನಂತರ ಬಿರುಗಾಳಿ ಸಹಿತ ಧಾರಾಕಾರ ಮಳೆ ಆಗಲಿದೆ. ಕೆಲವು ಜಿಲ್ಲೆಗಳಿಗೆ 'ಕಿತ್ತಳೆ' ಮತ್ತು ಆರೆಂಜ್ ಎಚ್ಚರಿಕೆ ಕೊಡಲಾಗಿದೆ ಎಂದು ಹವಾ ಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಇತ್ತೀಚೆಗೆ ಕರ್ನಾಟಕದ ಒಳನಾಡಿನ ಭೂಮಿ ಮೇಲ್ಭಾಗದಲ್ಲೂ 1.5 ಕಿಮೀ ಎತ್ತರದ ವರೆಗೆ ಸ್ಟ್ರಫ್ ಉಂಟಾಗಿತ್ತು. ಇದರ ಪ್ರಭಾವದಿಂದ ಈಗಾಗಲೇ ಒಳನಾಡು ಜಿಲ್ಲೆಗಳಲ್ಲಿ ಮಳೆ ಆಗುತ್ತಿದೆ.

ಸದ್ಯ ಬಂಗಾಳಕೊಲ್ಲಿ ಮಾತ್ರವಲ್ಲದೇ ಅರಬ್ಬಿ ಸಮುದ್ರದ ದಕ್ಷಿಣ ಮತ್ತು ಪೂರ್ವ ಭಾಗದಲ್ಲಿ ಪ್ರಾಥಮಿಕ ಹಂತದಲ್ಲಿ ಸುಳಿಗಾಳಿಯೊಂದು ಸೃಷ್ಟಿಯಾಗಿದೆ. ಸದ್ಯ ಇದು ಆರಂಭಿಕ ಹಂತದಲ್ಲಿ ಎಂದು ತಿಳಿದು ಬಂದಿದೆ. ಈ ಹವಾಮಾ ವೈಪರಿತ್ಯಗಳ ಪ್ರಭಾವದಿಂದಾಗಿ ಕರ್ನಾಟಕದ ಈ ಕೆಳಗಿನ ಜಿಲ್ಲೆಗಳಲ್ಲಿ ಮುಂದಿನ ಮೇ 19ರಿಂದ ಮೂರು ದಿನ ಬಿರುಗಾಳಿ, ಗುಡುಗು ಮಿಂಚು ಸಹಿತ ವ್ಯಾಪಕ ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ತನ್ನ ವರದಿಯಲ್ಲಿ ಉಲ್ಲೇಖಿಸಿದೆ. ಇನ್ನೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಚಂಡ ಮಾರುತ ಪರಿಚಲನೆ ಪ್ರಭಾವ ಅಷ್ಟಾಗಿಲ್ಲ ಎನ್ನಲಾಗಿದೆ.

**ಒಳನಾಡು ಜಿಲ್ಲೆಗಳಲ್ಲಿ ಮಳೆ ಅಬ್ಬರ**

**ಈ ಮೇಲಿನ ಜಿಲ್ಲೆಗಳ ಪೈಕಿ ಬಳ್ಳಾರಿ, ಚಿತ್ರದುರ್ಗ, ಮಂಡ್ಯ, ಕೊಡಗು, ಹಾಸನ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ನಾಳೆ ಮೇ 17ರಿಂದ ಸಕ್ರಿಯವಾಗಲಿದೆ. ಇಲ್ಲಿ ನಾಳೆಯಿಂದಲೇ ಬಿರುಗಾಳಿ ಸಹಿತ ಜೋರು ಮಳೆ ಆಗಲಿದೆ ಎಂದು ಹವಾಮಾನ ಇಲಾಖೆ ವರದಿ ತಿಳಿಸಿದೆ.**

**ಮೇ. 19 ಮತ್ತು 20 ರಂದು ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಹಾಗೂ ಉಡುಪಿ, ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಬ್ಬಳ್ಳಾಪುರ, ಕೊಡಗು, ಕೋಲಾರ ಮೈಸೂರು, ತುಮಕೂರು ಜಿಲ್ಲೆಗಳಲ್ಲಿ ಅತ್ಯಧಿಕ ಮಳೆ ಆಗಲಿದೆ. ಗರಿಷ್ಠ 20 ಸೆಂಟಿ ಮೀಟರ್‌ವರೆಗೂ ಇಲ್ಲಿ ಮಳೆ ಆಗುವ ಸಾಧ್ಯತೆ ಇರುವ ಕಾರಣಕ್ಕೆ ಈ ಜಿಲ್ಲೆಗಳಿಗೆ 'ಕಿತ್ತಳೆ' ಎಚ್ಚರಿಕೆ ಕೊಡಲಾಗಿದೆ.**

ನಾಳೆ ಮೇ 17ರಿಂದ ಈ ಭಾಗದ ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಯಾದಗಿರಿ, ವಿಜಯಪುರ, ರಾಯಚೂರು, ಕೊಪ್ಪಳ, ಬೀದರ್ ಜಿಲ್ಲೆಗಳಲ್ಲಿ ಒಣಹವೆ-ಬಿಸಿಲಿನ ಪ್ರಮಾಣ ತುಸು ಇಳಿಕೆ ಆಗಲಿದೆ. ಮಳೆಯ ತಂಪು ವಾತಾವರಣ ಕಂಡು ಬರುತ್ತದೆ. ಆದರೂ ಸಹಿತ ಸಾಧಾರಣ ಮಳೆ ನಿರೀಕ್ಷೆ ಇದೆ. ಅಲ್ಲಲ್ಲಿ ಒಂದೆರಡು ಕಡೆ ಜೋರು ಮಳೆ ಆಗಲಿದೆ.

ಚಂಡಮಾರುತ ಪರಿಚಲನೆ ಪ್ರಭಾವ ಮುಂದಿನ ಒಂದು ವಾರವು ರಾಜ್ಯದ ಮೇಲೆ ಬೀಳಬಹುದಾದ ಸಾಧ್ಯತೆಗಳು ಇವೆ. ಇದರಿಂದಾಗಿ ರಾಜ್ಯವು ಮುಂದಿನ ದಿನಗಳಲ್ಲಿ ತಂಪು ವಾತಾವರಣ ಕಾಣಲಿದೆ. ಈ ವರ್ಷ ಪೂರ್ವ ಮುಂಗಾರು ಮಳೆ ಅಂತ್ಯ ಮತ್ತು ಮುಂಗಾರು ಮಳೆ ಆರಂಭದ ಸಂದರ್ಭದಲ್ಲಿ ಭಾರೀ ಮಳೆಯಾರ್ಭಟಕ್ಕೆ ಕರ್ನಾಟಕ ಸಾಕ್ಷಿಯಾಗಲಿದೆ.

ಕಳೆದ 24 ಗಂಟೆಗಳಲ್ಲಿ ಕರ್ನಾಟಕದ ಉಡುಪಿ ಮತ್ತು ಬೆಳಗಾವಿ ಜಿಲ್ಲೆಯ ವ್ಯಾಪ್ತಿಯಲ್ಲಿ ಅತ್ಯಧಿಕ 07 ಸೆಂಟಿ ಮೀಟರ್ ಮಳೆ ದಾಖಲಾಗಿದೆ. ಉಳಿದಂತೆ ವಿಜಯಪುರ, ಚಿಕ್ಕಮಗಳೂರಲ್ಲಿ ತಲಾ 6 ಸೆಂ.ಮಿ., ಬಾಗಲಕೋಟೆ, ಕಲಬುರಗಿ ಜಿಲ್ಲೆಯಲ್ಲಿ ತಲಾ 05 ಸೆಂ.ಮೀ, ಕೊಪ್ಪಳದಲ್ಲಿ 4 ಸೆಂಟಿ ಮೀಟರ್ ಮಳೆ ಆಗಿದೆ. ಕಲಬುರಗಿ, ಬೆಳಗಾವಿ, ಬಾಗಲಕೋಟೆ, ಧಾರವಾಡ ವ್ಯಾಪ್ತಿಯಲ್ಲಿ ಹೆಚ್ಚು ಮಳೆ ಬಂದಿದೆ.

**ಮೇ. 19 ಮತ್ತು 20 ರಂದು ಎರಡು ದಿನ ಕರಾವಳಿ ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳು, ದಕ್ಷಿಣ ಒಳನಾಡಿನ, ಚಿಕ್ಕಮಗಳೂರು, ಹಾಸನ, ದಾವಣಗೆರೆ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು ಜಿಲ್ಲೆಗಳಲ್ಲಿ ಗುಡುಗು ಮಿಂಚು ಭಾರೀ ಮಳೆ ಆಗಲಿದೆ. ಹೀಗಾಗಿ ಇಷ್ಟು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ.**

# ಖಾಸಗಿ ಆಸ್ಪತ್ರೆಗಳಿಗೆ ಪಿಎಚ್‌ಸಿ ಸೆಡ್ಡು: ಮೆಚ್ಚುಗೆ

**• ಖಾಸಗಿ ಆಸ್ಪತ್ರೆಗೆ ಸೆಡ್ಡು ಒಡೆಯುತ್ತಿರುವ ಈ ಪಿಎಚ್‌ಸಿ ಗ್ರಾಮೀಣ ಜನರ ಮೆಚ್ಚುಗೆಗೆ ಪಾತ್ರವಾಗಿದೆ**

• ಉದಯವಾಹಿನಿ ನಾಗಮಂಗಲ

ಸರ್ಕಾರಿ ಆಸ್ಪತ್ರೆ ಎಂದರೆ ಮೂಗು ಮುರಿಯುವವರೇ ಹೆಚ್ಚು. ಆದರೆ ತಾಲ್ಲೂಕಿನ ಹೊನ್ನಾವರ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ದೊರೆಯುವ ಅತ್ಯಾಧುನಿಕ ಸೌಲಭ್ಯಗಳು ಜನರ ಹುಬ್ಬೇರಿಸುವಂತೆ ಮಾಡಿದೆ. ಖಾಸಗಿ ಆಸ್ಪತ್ರೆಗೆ ಸಡ್ಡು ಒಡೆಯುತ್ತಿರುವ ಈ ಪಿಎಚ್‌ಸಿ ಗ್ರಾಮೀಣ ಜನರ ಮೆಚ್ಚುಗೆಗೆ ಪಾತ್ರವಾಗಿದೆ.

ಸುಸಜ್ಜಿತ ಪ್ರಯೋಗಾಲಯ, ಉತ್ತಮ ಔಷಧಾಲಯ, ಸಕಲ ಪರಿಕರಗಳುಳ್ಳ ಚಿಕಿತ್ಸಾ ಕೊಠಡಿ, ಸೌಲಭ್ಯವುಳ್ಳ ಹೊರರೋಗಿ ವಿಭಾಗ, ಒಳರೋಗಿ ವಿಭಾಗ, ಆರೋಗ್ಯ ಸಿಬ್ಬಂದಿ ಕೊಠಡಿ, ಲಸಿಕಾ ಕೊಠಡಿ, ಸಭಾಂಗಣ, ಹೆರಿಗೆ ಕೊಠಡಿ, ಶಸ್ತ್ರಚಿಕಿತ್ಸಾ ಕೊಠಡಿ, ಡ್ರೆಸ್ಸಿಂಗ್ ರೂಂ, ರೋಗಿಗಳ ವಿಶ್ರಾಂತಿ ಕೊಠಡಿ ಮುಂತಾದ ಸೌಲಭ್ಯಗಳು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೈಟೆಕ್ ಸ್ಪರ್ಶ ನೀಡಿವೆ.

ಹೊನ್ನಾವರ, ಎಚ್.ಭೂವನಹಳ್ಳಿ, ಮಲ್ಲೇನಹಳ್ಳಿ, ಮಾದಿಹಳ್ಳಿ, ಸಾತೇನಹಳ್ಳಿ, ಕ್ಯಾತನಹಳ್ಳಿ, ವಡ್ಡರಹಳ್ಳಿ, ತುರುಬನಹಳ್ಳಿ, ಬೀಚನಹಳ್ಳಿ, ಮಾಚನಾಯಕನಹಳ್ಳಿ, ಹೆಚ್.ಕೋಡಿಹಳ್ಳಿ, ಮಂಗರುಳ್ಳಿ, ಸೇರಿದಂತೆ 21 ಗ್ರಾಮಗಳ ಜನರು ಈ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುತ್ತಾರೆ.

ಜೊತೆಗೆ ತಾಲ್ಲೂಕಿನ ಗಡಿ ಪ್ರದೇಶ, ಹಾಸನ ಜಿಲ್ಲೆಯ ಬೆಟ್ಟದಹಳ್ಳಿ, ಮಟ್ಟನಹಳ್ಳಿ, ಅಯಲಳ್ಳಿ, ಶ್ರವಣಬೆಳಗೊಳ, ಕುಮ್ಮೇನಹಳ್ಳಿ ಜನರೂ ಇಲ್ಲಿ ಬಂದು ಚಿಕಿತ್ಸೆ ಪಡೆಯುತ್ತಾರೆ. ಉತ್ತಮ ಚಿಕಿತ್ಸಾ ಸೌಲಭ್ಯಗಳ ಮಾಹಿತಿ ಜನರ ಬಾಯಿಯಿಂದ ಬಾಯಿಗೆ ಹರಡಿದ್ದು ದಿನೇ ದಿನೇ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ. ಗರ್ಭಿಣಿಯರ ಆರೈಕೆ, ಮಕ್ಕಳಿಗೆ ಲಸಿಕೆ ಬಗ್ಗೆ ಸ್ಥಳೀಯರ ಮೆಚ್ಚುಗೆಗೆ ಪಾತ್ರವಾಗಿದೆ.

> ಎಬಿಎಆರ್‌ಕೆ ಸೇರಿದಂತೆ ವಿವಿಧ ಯೋಜನೆಗಳ ಅನುದಾನಗಳನ್ನು ಉತ್ತಮವಾಗಿ ಬಳಸಿಕೊಂಡು ಆಸ್ಪತ್ರೆಗೆ ಉತ್ತಮ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಡಾ.ಟಿಪ್ಪು ಸುಲ್ತಾನ್ ಅವರ ಕಾರ್ಯವನ್ನು ಅಭಿನಂದಿಸುತ್ತೇನೆ -ಡಾ.ಕೆ.ಮೋಹನ್ ಜಿಲ್ಲಾ ಆರೋಗ್ಯಾಧಿಕಾರಿ


ಉದಯವಾಹಿನಿ ಚಿತ್ರ

ಇಲ್ಲಿಯ ವೈದ್ಯಾಧಿಕಾರಿ ಡಾ.ಟಿಪ್ಪು ಸುಲ್ತಾನ್ ಅವರ ಪರಿಶ್ರಮದಿಂದ ಆಸ್ಪತ್ರೆಗೆ ಆಧುನಿಕ ಸೌಲಭ್ಯಗಳು ದೊರೆತಿವೆ. ಅಲ್ಲದೇ ಆಸ್ಪತ್ರೆಯಿಂದ ಪ್ರತಿ ತಿಂಗಳು ಒಂದು ಗ್ರಾಮದಲ್ಲಿ ಆರೋಗ್ಯ ತಪಾಸಣೆ ಮಾಡುವ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಜೊತೆಗೆ ಆಸ್ಪತ್ರೆ ಸಿಬ್ಬಂದಿ ಅಂಗನವಾಡಿ ಕೇಂದ್ರ, ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ನಡೆಸುತ್ತಾರೆ.

ಹೃದಯ ವೈಶಾಲ್ಯ ಕಾರ್ಯಕ್ರಮದಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಉಚಿತ ಇಸಿಜಿ ಮತ್ತು ಹೃದ್ರೋಗ ತಪಾಸಣೆ ಮಾಡಲಾಗುತ್ತಿದೆ. ಗ್ರಾಮಗಳಲ್ಲಿ ಮುಗುಳ್ನಗೆ ಸಿಂಚನ ಕಾರ್ಯಕ್ರಮದಡಿಯಲ್ಲಿ ಹಲ್ಲಿನ ತಪಾಸಣೆಯನ್ನು ತಪ್ಪದೇ ಮಾಡಲಾಗುತ್ತಿದೆ. ತೀವ್ರ ಆರೋಗ್ಯ ಸಮಸ್ಯೆ ಇದ್ದಾಗ ವೈದ್ಯರು ಮನೆಗೇ ಭೇಟಿ ನೀಡಿ ಚಿಕಿತ್ಸೆ ನೀಡುತ್ತಿರುವುದು ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದೆ.

ನಾವು ಖಾಸಗಿ ಆಸ್ಪತ್ರೆಯಲ್ಲಿ ದೊರೆಯುವ ಎಲ್ಲಾ ಚಿಕಿತ್ಸೆಯನ್ನು ಪಿಎಚ್‌ಸಿಯಲ್ಲೂ ದೊರೆಯಬೇಕು, ಉತ್ತಮ ವಾತಾವರಣ ಸೃಷ್ಟಿಸಬೇಕು ಎಂಬ ಉದ್ದೇಶದಿಂದ ಕೆಲಸ ಮಾಡುತ್ತಿದ್ದೇವೆ. ಸರ್ಕಾರಿ ಆಸ್ಪತ್ರೆಗಳ ಬಗ್ಗೆ ಜನರಲ್ಲಿ ನಂಬಿಕೆ ಬರಬೇಕು, ಆ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದೇವೆ' ಎಂದು ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಟಿಪ್ಪು ಸುಲ್ತಾನ್ ಹೇಳಿದರು.

> ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಆರೋಗ್ಯ ನಿರೀಕ್ಷಣಾಧಿಕಾರಿ ಡಿ ದರ್ಜೆ ನೌಕರ ಹೊರಗಿನಿಂದ ಬಂದು ಹೋಗುತ್ತಾರೆ. ಸಿಬ್ಬಂದಿ ಕೊರತೆಯಿಂದ ಒತ್ತಡ ಹೆಚ್ಚಾಗಿದೆ. ಹೆಚ್ಚುವರಿ ಸಿಬ್ಬಂದಿಗಳನ್ನು ನೇಮಕ ಮಾಡಿದರೆ ಜನರಿಗೆ ಅನುಕೂಲವಾಗುತ್ತದೆ ಎಂದು ಸ್ಥಳೀಯರು ಒತ್ತಾಯಿಸುತ್ತಾರೆ. ಆಸ್ಪತ್ರೆಗೆ ಬಂದರೆ ಅಲ್ಲಿನ ಸ್ವಚ್ಛ ವಾತಾವರಣವು ರೋಗಿಗಳಲ್ಲಿ ಆತ್ಮವಿಶ್ವಾಸ ತುಂಬುತ್ತದೆ. ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುತ್ತಿರುವ ಡಾ.ಟಿಪ್ಪು ಸುಲ್ತಾನ್ ಅಭಿನಂದನಾರ್ಹರು -ಎಚ್.ಟಿ.ದರ್ಶನ್, ಹೊನ್ನಾವರ ಗ್ರಾಮಸ್ಥ

**ವಿವಿಧ ಯೋಜನೆಗಳ ಅನುದಾನ ಸದ್ಬಳಕೆ**

ಹೊನ್ನಾವರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಾರ್ವಜನಿಕರಿಗಾಗಿ ರೂಪಿಸಿರುವ ಕೊಠಡಿ ಸುಸಜ್ಜಿತ ಚಿಕಿತ್ಸಾ ಕೊಠಡಿ ಡಾ.ಟಿಪ್ಪು ಸುಲ್ತಾನ್‌ಮನೆಗೆ ಭೇಟಿ ನೀಡಿ ಚಿಕಿತ್ಸೆ ನೀಡುವ ವೈದ್ಯರು ಹೃದಯ ವೈಶಾಲ್ಯ, ಮುಗುಳ್ನಗೆ ಕಾರ್ಯಕ್ರಮ ಜಾರಿ ವಿವಿಧ ಯೋಜನೆಗಳ ಅನುದಾನ ಸದ್ಬಳಕೆ ಹೊನ್ನಾವರ ಪಿಎಚ್‌ಸಿಯಲ್ಲಿ ಆಡಳಿತ ವೈದ್ಯಾಧಿಕಾರಿ ಶುಶ್ರೂಷಣಾಧಿಕಾರಿ ಹುದ್ದೆಗಳಿವೆ.

## ಶ್ರೀರಾಮ ಶೋಭ ಯಾತ್ರೆಯ ಭಿತ್ತಿ ಪತ್ರ ಬಿಡುಗಡೆ

• ಉದಯವಾಹಿನಿ, ಶಿಡ್ಲಘಟ್ಟ

ಶ್ರೀರಾಮ ಶೋಭ ಯಾತ್ರೆಯನ್ನು ಎಲ್ಲಾ ಸಂಘ-ಸಂಸ್ಥೆಗಳು ಸಮಾಜವನ್ನು ಒಳಗೊಂಡಂತೆ ಶ್ರದ್ಧಾ ಭಕ್ತಿಯಿಂದ ಜೂ.9 ರಂದು ನಡೆಸಲಾಗುವುದು ಎಂದು ಬಜರಂಗದಳದ ತಾಲ್ಲೂಕು ಸಂಯೋಜಕ ವೆಂಕಟೇಶ್ ತಿಳಿಸಿದರು.

ನಗರದ ಕೋಟೆ ವೃತ್ತದಲ್ಲಿನ ಶ್ರೀರಾಮ ದೇವಾಲಯ ಆವರಣದಲ್ಲಿ ಶ್ರೀರಾಮ ಶೋಭ ಯಾತ್ರೆಯ ಭಿತ್ತಿ ಪತ್ರ ಬಿಡುಗಡೆ ಮಾಡಿ ಮಾತನಾಡಿದರು.

ಶಿಡ್ಲಘಟ್ಟ ನಗರದ ಹೊರವಲಯದ ಹನುಮಂತಪುರ ಗೇಟ್ ಬಳಿ ಇರುವ ಶ್ರೀ ಆಂಜನೇಯಸ್ವಾಮಿ ದೇವಾಲಯದ ಆವರಣದಲ್ಲಿ ಜೂನ್ 9ರಂದು ಬೆಳಗ್ಗೆ 11 ಗಂಟೆಗೆ ಶೋಭ ಯಾತ್ರೆ ಪ್ರಾರಂಭವಾಗಲಿದ್ದು, ನಗರದ ಪ್ರಮುಖ ಬೀದಿಗಳಲ್ಲಿ ಯಾತ್ರೆ ಬರಲಿದೆ. ಈ ಮಾರ್ಗದಲ್ಲಿ ಹಿಂದುಗಳು ತಮ್ಮ ಮನೆಯ ಮುಂದೆ ರಂಗೋಲಿ ಬಿಡಿಸಿ ಹೂವಿನಿಂದ ಅಲಂಕರಿಸಿ ತಳಿರು ತೋರಣಗಳನ್ನು ಕಟ್ಟಿ,ಪಲ್ಲಕ್ಕಿಗಳು, ವೇಷ ಭೂಷಣಗಳು,ಸ್ಥಬ್ದ ಚಿತ್ರಗಳನ್ನು ಭಕ್ತಿ ಪೂರ್ವಕವಾಗಿ ಬರಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು. ನಂತರ ಸಂಜೆ 5 ಗಂಟೆಗೆ ಕೆ ಎಸ್ ಆರ್ ಟಿ ಸಿ ಬಸ್ ನಿಲ್ದಾಣದ ಬಳಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು ವಾಗ್ಮಿ ಹಾರಿಕ ಮಂಜುನಾಥ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಹಿಂದೂ ಧರ್ಮದ ಬಗ್ಗೆ ಸುದೀರ್ಘ ಭಾಷಣ ನೆರವೇರಿಸಲಾಗುತ್ತದೆ. ಕಾರ್ಯಕ್ರಮಕ್ಕೆ ಜಾತ್ಯತೀತವಾಗಿ, ಪಕ್ಷಾತೀತವಾಗಿ, ಪಾಲ್ಗೊಂಡು ಶ್ರೀ ರಾಮಚಂದ್ರರ ಕೃಪೆಗೆ ಪಾತ್ರರಾಗಲು ಬಜರಂಗದಳ ಸಂಯೋಜಕ ವೆಂಕಟೇಶ್ ಸುದ್ದಿಗೋಷ್ಠಿ ಮೂಲಕ ತಿಳಿಸಿದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ಸಂಯೋಜಕ ಹಾಗೂ ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳ ಕಾರ್ಯಕರ್ತರು ಭಾಗವಹಿಸಿ ನಗರದಲ್ಲಿ ಇರುವ ಅಂಗಡಿ ಮಾಲೀಕರಿಗೆ ಕರೆ ಪತ್ರ ವಿತರಿಸಿ ಆಹ್ವಾನ ನೀಡಿದರು.

## ಮುಂಗಾರು ಕೃಷಿ: ಬಿತ್ತನೆ ಗುರಿ ಕುಸಿತ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಇನ್ನೂ ಉತ್ತಮವಾಗಿ ಮುಂಗಾರು ಮಳೆ ಸುರಿದಿಲ್ಲ. ಚದುರಿದಂತೆ ರೈತರು ಬಿತ್ತನೆಗೆ ಹೊಲಗಳನ್ನು ಸಿದ್ಧಗೊಳಿಸಿಕೊಳ್ಳುತ್ತಿದ್ದಾರೆ. ಮುಂಗಾರು ಬಿತ್ತನೆಗೆ ಕೃಷಿ ಇಲಾಖೆಯು ಪೂರ್ವ ಸಿದ್ಧತೆಗಳನ್ನು ಸಹ ಮಾಡಿಕೊಂಡಿದೆ. ಪ್ರಸಕ್ತ ಮುಂಗಾರು ಅವಧಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 1,28,175 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯ ಗುರಿಯನ್ನು ಕೃಷಿ ಇಲಾಖೆ ಹೊಂದಿದೆ.

ಕಳೆದ ಮೂರು ವರ್ಷಗಳ ಕೃಷಿ ಇಲಾಖೆಯ ಬಿತ್ತನೆಯ ಗುರಿಗೆ ಹೋಲಿಸಿದರೆ ಈ ಬಾರಿ ದೊಡ್ಡ ಪ್ರಮಾಣದಲ್ಲಿಯೇ ಬಿತ್ತನೆಯ ಗುರಿ ಕಡಿಮೆ ಆಗಿದೆ.

**ರಾಗಿ, ಶೇಂಗಾ ಅಧಿಕ:** ರಾಗಿ, ಮುಸುಕಿನ ಜೋಳ ಮತ್ತು ಶೇಂಗಾ ಮುಂಗಾರು ಅವಧಿಯಲ್ಲಿ ಜಿಲ್ಲೆಯ ಪ್ರಮುಖ ಬಿತ್ತನೆಯ ಬೆಳೆಗಳಾಗಿವೆ. ಈ ಬಾರಿ 42,630 ಹೆಕ್ಟೇರ್‌ನಲ್ಲಿ ರಾಗಿ, 55,571 ಹೆಕ್ಟೇರ್‌ನಲ್ಲಿ ಹೈಬ್ರಿಡ್ ಮುಸುಕಿನ ಜೋಳ, 20,056 ಹೆಕ್ಟೇರ್‌ನಲ್ಲಿ ಶೇಂಗಾ ಬಿತ್ತನೆಯ ಗುರಿ ಹೊಂದಿದೆ. 1,01,345 ಹೆಕ್ಟೇರ್‌ನಲ್ಲಿ ಏಕದಳ ಧಾನ್ಯಗಳು, 6,057 ಹೆಕ್ಟೇರ್‌ನಲ್ಲಿ ದ್ವಿದಳ ಧಾನ್ಯಗಳು, 20,433 ಹೆಕ್ಟೇರ್‌ನಲ್ಲಿ ಎಣ್ಣೆಕಾಳುಗಳು, 340 ಹೆಕ್ಟೇರ್‌ನಲ್ಲಿ ವಾಣಿಜ್ಯ ಬೆಳೆಗಳ ಬಿತ್ತನೆ ಗುರಿ ಹೊಂದಲಾಗಿದೆ.


ಉದಯವಾಹಿನಿ ಚಿತ್ರ

ಭತ್ತ 2,000 ಹೆಕ್ಟೇರ್, ಜೋಳ 1 ಸಾವಿರ, ತೃಣಧಾನ್ಯಗಳು 144, ತೊಗರಿ 2,756, ಹುರುಳಿ 1,200, ಅವರೆ 1,926, ಅಲಸಂದೆ 175, ಸೂರ್ಯಕಾಂತಿ 108, ಸಾಸಿವೆ 19, ಎಳ್ಳು 12, ಹುಚ್ಚೆಳ್ಳು 29, ಹರಳು 209, ಕಬ್ಬು 217, ಹತ್ತಿ 123 ಹೆಕ್ಟೇರ್‌ನಲ್ಲಿ ಬಿತ್ತನೆಯ ಗುರಿ ಇದೆ.

**ದ್ವಿದಳ ಧಾನ್ಯಗಳ ಬಿತ್ತನೆ ಕುಸಿತ**

**ಕಳೆದ ವರ್ಷ ಜಿಲ್ಲೆಯಲ್ಲಿ 27,677 ಹೆಕ್ಟೇರ್ ಪ್ರದೇಶದಲ್ಲಿ ಎಣ್ಣೆಕಾಳುಗಳ ಬಿತ್ತನೆ ಗುರಿ ಇತ್ತು. ಈ ಬಾರಿ ಆ ಗುರಿ 20,433 ಹೆಕ್ಟೇರ್‌ಗೆ ಇಳಿಕೆ ಆಗಿದೆ. ಏಕದಳ ಧಾನ್ಯಗಳ ಬಿತ್ತನೆಯಲ್ಲಿ ಹೇಳಿಕೊಳ್ಳುವ ವ್ಯತ್ಯಾಸ ಆಗಿಲ್ಲ. ಆದರೆ ದ್ವಿದಳ ಧಾನ್ಯಗಳ ಬಿತ್ತನೆ ಕಳೆದ ವರ್ಷಕ್ಕೆ ಮತ್ತು ಈ ಬಾರಿಗೆ ಹೋಲಿಸಿದರೆ ದೊಡ್ಡ ಪ್ರಮಾಣದಲ್ಲಿಯೇ ಕುಸಿತವಾಗಿದೆ. ಕಳೆದ ಮುಂಗಾರಿನಲ್ಲಿ 18,700 ಹೆಕ್ಟೇರ್ ಬಿತ್ತನೆ ಗುರಿ ಇತ್ತು. ಈ ಬಾರಿ ಕೇವಲ 6,057 ಹೆಕ್ಟೇರ್‌ನಲ್ಲಿ ಮಾತ್ರ ಬಿತ್ತನೆಯ ಗುರಿ ಹೊಂದಾಗಿದೆ. ವಾಣಿಜ್ಯ ಬೆಳೆಗಳ ಬಿತ್ತನೆಯ ಗುರಿ ಕಳೆದ ಬಾರಿಗಿಂತ ಹೆಚ್ಚಿದೆ.**

## ಬಾಲಕಿಯ ರುಂಡ ಕಡಿದ ಪ್ರಕರಣ, ವಿಶೇಷ ನ್ಯಾಯಾಲಯ ಸ್ಥಾಪನೆ: ಜಿ.ಪರಮೇಶ್ವರ

• ಉದಯವಾಹಿನಿ, ಮಡಿಕೇರಿ

16 ವರ್ಷದ ಬಾಲಕಿಯ ರುಂಡ ಕಡಿದ ಪ್ರಕರಣದ ತ್ವರಿತ ವಿಚಾರಣೆಗಾಗಿ ವಿಶೇಷ ನ್ಯಾಯಾಲಯ ಸ್ಥಾಪಿಸಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು. ಇಲ್ಲಿನ ಸೋಮವಾರಪೇಟೆ ತಾಲ್ಲೂಕಿನ ಕುಂಬಾರಗಡಿಗೆ ಗ್ರಾಮದಲ್ಲಿ ಕೊಲೆಯಾದ ಬಾಲಕಿಯ ಮನೆಗೆ ಗುರುವಾರ ಭೇಟಿ ನೀಡಿದ ವೇಳೆ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ಇದೊಂದು ಭೀಕರವಾದ ಘಟನೆ. ಮನುಷ್ಯರು ಯಾರೂ ಒಪ್ಪದಂತಹ ಘಟನೆ. ಇಂತಹ ಘಟನೆ ನಡೆಯಬಾರದಿತ್ತು. ಪ್ರಕರಣದ ವಿಚಾರಣೆಗೆ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್‌ಗಳನ್ನು ನೇಮಕ ಮಾಡಲಾಗುವುದು ಎಂದರು. ಚುನಾವಣಾ ನೀತಿ ಸಂಹಿತೆ ಮುಗಿದ ಕೂಡಲೇ ಸಂತ್ರಸ್ತ ಕುಟುಂಬದವರಿಗೆ ಪರಿಹಾರ ನೀಡಲಾಗುವುದು ಎಂದು ಪ್ರತಿಕ್ರಿಯೆ ನೀಡಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆಯೆ ಎಂಬ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಜನರು ಕಾನೂನು ಕೈಗೆತ್ತಿಕೊಳ್ಳುತ್ತಿದ್ದಾರೆ. ಈ ಕೊಲೆಗಳು ಪೂರ್ವಯೋಜಿತವಾಗಿರದೇ ಆ ಕ್ಷಣಕ್ಕೆ ಮಾಡಿದ ಕೃತ್ಯ ಎಂದು ಅನ್ನಿಸುತ್ತದೆ. ತನಿಖೆಯ ನಂತರ ಸತ್ಯಾಂಶ ತಿಳಿಯಲಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ತನಿಖೆಯ ನಂತರ ಸತ್ಯಾಂಶ**

ಜಗದೀಶ್ ಶೆಟ್ಟರ್ ಅವರು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದಿದ್ದಾರೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪರಮೇಶ್ವರ್, ಅವರು ಮುಖ್ಯಮಂತ್ರಿ ಆಗಿದ್ದಾಗ ರಾಜ್ಯದಲ್ಲಿ ನಡೆದ ಅಪರಾಧ ಕೃತ್ಯಗಳ ಅಂಕಿ-ಸಂಖ್ಯೆಗಳನ್ನು ಹೊರಗಿಡುವೆ. ನನಗೆ ಅವರ ಪ್ರಮಾಣ ಪತ್ರ ಬೇಕಿಲ್ಲ ಎಂದರು.

**ಸಿಡಿಮಿಡಿಗೊಂಡ ಪರಮೇಶ್ವರ್**

**ಹುಬ್ಬಳ್ಳಿಯಲ್ಲಿ ನಡೆದಿರುವ ಕೊಲೆಗಳ ಸಂಬಂಧ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಇಲ್ಲಿನ ಕೃತ್ಯಗಳ ಬಗ್ಗೆ ಮಾತನಾಡಿ, ಅಲ್ಲಿಯ ವಿಚಾರಗಳ ಕುರಿತ ಪ್ರಶ್ನೆಗಳು ಬೇಡ ಎಂದರು. ಪ್ರಜ್ವಲ್ ರೇವಣ್ಣ ಪ್ರಕರಣದ ಎಸ್‌ಐಟಿ ತನಿಖೆ ಕುರಿತ ವಿಷಯ ಪ್ರಸ್ತಾಪಿಸುತ್ತಿದ್ದಂತೆ ಸಿಡಿಮಿಡಿಗೊಂಡ ಪರಮೇಶ್ವರ್ ಇಲ್ಲಿಯ ವಿಚಾರಗಳ ಕುರಿತು ಕೇಳಿ ಎಂದರು.ಮತ್ತೆ ಪ್ರಶ್ನಿಸಿದಾಗ ಅವರು ಇನ್ನಷ್ಟು ಕೆರಳಿ, ನೀವು ನನಗೆ ಪ್ರಶ್ನೆಗಳಿಗೆ ಉತ್ತರಿಸುವಂತೆ ಒತ್ತಾಯ ಮಾಡುವಂತಿಲ್ಲ. ಹೀಗೆಲ್ಲ ನೀವು ಒತ್ತಾಯ ಮಾಡಬಾರದು. ನಾನು ಉತ್ತರಿಸುವುದಿಲ್ಲ ಎಂದು ಹೇಳಿ ನಿರ್ಗಮಿಸಿದರು.**

## ಎತ್ತಿನಹೊಳೆ ಯೋಜನೆ : ಶೀಘ್ರ ಪೂರ್ಣಗೊಳಿಸಲು ಇಂಜಿನಿಯರ್‌ಗಳಿಗೆ ಜಿಲ್ಲಾಧಿಕಾರಿಗಳ ಸೂಚನೆ

• ಉದಯವಾಹಿನಿ, ತುಮಕೂರು

ಜಿಲ್ಲೆಯಲ್ಲಿ ಕೈಗೊಂಡಿರುವ ಎತ್ತಿನಹೊಳೆ ಯೋಜನೆಯನ್ನು ಶೀಘ್ರ ಪೂರ್ಣಗೊಳಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಇಂಜಿನಿ ಯರ್‌ಗಳಿಗೆ ಸೂಚನೆ ನೀಡಿದರು.

ಎತ್ತಿನಹೊಳೆ ಯೋಜನೆಗೆ ಸಂಬಂಧಿಸಿದಂತೆ ಗುಬ್ಬಿ ತಾಲ್ಲೂಕು ನಿಟ್ಟೂರು ಹೋಬಳಿ ದೊಡ್ಡಗುಣಿ, ತಿಪಟೂರು ತಾಲ್ಲೂಕು ರಜತಾದ್ರಿಪುರ, ಚಿಕ್ಕನಾಯಕನಹಳ್ಳಿ ತಾಲ್ಲೂಕು ಜೆ.ಸಿ.ಪುರ ಗ್ರಾಮಗಳಿಗೆ ಭೇಟಿ ನೀಡಿ ಕಾಮಗಾರಿ ಪ್ರಗತಿ ಪರಿಶೀಲಿಸಿ ಮಾತನಾಡಿದ ಅವರು, ತಿಪಟೂರು ಹಾಗೂ ಚಿಕ್ಕನಾಯಕನಹಳ್ಳಿ ವ್ಯಾಪ್ತಿಯಲ್ಲಿ ಯೋಜನೆಗೆ ಸಂಬಂಧಿಸಿದಂತೆ ಭೂಸ್ವಾಧೀನ ಪ್ರಕ್ರಿಯೆ ಇದುವರೆಗೂ ಪೂರ್ಣಗೊಂಡಿಲ್ಲ. ಕೂಡಲೇ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ತೋಟಗಾರಿಕೆ, ಅರಣ್ಯ ಇಲಾಖೆಗಳು ಮರ-ಮುಲ್ಕಿಗಳ ಮೌಲ್ಯಮಾಪನ ಮಾಡಿ ವರದಿ ನೀಡುವ ಮೂಲಕ ಭೂಸ್ವಾಧೀನ ಪ್ರಕ್ರಿಯೆಗೆ ವೇಗ ನೀಡಲು ಸಹಕರಿಸಬೇಕು ಎಂದು ನಿರ್ದೇಶನ ನೀಡಿದರು. ದೊಡ್ಡಗುಣಿ ಬಳಿ ಎತ್ತಿನಹೊಳೆ ಯೋಜನೆ ಸೇತುವೆ ನಿರ್ಮಾಣ ಕಾಮಗಾರಿ ಪ್ರಗತಿಯ ವಿಳಂಬಕ್ಕೆ ಕಾರಣವೇನೆಂದು ಮಾಹಿತಿ ಪಡೆದ ಅವರು, ಆದಷ್ಟು ಬೇಗ ಕಾಮಗಾರಿ ಪೂರ್ಣ ಗೊಳಿಸಲು ಸೂಚಿಸಿದರು. ವಿಶೇಷ ಭೂಸ್ವಾಧೀನಾಧಿಕಾರಿ ಜಿ.ಎನ್. ಮಂಜುನಾಥ, ಕಾರ್ಯಪಾಲಕ ಇಂಜಿನಿಯರ್ ಆನಂದ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

## ಕೊಠಡಿ ಸಮಸ್ಯೆ : ಮರದ ಕೆಳಗೆ ಪದವಿ ಪ್ರವೇಶಾತಿ

• ಉದಯವಾಹಿನಿ, ಕೋಲಾರ

ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಕೋಲಾರ ಮೀಸಲು ಲೋಕಸಭೆ ಕ್ಷೇತ್ರದ ವಿದ್ಯುನ್ಮಾನ ಮತಯಂತ್ರ ಇಟ್ಟಿರುವ ಕಾರಣ ತರಗತಿಗಳು ಪಕ್ಕದ ಬಾಲಕಿಯರ ಸರ್ಕಾರಿ ಜೂನಿಯರ್ ಕಾಲೇಜಿಗೆ ಸ್ಥಳಾಂತರಗೊಂಡಿದ್ದು, ಕೊಠಡಿ ಸಮಸ್ಯೆ ಕಾರಣ ಪ್ರಸ್ತಕ ಶೈಕ್ಷಣಿಕ ಸಾಲಿನ ಪದವಿ ಕೋರ್ಸ್‌ಗಳ ಪ್ರವೇಶಾತಿಯನ್ನು ಮರದ ಕೆಳಗೆ ನಡೆಸಲಾಗುತ್ತಿದೆ.

ಪದವಿ ತರಗತಿ ನಡೆಸಲು ಜೂನಿಯರ್ ಕಾಲೇಜಿನಲ್ಲಿ 16 ಕೊಠಡಿ ನೀಡಲಾಗಿದೆ. ಏಪ್ರಿಲ್ 27ರಿಂದ ಜೂನ್ 6ರವರೆಗೆ ಇಲ್ಲಿಯೇ ತರಗತಿ ನಡೆಸಬೇಕಾಗಿದೆ.

ಉಪನ್ಯಾಸಕರ ಕೊಠಡಿ (ಸ್ಟಾಫ್ ರೂಮ್) ಹಾಗೂ ಕಚೇರಿ ಒಂದೇ ಕೊಠಡಿಯಲ್ಲಿ ನಡೆಯುತ್ತಿವೆ. ಇದರಿಂದ ತೊಂದರೆ ಆಗುತ್ತಿರುವುದಾಗಿ ಉಪನ್ಯಾಸಕರು ಹೇಳಿಕೊಂಡಿದ್ದಾರೆ. ಪ್ರಥಮ ಪದವಿ ಕೋರ್ಸ್‌ಗಳಿಗೆ ಪ್ರವೇಶಾತಿ ಕೂಡ ಆರಂಭವಾಗಿದ್ದು, ಕೊಠಡಿ ಸಮಸ್ಯೆ ಎದುರಾಗಿದೆ. ಪೂರಕವಾದ ವಾತಾವರಣವೂ ಇಲ್ಲ. ಹೀಗಾಗಿ, ಸಿಬ್ಬಂದಿ ಕಾಲೇಜಿನ ಆವರಣದಲ್ಲಿ ಮರದ ಕೆಳಗೆ ಕುರ್ಚಿ ಹಾಕಿಕೊಂಡು ಕುಳಿತು ಪ್ರವೇಶಾತಿ ಪ್ರಕ್ರಿಯೆ ನಡೆಸುತ್ತಿದ್ದಾರೆ. ಅಲ್ಲದೇ, ಹೊಸದಾಗಿ ಪ್ರವೇಶಾತಿಗೆ ಅರ್ಜಿ ಪಡೆಯಲು ವಿದ್ಯಾರ್ಥಿಗಳು ವಿಳಾಸ ಗೊತ್ತಾಗದೇ ಪರದಾಡುತ್ತಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕರು, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ, ಶಿಕ್ಷಣ ಸಂಯೋಜಕ ಮತ್ತಿತರ ಹುದ್ದೆಗಳಿಗೆ ಬಾಲಕಿಯರ ಜೂನಿಯರ್ ಕಾಲೇಜಿನಲ್ಲೇ ಮೇ 14 ರಿಂದ 16 ರವರೆಗೆ ಪರೀಕ್ಷೆಗಳು ನಡೆಯುತ್ತಿವೆ. ಇದರಿಂದ ಮತ್ತಷ್ಟು ತೊಂದರೆ ಉಂಟಾಗಿದ್ದು, ಪದವಿ ವಿದ್ಯಾರ್ಥಿಗಳಿಗೆ ರಜೆ ಕೊಡಬೇಕಾದ ಪರಿಸ್ಥಿತಿ ಎದುರಾಗಿದೆ.


ಉದಯವಾಹಿನಿ ಚಿತ್ರ


> ಪ್ರವೇಶಾತಿಗೆ ತೊಂದರೆ ಉಂಟಾಗಿದೆ. ಜೊತೆಗೆ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಪರೀಕ್ಷೆಗಳು ಇಲ್ಲಿಯೇ ನಡೆಯುತ್ತಿದ್ದು, ಕೊಠಡಿ ಅಲಭ್ಯತೆಯಿಂದ ವಿದ್ಯಾರ್ಥಿಗಳಿಗೆ ಮೂರು ದಿನ ರಜೆ ಘೋಷಿಸಿದ್ದೇವೆ -ಪ್ರೊ.ಕೆ.ಎನ್.ಶ್ರೀನಿವಾಸಗೌಡ, ಪ್ರಾಂಶುಪಾಲ

## ಎಸ್‌ಎಸ್‌ಎಲ್‌ಸಿ: ವಸತಿ ಶಾಲೆಗಳ ಉತ್ತಮ ಸಾಧನೆ

• ಉದಯವಾಹಿನಿ, ಚಾಮರಾಜನಗರ

2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ (ಕ್ರೈಸ್) ಅಧೀನದಲ್ಲಿ ಬರುವ ವಸತಿ ಶಾಲೆಗಳು ಜಿಲ್ಲೆಯಲ್ಲಿ ಉತ್ತಮ ಫಲಿತಾಂಶ ದಾಖಲಿಸಿವೆ.

ಜಿಲ್ಲೆಯಲ್ಲಿ 21 ವಸತಿ ಶಾಲೆಗಳಿದ್ದು, 12 ಶಾಲೆಗಳು ಸಮಾಜ ಕಲ್ಯಾಣ ಇಲಾಖೆ, ಏಳು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಎರಡು ಶಾಲೆಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುತ್ತವೆ. ಜಿಲ್ಲೆಯಲ್ಲಿ ಶೇ 100ರಷ್ಟು ಫಲಿತಾಂಶ ದಾಖಲಿಸಿರುವ ಎಂಟು ಶಾಲೆಗಳ ಪೈಕಿ ನಾಲ್ಕು ವಸತಿ ಶಾಲೆಗಳು. 21 ಶಾಲೆಗಳ ಪೈಕಿ ನಾಲ್ಕು ಸಂಸ್ಥೆಗಳನ್ನು ಬಿಟ್ಟು ಉಳಿದ 17 ಶಾಲೆಗಳು ಶೇ 90ಕ್ಕೂ ಹೆಚ್ಚು ಫಲಿತಾಂಶ ದಾಖಲಿಸಿವೆ. ಇವುಗಳಲ್ಲಿ 12 ಶಾಲೆಗಳಲ್ಲಿ ಶೇ 95ಕ್ಕೂ ಹೆಚ್ಚು ಮಕ್ಕಳು ತೇರ್ಗಡೆಯಾಗಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಚಾಮರಾಜನಗರ ತಾಲ್ಲೂಕಿನ ಹರವೆಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಜ್ಯೋತಿಗೌಡನಪುರದಲ್ಲಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ, ಹರದನಹಳ್ಳಿಯಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ತೇರ್ಗಡೆಯಾಗಿ 100 ಫಲಿತಾಂಶ ದಾಖಲಿಸಿವೆ.



ಉದಯವಾಹಿನಿ ಚಿತ್ರ

**ಫಲಿತಾಂಶ**

**ಹನೂರು ತಾಲ್ಲೂಕಿನ ಹೂಗ್ಯಂನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಾತ್ರ ಶೇ 51ರಷ್ಟು ಫಲಿತಾಂಶ ದಾಖಲಿಸಿ, ಕೊನೆಯ ಸ್ಥಾನದಲ್ಲಿದೆ. ಹನೂರಿನ ಮಂಗಲದ ಏಕಲವ್ಯ ಮಾದರಿ ಶಾಲೆ ಶೇ 70.37, ಹನೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆ ಶೇ 72.91, ಗುಂಡ್ಲುಪೇಟೆ ತಾಲ್ಲೂಕಿನ ಗರಗನಹಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಶೇ 77.5 ಮತ್ತು ಚಾಮರಾಜನಗರದ ಮೊರಾರ್ಜಿ ದೇಸಾಯಿ ವಸತಿ ಶಾಲೆ ಶೇ 84ರಷ್ಟು ಫಲಿತಾಂಶ ದಾಖಲಿಸಿ ನಂತರದ ಸ್ಥಾನದಲ್ಲಿವೆ.**

# ನಗರಸಭೆ ವ್ಯಾಪ್ತಿ ಬೇಡ, ಪಂಚಾಯಿತಿಗೆ ಸೇರಿಸಿ: ನಿವಾಸಿಗಳ ಆಗ್ರಹ

**ಮಸ್ಕಂ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಕಾಡುತ್ತಿದ್ದು, ಸಮಸ್ಯೆ ಆಲಿಸಿ ಪರಿಹಾರ ಮಾಡುವವರೇ ಇಲ್ಲದಂತಾಗಿದೆ**

• ಉದಯವಾಹಿನಿ ಕೆಜಿಎಫ್

ನಗರಸಭೆ ವ್ಯಾಪ್ತಿ ಅಂಚಿನಲ್ಲಿರುವ ಮಸ್ಕಂ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಕಾಡುತ್ತಿದ್ದು, ಸಮಸ್ಯೆ ಆಲಿಸಿ ಪರಿಹಾರ ಮಾಡುವವರೇ ಇಲ್ಲದಂತಾಗಿದೆ. ಹಾಗಾಗಿ ನಗರಸಭೆಗೆ ಆಡಳಿತ ನಡೆಸಲು ಸಾಧ್ಯವಿಲ್ಲದಿದ್ದರೆ ಪಂಚಾಯಿತಿಗಾದರೂ ಬಡಾವಣೆಯನ್ನು ಸೇರಿಸಿ, ಅದರಿಂದಾದರೂ ಅಭಿವೃದ್ಧಿಯಾಗಬಹುದು ಎಂಬ ಮಾತುಗಳು ಬಡಾವಣೆ ನಿವಾಸಿಗಳಿಂದ ಕೇಳಿ ಬರುತ್ತಿವೆ.

ಮಸ್ಕಂ ವಿಲೇಜ್ ಎಂದೇ ಖ್ಯಾತಿಯಾಗಿರುವ ಮಸ್ಕಂ ಬಡಾವಣೆಯಲ್ಲಿ ಇತರ ವಾರ್ಡ್‌ಗಳಿಗೆ ಹೋಲಿಸಿದರೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳು ಮರೀಚಿಕೆಯಾಗಿದೆ. ವಾರ್ಡ್‌ನಿಂದ ಗೆದ್ದಿದ್ದ ನಗರಸಭೆ ಸದಸ್ಯ ಸುಮಾರು ಒಂದು ವರ್ಷದಿಂದ ಈ ಭಾಗಸತ್ತ ತಲೆಹಾಕಿಲ್ಲ. ಬಡಾವಣೆ ಸಮಸ್ಯೆಗಳನ್ನು ನಗರಸಭೆಗೆ ತಿಳಿಸುವ ಜನಪ್ರತಿನಿಧಿಯೇ ಇಲ್ಲ. ಅವರ ಗೈರು ಹಾಜರಿಯಲ್ಲಿ ಅಧಿಕಾರಿಗಳಾದರೂ ಬಂದು ಜನರ ಸಮಸ್ಯೆ ಆಲಿಸಬೇಕಿತ್ತು. ಆದರೆ, ಅವರು ಕೂಡ ಬಂದಿಲ್ಲ. ಶಾಸಕಿ ರೂಪಕಲಾ ಈ ಭಾಗದ ಬಗ್ಗೆ ಸದಾ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂದು ಬಡಾವಣೆ ನಿವಾಸಿಗಳು ಆರೋಪಿಸಿದ್ದಾರೆ. ರಾಜ್ಯ ಹೈಕೋರ್ಟ್ ಸ್ಮಶಾನಗಳ ರಕ್ಷಣೆಗೆ ಒತ್ತು ನೀಡಿದೆ.

**ಮೂಲಭೂತ ಸೌಕರ್ಯಗಳ ಕೊರತೆ**

ಆದರೆ, ಇರುವ ಸ್ಮಶಾನವನ್ನು ಉಪಯೋಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಸ್ಮಶಾನ ಒತ್ತುವರಿ ಮತ್ತು ಅದಕ್ಕೆ ಹೋಗುವ ದಾರಿ ಕೂಡ ಒತ್ತುವರಿ ಮಾಡಿಕೊಳ್ಳಲಾಗಿದೆ. ಈ ಸಂಬಂಧ ಹಲವು ಬಾರಿ ಮನವಿ ನೀಡಲಾಗಿದೆ. ಆದರೆ, ಅಧಿಕಾರಿಗಳು ಹದಿನೈದು ವರ್ಷದಿಂದ ಮೌನಕ್ಕೆ ಶರಣಾಗಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ.


ಉದಯವಾಹಿನಿ ಚಿತ್ರ

ಬಡಾವಣೆಯಲ್ಲಿ ಹಾಕಿರುವ ಸಿಮೆಂಟ್ ರಸ್ತೆ ಅಧ್ವಾನವಾಗಿದೆ. ಚರಂಡಿಗಳ ಮೇಲೆ ಹಾಕಿರುವ ಕಾಂಕ್ರೀಟ್‌ನಿಂದ ಕಬ್ಬಿಣದ ಕಂಬಿಗಳು ಮೇಲೆದ್ದು, ಪಾದಚಾರಿಗಳ ಕಾಲಿಗೆ ಚುಚ್ಚುತ್ತಿವೆ. ಚರಂಡಿಗಳನ್ನು ಮುಚ್ಚಿಲ್ಲ.

ಚರಂಡಿ ನೀರು ಕೂಡ ಸರಾಗವಾಗಿ ಹರಿದು ಹೋಗಲು ವ್ಯವಸ್ಥೆ ಮಾಡಿಲ್ಲ. ಇದರಿಂದಾಗಿ ಚರಂಡಿ ದುರ್ವಾಸನೆ ಬೀರುತ್ತಿದೆ. ಶೌಚಾಲಯಗಳಿಂದ ಬರುವ ನೀರು ಚರಂಡಿಯಲ್ಲಿ ಶೇಖರವಾಗುತ್ತಿದೆ. ಅದು ತುಂಬಿದಾಗ ರಸ್ತೆ ಮೇಲೆ ಹರಿಯುತ್ತದೆ. ಸೊಳ್ಳೆಗಳ ಕಾಟ ಜಾಸ್ತಿಯಾಗಿದೆ. ಸೊಳ್ಳೆಗಳ ನಿಯಂತ್ರಣಕ್ಕೆ ಕೂಡ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಸುಮಾರು ಹತ್ತು ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಸಾರ್ವಜನಿಕ ಶೌಚಾಲಯ ಕಟ್ಟಿದಾಗಿನಿಂದ ಇದುವರೆವಿಗೂ ಉಪಯೋಗಕ್ಕೆ ಬಂದಿಲ್ಲ. ಹೊಸ ಕಟ್ಟಡ ಅನುಪಯುಕ್ತವಾಗಿದೆ. ಅದು ಬಡಾವಣೆಯ ತ್ಯಾಜ್ಯ ಸಂಗ್ರಹ ಕೇಂದ್ರವಾಗಿ ಮಾರ್ಪಟ್ಟಿದೆ ಎಂಬುದು ನಿವಾಸಿಗಳ ಮಾತಾಗಿದೆ.

> ಚರಂಡಿ ಮೇಲಿನ ಸಿಮೆಂಟ್ ಕಾಂಕ್ರಿಟ್‌ನಲ್ಲಿ ಕಂಬಿಗಳು ಎದ್ದು ಬಂದಿರುವುದು ರಸ್ತೆಯ ಎರಡೂ ಪಕ್ಕದಲ್ಲಿ ಮುಳ್ಳು ಗಿಡಗಳು ಬೆಳೆದಿರುವುದು ಮಸ್ಕಂನಲ್ಲಿ ಸರ್ಕಾರಿ ಶಾಲೆಗೆ ಜಾಗ ನೀಡಲು ನಗರಸಭೆ ತೀರ್ಮಾನಿಸಿದೆ. ಈಚೆಗೆ ಕೊಳವೆಬಾವಿ ಕೊರೆದು ನೀರಿನ ಸಮಸ್ಯೆ ನೀಗಿಸುವ ಪ್ರಯತ್ನ ಮಾಡಲಾಗಿದೆ. ಶೀಘ್ರದಲ್ಲಿಯೇ ಶುದ್ಧ ಕುಡಿಯುವ ನೀರಿನ ಘಟಕ ಪ್ರಾರಂಭಿಸಲು ಹಾಗೂ ರಸ್ತೆ ಅಭಿವೃದ್ಧಿಪಡಿಸುವ ಯೋಜನೆಯಲ್ಲಿ ಪ್ರಸ್ತಾವವನ್ನು ಸೇರಿಸಲಾಗಿದೆ -ಪವನ್‌ಕುಮಾರ್, ನಗರಸಭೆ ಆಯುಕ್ತ

**ಪಾದಚಾರಿಗಳಿಗೆ ತೊಂದರೆ**

**ಬಡಾವಣೆಗೆ ಹೋಗುವ ರಸ್ತೆ ಕಿರಿದ್ದು, ರಸ್ತೆ ಅಕ್ಕ ಪಕ್ಕ ಜಾಲಿ ಮತ್ತು ಮುಳ್ಳಿನ ಗಿಡಗಳು ಬೆಳೆದಿವೆ. ಒಂದು ವಾಹನ ದಾರಿಯಲ್ಲಿ ಬಂದರೆ ಪಾದಚಾರಿಗಳು ಮುಳ್ಳು ಗಿಡಕ್ಕೆ ಅಂಟಿಕೊಂಡು ನಡೆಯಬೇಕಾಗುತ್ತದೆ. ಅವುಗಳನ್ನು ತೆರವುಗೊಳಿಸಲು ನಗರಸಭೆಗೆ ಸಾಧ್ಯವಾಗಿಲ್ಲ ಎಂದು ನಿವಾಸಿಗಳ ಮಾತಾಗಿದೆ.**

## ಮಿನಿ ನ್ಯೂಸ್

### ಎಳೆದಾಡಿದ ಜೆಡಿಎಸ್ ಕಾರ್ಯಕರ್ತರು: ನಾಮಪತ್ರ ಸಲ್ಲಿಸದ ಶ್ರೀಕಂಠೇಗೌಡ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮೈಸೂರು

ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಜೆಡಿಎಸ್ ಟಿಕೆಟ್ ಆಕಾಂಕ್ಷಿ ಆಗಿದ್ದ ಕೆ.ಟಿ. ಶ್ರೀಕಂಠೇಗೌಡ ಅವರು ನಗರದ ಆಲಮ್ಮ ಕಲ್ಯಾಣ ಮಂಟಪದಲ್ಲಿ ಗುರುವಾರ ತಮ್ಮ ಬೆಂಬಲಿಗರೊಂದಿಗೆ ಹಮ್ಮಿಕೊಂಡಿದ್ದ ಸಭೆಯಲ್ಲಿ ಜೆಡಿಎಸ್‌ನ ಕೆಲವು ಕಾರ್ಯಕರ್ತರು ಗದ್ದಲ ಎಬ್ಬಿಸಿದರು.ನಾಮಪತ್ರ ಸಲ್ಲಿಸದಂತೆ ಒತ್ತಾಯಿಸಿ ಶ್ರೀಕಂಠೇಗೌಡರನ್ನು ಎಳೆದಾಡಿದರು. ಇದರಿಂದ ಅವರು ಗಾಯಗೊಂಡು ಆಸ್ಪತ್ರೆ ಸೇರಿದ್ದು ನಾಮಪತ್ರ ಸಲ್ಲಿಸಲು ಆಗಲಿಲ್ಲ. ಕ್ಷೇತ್ರದಿಂದ ಜೆಡಿಎಸ್-ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿಯಾಗಿ ವಿವೇಕಾನಂದ ಅವರಿಗೆ ಪಕ್ಷವು ಬಿ ಫಾರಂ ನೀಡಿತ್ತು. ಇದರಿಂದ ಬೇಸರಗೊಂಡಿದ್ದ ಶ್ರೀಕಂಠೇಗೌಡ ಪಕ್ಷೇತರರಾಗಿ ಸ್ಪರ್ಧಿಸುವ ಆಶಯದೊಂದಿಗೆ ಗುರುವಾರ ಸಭೆ ನಡೆಸಿದ್ದರು. ಈ ವೇಳೆ ಗದ್ದಲ ಏರ್ಪಟ್ಟು ಅವರು ಆಸ್ಪತ್ರೆ ಸೇರಿದರು.ನಾಮಪತ್ರ ಸಲ್ಲಿಕೆಗೆ ಗುರುವಾರ ಕಡೆಯ ದಿನವಾಗಿತ್ತು.

### ಕುಣಿಗಲ್ ಪೊಲೀಸ್ ಠಾಣೆಯ ಎಎಸ್‌ಐ ವೆಂಕಟೇಶ್ ಸಾವು

• ಉದಯವಾಹಿನಿ ಕುಣಿಗಲ್



ತಾಲ್ಲೂಕಿನ ಅಲಪ್ಪನಗುಡ್ಡೆ ಸಮೀಪ ಬೈಕ್‌ಗೆ ಅಪರಿಚಿತ ವಾಹನ ಡಿಕ್ಕಿಯಾಗಿ ತೀವ್ರವಾಗಿ ಗಾಯಗೊಂಡಿದ್ದ ಕುಣಿಗಲ್ ಪೊಲೀಸ್ ಠಾಣೆಯ ಎಎಸ್‌ಐ ಬಿ.ವೆಂಕಟೇಶ್ (52) ಚುಂಚನಗಿರಿ ಆಸ್ಪತ್ರೆಯಲ್ಲಿ ಗುರುವಾರ ಮೃತಪಟ್ಟಿದ್ದಾರೆ. ಸಂಜೆ ಕಾರ್ಯ ನಿಮಿತ್ತ ತಮ್ಮ ಬೈಕ್‌ನಲ್ಲಿ ಎಡೆಯೂರಿಗೆ ಹೋಗಿ ಹಿಂತಿರುಗುವಾಗ ಅಪಘಾತ ಸಂಭವಿಸಿತ್ತು. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದ್ದಾರೆ. ವೆಂಕಟೇಶ್ ಶಿರಾ ತಾಲ್ಲೂಕಿನ ಕಳ್ಳಂಬೆಳ್ಳ ಸಮೀಪದ ಯಮರಹಳ್ಳಿ ಗ್ರಾಮದವರು. ಹೆಬ್ಬೂರು, ಅಮೃತೂರು, ಹುಲಿಯೂರುದುರ್ಗ, ಕುಣಿಗಲ್ ಠಾಣೆಗಳಲ್ಲಿ ಕಾರ್ಯ ನಿರ್ವಹಿಸಿದ್ದರು.

### ಎರಡನೇ ಸಲ ಲೋಕಾಯುಕ್ತ ಬಲೆಗೆ ಬಿದ್ದ ರಾಜಸ್ವ ನಿರೀಕ್ಷಕ

• ಉದಯವಾಹಿನಿ ಗುಬ್ಬಿ



ರಾಜಸ್ವ ನಿರೀಕ್ಷಕರೊಬ್ಬರು ಎರಡನೇ ಬಾರಿಗೆ ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿ ಬಿದ್ದಿದ್ದಾರೆ. ಜಮೀನಿನ ಖಾತೆ ಬದಲಾವಣೆ ಮಾಡಲು ಲಂಚಕ್ಕೆ ಬೇಡಿಕೆ ಇಟ್ಟಿದ್ದ ಸಿ.ಎಸ್.ಪುರ ಹೋಬಳಿಯ ರಾಜಸ್ವ ನಿರೀಕ್ಷಕ ನರಸಿಂಹಮೂರ್ತಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಸಿ.ಎಸ್.ಪುರ ಹೋಬಳಿ ಗದ್ದೆಹಳ್ಳಿ ಗ್ರಾಮದ ನಾಗರಾಜು ಅವರಿಗೆ ಖಾತೆ ಬದಲಾವಣೆ ಮಾಡಿಕೊಡಲು 10 ಸಾವಿರ ಲಂಚ ಕೇಳಿದ್ದರು. ಹಣ ನೀಡಲು ಒಪ್ಪದ ರೈತ ನಾಗರಾಜು ಲೋಕಾಯುಕ್ತರಿಗೆ ದೂರು ನೀಡಿದ್ದರು. ಸಿ.ಎಸ್.ಪುರ ನಾಡ ಕಚೇರಿಯಲ್ಲಿ ಹಣ ನೀಡುವ ಸಂದರ್ಭದಲ್ಲಿ ಹಣದ ಸಮೇತ ನರಸಿಂಹಮೂರ್ತಿ ಅವರನ್ನು ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ನರಸಿಂಹಮೂರ್ತಿ 2023ರ ಜುಲೈ 7ರಂದು ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುವಾಗ ನಿವೇಶನದ ಖಾತೆ ಮಾಡಿಕೊಡಲು ಫಯಾಜ್ ಎಂಬುವರಿಗೆ 15 ಸಾವಿರ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಹಣ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳಿಗೆ ಸಿಕ್ಕಿ ಬಿದ್ದಿದ್ದರು.

### ಬಿಸಿಲ ಪಟ್ಟು ಕುಕ್ಕುಟೋದ್ಯಮಕ್ಕೆ ಪೆಟ್ಟು


ಉದಯವಾಹಿನಿ ಚಿತ್ರ

• ಉದಯವಾಹಿನಿ ಯಳಂದೂರು

ಮಳೆ ಈಗಷ್ಟೇ ಶುರುವಾಗಿದೆ. ಹಾಗಿದ್ದರೂ ಬಿಸಿಲಿನ ಅಬ್ಬರ ಕಡಿಮೆಯಾಗಿಲ್ಲ. ಬರದಿಂದಾಗಿ ಕುಕ್ಕುಟೋದ್ಯಮ ನಂಬಿದವರ ಬದುಕು ಅತಂತ್ರವಾಗಿದೆ. ಪ್ರತಿದಿನ ಫಾರಂಗಳಲ್ಲಿ ಕೋಳಿ ಸಾಯುತ್ತಿದ್ದು, ಲಕ್ಷಾಂತರ ರೂಪಾಯಿ ನಷ್ಟಕ್ಕೆ ಕಾರಣವಾಗಿದೆ. ತಾಲ್ಲೂಕಿನಲ್ಲಿ ಮೊಟ್ಟೆ ಮತ್ತು ಮಾಂಸದ ಉದ್ದೇಶಕ್ಕೆ ಕೋಳಿ ಸಾಕಣೆ ಮಾಡಲಾಗುತ್ತಿದೆ.ಬಿಸಿ ವಾತಾವರಣ ಕೋಳಿಗಳ ಸಾಕಣೆಗೆ ಹಿನ್ನಡೆಯಾಗಿ ಪರಿಣಮಿಸಿದೆ. ಪ್ರತಿ ದಿನ ಹತ್ತಾರು ಕೋಳಿ ಸಾಯುತ್ತಿದ್ದು, ಅವಧಿಗೂ ಮುನ್ನವೇ ಕೋಳಿ ಮಾರಾಟ ಮಾಡುತ್ತಿದ್ದಾರೆ. ಜೊತೆಗೆ, ಕೋಳಿ ಉಳಿಸಿಕೊಳ್ಳಲು ಫಾರಂಗಳಲ್ಲಿ ತಂಪು ತುಂಬುವ ಕೆಲಸ ಮಾಡುತ್ತಿದ್ದು, ನಿರ್ವಹಣೆ ಖರ್ಚನ್ನು ಇಮ್ಮಡಿಗೊಳಿಸಿದೆ.

ಈ ಬಾರಿ ಚಳಿ ಮುಂದುವರಿಯಲಿಲ್ಲ. ಡಿಸೆಂಬರ್-ಜನವರಿ ಮಳೆ ಸುರಿಯಲಿಲ್ಲ. ಇದರಿಂದ ಸಹಜವಾಗಿ ಫೆಬ್ರುವರಿ-ಮೇ ನಡುವೆ ಶಾಖ ಉಲ್ಬಣ ಗೊಳ್ಳಲು ಕಾರಣವಾಯಿತು. ಜೊತೆಗೆ ಬಿಸಿಗಾಳಿ, ಬಿಸಿಲಿನ ಅಬ್ಬರವೂ ಸೇರಿ ಮತ್ತಷ್ಟು ಕುತ್ತು ತಂದಿತು' ಎಂದು ಹೇಳುತ್ತಾರೆ ಕೋಳಿ ಸಾಕಣೆದಾರರು.

ದೊಡ್ಡ ಪ್ರಮಾಣದ ಕೋಳಿ ಸಾಕಲು ಆಗುತ್ತಿಲ್ಲ. ಪ್ರತಿದಿನ ಕೋಳಿಗಳು ಸಾಯುತ್ತಿರುವುದರಿಂದ ಮಾಂಸದ ಕೋಳಿ ಉತ್ಪಾದನೆ ಕಡಿಮೆ ಮಾಡಿದೆ. ಚಿಕನ್ ಬೆಲೆ ಏರಿಕೆಗೆ ಕಾರಣವಾಗಿದೆ.

**ಕೋಳಿ ಫಾರಂ ಅನ್ನು ತಂಪಾಗಿ ಇಡಲು ಮಾಲೀಕರು ಹಲವು ತಂತ್ರಗಳನ್ನು ಪ್ರಯೋಗಿಸಿದ್ದಾರೆ. ಛಾವಣಿ ಮೇಲೆ ತೆಂಗಿನ ಗರಿ ಇಟ್ಟು, ನೀರು ಸಿಂಪಡಿಸುತ್ತಿದ್ದಾರೆ. ಕೆಲವರು ಫ್ಯಾನ್ ಇಲ್ಲವೇ ಕೂಲರ್ ಬಳಸಲು ಮುಂದಾಗಿದ್ದಾರೆ. ಇದು ಸಾಕಣೆದಾರರಿಗೆ ಹೆಚ್ಚಿನ ಆರ್ಥಿಕ ಹೊರೆಯಾಗುವಂತೆ ಮಾಡಿದೆ.**

ಅಂತರಾಳದಿಂದ.. EDITORIAL

# ಸಿಎಎ ಅನುಷ್ಠಾನ ಮೋದಿ ಸರ್ಕಾರದ ದಿಟ್ಟ ನಿರ್ಧಾರ

ಭಾರಿ ಆಕ್ಷೇಪದ ಮಧ್ಯೆ, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪೌರತ್ವ ತಿದ್ದುಪಡಿ ಕಾಯ್ದೆಯಡಿ (ಸಿಎಎ) ಮೊದಲ ಕಂತಿನಲ್ಲಿ 14 ಜನರಿಗೆ ಭಾರತೀಯ ನಾಗರಿಕತ್ವವನ್ನು ನೀಡಲಾಗಿದೆ. ಎಲ್ಲರಿಗೂ ಪೌರತ್ವ ಪ್ರಮಾಣಪತ್ರವನ್ನು ಬುಧವಾರ ವಿತರಿಸಲಾಯಿತು. ಈ ಮೂಲಕ ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶದಿಂದ ಕಿರುಕುಳಕ್ಕೊಳಗಾದ ಮುಸ್ಲಿಮೇತರ ವಲಸಿಗರಿಗೆ ಭಾರತೀಯ ರಾಷ್ಟ್ರೀಯತೆ ನೀಡುವ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಅಧಿಕೃತ ಚಾಲನೆ ನೀಡಿದೆ. ದೆಹಲಿಯಲ್ಲಿ ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಕುಮಾರ್ ಭಲ್ಲಾ ಅವರು, 14 ಜನರು ಆನ್‌ಲೈನ್ ಮೂಲಕ ಸಲ್ಲಿಸಿದ್ದ ಅರ್ಜಿಗಳನ್ನು ಪರಿಶೀಲಿಸಿದ ನಂತರ ಭಾರತೀಯ ಪೌರತ್ವ ನೀಡಿದ ಪ್ರಮಾಣಪತ್ರಗಳನ್ನು ಹಸ್ತಾಂತರಿಸಿದರು. ಜಿಲ್ಲಾ ಮಟ್ಟದ ಸಮಿತಿಗಳು ಗೊತ್ತುಪಡಿಸಿದ ಅಧಿಕಾರಿಗಳ ನೇತೃತ್ವದಲ್ಲಿ ದಾಖಲೆಗಳ ಪರಿಶೀಲನೆಯ ನಂತರ ಅರ್ಜಿಗಳನ್ನು ಅಖೈರು ಮಾಡಲಾಗಿದೆ.

> **ಅಲ್ಪಸಂಖ್ಯಾತರನ್ನು ಗುರಿಯಾಗಿಸಲು ಸಿಎಎ ಮತ್ತು ಅಷ್ಟೇ ವಿವಾದಾತ್ಮಕ ಎನ್‌ಆರ್‌ಸಿ ಅಥವಾ ರಾಷ್ಟ್ರೀಯ ನಾಗರಿಕರ ನೋಂದಣಿಯನ್ನು ತರಲಾಗಿದೆ ಎಂಬ ಭಯವನ್ನು ಗೃಹ ಸಚಿವರು ಆಗಾಗ ಹೇಳಿಕೆಗಳ ಮೂಲಕ ನಿವಾರಿಸುತ್ತ ಬಂದಿದ್ದಾರೆ. ಸಿಎಎ ಬಗ್ಗೆ ಅಪಪ್ರಚಾರಗಳ ಮೂಲಕ ಈಗಲೂ ಮುಸ್ಲಿಮರನ್ನು ದಾರಿ ತಪ್ಪಿಸಲು ಯತ್ನಿಸಲಾಗುತ್ತಿದೆ. ಇದು ಯಾರ ಪೌರತ್ವವನ್ನೂ ಕಸಿದುಕೊಳ್ಳಲು ಇರುವುದಲ್ಲ.**

ಸಂಸತ್ತಿನಲ್ಲಿ ಅಂಗೀಕರಿಸಲ್ಪಟ್ಟ ನಾಲ್ಕು ವರ್ಷಗಳ ನಂತರ ಕೇಂದ್ರ ಸರ್ಕಾರವು ಪೌರತ್ವ ತಿದ್ದುಪಡಿ ಕಾಯಿದೆಯನ್ನು ಈ ವರ್ಷ ಜಾರಿ ಮಾಡಿದೆ. ಬಾಂಗ್ಲಾದೇಶ, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನದಲ್ಲಿ ಕಿರುಕುಳಕ್ಕೊಳಗಾದ ಮುಸ್ಲಿಮೇತರ ವಲಸಿಗರು 2014ರ ಡಿಸೆಂಬರ್ 31ಕ್ಕೂ ಮೊದಲು ಭಾರತಕ್ಕೆ ಬಂದಿದ್ದಲ್ಲಿ ಅವರಿಗೆ ಭಾರತದ ನಾಗರಿಕತ್ವ ನೀಡಲು ಕೇಂದ್ರ ಸರ್ಕಾರ ಸಿಎಎ ಕಾಯ್ದೆ ಜಾರಿಗೆ ತಂದಿದೆ. 2019ರಲ್ಲಿ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಇದರಲ್ಲಿ ಹಿಂದೂಗಳು, ಸಿಖ್ಖರು, ಜೈನರು, ಬೌದ್ಧರು, ಪಾರ್ಸಿಗಳು ಮತ್ತು ಕ್ರಿಶ್ಚಿಯನ್ನರು ಕಾಯ್ದೆಯಡಿ ಬರುತ್ತಾರೆ. 2019ರಲ್ಲಿ ಜಾರಿಯಾದರೂ ಇದರ ನಿಯಮಗಳನ್ನು ರೂಪಿಸಲು ಸರ್ಕಾರ 4 ವರ್ಷ ಸಮಯಾವಕಾಶ ತೆಗೆದುಕೊಂಡಿತು. 2024ರ ಮಾರ್ಚ್ 11ರಂದು ಅಧಿಕೃತ ನಿಯಮಾವಳಿಗಳನ್ನು ರೂಪಿಸಿ ಆದೇಶ ಹೊರಡಿಸಿತು. ನಿಗದಿಪಡಿಸಿದ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಇವುಗಳನ್ನು ಜಿಲ್ಲಾ ಮಟ್ಟದ ಸಮಿತಿ (ಡಿಎಲ್‌ಸಿ), ರಾಜ್ಯ ಮಟ್ಟದ ಸಶಕ್ತ ಸಮಿತಿಯಿಂದ (ಇಸಿ) ಪರಿಶೀಲನೆ ಮಾಡಿದ ಬಳಿಕ ಪೌರತ್ವ ನೀಡಬೇಕೆ ಬೇಡವೇ ಎಂಬುದನ್ನು ನಿರ್ಧರಿಸಲಾಗುತ್ತದೆ. ಇದೊಂದು ಐತಿಹಾಸಿಕ ಘಟ್ಟ. ಇತಿಹಾಸದ ಸಂಕಷ್ಟಗಳಲ್ಲಿ ನೊಂದವರು ಒಂದು ನೆಲೆಯನ್ನು ಪಡೆಯಲು ಇಂದು ಸಾಧ್ಯವಾಗಿದೆ. ಯಥಾಪ್ರಕಾರ, ಕೇಂದ್ರ ಸರ್ಕಾರದ ಎದುರಾಳಿಗಳು ಈ ಕ್ರಮವನ್ನು ಹಳಿಯುತ್ತಿದ್ದಾರೆ. ಇದು ಸಂಸತ್‌ನಲ್ಲಿ ಅಂಗೀಕಾರಗೊಂಡಾಗ ದೆಹಲಿಯಯಲ್ಲಿ ಮತ್ತು ಅಸ್ಸಾಂನಲ್ಲಿ ಭಾರಿ ಪ್ರತಿಭಟನೆಗಳು ನಡೆದಿದ್ದವು. ಇದೀಗ ಸರ್ಕಾರ ಎಲ್ಲಾ ಸಿದ್ಧತೆಗಳ ಬಳಿಕ ಜಾರಿಗೆ ತಂದಿದೆ. ಪಶ್ಚಿಮ ಬಂಗಾಳ, ಕೇರಳದಂಥ ಕೆಲವು ರಾಜ್ಯಗಳು ಇದನ್ನು ಜಾರಿಗೆ ತರುವುದಿಲ್ಲ ಎಂದು ಹೇಳಿದ್ದೂ ಉಂಟು. ಆದರೆ ಕಾಲಕ್ರಮೇಣ ಇದರ ಕುರಿತು ಇದ್ದ ಪ್ರತಿಭಟನೆಯ ಅಂಶ ಕಡಿಮೆಯಾಗಿದೆ. ಆದರೆ ಇದರ ಬಗೆಗೆ ಕೆಲವು ವಲಯದಲ್ಲಿ ಇನ್ನೂ ತಪ್ಪು ಕಲ್ಪನೆ ಉಳಿದಂತಿದೆ. ಇದು ನಿವಾರಣೆ ಆಗುವುದು ಮತ್ತು ಎಲ್ಲರೂ ಇದರ ಜಾರಿಗೆ ಸಹಕರಿಸುವುದು ಮುಖ್ಯ. ಅಲ್ಪಸಂಖ್ಯಾತರನ್ನು ಗುರಿಯಾಗಿಸಲು ಸಿಎಎ ಮತ್ತು ಅಷ್ಟೇ ವಿವಾದಾತ್ಮಕ ಎನ್‌ಆರ್‌ಸಿ ಅಥವಾ ರಾಷ್ಟ್ರೀಯ ನಾಗರಿಕರ ನೋಂದಣಿಯನ್ನು ತರಲಾಗಿದೆ ಎಂಬ ಭಯವನ್ನು ಗೃಹ ಸಚಿವರು ಆಗಾಗ ಹೇಳಿಕೆಗಳ ಮೂಲಕ ನಿವಾರಿಸುತ್ತ ಬಂದಿದ್ದಾರೆ. ಸಿಎಎ ಬಗ್ಗೆ ಅಪಪ್ರಚಾರಗಳ ಮೂಲಕ ಈಗಲೂ ಮುಸ್ಲಿಮರನ್ನು ದಾರಿ ತಪ್ಪಿಸಲು ಯತ್ನಿಸಲಾಗುತ್ತಿದೆ. ಇದು ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶದಲ್ಲಿ ಕಿರುಕುಳವನ್ನು ಎದುರಿಸಿ ಭಾರತಕ್ಕೆ ಬಂದವರಿಗೆ ಮಾತ್ರ ಪೌರತ್ವ ನೀಡುವ ಉದ್ದೇಶವನ್ನು ಹೊಂದಿದೆ. ಇದು ಯಾರ ಪೌರತ್ವವನ್ನೂ ಕಸಿದುಕೊಳ್ಳಲು ಇರುವುದಲ್ಲ. ಈ ಕಾಯ್ದೆಯಲ್ಲಿ ಮುಸ್ಲಿಮರನ್ನು ಕೈಬಿಟ್ಟ ಕಾರಣ ವಿರೋಧ ಪಕ್ಷಗಳಿಂದ ಮತ್ತು ಮುಸ್ಲಿಂ ಸಮುದಾಯದಿಂದ ಭಾರಿ ವಿರೋಧ ವ್ಯಕ್ತವಾಗಿತ್ತು. ಆದರೆ ಇದರಲ್ಲಿ ಹುರುಳಿಲ್ಲ. ಮುಸ್ಲಿಮರಿಗೂ ಈ ಕಾಯಿದೆಗೂ ಯಾವುದೇ ಸಂಬಂಧವಿಲ್ಲ. ಹಿಂದೂ, ಸಿಖ್, ಬೌದ್ಧರಿಗೆ ಭಾರತ ಹೊರತುಪಡಿಸಿ ಪೌರತ್ವ ಪಡೆಯಲು ಬೇರೆ ದೇಶಗಳೇ ಇಲ್ಲ. ಇತಿಹಾಸವನ್ನು ನೋಡಿದರೆ, ಭಾರತ, ಅಫ್ಘಾನಿಸ್ಥಾನ, ಪಾಕಿಸ್ಥಾನ ಮತ್ತು ಬಾಂಗ್ಲಾದೇಶದ ಗಡಿಯುದ್ದಕ್ಕೂ ವಲಸೆ ನಡೆದಿರುವುದು ತಿಳಿಯುತ್ತದೆ. ಧರ್ಮದ ಕಾರಣಕ್ಕಾಗಿ ದೌರ್ಜನ್ಯಕ್ಕೆ ಒಳಗಾಗಿ ಭಾರತಕ್ಕೆ ಆಶ್ರಯ ಕೋರಿ ಬಂದಿರುವ ಸಮುದಾಯಗಳಲ್ಲಿ ಅನೇಕರ ಟ್ರಾವೆಲ್ ಡಾಕ್ಯುಮೆಂಟ್‌ಗಳ ಅವಧಿ ಮುಗಿದಿದೆ ಅಥವಾ ಅಪೂರ್ಣ ದಾಖಲೆಗಳಿವೆ ಅಥವಾ ಅವರ ಬಳಿ ದಾಖಲೆಗಳೇ ಇಲ್ಲ. ಮೋದಿ ಸರ್ಕಾರವು ತನ್ನ ಮೊದಲನೇ ಅವಧಿಯಲ್ಲಿ ಈ ರೀತಿಯ ವಲಸಿಗರಿಗೆ ಪಾಸ್‌ಪೋರ್ಟ್ ಅಧಿನಿಯಮ (ಭಾರತ ಪ್ರವೇಶಕ್ಕೆ) 1920ರ, ವಿದೇಶಿ ಅಧಿನಿಯಮ 1946ರ ಪ್ರತಿಕೂಲ ದಂಡನಾರ್ಹ ಅಂಶಗಳಿಂದಲೂ ವಿನಾಯಿತಿ ನೀಡಿದೆ. ಇದಷ್ಟೇ ಅಲ್ಲದೇ 2016ರಲ್ಲಿ ಮೋದಿ ಸರ್ಕಾರ ಈ ನಿರಾಶ್ರಿತರಿಗೆ ದೀರ್ಘಕಾಲಿಕ ವೀಸಾ ಪಡೆಯಲೂ ಅರ್ಹರನ್ನಾಗಿಸಿದೆ. ಪೌರತ್ವ ತಿದ್ದುಪಡಿ ಕಾಯ್ದೆಯು ಒಟ್ಟಲ್ಲಿ, ಧಾರ್ಮಿಕ ಹಿಂಸೆಗೆ ತುತ್ತಾಗಿರುವವರಿಗೆ ನಾಗರಿಕತೆ ದೊರಕುವಂತೆ ಮಾಡಲು ಸಶಕ್ತಗೊಳಿಸುತ್ತದೆ. ಸಂವಿಧಾನದ ಅನುಚ್ಛೇದ 25, ಪ್ರತಿಯೊಬ್ಬ ವ್ಯಕ್ತಿಗೂ ತನಗೆ ಇಷ್ಟವಾದ ಧರ್ಮವನ್ನು ಮುಕ್ತವಾಗಿ ಅನುಸರಿಸಲು, ಆಚರಿಸಲು ಸಮಾನ ಹಕ್ಕನ್ನು ನೀಡುತ್ತದೆ. ಪೌರತ್ವ ತಿದ್ದುಪಡಿ ಕಾಯ್ದೆಯು ಯಾವುದೇ ರೀತಿಯಲ್ಲೂ ಈ ಅಂಶಗಳನ್ನು ಉಲ್ಲಂಘಿಸಿಲ್ಲ. ಸಿಎಎಯಿಂದಾಗಿ ಭಾರತೀಯ ಅಲ್ಪಸಂಖ್ಯಾತರ ಹಕ್ಕುಗಳ, ಭಾರತೀಯ ಜಾತ್ಯತೀತ ಮೌಲ್ಯಗಳ ಮತ್ತು ಸಂಪ್ರದಾಯಗಳ ಹನನವಾಗುವುದಿಲ್ಲ ಎಂದು ಪ್ರಧಾನಿ ಸ್ಪಷ್ಟಪಡಿಸಿದ್ದಾರೆ. ಸಿಎಎ ಎನ್ನುವುದು ಅನ್ಯಾಯವನ್ನು ಎದುರಿಸುತ್ತಿರುವ ಸಾವಿರಾರು ನಿರ್ವಸಿತ ಕುಟುಂಬಗಳನ್ನು ಸಬಲೀಕರಣಗೊಳಿಸುವ ಐತಿಹಾಸಿಕ ಹೆಜ್ಜೆಯಾಗಿದೆ. ಇದು ಸಮರ್ಪಕವಾಗಿ ಅನುಷ್ಠಾನಕ್ಕೂ ಬರುತ್ತಿದೆ ಎಂದು ಸಂತೋಷಪಡೋಣ.




• ಹಿಂದಿನ ಸಂಚಿಕೆಯಿಂದ

ಅವನು ''ದುರ್ಯೋಧನ, ನಡೆದುದೆಲ್ಲ ನಿನಗೆ ತಿಳಿದೇ ಇದೆ ಯುದಿಷ್ಠಿರನು ಸೆರೆಸಿಕ್ಕುವಷ್ಟರಲ್ಲಿ ಓಡಿಹೋದ. ಏನು ಮಾಡುವುದೆಂದು ನಾನು ಯೋಚಿಸುವಷ್ಟರಲ್ಲಿ ಅರ್ಜುನನು ಹಿಂದಿರುಗಿದ. ಆ ನಂತರ ಏನೂ ಮಾಡಲಾಗಲಿಲ್ಲ. ನಾಳೆ ನಾನು ಅವರ ಕಡೆ ಒಬ್ಬ ಮಹಾವೀರನನ್ನು ಖಂಡಿತ ಕೊಲ್ಲುವೆ. ಪದ್ಮವ್ಯೂಹದಲ್ಲಿ ಸೇನೆಯನ್ನಿರಿಸುವೆ. ಅದನ್ನು ಭೇದಿಸುವುದು ದೇವತೆಗಳಿಗೂ ಆಗದು; ಆದರೆ ಅರ್ಜುನ ಭೇದಿಸಬಲ್ಲ. ಅವನನ್ನು ದಿನವೆಲ್ಲ ದೂರವಿಡಬೇಕು. ನಾನು ನಾಳೆ ಸಾಧಿಸುವುದನ್ನು ನೋಡಿ ನೀನು ಮೆಚ್ಚಿಕೊಳ್ಳುವೆ. ಇದು ಖಂಡಿತ ಎನ್ನಲು ದುರ್ಯೋಧನನಿಗೆ ಸಮಾಧಾನವಾಯಿತು. ತ್ರಿಗರ್ತರು ಅರ್ಜುನನನ್ನು ಮತ್ತೊಮ್ಮೆ ಎದುರಿಸಲು ಸಿದ್ಧರಾದರು. ಕೌರವರ ಪಾಳೆಯದಲ್ಲಿ ಉತ್ಸಾಹ ಮೂಡಿತು. ನಾಳೆ ಏನೋ ಭಯಾನಕವಾದುದು ಸಂಭವಿಸಲಿದೆ ಎಂದು ಎಲ್ಲರೂ ಬೆಳಗಾಗುವುದನ್ನೇ ಕಾಯತೊಡಗಿದರು.

★ ★ ★ ★

ಯುದ್ಧದ ಹದಿಮೂರನೆಯ ದಿನ ಬೆಳಗಾಯಿತು. ದ್ರೋಣನ ನಾಯಕತ್ವದ ಮೂರನೆಯದಿನ. ಸೂರ್ಯೋದಯವಾಗುತ್ತಿದ್ದಂತೆಯೇ ಅರ್ಜುನನು ತ್ರಿಗರ್ತರೊಂದಿಗೆ ಸೆಣೆಸುತ್ತ ರಣರಂಗದ ದಕ್ಷಿಣಕ್ಕೆ ಹೋಗಬೇಕಾಯಿತು. ಅವನು ಹೊರಟು ಹೋದಮೇಲೆ ದ್ರೋಣನು ತನ್ನ ಸೈನ್ಯವನ್ನು ಪದ್ಮವ್ಯೂಹದಲ್ಲಿ ನಿಲ್ಲಿಸಿದ. ಪದ್ಮದ ಒಂದೊಂದು ದಳದಲ್ಲಿಯೂ ಒಬ್ಬೊಬ್ಬ ಕೌರವವೀರರು. ಪದ್ಮದ ಕೇಂದ್ರದಲ್ಲಿ ದುರ್ಯೋಧನ. ಮೊದಲ ಸುತ್ತಿನ ದಳಗಳಲ್ಲಿ ಕೃಪ, ರಾಧೇಯ, ದುಶ್ಯಾಸನ ಮತ್ತಿರರರು; ಎರಡನೆಯ ಸುತ್ತಿನಲ್ಲಿ ಜಯದ್ರಥ ಮತ್ತು ಅವನ ಸೈನ್ಯ; ಅವನ ನಂತರ ಅಶ್ವತ್ಥಾಮ, ಧಾರ್ತರಾಷ್ಟ್ರರು. ಆ ನಂತರ ಶಕುನಿ, ಕೃತವರ್ಮ, ಶಲ್ಯ, ಭೂರಿಶ್ರವಸ್ ಮತ್ತು ಅವನ ಸೋದರ ಶಲ. ಎಲ್ಲರಿಗೂ ಧರಿಸಲು ಕೆಂಪುರೇಷ್ಮೆ, ಕೆಂಪು ಹೂಹಾರ. ಬೆಳಗಿನ ಹೊಂಬಿಸಿಲಿನಲ್ಲಿ ದೊಡ್ಡದೊಂದು ಕಮಲ ಅರಳಿರುವಂತೆಯೇ ಕಾಣುತ್ತಿತ್ತು ಕೌರವಸೇನೆ. ದ್ರೋಣನು ಪದ್ಮದ ಹೊರಗೆ ಪ್ರತಿಷ್ಠಾಪಿತನಾಗಿದ್ದನು. ಯುದ್ಧವು ಆರಂಭವಾಯಿತು. ಭೀಮನ ಮುಂದಾಳ್ತನದಲ್ಲಿ ಸಾತ್ಯಕಿ ಧೃಷ್ಟದ್ಯುಮ್ನ ದ್ರುಪದ ಕುಂತಿಭೋಜ ಕ್ಷತ್ರಧರ್ಮ ಬೃಹತ್ ಕ್ಷಾತ್ರ ಧೃಷ್ಟಕೇತು ಘಟೋತ್ಕಚ ಯುಧಾಮನ್ಯು ಉತ್ತಮೌಜಸ್ ಶಿಖಂಡಿ ವಿರಾಟ ಯುಧಿಷ್ಠಿರ ನಕುಲಸಹದೇವರು ಕೇಕಯ ಸೋದರರು ಮುಂತಾದ ವೀರರೆಲ್ಲರೂ ಒಟ್ಟಿಗೆ ಪದ್ಮವ್ಯೂಹವನ್ನು ಮುತ್ತಿದರು. ದ್ರೋಣನು ವ್ಯೂಹದ ಸುತ್ತಲೂ ರಥವನ್ನೋಡಿಸುತ್ತಿದ್ದು, ಪಾಂಡವಸೇನೆಯನ್ನು ಧ್ವಂಸಮಾಡುತ್ತಿದ್ದ. ಸೈನ್ಯ ನಾಶವಾಯಿತೇ ಹೊರತು ವ್ಯೂಹವನ್ನು ಒಡೆದು ಒಳಪ್ರವೇಶಿಸಲು ಯಾರಿಗೂ ಸಾಧ್ಯವಾಗಲಿಲ್ಲ. ಯುಧಿಷ್ಠಿರನಿಗೆ ಚಿಂತೆಯಾಯಿತು. ಸಂಜೆಯಾಗುವುದರೊಳಗೆ ಸೇನೆಯೆಲ್ಲ ನಷ್ಟವಾದರೆ ಅರ್ಜುನ ಯಾವಾಗ ಹಿಂದಿರುಗುವನೋ ತಿಳಿಯದು. ಕೋಪಗೊಂಡಿರುವ ಸುಶರ್ಮನದು ಇಂದು ನಿರ್ಣಾಯಕ ಯುದ್ಧ ಬೇರೆ.

**ಮುಂದುವರಿಯುವುದು...**

# ಕೃತ್ತಿಕಾ ಮಳೆ ಅಬ್ಬರ ಕೆಆರ್‌ಎಸ್ ಜಲಾಶಯಕ್ಕೆ ಒಳಹರಿವು ಭಾರಿ ಹೆಚ್ಚಳ



**ನಿರಂತರ ಮಳೆಯ ಕಾರಣ ಕಾವೇರಿ ನದಿಯಲ್ಲಿ ಹರಿವಿನ ಪ್ರಮಾಣ ಕೂಡ ಹೆಚ್ಚಳವಾಗಿದೆ. ಶಾಖದ ಅಲೆ, ಬಿಸಲಿನಿಂದ ಹಲವು ಕಡೆಗಳಲ್ಲಿ ಕಾವೇರಿ ನದಿ ಬತ್ತಿ ಹೋಗಿತ್ತು, ಈಗ ನಿಧಾನವಾಗಿ ಕಾವೇರಿ ಮೈದುಂಬಿಕೊಳ್ಳುತ್ತಿದ್ದು, ರೈತರು ಕೂಡ ಖುಷಿಯಾಗೊದ್ದಾರೆ.**

• ಉದಯವಾಹಿನಿ, ಬೆಂಗಳೂರು

ಮುಂಗಾರು ಆಗಮನಕ್ಕೆ ಮುನ್ನವೇ ರಾಜ್ಯದಲ್ಲಿ ವ್ಯಾಪಕ ಮಳೆಯಾಗುತ್ತಿರುವುದು ಜನರಲ್ಲಿ ಸಂತಸ ತಂದಿದೆ. ಕಳೆದ ವರ್ಷ ಮಳೆ ಕೈಕೊಟ್ಟ ಕಾರಣ ಮತ್ತು ಭಾರಿ ಬಿಸಿಲಿನಿಂದ ಒಣಗಿದ್ದ ಹಳ್ಳ, ಕೊಳ್ಳ, ನದಿಗಳು ಮತ್ತೆ ಜೀವ ಪಡೆದುಕೊಳ್ಳುತ್ತಿವೆ. ಕಳೆದ ವರ್ಷ ಬರಿದಾಗಿದ್ದ ಕೃಷ್ಣರಾಜ ಸಾಗರ (ಕೆಆರ್‌ಎಸ್) ಈ ವರ್ಷ ತುಂಬುವ ಮುನ್ಸೂಚನೆ ಸಿಕ್ಕಿದೆ. ಮುಂಗಾರು ಆಗಮನಕ್ಕೆ ಮುನ್ನವೇ ಜಲಾಶಯಕ್ಕೆ ಒಳಹರಿವು ಆರಂಭವಾಗಿದ್ದು, ದಿನಕಳೆದಂತೆ ಅದರ ಪ್ರಮಾಣ ಹೆಚ್ಚಾಗುತ್ತಿದೆ.

ಈ ವರ್ಷದಲ್ಲಿ ಇದೇ ಮೊದಲ ಬಾರಿ 1771 ಕ್ಯೂಸೆಕ್ ಒಳಹರಿವು ದಾಖಲಾಗಿದ್ದು, ಮುಂದಿನ ದಿನಗಳಲ್ಲಿ ಈ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಮುನ್ಸೂಚನೆ ಸಿಕ್ಕಿದೆ. ಬುಧವಾರ 903 ಕ್ಯೂಸೆಕ್ ಇದ್ದ ಒಳಹರಿವು ಒಂದೇ ದಿನದಲ್ಲಿ ಬಹುತೇಕ ಎರಡು ಪಟ್ಟು ಹೆಚ್ಚಾಗಿದೆ.

ಮೇ 16, ಬೆಳಗ್ಗೆ 8 ಗಂಟೆಯವರೆಗೆ ಒಳಹರಿವು 1771 ಕ್ಯೂಸೆಕ್ ಇದ್ದರೆ ಒಟ್ಟು ಹೊರ ಹರಿವು 153 ಕ್ಯೂಸೆಕ್ ನೀರು ಬಿಡಲಾಗಿದೆ. 124.80 ಅಡಿ, 49.452 ಟಿಎಂಸಿ ಒಟ್ಟು ಸಂಗ್ರಹದ ಸಾಮರ್ಥ್ಯ ಹೊಂದಿದ್ದು, ಸದ್ಯ 80 ಅಡಿ 10.785 ಕ್ಯೂಸೆಕ್ ನೀರು ಸಂಗ್ರಹವಾಗಿದೆ.

ಇನ್ನು ರಾಜ್ಯದಲ್ಲಿ ಭಾರಿ ಮಳೆಯ ಮುನ್ಸೂಚನೆ ಇದ್ದು, ಕೆಆರ್ ಎಸ್ ಮಾತ್ರವಲ್ಲದೆ ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಒಳಹರಿವು ಹೆಚ್ಚಾಗುವ ವಿಶ್ವಾಸವಿದೆ. ಕೆಆರ್‌ಎಸ್ ಮಾತ್ರವಲ್ಲ ಹಾರಂಗಿ ಜಲಾಶಯಕ್ಕೂ ಕೂಡ ಒಳಹರಿವು ಪ್ರಮಾಣ ಹೆಚ್ಚಾಗಿದೆ.

ಮೇ 18 ರಿಂದ ಮೇ 20 ರವರೆಗೆ ದಕ್ಷಿಣ ಒಳನಾಡು ಪ್ರದೇಶದಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಇದ್ದು, ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ.


ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲೆಗಳಲ್ಲಿ ನಿರಂತರ ಮಳೆಯಾಗುತ್ತಿದ್ದು, ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಪ್ರಮಾಣ ಮತ್ತಷ್ಟು ಹೆಚ್ಚಾಗುವ ಸೂಚನೆ ಇದೆ.

## ಸಾರಿಗೆ ಬಸ್ಸುಗಳಲ್ಲಿ ಉಚಿತ ಸಂಚಾರಕ್ಕೆ ಶಕ್ತಿ ಸ್ಮಾರ್ಟ್‌ಕಾರ್ಡ್ ಬೇಕೇ?

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದಿಂದ ಮಹಿಳೆಯರಿಗೆ ಸಾರಿಗೆ ಬಸ್ಸುಗಳಲ್ಲಿ ಶಕ್ತಿ ಯೋಜನೆಯ ಅಡಿಯಲ್ಲಿ ಉಚಿತವಾಗಿ ಸಂಚಾರಕ್ಕೆ ಅವಕಾಶ ನೀಡಲಾಗಿದೆ. ಮಹಿಳೆಯರು ಉಚಿತವಾಗಿ ಸಾರಿಗೆ ಬಸ್ಸುಗಳಲ್ಲಿ ಸಂಚರಿಸೋದಕ್ಕಾಗಿ ದಾಖಲೆಯಾಗಿ ಆಧಾರ್ ಕಾರ್ಡ್, ವೋಟರ್ ಐಡಿ ಕಾರ್ಡ್ ಸೇರಿದಂತೆ ವಿವಿಧ ದಾಖಲೆಗಳನ್ನು ತೋರಿಸಬೇಕು.

ಆದ್ರೇ ಇನ್ಮುಂದೆ ಸಾರಿಗೆ ಬಸ್ಸುಗಳಲ್ಲಿ ಉಚಿತವಾಗಿ ಮಹಿಳೆಯರು ಸಂಚರಿಸೋದಕ್ಕೆ ಶಕ್ತಿ ಸ್ಮಾರ್ಟ್ ಕಾರ್ಡ್ ಪಡೆಯಬೇಕು ಎಂಬುದಾಗಿ ಸುದ್ದಿಯೊಂದು ವೈರಲ್ ಆಗಿತ್ತು. ಸಿದ್ಧರಾಮಯ್ಯ ಮುಖ್ಯಮಂತ್ರಿಯಾದ ಬಳಿಕ ಕಾಂಗ್ರೇಸ್ ಸರ್ಕಾರದಿಂದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಅದರಲ್ಲಿ ಸಾರಿಗೆ ಬಸ್ಸುಗಳಲ್ಲಿ ಮಹಿಳೆಯರು ಉಚಿತವಾಗಿ ಸಂಚರಿಸೋದಕ್ಕೆ ಅವಕಾಶ ಮಾಡಿಕೊಡುವಂತ ಶಕ್ತಿ ಯೋಜನೆಯೂ ಒಂದಾಗಿದೆ.


ಉದಯವಾಹಿನಿ ಚಿತ್ರ

ಆರಂಭದಲ್ಲಿ ಇದಕ್ಕಾಗಿ ಮಹಿಳೆಯರು ಶಕ್ತಿ ಸ್ಮಾರ್ಟ್ ಕಾರ್ಡ್ ಪರಿಚಯಿಸಲಾಗುತ್ತದೆ ಎಂದು ಹೇಳಲಾಗಿತ್ತು. ಆದ್ರೇ ಈವರೆಗೆ ಅದನ್ನು ಜಾರಿಗೊಳಿಸಿಲ್ಲ. ಇದರ ನಡುವೆ ಮಹಿಳೆಯರು ಸಾರಿಗೆ ಬಸ್ಸುಗಳಲ್ಲಿ ಉಚಿತವಾಗಿ ಸಂಚರಿಸೋದಕ್ಕೆ ಆಧಾರ್ ಕಾರ್ಡ್, ವೋಟರ್ ಐಡಿ ಕಾರ್ಡ್ ಸೇರಿದಂತೆ ವಿವಿಧ ದಾಖಲೆಗಳನ್ನು ಕರ್ನಾಟಕದವರು ಅಂತ ಗುರುತಿಸಿ, ಉಚಿತ ಪ್ರಯಾಣಕ್ಕೆ ಅನುಕೂಲ ಕಲ್ಪಿಸಲು ಅವಕಾಶ ಮಾಡಿಕೊಟ್ಟಿತ್ತು. ಆದ್ರೇ ಇನ್ಮುಂದೆ ಇವು ನಡೆಯೋದಿಲ್ಲ. ರಾಜ್ಯ ಸರ್ಕಾರದಿಂದ ಶಕ್ತಿ ಸ್ಮಾರ್ಟ್ ಕಾರ್ಡ್ ಕಡ್ಡಾಯಗೊಳಿಸಲಾಗಿದೆ. ಇದಕ್ಕಾಗಿ ಆದೇಶ ಕೂಡ ಮಾಡಿದೆ. ಮಹಿಳೆಯರು ಶಕ್ತಿ ಸ್ಮಾರ್ಟ್ ಕಾರ್ಡ್ ಹೊಂದಿದ್ದರೆ ಮಾತ್ರ ಅವಕಾಶ ಎಂಬುದಾಗಿ ಸುದ್ದಿ ಹರಿದಾಡುತ್ತಿತ್ತು.

**ಇಲ್ಲಿದೆ ವೈರಲ್ ಸುದ್ದಿಯ ಅಸಲಿ ಸತ್ಯ**

**ಈ ಬಗ್ಗೆ ರಾಜ್ಯ ಸರ್ಕಾರದ ಸಾರಿಗೆ ಇಲಾಖೆಯನ್ನು ನಿಮ್ಮ ಕನ್ನಡ ನ್ಯೂಸ್ ನೌ ಸಂಪರ್ಕಿಸಿ ವಿಚಾರಿಸಿತು. ಆದ್ರೇ ಈ ರೀತಿಯ ಯಾವುದೇ ಆದೇಶ ಮಾಡಲಾಗಿಲ್ಲ. ವೈರಲ್ ಆಗಿರುವಂತ ಸುದ್ದಿ ಸತ್ಯಕ್ಕೆ ದೂರವಾಗಿದೆ. ಮಹಿಳೆಯರಿಗೆ ಎಂದಿನಂತೆ ಸಾರಿಗೆ ಬಸ್ಸುಗಳಲ್ಲಿ ಆಧಾರ್ ಕಾರ್ಡ್, ವೋಟರ್ ಐಟಿ ಸೇರಿದಂತೆ ವಿವಿಧ ದಾಖಲೆಗಳನ್ನು ತೋರಿಸಿ, ಸಂಚರಿಸಬಹುದು ಎಂಬುದಾಗಿ ಸ್ಪಷ್ಟ ಪಡಿಸಿದೆ.**

## ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಮಾವಿನ ಹಣ್ಣಿನ ಅಭಿಷೇಕ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್ ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಶ್ರೀ ಗುರು ರಾಘವೇಂದ್ರ ಸ್ವಾಮಿಗಳಿಗೆ ಭಕ್ತರು ಸಮರ್ಪಿಸಿದ ಮಾವಿನ ಹಣ್ಣಿನಿಂದ ಅಭಿಷೇಕವನ್ನು ಮಾಡಲಾಯಿತು ಎಂದು ಶ್ರೀ ನಂದಕಿಶೋರ ಆಚಾರ್ಯರು ತಿಳಿಸಿದರು, ಈ ಅಭಿಷೇಕದ ಪ್ರಸಾದವನ್ನು ಭಕ್ತ ಜನರಿಗೂ ವಿತರಿಸಲಾಯಿತು ಭಕ್ತರು ಪ್ರಸಾದವನ್ನು ಸ್ವೀಕರಿಸಿ ಶ್ರೀ ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು.


ಉದಯವಾಹಿನಿ ಚಿತ್ರ

## ವೀರಾ ವೇಷದಿ ಹೋರಾಡಬೇಕಿದೆ



ಸಾಮಾಜಿಕ ಕಳಕಳಿ
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಶ್ರಮದ ಫಲವಿದು ಸ್ವತಂತ್ರ
ಎತ್ತಲೂ ನೋಡು ದಬ್ಬಾಳಿಕೆ ಇತ್ತು
ಹೊರಬಂದೆವು ಇಂದು ಸಂತೋಷವಾಯಿತು
ಹಲವಾರು ಪ್ರತಿಭಟನೆಗಳ ಕಂಡಿತ್ತು...
ಎಲ್ಲರ ಮೊಗದಲ್ಲೂ ನಗುವ ಚೆಲ್ಲಿದೆವು
ಅಗಲಿದವರ ಸ್ಮರಿಸುತ್ತಿರಿ ಎಂದೆವು
ನಗುನಗುತ್ತಾ ಭಾವ ಚಿತ್ರದಲ್ಲಿ ಇರುವೆವು
ಸಂತಸದ ಬದುಕು ನಮ್ಮದಾಗಲಿ ಎಂದೆವು....
ಎಲ್ಲೆಲ್ಲೂ ಸಂತೋಷ ಮೂಡಲಿ
ಜಗವೆಂಬ ಜಗತ್ತಿನಲ್ಲಿ ಬಾಳಲಿ
ದೀಪವನ್ನು ಹಚ್ಚಿ ಬೆಳಕನ್ನು ಮೂಡಿಸಲಿ
ಸಂತಸದ ಕ್ಷಣಗಳನ್ನು ತೋರಲಿ.....
ನಿಯಮಗಳ ವಿರುದ್ಧ ಹೋಗದಿರಲಿ
ಒಳ್ಳೆಯ ಅಭ್ಯಾಸಗಳನ್ನು ಮೈಗೂಡಿಸಿಕೊಳ್ಳಲಿ
ಉತ್ತಮ ಕಾರ್ಯದಿಂದ ಗುರಿತಿಸಿಕೊಳ್ಳಲಿ
ಸಮಾನತೆಯು ಬೇಕಿದೆ ಜೀವನದಲಿ.....
ಸಹ ಬಾಳ್ವೆಯ ಬಾಳು ಬಾಳಬೇಕಿದೆ
ವೀರಾವೇಷದಿ ಹೋರಾಡಬೇಕಿದೆ



ಒಳ್ಳೆಯ ಪ್ರಭುತ್ವ ಹೊಂದಬೇಕಿದೆ
ಜಗದಲ್ಲಿ ಕೆಟ್ಟವರಿಲ್ಲ ಎನ್ನುವಂತಾಗಬೇಕಿದೆ.....
ಪರಿಸ್ಥಿತಿಗೆ ಅವರು ಹಾಗೆ ಆದರೆ
ಕೆಟ್ಟವರು ಅವರೆಂದು ದೂರಬೇಕೆಂದಿಲ್ಲ
ಅವರಿಗೂ ಬದುಕುವ ಬಾಳುವ ಹಕ್ಕಿದೆ ನಾವು
ಅವರಿಗೆ ಸಹಕಾರ ನೀಡಬೇಕಿದೆ....
ಒಂದಾಗಬೇಕು ಜನರೊಂದಿಗೆ ನಾವು
ಮೃಗವಂತೆ ವರ್ತಿಸದೆ ಬಾಳಬೇಕಿದೆ
ಪಕ್ಷಾತೀತ, ಜಾತ್ಯಾತೀತವಾಗಿ ಇರಬೇಕಿದೆ
ಕಷ್ಟ ಸುಖಕ್ಕೆ ಪಾಲುದಾರರಾಗಬೇಕಿದೆ...
ಮನುಜನಂದ ಮೇಲೆ ಅರ್ಥೈಸಿಕೊಳ್ಳಬೇಕು
ಬಾಳಲ್ಲಿ ಹೊಂದಾಣಿಕೆ ಮಾಡಿಕೊಂಡಿರಬೇಕು
ಎಂದೆಂದು ಸಾರ್ಥಕದ ಬದುಕು ನಮ್ಮದಾಗಬೇಕು
ಅಂದೇ ಜೀವನವು ಸುಖ, ಶಾಂತಿ ಕಾಣಬೇಕಿದೆ....

## ಕೊಡಗಿನಲ್ಲಿ ಕೃಪೆ ತೋರಿದ ವರುಣ.. ಬತ್ತಿದ ಕಾವೇರಿಗೆ ಜೀವಕಳೆ

• ಉದಯವಾಹಿನಿ,ಮಡಿಕೇರಿ,

ಕಳೆದೊಂದು ವಾರದಿಂದ ಜಿಲ್ಲೆಯಾದ್ಯಂತ ಮಳೆಯಾಗುತ್ತಿರುವುದರಿಂದ ಬಿಸಿಲ ಝಳಕ್ಕೆ ಒಣಗಿ ಹೋಗಿದ್ದ ಪ್ರಕೃತಿಯಲ್ಲಿ ಪುಳಕ ಶುರುವಾಗಿದ್ದರೆ, ಬತ್ತಿದ ನದಿಗಳಲ್ಲಿ ಅದರಲ್ಲೂ ಕಾವೇರಿ ನದಿಯಲ್ಲಿ ನೀರಿನ ಹರಿವು ನಿಧಾನವಾಗಿ ಆರಂಭವಾಗಿದ್ದು, ಜಿಲ್ಲೆಯ ಜನತೆಯಲ್ಲಿ ಹರ್ಷ ತಂದಿದೆ.

ಕೊಡಗಿನಲ್ಲಿ ಸಾಮಾನ್ಯವಾಗಿ ಇಷ್ಟರಲ್ಲೇ ಮಳೆ ಸುರಿಯ ಬೇಕಾಗಿತ್ತು. ಆದರೆ ವರುಣನ ಅವಕೃಪೆಯಿಂದ ಜನವರಿಯಿಂದ ಮೇ ತನಕವೂ ಮಳೆ ಸುರಿದಿರಲಿಲ್ಲ.


ಉದಯವಾಹಿನಿ ಚಿತ್ರ

> **ಹವಾಮಾನ ಇಲಾಖೆ ಪ್ರಕಾರ ಈ ಬಾರಿ ಆಶಾದಾಯಕ ಮುಂಗಾರು ಎಂದು ಹೇಳಲಾಗಿದೆ. ಕಳೆದ ವರ್ಷ ಮುಂಗಾರು ಕೈಕೊಟ್ಟ ಪರಿಣಾಮ ಈ ಬಾರಿಯ ಬೇಸಿಗೆಯಲ್ಲಿ ಹತ್ತು ಹಲವು ಸಮಸ್ಯೆಗಳನ್ನು ಎದುರಿಸುವಂತಾಯಿತು. ಕೆಆರ್ ಎಸ್ ಮತ್ತು ಕಬಿನಿ, ಹಾರಂಗಿ, ಹೇಮಾವತಿ ಸೇರಿದಂತೆ ಹಳೇ ಮೈಸೂರು ವ್ಯಾಪ್ತಿಯಲ್ಲಿನ ಜಲಾಶಯಗಳು ಭರ್ತಿಯಾಗದೆ ಸಮಸ್ಯೆ ಎದುರಿಸುವಂತಾಯಿತು. ಈ ಬಾರಿಯಾದರೂ ಉತ್ತಮ ಮಳೆಯಾಗಿ ನಾಡು ಸಮೃದ್ಧಿಯಾಗಲಿ ಎಂದು ಜನ ಪ್ರಾರ್ಥಿಸುತ್ತಿದ್ದಾರೆ.**

ಕೆಲವು ಕಡೆ ಮಳೆ ಸುರಿದಿತ್ತಾದರೂ ಅದರಿಂದ ಯಾವುದೇ ಪ್ರಯೋಜನವಾಗಿರಲಿಲ್ಲ. ಫೆಬ್ರವರಿ ಅಥವಾ ಮಾರ್ಚ್‌ನಲ್ಲಿ ಮಳೆ ಸುರಿದಿದ್ದರೆ ತೊಂದರೆಯಾಗುತ್ತಿರಲಿಲ್ಲ. ಈ ಬಾರಿ ಮಳೆ ಸುರಿಯಲೇ ಜತೆಗೆ ಬಿಸಿಲ ಧಗೆಯೂ ವಾಡಿಕೆಗಿಂತಲೂ ಜಾಸ್ತಿಯಾಗಿತ್ತು. ಇದೆಲ್ಲ ಕಾರಣದಿಂದಾಗಿ ಒಂದೆಡೆ ಕಾಫಿ ಗಿಡಗಳು, ಕರಿಮೆಣಸು ಬಳ್ಳಿಗಳು ಸಾಯುವಂತಾಗಿತ್ತು.

ಇನ್ನು ಮಳೆ ಸುರಿಯದ ಕಾರಣದಿಂದ ಸಕಾಲದಲ್ಲಿ ನಡೆಯಬೇಕಾದ ಕಾಫಿ ತೋಟಗಳ ಕೆಲಸಗಳು ನಡೆಯಲಿಲ್ಲ. ಮಳೆ ಸಕಾಲದಲ್ಲಿ ಬಾರದ ಕಾರಣ ಕಾಫಿ ಹೂ ಅರಳದೆ ಮುಂದಿನ ವರ್ಷದ ಫಸಲಿನ ಮೇಲೆ ಪರಿಣಾಮವುಂಟಾಗಿದೆ. ಇದರ ನಡುವೆ 2016ರ ಬಳಿಕ ಇದೇ ಮೊದಲ ಬಾರಿಗೆ ಕಾವೇರಿನದಿ ಬತ್ತಿ ನೀರು ಹರಿಯದ ಪರಿಸ್ಥಿತಿ ನಿರ್ಮಾಣವಾಗಿತ್ತು. ದುಬಾರೆ ಬಳಿ ನೀರು ಬತ್ತಿದ ಪರಿಣಾಮ ದೋಣಿ ವಿಹಾರವನ್ನೇ ನಿಲ್ಲಿಸಲಾಗಿತ್ತು.

ಮಡಿಕೇರಿ ಸೇರಿದಂತೆ ಹಲವು ಪಟ್ಟಣ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆವುಂಟಾಗಿತ್ತು. ತಂಪಾಗಿದ್ದ ಜಿಲ್ಲೆಯಲ್ಲಿ ಉಷ್ಣಾಂಶ ಏರಿಕೆಯಾಗಿ ತಲೆ ಸುಡುವಂತಾಗಿತ್ತು.

ಜನವರಿಯಿಂದ ಮಳೆ ಸುರಿಯದ ಕಾರಣ ಜಿಲ್ಲೆಯ ಬಹುತೇಕ ಜಲಮೂಲಗಳು ಬತ್ತಿ ಹೋಗಿದ್ದು, ಜನ ನೀರಿಗಾಗಿ ಪರದಾಡುವ ಸ್ಥಿತಿ ಎದುರಾಗಿತ್ತು.

> **ಕಾವೇರಿ ನದಿಯಲ್ಲಿ ನೀರಿನ ಪ್ರಮಾಣ**
>
> **ಇನ್ನು ಮಳೆ ಬಂದ ಹಿನ್ನಲೆಯಲ್ಲಿ ಕಾಫಿ ಬೆಳೆಗಾರರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಮಳೆ ತಡವಾಗಿ ಆರಂಭವಾದರೂ ಮುಂದೆ ಇದೇ ರೀತಿ ಮುಂದುವರೆದರೆ ಮತ್ತು ಮುಂಗಾರು ಆರಂಭವಾದರೆ ಕಾವೇರಿ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾಗಲಿದ್ದು, ಇದರಿಂದ ನೀರಿನ ಸಮಸ್ಯೆ ಪರಿಹಾರವಾಗಲಿದೆ. ಕೊಡಗು ಸೇರಿದಂತೆ ಕಾವೇರಿ ಕೊಳ್ಳ ಹಾಗೂ ಮಲೆನಾಡು ಭಾಗಗಳಲ್ಲಿ ಉತ್ತಮವಾಗಿ ಮಳೆಯಾಗಿ ನೀರು ಹರಿದು ಬಂದರೆ ಕೆಆರ್ ಎಸ್ ಜಲಾಯದಲ್ಲಿಯೂ ನೀರಿನ ಪ್ರಮಾಣವೂ ಹೆಚ್ಚಾಗಲಿದ್ದು, ಕಾವೇರಿ ನೀರನ್ನು ನಂಬಿದವರು ನೆಮ್ಮದಿಯುಸಿರು ಬಿಡಲು ಸಾಧ್ಯವಾಗಲಿದೆ.**

ಇನ್ನು ಕೆಲವು ದಿನಗಳು ಮಳೆ ಬಾರದೆ ಹೋಗಿದ್ದರೆ ಕೊಡಗಿನಲ್ಲಿ ಭೀಕರ ಪರಿಸ್ಥಿತಿ ನಿರ್ಮಾಣವಾಗಿ ಬಿಡುತ್ತಿತ್ತೇನೋ? ಆದರೆ ಕಳೆದ ಕೆಲವು ದಿನಗಳಿಂದ ಆಗಾಗ್ಗೆ ಸುರಿಯುತ್ತಿರುವ ಮಳೆ ಜಿಲ್ಲೆಯ ಜನರಿಗೆ ಆಶಾಭಾವನೆ ಮೂಡಿಸಿದೆ. ಕೃಷಿ ಚಟುವಟಿಕೆಗಳನ್ನು ರೈತರು ಕೈಗೆತ್ತಿಗೊಂಡಿದ್ದಾರೆ. ಕಾಫಿ ತೋಟದಲ್ಲಿ ಮರಕಪಾತ್, ಕಾಫಿ ಗಿಡದ ಚಿಗುರು ಹೀಗೆ ಕೆಲಸ ಕಾರ್ಯಗಳು ಆರಂಭವಾಗಿವೆ. ಜಿಲ್ಲೆಗೆ ಹೊಂದಿಕೊಂಡಂತಿರುವ ಆನೆಕಾಡು, ನಾಗರಹೊಳೆ ಸೇರಿದಂತೆ ಅರಣ್ಯ ಪ್ರದೇಶಗಳು ಬಿಸಿಲಿಗೆ ಬಸವಳಿದಿದ್ದವು. ಕುರುಚಲು ಕಾಡುಗಳು ಒಣಗಿದ್ದರೆ, ಕೆರೆಕಟ್ಟೆಗಳು ಬತ್ತಿದ್ದವು. ಕಾಡಿನಲ್ಲಿ ಮೇವು ನೀರು ಸಿಗದ ಕಾರಣದಿಂದಾಗಿ ವನ್ಯಪ್ರಾಣಿಗಳು ನಾಡಿನತ್ತ ಮುಖ ಮಾಡಿದ್ದವು. ಇದೀಗ ಮಳೆ ಬಂದ ಹಿನ್ನಲೆಯಲ್ಲಿ ಅರಣ್ಯದಲ್ಲಿ ಹುಲ್ಲು ಚಿಗುರಿದ್ದು, ಗಿಡಮರಗಳು ಹಸಿರಾಗಿವೆ. ಇದರ ಜತೆಗೆ ಕೆರೆ ಕಟ್ಟೆಗಳಲ್ಲಿ ಅಲ್ಪ ಸ್ವಲ್ಪ ನೀರು ಕಾಣಿಸಿದೆ. ಇದರಿಂದ ವನ್ಯ ಪ್ರಾಣಿಗಳು ಖುಷಿಯಲ್ಲಿ ತೇಲುತ್ತಿವೆ.

## ರಾಷ್ಟ್ರೀಯ ವಿಜ್ಞಾನ ಸಮ್ಮೇಳನ ಉದ್ಘಾಟನೆ

• ಉದಯವಾಹಿನಿ, ಬೆಂಗಳೂರು

ಜ್ಞಾನದಿಂದ ಸಮೃದ್ಧ ವಿಜ್ಞಾನ ಎಂದು ಕೇಂದ್ರ ಆಹಾರ ತಂತ್ರಜ್ಞಾನ ಸಂಶೋಧನಾ ಸಂಸ್ಥೆಯ ನಿರ್ದೇಶಕಿ ಡಾ. ಶ್ರೀದೇವಿ ಅನ್ನಪೂರ್ಣೇಶ್ವರಿ ಸಿಂಗ್ ತಿಳಿಸಿದರು.


ಉದಯವಾಹಿನಿ ಚಿತ್ರ

ನಗರದ ಎಂ.ಎಸ್ ರಾಮಯ್ಯ ಕಲಾ, ವಾಣಿಜ್ಯ ಮತ್ತು ಕಾಮರ್ಸ್ ಕಾಲೇಜಿನಲ್ಲಿ ರಾಷ್ಟ್ರೀಯ ವಿಜ್ಞಾನ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

**ತಂತ್ರಜ್ಞಾನದ ಕಲಿಕೆ**

ವಿಜ್ಞಾನ, ಸಂಶೋಧನಾ ಮತ್ತು ತಂತ್ರಜ್ಞಾನದ ಕಲಿಕ ಸಮಯದಲ್ಲಿ ವಿದ್ಯಾರ್ಥಿಗಳು ಕ್ರಮಬದ್ಧ ಜೀವನ ಶೈಲಿ ಅಳವಡಿಸಿಕೊಂಡು, ಹೊಸ ವಿಷಯಗಳ ಬಗ್ಗೆ ವಿಶೇಷ ಆಸಕ್ತಿ ಹಾಗೂ ಸಂಶೋಧನೆ ಮಾಡಲು ಇಚ್ಛೆ ಹೊಂದಿ ಎಂದು ನಿಮ್ಹಾನ್ಸ್ ಆಸ್ಪತ್ರೆಯ ನರವಿಜ್ಞಾನಿ ಡಾ.ಬಿ.ಎಸ್. ಶಂಕರ್ ನಾರಾಯಣ್ ರಾವ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಪ್ರಾಂಶುಪಾಲರಾದ ಡಾ. ವತ್ಸಲಾ ಜಿ, ಉಪಪ್ರಾಂಶುಪಾಲರಾದ ಪ್ರೋ. ಬಿ.ಎಸ್ ಜಯರಾಮ್, ಡಾ. ಪುಷ್ಪ ಸೇರಿದಂತೆ ಪ್ರೋ.ಸುರೇಶ್, ಡಾ.ಆನಂದಪ್ಪಾ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಜೂನ್.1 ರಿಂದ 4, 6ರಂದು ಮದ್ಯ ಮಾರಾಟ ನಿಷೇಧ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯ ಹಿನ್ನಲೆಯಲ್ಲಿ ಬೆಂಗಳೂರಲ್ಲಿ ಜೂನ್.1ರಿಂದ 4ರವರೆಗೆ ಹಾಗೂ ಜೂನ್ 6ರಂದು ಮದ್ಯ ಮಾರಾಟವನ್ನು ನಿಷೇಧ ಮಾಡಿ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಆದೇಶಿಸಿದ್ದಾರೆ.

ಇಂದು ಆದೇಶ ಹೊರಡಿಸಿರುವಂತ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಅವರು, ಕರ್ನಾಟಕ ವಿಧಾನ ಪರಿಷತ್ತಿನ ಬೆಂಗಳೂರು ಪದವೀಧರರ ಕ್ಷೇತ್ರ ಮತ್ತು ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ-2024 ಘೋಷಣೆಯಾಗಿದೆ. ಈ ಚುನಾವಣೆಯು ಮುಕ್ತವಾಗಿ ಹಾಗೂ ನಿಷ್ಪಕ್ಷಪಾತವಾಗಿ ನಡೆಯಲು ಕ್ರಮವಹಿಸಲಾಗಿದೆ ಎಂದಿದ್ದಾರೆ.


ಉದಯವಾಹಿನಿ ಚಿತ್ರ

ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಮತದಾನ ಮುಗಿಯುವ ಅವಧಿಯ ಹಿಂದಿನ 48 ಗಂಟೆಗಳು ಮತ್ತು ಮತ ಏಣಿಕೆಯ ದಿನದಂದು ಶುಷ್ಕ ದಿನ ಎಂದು ಘೋಷಿಸುವಂತೆ ಚುನಾವಣಾಧಿಕಾರಿಗಳು ಕೋರಿರುತ್ತಾರೆ ಎಂದು ತಿಳಿಸಿದ್ದಾರೆ.

ಈ ಹಿನ್ನಲೆಯಲ್ಲಿ ದಿನಾಂಕ 01-06-2024ರ ಸಂಜೆ 4 ಗಂಟೆಯಿಂದ ದಿನಾಂಕ 03-06-2024ರ ಸಂಜೆ 4 ಗಂಟೆಯವರೆಗೆ ಹಾಗೂ ಮತ ಏಣಿಕೆಯ ದಿನಾಂಕ 06-06-2024ರ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆಯವರೆಗೆ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಸಗಟು ಅಥವಾ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಮದ್ಯ, ನಿಷೆಯುಳ್ಳ ಪದಾರ್ಥಗಳು, ಇತರೆ ಯಾವುದೇ ಮಾದಕ ವಸ್ತುಗಳ ಬಳಕೆ, ಮಾರಾಟ ಮತ್ತು ಸಂಗ್ರಹಣೆಯನ್ನು ನಿಷೇಧದ ಜೊತೆಗೆ liquor shops, wine shops, bars, hotels, restaurants, tavern, shops or any other or private place ಗಳನ್ನು ಮುಚ್ಚುವಂತೆ ಮದ್ಯ ಮಾರಾಟ ಮಾಡದಿರವು ನಿಷೇಧಾಜ್ಞೆಯನ್ನು ವಿಧಿಸಿ ಆದೇಶಿಸಿದ್ದಾರೆ.

# ಪ್ರತಿ ವಾರ್ಡ್‌ನಲ್ಲಿ ಒಂದು ರಕ್ಷಣಾ ತಂಡ ರಚನೆ

## ಸಾರ್ವಜನಕರಲ್ಲಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಿ, ತಪ್ಪಿದಲ್ಲಿ ಮಹಾನಗರ ಪಾಲಿಕೆ ನಿಯಮಾವಳಿಗಳ ಪ್ರಕಾರ ದಂಡ ವಿಧಿಸಿ

• **ಉದಯವಾಹಿನಿ, ಧಾರವಾಡ**

ಮುಂಗಾರು ಮಳೆ ಆರಂಭವಾಗುವ ಹಿನ್ನಲೆಯಲ್ಲಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹುಬ್ಬಳ್ಳಿ- ಧಾರವಾಡ ಮಹಾನಗರ ಪಾಲಿಕೆ ಕೈ ಗೊಂಡಿರುವ ಸ್ವಚ್ಛತಾ ಕಾರ್ಯ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿದರು. ಚರಂಡಿಯಲ್ಲಿ ಕಸ, ಹೂಳು ತುಂಬಿ ಪ್ರವಾಹ ಪರಿಸ್ಥಿತಿ ಉಂಟಾಗುವ ಮತ್ತು ಜನಜೀವನ ಅಸ್ತವ್ಯಸ್ತಗೊಳ್ಳುವ ಸಂಭಾವ್ಯ ಪ್ರದೇಶಗಳಲ್ಲಿ ಮಹಾನಗರ ಪಾಲಿಕೆ ಕೈಗೊಂಡಿರುವ ಕಾ ರ್ಯ ಮತ್ತು ಜನರ ಅಭಿಪ್ರಾಯ ತಿಳಿಯಲು ಜಿಲ್ಲಾಧಿಕಾರಿಗಳು ವಿವಿಧ ಸ್ಥಳಗಳಿಗೆ ಭೇಟಿ ಮಾಡಿದರು.

ಮಹಾನಗರ ಪಾಲಿಕೆ ಅಧಿಕಾರಿಗಳ ಜೊತೆ ಜಿಲ್ಲಾಧಿಕಾರಿಗಳು ಬಸ್ ಡಿಪೋ ಸರ್ಕಲ್, ಬಸ್ ಡಿಪೋ ಪಕ್ಕದ ರಾಜಕಾಲುವೆ, ಮದಿಹಾಳ, ನಿಜಾಮುದ್ದೀನ್ ಕಾಲೋನಿ, ಎಂ. ಆರ್. ನಗರ ನಾಲಾ ಪ್ರದೇಶಗಳಿಗೆ ಭೇಟಿ ನೀಡಿದರು. ನಾಲೆಗಳನ್ನು




**ದೂರು ಬಂದ ತಕ್ಷಣ ಸ್ಥಳಕ್ಕೆ ತೆರಳಲು ಸೂಚನೆ**

ಸ್ವಚ್ಛಗೊಳಿಸಿದ್ದರೂ ಕೆಲವಡೆ ಮತ್ತೆ ಜನರು ಕಸ, ಪ್ಲಾಸ್ಟಿಕ್ ಹಾಕಿರುವುದನ್ನು ಗಮನಿಸಿದರು. ಸಾರ್ವಜನಕರಲ್ಲಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಿ, ತಪ್ಪಿದಲ್ಲಿ ಮಹಾನಗರ ಪಾಲಿಕೆ ನಿಯಮಾವಳಿಗಳ ಪ್ರಕಾರ ದಂಡ ವಿಧಿಸಿ, ಹೆಚ್ಚುವರಿ ಟ್ಯಾಕ್ಸ್ ಹಾಕಿ ಎಂದು ಜಿಲ್ಲಾಧಿಕಾರಿಗಳು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

**ರಕ್ಷಣಾ ತಂಡ ರಚನೆ:** ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಮುಂಗಾರು ಪೂರ್ವ ಮಳೆ ಮತ್ತು ಮಳೆಗಾಲದಲ್ಲಿ ಉಂಟಾಗುವ ಸಮಸ್ಯೆಗಳನ್ನು ತ್ವರಿತವಾಗಿ ಹಾಜರಾಗಿ, ಬಗೆಹರಿಸಲು ಮತ್ತು ಜನಜೀವನ ಅಸ್ತವ್ಯಸ್ತ ಆಗದಂತೆ ಮುನ್ನೆಚರಿಕೆವಹಿಸಲು ಪ್ರತಿ ವಲಯಕ್ಕೆ ಒಂದು ಕ್ಷಿಪ್ರ ಕಾರ್ಯಪಡೆ ರಚಿಸಲು, ಈಗಾಗಲೇ ಇರುವ ಪಡೆಗಳಿಗೆ ಬಡಾವಣೆ ಹಂಚಿಕೆ ಮಾಡಿ, ಜನರ ದೂರು ಬಂದ ತಕ್ಷಣ ಸ್ಥಳಕ್ಕೆ ತೆರ ಳಲು ಸೂಚಿಸಿದರು. ಹೆಸ್ಕಾಂ ಅಧಿಕಾರಿಗಳಿಗೆ ನ ಗರದ ಪ್ರತಿ ವಿದ್ಯುತ್ ಕಂಬದ ಶಿಥಿಲತೆ, ತಂತಿ ಗಳು ಜೊತು ಬಿದ್ದಿರುವುದು, ಸಾರ್ವಜನಿಕರಿಗೆ ತಲುಪುವಂತೆ ಇರುವ, ಓಪನ್ ಎಲೆಕ್ಟ್ರಿಕಲ್‌ಬೋರ್ಡ್‌ಗಳ ಬಗ್ಗೆ ಪರಿಶೀಲಿಸಿ, ಮೇ ತಿಂಗಳಅಂತ್ಯ ದೊಳಗೆ ಸಾರ್ವಜನಿಕರಿಗೆ ಹಾನಿ ಆಗದಂತೆ ದುರಸ್ತಿ ಮಾಡಬೇಕು.

> **ಮಳೆ, ಪ್ರವಾಹ ಕಾರಣದಿಂದಾಗಿ ಯಾವುದೇ ಜಾನುವಾರು, ಮಾನವ ಜೀವಹಾನಿ ಆಗದಂತೆ ಮತ್ತು ಸಾರ್ವಜನಿಕ ಸ್ವತ್ತು ಹಾನಿ ಆಗದಂತೆ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ಸಹಾಯವಾಣಿ, ವಲಯ ಆಯುಕ್ತರ ದೂರವಾಣಿ ಸಂಖ್ಯೆಗಳ ಕುರಿತು ಪ್ರಚಾರ ಮಾಡಿ ಜನರು ತಕ್ಷಣ ಸಂಪರ್ಕಿಸಲು ಅನುಕೂಲವಾಗುವಂತೆ ನೋಡಿಕೊಳ್ಳಬೇಕು**
>
> -ದಿವ್ಯ ಪ್ರಭು, ಜಿಲ್ಲಾಧಿಕಾರಿ

### ಜನರಲ್ಲಿ ಅರಿವು ಮೂಡಿಸಬೇಕು

**ಮಳೆ, ಗಾಳಿ, ಸಿಡಿಲು, ಗುಡುಗು ಮಿಂಚು ಮುಂತಾದವುಗಳಿಂದ ಜೀವ ಹಾನಿ ಆಗದಂತೆ ಜನರಲ್ಲಿ ಅರಿವು ಮೂಡಿಸಬೇಕು. ಮಹಾನಗರಪಾಲಿಕೆ ಸೇರಿದಂತೆ ಜಿಲ್ಲೆಯ ಎಲ್ಲಾ ನಗರ, ಪಟ್ಟಣ, ಗ್ರಾಮಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಲು ಈಗಾಗಲೇ ಸೂಚಿಸಲಾಗಿದೆ ಎಂದರು.**

ಮುನ್ನೆಚ್ಚರಿಕೆ ಕ್ರಮವಹಿಸಿ, ವರದಿ ಪಡೆದುಕೊಳ್ಳುವಂತೆ ನಿರ್ದೇಶನ ನೀಡಿದರು. ಜನರ ಜೊತೆ ಮಾತುಕತೆ ನಡೆಸಿದ ಡಿಸಿ, ಪ್ರತಿದಿನ ನಿಮ್ಮ ಮನೆ ಬಾಗಿಲಿಗೆ ಪಾಲಿಕೆಯಿಂದ ಕಸ, ತ್ಯಾಜ ಸಂಗ್ರಹ ಟಿಪ್ಪರ್ ಬರುತ್ತಿದೆ. ಆದರೂ ಕೆಲವರು ಕಸವನ್ನು ಚರಂಡಿಗೆ ಹಾಕುತ್ತಿರುವುದು ಸರಿಯಲ್ಲ. ಸಾರ್ವಜನಿಕರ ಸಹಕಾರ, ನಮ್ಮ ನಗರವೆಂಬ ಹೆಮ್ಮೆ ಇದ್ದರೆ ಮಾತ್ರ ಸರಕಾರದ ಪ್ರಯತ್ನಗಳು ಯಶ ಸ್ವಿಯಾಗುತ್ತವೆ ಎಂದರು.

ಜಿಲ್ಲಾಧಿಕಾರಿಗಳು, ಸಿಬಿ ನಗರ, ಭಾವಿಕಟ್ಟಿ ಪ್ಲಾಟ್, ಬಸವನಗರ ಪ್ರದೇಶಗಳಿಗೆ ಭೇಟಿ ನೀಡಿ, ನಾಲಾ, ರಾಜಕಾಲುವೆ ಸ್ವಚ್ಛತೆ ಬಗ್ಗೆ ಪರಿಶೀಲನೆ ನಡೆಸಿದರು. ಮುಖ್ಯ ರಸ್ತೆ, ಪಾರ್ಕ್, ಬಡಾವಣೆಗಳಲ್ಲಿ ಇರುವ ಹಳೆಯ ಮರ, ಒಣಗಿದ ಮರ, ಚಾಚಿದ ಮರದ ರೆಂಬೆಕೊಂಬೆಗಳನ್ನು ಗುರುತಿಸಿ, ಪಾಲಿಕೆಯಿಂದ ಕತ್ತರಿಸಿ. ಬಡಾವಣೆ ನಿವಾಸಿಗಳಿಗೂ ಈ ಕುರಿತು ಮಾಹಿತಿ ನೀಡಿ ಎಂದರು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ನಿಯಂತ್ರಣ ಕೊಠಡಿ ಸಂಖ್ಯೆ 0836-2213888, 2213869, 2213886, 2213889. ವಾಟ್ಸಪ್ ನಂಬರ್ 8277803778. hdmccontrolroo m@email.com ಮೂಲಕವು ಜನರು ದೂರು ನೀಡಬಹುದು.

# ಜೈಲಿನಿಂದ ಬಿಡುಗಡೆಯಾಗಿ 3 ದಿನ ಕಳೆದ್ರೂ ಪತ್ನಿ ಭವಾನಿ ಭೇಟಿಯಾಗದ ರೇವಣ್ಣ

• **ಉದಯವಾಹಿನಿ, ಹಾಸನ**

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ಪೆನ್ ಡ್ರೈವ್ ಪ್ರಕರಣ ದೇಶಾದ್ಯಂತ ಸದ್ದು ಮಾಡುತ್ತಿದ್ದು, ಮಹಿಳೆ ಕಿಡ್ನ್ಯಾಪ್ ಪ್ರಕರಣದಿಂದ ಆರು ದಿನದಿಂದ ಪರಪ್ಪನ ಅಗ್ರಹಾರ ಜೈಲು ಸೇರಿದ್ದ ಮಾಜಿ ಸಚಿವ ಹೆಚ್.ಡಿ ರೇವಣ್ಣಗೆ ಇದೀಗ ಬಿಡುಗಡೆ ಭಾಗ್ಯ ಸಿಕ್ಕಿದೆ.



ಜೈಲಿನಿಂದ ಬಿಡುಗಡೆಯಾಗಿ ಮೂರು ದಿನ ಕಳೆದರು ಸಹ ಪತ್ನಿ ಭವಾನಿ ರೇವಣ್ಣ ಅವರನ್ನ ಭೇಟಿ ಮಾಡಿಲ್ಲ. ಹೌದು, ಜೈಲಿನಿಂದ ಹೊರಬಂದ ಬಳಿಕ ಮಾಜಿ ಸಚಿವ ಹೆಚ್ ಡಿ ರೇವಣ್ಣ ಅವರು ಟೆಂಪಲ್ ರನ್ ಮಾಡುತ್ತಿದ್ದಾರೆ. ಮಾಜಿಪ್ರಧಾನಿ ಹಾಗೂ ತಂದೆ ಹೆಚ್‌ಡಿ ದೇವೇಗೌಡರ ನಿವಾಸದಲ್ಲೇ ಉಳಿದಿರುವ ಹೆಚ್.ಡಿ.ರೇವಣ್ಣ ಇದುವರೆಗೂ ಪತ್ನಿ ಭವಾನಿ ಅವರನ್ನು ಭೇಟಿ ಮಾಡಿಲ್ಲ.

ಪತಿ ರೇವಣ್ಣ ಹಾಗೂ ಪುತ್ರ ಪ್ರಜ್ವಲ್ ವಿರುದ್ಧದ ಪ್ರಕರಣದಿಂದಾಗಿ, ಭವಾನಿಗೂ ಸಂಕಷ್ಟ ಎದುರಾಗಿತ್ತು. ಲೈಂಗಿಕ ಕಿರುಕುಳ, ಕಿಡ್ನ್ಯಾಪ್ ಎರಡೂ ಕೇಸ್‌ನಲ್ಲೂ ಭವಾನಿ ರೇವಣ್ಣ ಹೆಸರು ಉಲ್ಲೇಖವಾಗಿದೆ. ಭವಾನಿ ಕರೆದ್ರು ಅಂತಾ ಹೇಳಿಯೇ ಮಹಿಳೆಯನ್ನ ಕಿಡ್ನ್ಯಾಪ್ ಮಾಡಿರುವ ಆರೋಪವಿದೆ. ತನಿಖೆ ವೇಳೆ ಭವಾನಿ ವಿರುದ್ಧ ಸಾಕ್ಷಿ ಸಿಕ್ಕರೆ ಅವ್ರಿಗೂ ಸಂಕಷ್ಟ ತಪ್ಪಿದ್ದಲ್ಲ. ಕಿಡ್ನಾಪ್ ಕೇಸ್‌ನಲ್ಲಿ ರೇವಣ್ಣ ಜೈಲಿಗೆ ಹೋಗಲು ಭವಾನಿ ರೇವಣ್ಣ ಅವರೇ ಪರೋಕ್ಷ ಕಾರಣ ಎಂಬ ಬಗ್ಗೆ ಅನುಮಾನವು ಸಹ ಇದೆ. ಮಗ ಜೈಲಿಗೆ ಹೋಗಲು ಸೊಸೆ ಕಾರಣ ಎಂದು ಮಾಜಿಪ್ರಧಾನಿ ಎಚ್.ಡಿ.ದೇವೇಗೌಡರು ಮತ್ತು ಎಚ್.ಡಿ.ಕುಮಾರಸ್ವಾಮಿ ಬೇಸರಗೊಂಡಿದ್ದಾರೆ ಎಂದು ಹೇಳಲಾಗಿದೆ.

### ಎರಡು ನೋಟಿಸ್ ಜಾರಿ

**ಸದ್ಯ ಮೈಸೂರು ಜಿಲ್ಲೆ ಸಾಲಿಗ್ರಾಮದಲ್ಲೇ ಪತ್ನಿ ಭವಾನಿ ಏಕಾಂಗಿಯಾಗಿದ್ದು, ಹೊಳೆನರಸೀಪುರದ ಮನೆಗೆ ಬಂದು ಹೋಗುತ್ತಾರೆ. ಈಗಾಗಲೇ ಸಂತ್ರಸ್ತೆ ಕಿಡ್ನ್ಯಾಪ್ ಕೇಸ್‌ನಲ್ಲಿ ವಿಚಾರಣೆಗೆ ಹಾಜರಾಗುವಂತೆ ಎರಡು ನೋಟಿಸ್ ಜಾರಿ ಮಾಡಲಾಗಿದೆ. ಈ ಮಧ್ಯೆ ಮಾವ ದೇವೇಗೌಡರು, ಅತ್ತೆ ಚೆನ್ನಮ್ಮರನ್ನೂ ಭವಾನಿ ಭೇಟಿ ಮಾಡಿದ್ದಾರೆ. ಇತ್ತ ಪತಿ ಬಿಡುಗಡೆಯಾಗಿ ಮೂರು ದಿನ ಕಳೆದರೂ ಸಹ ಭವಾನಿ ರೇವಣ್ಣ ಅವರು ಭೇಟಿಗೆ ಮುಂದಾಗಿಲ್ಲ ಎಂದು ಹೇಳಲಾಗಿದೆ.**

# ಸೋಮೇಶ್ವರ ದೇವರ ಜಾತ್ರೆ ಇಂದಿನಿಂದ

• **ಉದಯವಾಹಿನಿ, ಲಕ್ಷ್ಮೇಶ್ವರ**

ಪಟ್ಟಣದ ಇತಿಹಾಸ ಪ್ರಸಿದ್ಧ ಸೋಮೇಶ್ವರ ದೇವರ ಜಾತ್ರೆಯು ಮೇ 17ರಿಂದ 20ವರೆಗೆ ಜರುಗಲಿದೆ. 17ರಂದು ಸಂಜೆ 7ಕ್ಕೆ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಲಿದ್ದು 18ರಂದು ಸಂಜೆ 5.30ಕ್ಕೆ ರಥೋತ್ಸವ, 19ರಂದು ಕಡುಬಿನ ಕಾಳಗ ಮತ್ತು 20ರಂದು ಸಜೆ 7ಕ್ಕೆ ಓಕಳಿ ಜರುಗಲಿದೆ.

**ಸಂಕ್ಷಿಪ್ತ ಇತಿಹಾಸ:** ಸೋಮೇಶ್ವರ ದೇವಸ್ಥಾನವು 10ನೇ ಶತಮಾನದಲ್ಲಿ ಕಟ್ಟಲ್ಪಟ್ಟಿದ್ದು ಇದು ಚಾಲುಕ್ಯ ಶಿಲ್ಪಕಲೆಯ ಪರಂಪರೆಯಲ್ಲಿದೆ. ಈಗಿನ ಲಕ್ಷ್ಮೇಶ್ವರಕ್ಕೆ ಹಿಂದೆ ಪುಲಿಗೆರೆ-300 ಎಂದೂ ಕರೆಯುತ್ತಿದ್ದರು. ಅಂದರೆ ಆಗ ಇದು 300 ಪ್ರಾಂತ್ಯಗಳ ಸೀಮೆಯಾಗಿತ್ತು. ದೇವಾಲಯ ಭವ್ಯವಾದ ಬಯಲಿನಲ್ಲಿ ನಿರ್ಮಿಸಲ್ಪಟ್ಟಿದ್ದು ದೇವಾಲಯದ ಸುತ್ತಲೂ ಕಲ್ಲಿನಿಂದ ನಿರ್ಮಿಸಿದ ಎತ್ತರವಾದ ಗೋಡೆ ಇದ್ದು ಇದು ದೇವಸ್ಥಾನಕ್ಕೆ ರಕ್ಷಣೆ ಒದಗಿಸುತ್ತದೆ. ಪೂರ್ವ, ಉತ್ತರ, ದಕ್ಷಿಣ ದಿಕ್ಕುಗಳಿಂದ ದೇವಾಲಯ ದೊಳಗೆ ಪ್ರವೇಶಿಸಲು ಮುಖ್ಯ ಮೂರು ದ್ವಾರಗಳಿವೆ.

ವಿಶಿಷ್ಠ ಮೂರ್ತಿ ಸೋಮೇಶ್ವರ ದೇವ ಸ್ಥಾನದ ಗರ್ಭಗುಡಿಯಲ್ಲಿನ ಮೂರ್ತಿ ಬಹಳ ಅಪ ರೂಪದ್ದಾಗಿದ್ದು, ಅಷ್ಟೇ ಸುಂದರವಾಗಿದೆ. ಇಲ್ಲಿ ಪರಮೇಶ್ವರನ ಹಿಂದೆ ಪಾರ್ವತಿ ನಂದಿಯನ್ನೇರಿ ಕುಳಿತಿದ್ದಾಳೆ. ಇಂಥ ಅಪರೂಪದ ಮೂರ್ತಿ ದಕ್ಷಿಣ ಭಾರತದಲ್ಲಿಯೇ ಪ್ರಥಮ ಎನ್ನಲಾಗುತ್ತಿದೆ. ಸೋಮನಾಥ ಮೂರ್ತಿಯು ಸುಮಾರು 4 ಅಡಿ ಎತ್ತರ 3 ಅಡಿ ಅಗಲವಿದ್ದು, ಪೂಜೆ, ಅಲಂಕಾರಗೊಂಡಾಗ ಶಿವ ಪಾರ್ವತಿಯರು ನಂದಿರೂಢರಾಗಿ ನಗರ ಪ್ರದಕ್ಷಿಣೆಗೆ ಹೊರಟಿರುವಂತೆ ಕಾಣಿಸುತ್ತದೆ. ಈ ಮೂರ್ತಿಯನ್ನು ಶಿವಶರಣ ಆದಯ್ಯನು ಸೌರಾಷ್ಟ್ರದಿಂದ ತಂದು ಸ್ಥಾಪಿಸಿದನೆಂದು ದಾಖಲೆಗಳಲ್ಲಿ ಉಲ್ಲೇಖ ಇದೆ.

21 ಎಕರೆ ವಿಸ್ತೀರ್ಣದಲ್ಲಿರುವ ದೇವಸ್ಥಾನದಲ್ಲಿ ಸೋಮತೀರ್ಥ, ಓಕಳಿ ಹೊಂಡ ಸೇರಿದಂತೆ ಅನೇಕ ಚಿಕ್ಕ ಚಿಕ್ಕ ದೇವಾಲಯಗಳು ಇವೆ. ಅವೆಲ್ಲವುಗಳು ಅವಸಾನದ ಅಂಚಿಗೆ ತಲುಪಿದ್ದವು. ಆದರೆ ಇನ್ಫೋಸಿಸ್‌ನ ಸುಧಾಮೂರ್ತಿಯವರು 2014ರಲ್ಲಿ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಿದ್ದರಿಂದ ಪಾಳು ಬೀಳುತ್ತಿದ್ದ ದೇವಾಲಯದೊಳಗಿನ ಸಣ್ಣ ಸಣ್ಣ ದೇವಸ್ಥಾನಗಳು ಇದೀಗ ಹೊಸ ಕಳೆಯೊಂದಿಗೆ ಭಕ್ತರನ್ನು ಆಕರ್ಷಿಸುತ್ತಿವೆ. ಕಲ್ಲಿನಿಂದಲೇ ನಿರ್ಮಿಸಿದ ಬೃಹತ್ ಬಾವಿ ಇದೀಗ ದುರಸ್ಥಿಗೊಂಡಿದ್ದು ಅದರ ಸುತ್ತಲೂ ಉದ್ಯಾನ ನಿರ್ಮಾಣಗೊಂಡಿದೆ. ದೇವಸ್ಥಾನದ ವಾಸ್ತುಶಿಲ್ಪವು ನಕ್ಷತ್ರಾಕಾರದಲ್ಲಿ ಇದ್ದು ಮೇಲ್ಛಾವಣಿಯಲ್ಲಿ ಭೈರವಿ, ಶಿವ, ವಿಷ್ಣು, ಶಕ್ತಿ, ನಟರಾಜ ಗಣೇಶ, ವೀರಭದ್ರ, ವೇಣುಗೋಪಾಲರ ಶಿಲ್ಪಗಳನ್ನು ಅಲ್ಲಲ್ಲಿ ಕೆತ್ತಲಾಗಿದೆ. ಶಿಖರದ ದಕ್ಷಿಣ ಭಾಗದಲ್ಲಿ ಬ್ರಹ್ಮ, ಯಕ್ಷರನ್ನು, ಪಶ್ಚಿಮ ಭಾಗದಲ್ಲಿ ಶಕ್ತಿ-ಸರಸ್ವತಿಯರನ್ನು, ಉತ್ತರದಲ್ಲಿ ಶಿವನ ಮೂರ್ತಿಗಳು ಕಂಡು ಬರುತ್ತವೆ.

ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನದ ಗರ್ಭಗುಡಿಯಲ್ಲಿನ ನಂದಿರೂಢ ಶಿವ -ಪಾರ್ವತಿಯರ ಮೂರ್ತಿ ಪ್ರತಿವರ್ಷ ವೈಶಾಖ ಕೃಷ್ಣ ಪಕ್ಷದ ಶುಭದಿನದಂದು ಸೂರ್ಯೋದಯದ ಹೊಂಬಣ್ಣದ ಕಿರಣಗಳು ನೇರವಾಗಿ ಪೂರ್ವಾಭಿಮುಖವಾಗಿರುವ ಸೋಮನಾಥನ ಮೇಲೆ ಬೀಳುವುದು ಇಲ್ಲಿನ ವಿಶೇಷವಾಗಿದೆ. ಸೂರ್ಯ ದಕ್ಷಿಣಾಯಣದಿಂದ ಉತ್ತರಾಯಣಕ್ಕೆ ಚಲಿಸುವ ಸಂದರ್ಭದಲ್ಲಿ ಈ ಅದ್ಭುತ ಜರುಗುತ್ತದೆ. ಮೇ 25 ರಿಂದ 30ರವರೆಗೂ ಪ್ರತಿದಿನ ಮುಂಜಾನೆ 5.58ಕ್ಕೆ ಸೂರ್ಯನ ನೇರ ಕಿರಣಗಳು ಬೀಳುವ ಸುಂದರ ದೃಶ್ಯವನ್ನು ಈಗಲೂ ಕಾಣಬಹುದು.

### ಆಗಬೇಕಾದ ಕೆಲಸಗಳು

**ದೇವಸ್ಥಾನದ ಉತ್ತರ ಭಾಗದ ಪ್ರವೇಶ ದ್ವಾರ ಸಂಪೂರ್ಣ ಕುಸಿದು ಬೀಳುತ್ತಿದೆ. ಅದರ ಜೀರ್ಣೋದ್ಧಾರಕ್ಕೆ ಈವರೆಗಾದರೂ ಪ್ರಯನತ್ನಗಳು ನಡೆದಿಲ್ಲ. ಮತ್ತು ಪ್ರತಿದಿನ ಬೇರೆ ಬೇರೆ ಊರುಗಳಿಂದ ಭಕ್ತರು ದೇವಸ್ಥಾನಕ್ಕೆ ಬರುತ್ತಾರೆ. ಅವರಿಗಾಗಿ ಒಂದು ಶೌಚಾಲಯ ಕೂಡ ಇಲ್ಲ. ಇದರಿಂದಾಗಿ ಭಕ್ತರಿಗೆ ತೀವ್ರ ತೊಂದರೆ ಉಂಟಾಗುತ್ತಿದೆ. ಆದಷ್ಟು ಬೇಗನೇ ಶೌಚಾಲಯ ನಿರ್ಮಿಸುವ ಅಗತ್ಯ ಇದೆ.**




# ಕುಡಿಯುವ ನೀರು ಕಲುಷಿತ: ಗ್ರಾಮಸ್ಥರ ಆಕ್ರೋಶ

• **ಉದಯವಾಹಿನಿ, ಶಿಗ್ಗಾವಿ**

ಇಲ್ಲಿನ ಐತಿಹಾಸಿಕ ನಾಗನೂರ ಕೆರೆಯಿಂದ ಪಟ್ಟಣದ ಜನತೆಗೆ ಕುಡಿಯಲು ನೀರು ಸರಬರಾಜು ಮಾಡಲಾಗುತ್ತಿದೆ. ಆದರೆ ಬೇಸಿಗೆಯಿಂದಾಗಿ ನೀರು ಖಾಲಿಯಾದ ಪರಿಣಾಮ ಅಲ್ಲಲ್ಲಿ ತಗ್ಗು ದಿಣ್ಣೆಗಳಲ್ಲಿರುವ ನೀರು ಕಲುಷಿತಗೊಂಡಿದೆ. ಈವರೆಗೆ ಕೆರೆಯಿಂದ 4-5 ದಿನಗಳಿಗೊಮ್ಮೆ ನೀರು ಸರಬರಾಜ ಮಾಡಲಾಗುತ್ತಿತ್ತು.

ಆದರೆ ಈಗ ಕೆರೆ ನೀರು ಕಲುಷಿತವಾಗಿ ಕುಡಿಯಲು ಬಾರದಂತಾಗಿದೆ. ಅದೇ ನೀರನ್ನು ಪೂರೈಸುವುದಕ್ಕೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದಾರೆ. ನೀರು ಹಸಿರು ಬಣ್ಣಕ್ಕೆ ತಿರುಗಿ, ವಾಸನೆ ಬರುತ್ತದೆ. ನೀರು ನೋಡಿದರೆ ವಾಂತಿ




ಬರುತ್ತದೆ. ಅಂತಹ ನೀರನ್ನು ಕುಡಿಯುವುದು ಹೇಗೆ. ಅನಾರೋಗ್ಯ ಕಾಡುವ ಭಯವಿದೆ' ಎಂದು ಮುಖಂಡ ರಾದ ವಿ.ಕೆ.ಪೂಜಾರ, ಶಿದ್ರಮಗೌಡ ಮೇಳ್ಳಾಗಟ್ಟಿ ಅವರು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶೇ 80ರಷ್ಟು ಜನ ನಳದ ನೀರನ್ನೇ ಅವಲಂಬಿಸಿದ್ದಾರೆ. ಈ ಸತ್ಯಾಂಶವನ್ನು ಅಧಿಕಾರಿಗಳು ಗಮನಿಸಬೇಕು. ದನಕರುಗಳಿಗೆ ಇಂತಹ ನೀರು ಕುಡಿಸುವುದು ಹೇಗೆ, ಅವುಗಳಿಗೆ ನೀರು ಕುಡಿಸಲು ಎಲ್ಲಿಗೆ ಹೋಗಬೇಕು. ಮನುಷ್ಯರು ಎಲ್ಲಿಗಾದರೂ ಹೋಗಿ ಕುಡಿದು ಬರಬಹುದು' ಎಂದು ರೈತ ಶೇಕಪ್ಪ ನವಲಗುಂದ ಅಳಲು ತೋಡಿಕೊಂಡರು.

ಪಟ್ಟಣದಲ್ಲಿ ಶುದ್ಧ ನೀರಿನ ಘಟಕಗಳು ಬೆರಳೆಣಿಕೆಯಲ್ಲಿವೆ. ಅವುಗಳಿಂದಲೂ ಸರಿಯಾದ ಸಮಯಕ್ಕೆ ನೀರು ವಿತರಿಸುತ್ತಿಲ್ಲ. ಕೆಲವು ಘಟಕಗಳು ಶಾಶ್ವತವಾಗಿ ಸ್ಥಗಿತಗೊಂಡಿದ್ದು, ಈವರೆಗೆ ದುರಸ್ತಿ ಕೈಗೊಂಡಿಲ್ಲ. ನಿತ್ಯ ಕುಡಿಯಲು ಶುದ್ಧ ನೀರಿಗಾಗಿ ಪರದಾಡುವಂತಾಗಿದೆ. ತಕ್ಷಣ ಪುರಸಭೆ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು ಎಂದು ಶಂಭು ಯಲಿಗಾರ ಪುರಸಭೆ ಅಧಿಕಾರಿಗಳಿಗೆ ಮತ್ತು ಆಡಳಿತ ಮಂಡಳಿಗೆ ಆಗ್ರಹಿಸಿದ್ದಾರೆ.

# ಸರ್ಕಾರ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಿ

• **ಉದಯವಾಹಿನಿ, ಹುಬ್ಬಳ್ಳಿ**



ಅಂಜಲಿ ಅಂಬಿಗೇರ ಅವರನ್ನು ಅಮಾನುಷವಾಗಿ ಹತ್ಯೆ ಮಾಡಿದ್ದು ಖಂಡನೀಯ. ಇದು ಅತ್ಯಂತ ದಾರುಣವಾದ ಘಟನೆ. ಆರೋಪಿ ಮನೆಗೆ ನುಗ್ಗಿ ಕೊಲೆ ಮಾಡಿ ಹೋಗುತ್ತಾನೆ ಎಂದರೆ ಈ ನೆಲದ ಕಾನೂನಿಗೆ ಬೆಲೆ ಇಲ್ಲದಂತಾಗಿದೆ ಎಂದು ಹುಬ್ಬಳ್ಳಿಯ ಮೂರು ಸಾವಿರ ಮಠದ ಗುರುಸಿದ್ದ ರಾಜಯೋಗೀಂದ್ರ ಸ್ವಾಮೀಜಿ ಹೇಳಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ನೆಲದ ಕಾನೂನಿನ ಮೇಲಿನ ಗೌರವ ಉಳಿಯಬೇಕಾದರೆ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಂಡು, ಜನರಿಗೆ ಸುರಕ್ಷತೆ ಇದೆ ಎಂದು ತೋರಿಸಿ ಕೊಡಬೇಕು' ಎಂದು ಆಗ್ರಹಿಸಿದರು. ಇಂತಹ ಪರಿಸ್ಥಿತಿಯಲ್ಲಿ ಕೊಲೆಯಾದ ಯುವತಿ ಕುಟುಂಬಕ್ಕೆ ಇಡೀ ಸಮಾಜ ಬೆಂಬಲಕ್ಕೆ ನಿಂತಿದೆ. ಸರ್ಕಾರ ಸಹ ಬದ್ಧತೆ ತೋರಿ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು' ಎಂದರು. ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣ ಆರೋಪಿಯ ಮೇಲೆ ಪ್ರಭಾವ ಬೀರಿರಬಹುದು. ಇಲ್ಲ ಎಂದು ಹೇಳಲಾಗುವುದಿಲ್ಲ. ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ನೋಡಿಕೊಳ್ಳಬೇಕು. ಕಾನೂನಿಗೆ ಬೆಲೆ ಇದೆ ಎಂದು ತೋರಿಸಬೇಕು' ಎಂದು ಹೇಳಿದರು. ಅಂಜಲಿ ಅವರ ಸಹೋದರಿಯರಿಗೆ ಮೂರು ಸಾವಿರ ಮಠದ ಶಾಲೆಯಲ್ಲಿ ಉಚಿತ ಶಿಕ್ಷಣ ನೀಡಲಾಗುವುದು' ಎಂದು ವಾಗ್ದಾನ ನೀಡಿದರು.

ರುದ್ರಾಕ್ಷಿ ಮಠದ ಬಸವಲಿಂಗ ಸ್ವಾಮೀಜಿ, ಬಿಜಕಲ್ ವಿರಕ್ತ ಮಠದ ಶಿವಲಿಂಗ ಸ್ವಾಮೀಜಿ, ಮೂರು ಸಾವಿರ ಮಠದ ಗುರುಸಿದ್ಧರಾಜಯೋಗೀಂದ್ರ ಸ್ವಾಮೀಜಿ ಅವರು ಅಂಜಲಿ ಅವರ ಕುಟುಂಬದವರಿಗೆ ಸಾಂತ್ವನ ಹೇಳಿದರು.

# ಬರ ಪರಿಹಾರದ ಹಣ ರೈತರ ಸಾಲಕ್ಕೆ ಸರಿಮಾಡಿಕೊಂಡರೆ ಕಾನೂನು ಕ್ರಮ: ಬ್ಯಾಂಕ್‌ಗಳಿಗೆ ಖಡಕ್ ಎಚ್ಚರಿಕೆ

• **ಉದಯವಾಹಿನಿ, ಧಾರವಾಡ**

ಕರ್ನಾಟಕ ರಾಜ್ಯ ಸರ್ಕಾರ ಕೊಡುವ ಬರ ಪರಿಹಾರ ಹಣವು ರೈತರ ಬ್ಯಾಂಕ್ ಖಾತೆಗೆ ಜಮೆ ಆಗುತ್ತದೆ. ಈ ಹಣವನ್ನು ರೈತರಿಗೆ ಸಾಲ ನೀಡಿರುವ ಬ್ಯಾಂಕ್‌ಗಳು ತಮ್ಮ ಸಾಲಕ್ಕೆ ಸರಿ ಮಾಡಿಕೊಳ್ಳುತ್ತವೆ ಎಂಬ ಮಾತುಗಳು, ಆರೋಪವು ಕೇಳಿ ಬಂದಿವೆ. ಇಂತಹ ಬ್ಯಾಂಕ್‌ಗಳಿಗೆ ಸರ್ಕಾರ ಎಚ್ಚರಿಕೆ ಕೊಟ್ಟಿದೆ.




ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡುವ ಬರ ಪರಿಹಾರ, ವಿವಿಧ ಯೋಜನೆಗಳ ಸಹಾಯಧನ, ಸಾಮಾಜಿಕ ನೆರವು ಯೋಜನೆಯ ಸಹಾಯಧನವನ್ನು ರೈತರ ಒಪ್ಪಿಗೆ ಇಲ್ಲದೆ ಸಾಲದ ಖಾತೆಗೆ ಹೊಂದಾಣಿಕೆ ಮಾಡಿಕೊಳ್ಳಬಾರದು. ಈ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕರ ಮೂಲಕ ಈಗಾಗಲೇ ಸಾಕಷ್ಟು ಬಾರಿ ಎಲ್ಲಾ ಬ್ಯಾಂಕ್ ಗಳಿಗೆ ತಿಳಿಸಲಾಗಿದೆ. ಒಂದು ವೇಳೆ ಸಾಲಕ್ಕೆ ಹೊಂದಾಣಿಕೆ ಮಾಡಿಕೊಂಡರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಧಾರವಾಡ ಜಿಲ್ಲಾಧಿಕಾರಿಗಳಾ ದಿವ್ಯ ಪ್ರಭು ಬ್ಯಾಂಕ್‌ಗಳಿಗೆ ಎಚ್ಚರಿಕೆ ನೀಡಿದ್ದಾರೆ.

ರೈತರಿಗೆ ನೀಡುವ ಪರಿಹಾರ, ಆರ್ಥಿಕ ನೆರವು ವಿಷಯದಲ್ಲಿ ಸರ್ಕಾರ ಮತ್ತು ಜಿಲ್ಲಾಡಳಿತ ನೀಡಿರುವ ನಿರ್ದೇಶನ ಉಲ್ಲಂಘಿಸಿದರೆ ಅಂತಹ ಬ್ಯಾಂಕಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ಹೇಳಿದರು.

# ಮೋದಿ ರಾಕ್ಷಸನಿದ್ದಂತೆ, ಪುನಃ ಗೆದ್ದರೆ ಸರ್ವಾಧಿಕಾರಿ

• **ಉದಯವಾಹಿನಿ, ಬೀದರ್**

75 ವರ್ಷಕ್ಕೆ ಸಕ್ರಿಯ ರಾಜಕಾರಣದಿಂದ ಬಿಜೆಪಿಯ ಅನೇಕ ಮುಖಂಡರಿಗೆ ನಿವೃತ್ತಿಗೊಳಿಸಿರುವ ಪ್ರಧಾನಿ ನರೇಂದ್ರ ಮೋದಿಯವರಿಗೆ ಮುಂದಿನ ವರ್ಷ 75 ತುಂಬುತ್ತದೆ. ಅವರು ಕೂಡ ರಾಜಕೀಯದಿಂದ ಹಿಂದೆ ಸರಿಯಬೇಕು. ಇಲ್ಲವಾದರೆ ಅವರು ಮತ್ತೊಂದು ಸುಳ್ಳು ಹೇಳಿದಂತಾಗುತ್ತದೆ' ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮುಖ್ಯಮಂತ್ರಿ ಚಂದ್ರು ಹೇಳಿದರು.

ಮೋದಿಯವರೇ 75 ವರ್ಷಕ್ಕೆ ರಾಜಕೀ ಯದಿಂದ ನಿವೃತ್ತರಾಗಬೇಕೆಂಬ ನಿಯಮ ಬಿಜೆ ಪಿಯಲ್ಲಿ ಜಾರಿಗೆ ತಂದಿದ್ದಾರೆ. ಅದರ ಪ್ರಕಾರ, ಲಾಲ್ ಕೃಷ್ಣ ಅಡ್ವಾಣಿ, ಮುರಳಿ ಮನೋಹರ್ ಜೋಶಿ, ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಅನೇಕರನ್ನು ಮನೆಯಲ್ಲಿ ಕೂರಿಸಿದ್ದಾರೆ. ಈ ನಿಯಮ ಅವರಿಗೂ ಅನ್ವಯಿಸುತ್ತದೆ. ಆದರೆ, ಕೇಂದ್ರ ಗೃಹಸಚಿವ ಅಮಿತ್ ಶಾ ಅದಕ್ಕೆ ವ್ಯತಿರಿಕ್ತವಾಗಿ ಮಾತನಾಡುತ್ತಿದ್ದಾರೆ ಎಂದು ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ನರೇಂದ್ರ ಮೋದಿ ರಾಕ್ಷಸನಿದ್ದಂತೆ. ಈ ಸಲದ ಚುನಾವಣೆಯಲ್ಲಿ ಪುನಃ ಗೆದ್ದರೆ ಸರ್ವಾಧಿಕಾರಿ ಆಗು ತ್ತಾರೆ. ಮುಂದೆ ಚುನಾವಣೆಗಳೇ ನಡೆಯುವುದಿಲ್ಲ.




ಇ.ಡಿ, ಸಿಬಿಐ ಸ್ವಾಯತ್ತ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಅಧಿಕಾರ ಚಲಾಯಿಸುತ್ತಿದ್ದಾರೆ. ಚುನಾವಣಾ ಬಾಂಡ್ ಗಳ ಮೂಲಕ ಹಾಡಹಗಲೇ ದರೋಡೆ ಮಾಡಿದ್ದಾರೆ. ಕೇಂದ್ರ ಸರ್ಕಾರಕ್ಕೆ ಮಾನ, ಮಾರ್ಯದೆ ಇಲ್ಲ. ಅಧಿಕಾರಕ್ಕಾಗಿ ಯಾರನ್ನಾದರೂ ಸಾಯಿಸುವ ನರಹಂತಕರು ಬಿಜೆಪಿಯವರು. ಹೇಗಾದರೂ ಮಾಡಿ ಅಧಿಕಾರಕ್ಕೆ ಬರಬೇಕೆಂದು ವಾಮ ಮಾರ್ಗ ಹಿಡಿದಿದ್ದಾರೆ' ಎಂದು ಆರೋಪಿಸಿದರು.

> **ಬಿಜೆಪಿಯವರು ಯಾರನ್ನೂ ಪ್ರೀತಿಯಿಂದ ನೋಡುತ್ತಿಲ್ಲ. ಇ.ಡಿ, ಸಿಬಿಐ ಛೂ ಬಿಟ್ಟು ಏನು ತಪ್ಪು ಇರದಿದ್ದರೂ ವಿರೋಧಿಗಳನ್ನು ಹಣಿಯುತ್ತಿದ್ದಾರೆ. ಸಣ್ಣ ತಪ್ಪುಗಳನ್ನು ಹಿಡಿದು ಜೈಲಿಗೆ ಹೋಗಿ ಇಲ್ಲವೇ, ಬಿಜೆಪಿ ಹುಂಡಿಗೆ ಹಣ ಹಾಕಿ ಎನ್ನುತ್ತಿದ್ದಾರೆ. ಇದು ರಾಕ್ಷಸ ಪ್ರವೃತ್ತಿಯ ದುರಾಡಳಿತಕ್ಕೆ ಸಾಕ್ಷಿ. ವಿಷಯಾಧಾರಿತ ರಾಜಕಾರಣ ಮಾಡಬೇಕು. ರಾಜಕಾರಣದಲ್ಲಿ ದ್ವೇಷ ಇರಬಾರದು**
>
> -ಮುಖ್ಯಮಂತ್ರಿ ಚಂದ್ರು, ಅಧ್ಯಕ್ಷ

# ಡೆಂಗ್ಯೂ ಜ್ವರ ಬಂದಂತೆ ಎಚ್ಚರವಹಿಸಿ

## • ನಿರ್ಲಕ್ಷ್ಯ ಬೇಡ ಇಲಾಖೆಗೆ ಸಹಕರಿಸಿ: ಡಾ. ನಾಗರಾಜ ಕಾಟ್ಟ

• **ಉದಯವಾಹಿನಿ, ಸಿಂಧನೂರು**

ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ನಿರ್ಲಕ್ಷ ಬೇಡ ಸಾರ್ವಜನಿಕರು ಎಚ್ಚರ ವಹಿಸಿ ಇಲಾಖೆಗೆ ಸಹಕರಿಸಿ ಎಂದು ಹೇಳಿದ ರು. ನಗರದ ಸರ್ಕಾರಿ ಆಸ್ಪತ್ರೆಯ ಮುಂಭಾಗದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ದಿನದಂದು ಸೊಳ್ಳೆಗಳಿಂದ ಹರಡುವ ರೋಗಗಳು ನಿಯಂತ್ರಣ ಆರೋಗ್ಯ ಶಿಕ್ಷಣ ಕಾರ್ಯಕ್ರಮ ಕುರಿತು ಮಾತನಾಡಿದ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ ನಾಗರಾಜ ಕಟ್ಟಾ ಅವರು ಡೆಂಗೀ ಮತ್ತು ಚಿಕುಂಗುನ್ಯಾ ರೋಗಗಳಿಗೆ ನಿರ್ದಿಷ್ಟವಾದ ಚಿಕಿತ್ಸೆ ಇಲ್ಲ. ಸರಿಯಾದ ಮತ್ತು ಪೂರ್ವಭಾವಿ ಚಿಕಿತ್ಸೆಯನ್ನು ನೀಡಿದಲ್ಲಿ ಡೆಂಗೀ ರೋಗದ ಲಕ್ಷಣಗಳನ್ನು ಪರಿಹರಿಸಿ ಮುಂದಾಗಬಹುದಾದ ತೊಂದರೆ ಮತ್ತು ಸಾವನ್ನು ತಪ್ಪಿಸಬಹುದು. ಡೆಂಗೀ ಜ್ವರದಲ್ಲಿ ಆಸ್ಪಿರಿನ್ ಮತ್ತು ಬ್ರೂಫಿನ್ ಕೊಡ ಬಾರದು. ಇವು ರಕ್ತಸ್ರಾವ ಮತ್ತು ಹೊಟ್ಟೆನೋವನ್ನು ಇನ್ನು ತೀವ್ರಗೊಳಿಸುತ್ತವೆ. ವೈದ್ಯರ ಸಲಹೆ ಮೇರೆಗೆ ಪ್ಯಾರಸಿಟಮಾಲ್ ಕೊಡಬಹುದು. ಡೆಂಗೀ




**ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ**

ರಕ್ತಸ್ರಾವ ಜ್ವರದ ಲಕ್ಷಣಗಳು ಒಂದಕ್ಕಿಂತ ಹೆಚ್ಚು ಕಂಡು ಬಂದಲ್ಲಿ ರೋಗಿಯನ್ನು ತುರ್ತಾಗಿ ಹತ್ತಿರದ ಆಸ್ಪತ್ರೆಗೆ ಸೇರಿಸಬೇಕು.

ಈಡಿಸ್ ಸೊಳ್ಳೆಗಳು ಸಾಮಾನ್ಯವಾಗಿ ಮನೆಯಲ್ಲಿರುವ ನೀರು ಶೇಖರಣೆಯ ಸಿಮೆಂಟ್ ತೊಟ್ಟಿಗಳು, ಬ್ಯಾರಲ್ ಗಳು, ಡ್ರಂಗಳು, ಹೂವಿನ ಕುಂಡ ಮುಂತಾದವುಗಳಲ್ಲದೇ ಮನೆ ಸುತ್ತ ಮುತ್ತ ಬಿಸಾಡಿದ ಪಿಂಗಾಣಿ ವಸ್ತುಗಳು, ಪ್ಲಾಸ್ಟಿಕ್ ಕಪ್ಪುಗಳು, ಟೈರುಗಳು, ಎಳೆನೀರಿನ ಚಿಪ್ಪು ಮತ್ತು ಇತರೆ ವಸ್ತುಗಳಲ್ಲಿ ನೀರು ಸಂಗ್ರಹವಾದಾಗ ಉತ್ಪತ್ತಿಯಾಗುತ್ತವೆ. ಅದರಿಂದ ಮನೆಯ ಅಕ್ಕಪಕ್ಕದಲ್ಲಿ ನೀರು ನಿಲ್ಲದಂತೆ ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ, ತಾಲ್ಲೂಕಿನ ಸಿ.ಅ. ನಿರೀಕ್ಷಣಧಿಕಾರಿ ರಂಗನಾಥ್ ಗುಡಿ. ಸಂಗನಗೌಡ ಪಾಟೀಲ. ತಾಲೂಕು ಮೇಲ್ವಿಚಾರಕ ಎಫ್.ಎ.ಹಣಗಿ. ಸಿಬ್ಬಂದಿ ವರ್ಗ ರೈಜ್ ಕಾಲೇಜಿನ ಹಾಗೂ ಬಸವ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು ಶಿಕ್ಷಕರು ವೃಂದ ಆಶಾ ಕಾರ್ಯಕರ್ತೆಯರು ಸೇರಿದಂತೆ ಇತರರು ಇದ್ದರು.

> **ಡೆಂಗ್ಯೂ ಜ್ವರವು, ಈಡೀಸ್ ಈಜಿಪ್ಟೆ, ಜಾತಿಯ ಹೆಚ್ಚಾನು ಹೆಚ್ಚು ಹಗಲು ಹೊತ್ತಿನಲ್ಲಿ ಸೊಳ್ಳೆಗಳ ಕಚ್ಚುವಿ ಕೆಯಿಂದ ಒಬ್ಬರಿಂದ ಮತ್ತೊಬ್ಬರಿಗೆ ಹರಡುತ್ತದೆ. ಈ ಸೊಳ್ಳೆಗಳು ಹಗಲು ಹೊತ್ತಿನಲ್ಲಿ ಕಚ್ಚುತ್ತವೆ. ಡೆಂಗೀ ಜ್ವರ ವು ಒಂದು ಮಾರಕವಾದ ಖಾಯಿದೆ. ಚಿಕುಂಗುನ್ಯಾ ಮಾರಣಾಂತಿಕವಲ್ಲ**
>
> - ಡಾ. ನಾಗರಾಜ ಕಟ್ಟಾ
> ಮುಖ್ಯ ವೈದ್ಯಾಧಿಕಾರಿ

# ಮೂರು ವರ್ಷಗಳು ಸಲ್ಲಿಸಿದ ಸೇವೆ ನೆಮ್ಮದಿ ತಂದಿದೆ

## ನಿಮ್ಮೆಲ್ಲರ ಸಹಕಾರ, ಪ್ರೀತಿಗೆ ನಾನು ಚಿರಋಣಿ: ನ್ಯಾಯಾಧೀಶ ರವಿಕುಮಾರ

• **ಉದಯವಾಹಿನಿಚಿಂಚೋಳಿ**

ಕಳೆದ ಮೂರು ವರ್ಷಗಳ ಅವಧಿಗೆ ಸೇವೆ ಸಲ್ಲಿಸಿದ್ದು ನೆಮ್ಮದಿ ತಂದಿದೆ, ನನ್ನ ಸೇವಾ ಅವಧಿಯಲ್ಲಿ ಸರ್ವರು ಸಹಕಾರ ಹಾಗೂ ಪ್ರೀತಿಗೆ ಸದಾ ಚಿರಋಣಿಯಾಗಿರುವೆ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶ ರವಿಕುಮಾರ ಹೇಳಿ ದರು. ಪಟ್ಟಣದ ನ್ಯಾಯಾಲಯದ ಅವರಣದಲ್ಲಿರುವ ವಕೀಲರ ಸಂಘದ ಕಛೇರಿಯಲ್ಲಿ ತಾಲ್ಲೂಕಾ ವಕೀಲರ ಸಂಘದ ವತಿಯಿಂದ ಹಮ್ಮಿಕೊಂಡ ನ್ಯಾ.ರವಿಕುಮಾರ ಅವರ ಬೀಳ್ಕೊಡುವ ಸಮಾರಂಭದಲ್ಲಿ ಬೀಳ್ಕೊಡುಗೆ ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ಅವರು, ನಾನು ಮಲೆನಾಡಿನಲ್ಲಿ ಹುಟ್ಟಿ ಬೆಳೆದವನು ಸರ್ಕಾರವನ್ನು ಚಿಂ ಚೋಳಿ ನ್ಯಾಯಾಲಯಕ್ಕೆ ನ್ಯಾಯಾಧೀಶನಾಗಿ ವರ್ಗಾ ವಣೆಗೊಳಿಸಿದಾಗ ನನಗೆ ಸ್ವಲ್ಪ ತೊಂದರೆಯಾಯಿತು ನಂತರ ಬಿಡುವಿನ ವೇಳೆಯಲ್ಲಿ ಕುಟುಂಬದೊಂದಿಗೆ ತಾಲ್ಲೂಕಿನಾದ್ಯಂತ ಅಲೆದು ಕ್ಷೇತ್ರ ಸುತ್ತಾಡಿದಾಗ ಪರಿಸರ ನೋಡಿ ಸಂತಸಪಟ್ಟು ಮಲೆನಾಡು ಹಾಗೂ ಈ ಭಾಗಕ್ಕೆ ವ್ಯತ್ಯಾಸವಿಲ್ಲವೆಂದು ಭಾವಿಸಿಕೊಂಡೆ ಈ ಭಾಗದ ಸುಂದರ ಪ್ರಕೃತಿಗೆ ನಾನು ಮನಸೋತು ಚಿಂಚೋಳಿ ಕೂಡ ಮಿನಿ ಮಲೆನಾಡು ಎಂದುಕೊಂಡೆ, ಅನೇಕ ವಸತಿನಿಲಯಗಳು ಕ್ಷೇತ್ರದ ಕುಂದುಕೊರತೆಗಳನ್ನು ಪರಿಶೀಲಿಸಿ ಸಂಬಂಧ ಪಟ್ಟವರಿಗೆ ಎಚ್ಚರಿಕೆ ಕೊಟ್ಟು ಜನರಿಗೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಮಾಡಿದ್ದೇನೆ ಎಂದರು. ಮೂರು ವರ್ಷ ಸೇವಾ ಅವಧಿಯಲ್ಲಿ ವಕೀಲರು ಪೊಲೀಸ ಇಲಾಖೆ ಹಾಗೂ ಇತರೆ ಇಲಾಖೆಯ ಉನ್ನತ ಮಟ್ಟದ ಅಧಿಕಾರಿಗಳ ಸಹಕಾರದಿಂದ ವಿವಿಧ ಸರಕಾರಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸರಕಾರದ ಸವಲತ್ತುಗಳನ್ನು ಜನರಿಗೆ ಮುಟ್ಟುವ ಹಾಗೆ ಪ್ರಯತ್ನಿಸಿದೆ ತಾಲ್ಲೂಕಿನ ವಿವಿಧ ಶಾಲೆ,ವಸತಿನಿಲಯಗಳಿಗೆ ಹಾಗೂ ಹಳ್ಳಿಗಳಲ್ಲಿ ಕಾನೂನು ಅರಿವು ನೆರವು ಕಾರ್ಯಕ್ರಮದ ಜಾಗೃತಿ ಮೂಡಿಸಿದೆ ಲೋಕ ಅದಾಲತಗಳು ಸಾಮಾಜಿಕ ಕಾರ್ಯಕ್ರಮಗಳನ್ನು ನೆರವೇರಿಸಿ ಜನರಿಗೆ ಜಾಗೃತಿ ಮೂಡಿಸಿದ್ದೇನೆ.




**ಮಲೆನಾಡಿನಲ್ಲಿ ಹುಟ್ಟಿ ಬೆಳೆದವನು**

> **ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಮಾತನಾಡಿ ನ್ಯಾಯಾಧೀಶರು ಮೂರು ವರ್ಷಗಳ ಅಧಿಕಾರದ ಅವಧಿಯಲ್ಲಿ ಅನೇಕ ಜನಪರ ಸರ್ಕಾರಿ ಕೆಲಸಗಳನ್ನು ನೆರವೇರಿಸಿ ಎಲ್ಲೋರಿಗೂ ಚಿರ ಪರಿಚಿತರಾಗಿದ್ದಾರೆ ಇವರೊಬ್ಬ ನ್ಯಾಯಾಧೀಶ ಎಂದುಕೊಳ್ಳದೇ ಸಂಘದ ಸದಸ್ಯರಾಗಿ ಹಿರಿಯ ಕಿರಿಯ ವಕೀಲರಿಗೆ ಅನೇಕ ಸಲಹೆಗಳನ್ನು ನೀಡಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆಂದು ನ್ಯಾಯಾಧೀಶರ ಸೇವೆಯನ್ನು ಕೊಂಡಾಡಿದರು.**

# ಮಿನಿ ನ್ಯೂಸ್

## ಸ್ಕ್ರೂಡ್ರೈವರ್ ನಿಂದ ಚುಚ್ಚಿ ಯುವಕನ ಬರ್ಬರ ಹತ್ಯೆ

• **ಉದಯವಾಹಿನಿ, ಬೆಳಗಾವಿ**

ಬೈಕ್‌ನಲ್ಲಿ ತೆರಳುತ್ತಿದ್ದ ಯುವಕನನ್ನು ಅಡ್ಡಗಟ್ಟಿ ಸ್ಕ್ರೂಡ್ರೈವರ್ ನಿಂದ ಚುಚ್ಚಿ ಕೊಲೆಗೈದಿರುವ ಘಟನೆ ಬೆಳಗಾವಿಯ ಮಹಾಂತೇಶ ನಗರದ ಬ್ರಿಡ್ಜ್ ಬಳಿ ನಡೆದಿದೆ. 22 ವರ್ಷದ ಇಬ್ರಾಹಿಂ ಗೌಸ್ ಕೊಲೆಯಾದ ಯುವಕ. ಇಬ್ರಾಹಿಂ ಗೌಸ್ ತನ್ನ ಪ್ರೇಯಸಿ ಜೊತೆ ಬೈಕ್‌ನಲ್ಲಿ ಹೋಗುತ್ತಿದ್ದ. ಈ ವೇಳೆ ಯುವತಿಯ ಸಹೋದರ ಮುಜಾಮಿಲ್ ಸತ್ತಿಗೇರಿ ಎಂಬಾತ ಬೈಕ್ ಅಡ್ಡಗಟ್ಟಿದ್ದಾನೆ. ಬಳಿಕ ಸ್ಕ್ರೂಡ್ರೈವರ್ ನಿಂದ ಮನಬಂದಂತೆ ಇಬ್ರಾಹಿಂಗೆ ಇರಿದಿದ್ದಾನೆ. ಗಂಭೀರವಾಗಿ ಗಾಯಗೊಂಡಿದ್ದ ಇಬ್ರಾಹಿಂ ನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಿಸದೇ ಇಬ್ರಾಹಿಂ ಕೊನೆಯುಸಿರೆಳೆದಿದ್ದಾನೆ. ಬೆಳಗಾವಿಯ ಮಾಳಮಾರುತಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## 20ರಂದು ವಿಶ್ವ ಜೇನು ದಿನಾಚರಣೆ

• **ಉದಯವಾಹಿನಿ, ಚಿತ್ರದುರ್ಗ**

ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಹಾಗೂ ಚಿತ್ರದುರ್ಗದ ಕೃಷಿ ತಂತ್ರಜ್ಞರ ಸಂಸ್ಥೆ ಪ್ರಾದೇಶಿಕ ಘಟಕ ವತಿಯಿಂದ ಇದೇ ಮೇ. 20 ರಂದು ಸೋಮವಾರ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ರವರೆಗೆ ಹಿರಿಯೂರಿನ ಅಕ್ಷಯ ಫುಡ್ ಪಾರ್ಕ್ ರಸ್ತೆಯಲ್ಲಿನ ಶ್ರೀನಿವಾಸ್ ಅವರ ಜೇನು ಕೃಷಿ ತೋಟದಲ್ಲಿ ವಿಶ್ವ ಜೇನು ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕಾರ್ಯಕ್ರಮ ಉದ್ಘಾಟಿಸುವರು. ನಿವೃತ್ತ ಕೃಷಿ ನಿರ್ದೇಶಕಿ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷೆ ಸಿ.ಎನ್.ನಂದಿನಿಕುಮಾರಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಉಪಾಧ್ಯಕ್ಷ ಎಂ.ಮಹಂತೇಶಪ್ಪ, ಕಾರ್ಯದರ್ಶಿ ವೀರಣ್ಣ ಕೆ.ಕಮತರ, ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್, ಕೃಷಿ ತಂತ್ರಜ್ಞರ ಸಂಸ್ಥೆ ಚಿತ್ರದುರ್ಗ ಪ್ರಾದೇಶಿಕ ಘಟಕದ ಅಧ್ಯಕ್ಷ ಜಿ.ಸಿ.ರಂಗಸ್ವಾಮಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ, ಕೃಷಿ ತಂತ್ರಜ್ಞರ ಸಂಸ್ಥೆ ಉಪಾಧ್ಯಕ್ಷ ಕಟ್ಟಾ ಶ್ರೀನಿವಾಸ ರೆಡ್ಡಿ ಭಾಗವಹಿಸುವರು. ಸಮಗ್ರ ಜೇನು ಕೃಷಿ ಕುರಿತು ಎಸ್.ಎಂ. ಶಾಂತ ವೀರಯ್ಯ, ಸಂಪೂರ್ಣ ಆಹಾರ ಕುರಿತು ಬಿ.ಎಸ್.ಬಸ ವರಾಜಪ್ಪ ಉಪನ್ಯಾಸ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

## ಭಾರಿ ಮಳೆ ಸಾಧ್ಯತೆ: 19, 20ರಂದು ಆರೆಂಜ್ ಅಲರ್ಟ್

• **ಉದಯವಾಹಿನಿ, ಮಂಗಳೂರು**

ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಇದೇ 18ರಿಂದ 21ರವರೆಗೆ ಬಿರುಸಿನ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ 19 ಮತ್ತು 20ರಂದು ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ.ಆರೆಂಜ್ ಅಲರ್ಟ್ ಇರುವ ದಿನಗಳಲ್ಲಿ ಮಿಂಚು, ಗುಡುಗು ಸಿಡಿಲುಗಳಿಂದ ಕೂಡಿದ ಭಾರಿ ಮಳೆಯಾಗಲಿದೆ. ಜಿಲ್ಲೆಯ ಕೆಲವೆಡೆ 11.55 ಸೆಂ.ಮೀನಿಂದ 20.44 ಸೆಂ.ಮೀ ವರೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.ಇದೇ 18 ಮತ್ತು 21ರಂದು ಜಿಲ್ಲೆಯಲ್ಲಿ ಹಳದಿ ಅಲರ್ಟ್ ಘೋಷಿಸಲಾಗಿದೆ. ಈ ಎರಡು ದಿನಗಳಲ್ಲಿ ಗುಡುಗು ಸಿಡಿಲುಗಳಿಂದ ಕೂಡಿದ ಮಳೆಯಾಗಲಿದೆ. ಕೆಲವೆಡೆ 6.45 ಸೆಂ.ಮೀ.ಯಿಂದ 11.55 ಸೆಂ.ಮೀ. ವರೆಗೂ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಪ್ರಥಮ ಪಿಯುಸಿ ಪ್ರವೇಶಕ್ಕೆ ಅರ್ಜಿ

• **ಉದಯವಾಹಿನಿ, ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಕುಂಚಿಗನಾಳು ಸರ್ಕಾರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಪ್ರಥಮ ಪಿಯುಸಿ ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಿಗೆ ಪ್ರವೇಶಾತಿ ಪ್ರಾರಂಭವಾಗಿದ್ದು, ಶೇ.75 ರಷ್ಟು ಅಲ್ಪಸಂಖ್ಯಾತರಿಗೆ ಮತ್ತು ಇನ್ನುಳಿದ ಶೇ.25ರಷ್ಟು ಇತರೆ ಹಿಂದುಳಿದ ವರ್ಗಗಳಿಗೆ ಮೀಸಲಾಗಿರುತ್ತವೆ. ಕಾಲೇಜಿಗೆ ಪ್ರವೇಶ ಪಡೆಯುವುದರಿಂದ ಪದವಿ ಪೂರ್ವ ಶಿಕ್ಷಣದ ಜೊತೆಗೆ ಸಿಇಟಿ, ನೀಟ್, ಜೆಇಇ ಮತ್ತು ಸಿಎ, ಸಿಎಸ್‌ಎಟಿ ಆನ್‌ಲೈನ್ ಮತ್ತು ಆಫ್‌ಲೈನ್ ತರಗತಿಗಳು ನಡೆಸಲಾಗುವುದು ಮತ್ತು ಕಲಿಕಾ ಸಾಮಾಗ್ರಿಗಳನ್ನು ಹಾಗೂ ಇತರೆ ಸೌಲಭ್ಯಗಳನ್ನು ಉಚಿತವಾಗಿ ನೀಡಲಾಗುವುದು. ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ವಸತಿ ಪದವಿ ಪೂರ್ವ ಕಾಲೇಜು ಸಂಪರ್ಕಿಸಬಹುದು ಎಂದು ಪ್ರಾಂಶುಪಾಲ ಬಿ.ಲಿಂಗರಾಜ್ ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

**ವೃಷಭ** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಇಂದು ಹಣದ ಆಗಮನವು ನಿಮ್ಮನ್ನು ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿಕೊಳ್ಳುವ ಮೊದಲು ಯೋಚಿಸಿ.

**ಮಿಥುನ** ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು.

**ಕರ್ಕಾಟಕ** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ಸಿಂಹ** ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಕನ್ಯಾ** ಪ್ರವಾಸ-ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ಇನ್ನೂ ಸಂಬಳ ಪಡೆಯದವರು, ಇಂದು ಅವರು ಹಣಕ್ಕಾಗಿ ತುಂಬಾ ಚಿಂತೆ ಮಾಡಬಹುದು.

**ತುಲಾ** ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ.

**ವೃಶ್ಚಿಕ** ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

**ಧನಸ್ಸು** ನಿಮ್ಮ ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರೇನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು.

**ಮಕರ** ಇಂದು ರಾತ್ರಿ ಸಣ್ಣ ವಿಷಯಗಳಲ್ಲೂ ಕೂಡ ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧಗಳು ಶಿಥಿಲಗೊಳ್ಳುತ್ತವೆ. ನೀವು ಕೆಲಸದಲ್ಲಿ ಪ್ರಮುಖ ವಿಜಯಗಳನ್ನು ಸಾಧಿಸುತ್ತೀರಿ.

**ಕುಂಭ** ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ.

**ಮೀನ** ಇಂದು ನಿಮಗೆ ನಿಮ್ಮ ಅತ್ತೆಮನೆ ಬದಿಯಿಂದ ಯಾವುದೇ ಕೆಟ್ಟ ಸುದ್ದಿ ಸಿಗಬಹುದು. ಇದರಿಂದಾಗಿ ನಿಮ್ಮ ಮನಸ್ಸಿಗೆ ದುಃಖವಾಗುತ್ತದೆ ಮತ್ತು ನೀವು ಸಾಕಷ್ಟು ಸಮಯವನ್ನು ಆಲೋಚಿಸುವಲ್ಲಿ ಕಳೆಯಬಹುದು.

# ಮರಳು ಅಕ್ರಮ ಗಣಿಗಾರಿಕೆ, ಸಾಗಣೆ ಅವ್ಯಾಹತ

## • ತುಂಗಾ, ಮಾಲತಿ, ಶರಾವತಿ ನದಿಯಲ್ಲಿ ಮರಳು ಅಕ್ರಮ ಗಣಿಗಾರಿಕೆ ನಿರಂತರವಾಗಿ ನಡೆಯುತ್ತಿದೆ

• ಉದಯವಾಹಿನಿ ತೀರ್ಥಹಳ್ಳಿ

ತುಂಗಾ, ಮಾಲತಿ, ಶರಾವತಿ ನದಿಯಲ್ಲಿ ಮರಳು ಅಕ್ರಮ ಗಣಿಗಾರಿಕೆ ನಿರಂತರವಾಗಿ ನಡೆಯುತ್ತಿದೆ. ನದಿ ಪಾತ್ರದ ಪ್ರದೇಶಗಳಲ್ಲಿ ಸಂಗ್ರಹವಾದ ಮರಳು ರಾತ್ರಿ ಕಳೆದು ಬೆಳಕು ಹರಿಯುವುದರೊಳಗೆ ಖಾಲಿಯಾಗುತ್ತಿದೆ.

ಮಧ್ಯರಾತ್ರಿಯಿಂದ ಬೆಳಗಿನ ಜಾವದವರೆಗೆ ನಡೆಯುವ ಅಕ್ರಮ ವಹಿವಾಟಿಗೆ ಆಡಳಿತದ ಬೆಂಬಲ ದೊರೆತಿದೆ.

ರಾಷ್ಟ್ರೀಯ ಹೆದ್ದಾರಿ ಮಾರ್ಗವಾಗಿ ಮರಳು ಹೊರ ಜಿಲ್ಲೆಗಳನ್ನು ಸೇರುತ್ತಿದ್ದರೂ ಮರಳು ಸಾಗಣೆ ಲಾರಿಗಳನ್ನು ವಶಕ್ಕೆ ಪಡೆಯುವಲ್ಲಿ ಗಣಿ ಮತ್ತು ಭೂ ವಿಜ್ಞಾನ, ಪೊಲೀಸ್, ಅರಣ್ಯ, ಕಂದಾಯ ಇಲಾಖೆಗಳು ವಿಫಲವಾಗಿವೆ.

ಇಲ್ಲಿನ ಕುಶಾವತಿ, ಹುಣಸವಳ್ಳಿ, ಹೆದ್ದೂರು, ಬುಕ್ಲಾಪುರ, ಬಗ್ಗೊಡಿಗೆ, ಮಳಲೂರು, ಮಂಡಗದ್ದೆ, ಹೊಳೇಕೊಪ್ಪ, ಮೇಳಿಗೆ, ಮಹಿಷಿ, ಕೂಡಿಗೆ, ದಬ್ಬಣಗದ್ದೆ ಸೇರಿ ಜೀವನದಿಗಳಿಗೆ ಜೀವ ತುಂಬುವ ಹಳ್ಳ, ಹೊಳೆ, ತೊರೆಗಳಲ್ಲಿ ಸಿಗುವ ಅಲ್ಪಸ್ವಲ್ಪ ಮರಳು ಬರಿದಾಗುತ್ತಿದೆ. ಲಾರಿ, ಟೆಂಪೊ, ಟಿಪ್ಪರ್‌ಗಳಲ್ಲಿ ಅಕ್ರಮ ಮರಳು ಸಾಗಣೆ ನಡೆಯುತ್ತಿದ್ದರೂ ಜಿಲ್ಲಾಡಳಿತ ಸೂಕ್ತ ಕಾನೂನು ಕ್ರಮ ಜರುಗಿಸಿಲ್ಲ.

**ಬೊಕ್ಕಸಕ್ಕೆ ನಿತ್ಯ 25 ಲಕ್ಷಕ್ಕೂ ಹೆಚ್ಚು ನಷ್ಟ**

2023-24ನೇ ಸಾಲಿನಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಗುರುತಿಸಿದ ಮರಳು ಕ್ವಾರಿಗಳನ್ನು ಹರಾಜು ಹಾಕದೇ ಇರುವುದು ಮರಳು ಅಭಾವಕ್ಕೆ ಪ್ರಮುಖ ಕಾರಣವಾಗಿದೆ. ಮರಳು ಅಕ್ರಮ ದಂಧೆಕೋರರಿಗೆ ಸರ್ಕಾರದ ವೈಫಲ್ಯ ವರದಾನವಾಗಿದ್ದು, ಮರಳಿನ ಯಥೇಚ್ಚ ಸಾಗಣೆಗೆ ಅನುಕೂಲಕರ ವಾತಾವರಣ ಸೃಷ್ಟಿಸಿದೆ.

ಸರ್ಕಾರದ ಬೊಕ್ಕಸಕ್ಕೆ ನಿತ್ಯ 25 ಲಕ್ಷಕ್ಕೂ ಹೆಚ್ಚು ನಷ್ಟವಾಗುತ್ತಿದೆ.

ಮಂಡಗದ್ದೆ ಸಮೀಪದ ತುಂಗಾ ಜಲಾಶಯದ ಹಿನ್ನೀರು ಪ್ರದೇಶದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಕ್ರಮ ಸಾಗಣೆ ವಾಹನಗಳಿಗೆ ದಾರಿ ಮುಚ್ಚಲು ರಸ್ತೆಗೆ ಅಡ್ಡಲಾಗಿ ನಿರ್ಮಿಸಿದ್ದ ಹಳ್ಳವನ್ನು ಮುಚ್ಚಿ ಮರಳು ಸಾಗಿಸುವ ಪ್ರಯತ್ನ ನಡೆದಿದೆ.


ಉದಯವಾಹಿನಿ ಚಿತ್ರ

ಘಟನೆಯ ನಂತರ ಅಕ್ರಮದಲ್ಲಿ ಭಾಗಿಯಾದ ಲಾರಿಯನ್ನು ವಶಕ್ಕೆ ಪಡೆದ ಮಹಿಳಾ ಭೂ ವಿಜ್ಞಾನಿಗೆ ದಂಧೆಕೋರರು ಜೀವ ಬೆದರಿಕೆ ಹಾಕಿದ ಘಟನೆ ಈಚೆಗೆ ನಡೆದಿದೆ. ಆದರೆ ಇಂದಿಗೂ ಘಟನೆಗೆ ಕಾರಣರಾದ ವ್ಯಕ್ತಿಯನ್ನು ಬಂಧಿಸಲಾಗಿಲ್ಲ ಎಂಬ ಮಾತುಗಳು ಕೇಳಿಬರುತ್ತಿವೆ.

ಗಾಜನೂರಿನಲ್ಲಿರುವ ಅರಣ್ಯ ತಪಾಸಣಾ ಕೇಂದ್ರದಲ್ಲಿ ಅಡೆತಡೆಯೇ ಇಲ್ಲದೇ ಮಂಡಗದ್ದೆ, ಹೊಳೆಕೊಪ್ಪ, ಮಹಿಷಿ, ಶಿರುಪತಿ, ಆರಗ ಭಾಗದ ಮರಳು ಶಿವಮೊಗ್ಗ ನಗರ ಸೇರುತ್ತಿದೆ. ಅಲ್ಲದೇ ಆಗುಂಬೆ ಭಾಗದಿಂದ ಸಾಗಾಣೆಯಾಗುವ ಮರಳು ಚಿಕ್ಕಮಗಳೂರು ಜಿಲ್ಲೆಗೆ ಸೇರುತ್ತಿದ್ದು ಅಕ್ರಮ ತಡೆಯುವ ಸವಾಲು ಎದುರಾಗಿದೆ.

ಕೆ.ಕಸ್ತೂರಿ ರಂಗನ್ ಅಧ್ಯಕ್ಷತೆಯ ಪಶ್ಚಿಮಘಟ್ಟ ಜೀವವೈವಿಧ್ಯ ತಜ್ಞರ ಸಮಿತಿಯು ಶೇ 37ರಷ್ಟು ಪ್ರಮಾಣದ ಪರಿಸರ ಸೂಕ್ಷ್ಮ ವಲಯ ಗುರುತಿಸಿದೆ. 2014ರಲ್ಲಿ ವರದಿ ಆಧರಿಸಿ ಸರ್ಕಾರ ಗುರುತಿಸಿದ್ದ ಮಹಿಷಿ, ಹೊಳೆಕೊಪ್ಪ ಮರಳು ಕ್ವಾರಿಗೆ ಅರಣ್ಯ ಇಲಾಖೆ ಅನುಮತಿ ನೀಡದೆ ನಿರಾಕರಿಸಿತ್ತು. ಆದರೆ, ಇಂದಿಗೂ ಕ್ವಾರಿ ಮತ್ತು ಕ್ವಾರಿಗೆ ಹೊಂದಿಕೊಂಡ ಪ್ರದೇಶದಲ್ಲಿ ಸಾವಿರಾರು ಲಾರಿ ಲೋಡ್ ಮರಳು ಸಾಗಾಟವಾಗುತ್ತಿದೆ.



ಇದರಿಂದ ಅಂತರ್ಜಲ ಪ್ರಮಾಣ ಕುಸಿಯುವ ಆತಂಕ ಎದುರಾದೆ. ವಾಸ್ತವವಾಗಿ 'ನದಿಯಲ್ಲಿರುವ ಮರಳಿನ ಕಣಗಳಿಂದಾಗಿ ಅಂತರ್ಜಲ ವೃದ್ಧಿಯಾಗಲಿದೆ. ಮಣ್ಣಿನ ಸಾಂದ್ರತೆ ಮತ್ತು ನೀರಿನ ಸಾರ ಹಿಡಿದಿಟ್ಟುಕೊಳ್ಳಲು ಮರಳಿನಂತಹ ಸಣ್ಣ ಕಣಗಳೇ ಹೆಚ್ಚು ಉಪಯುಕ್ತವಾಗಿವೆ. ಮರಳು, ಮಣ್ಣು ಮತ್ತು ಗೋಡಗಳ ನಡುವಿನ ಅಂತರದಲ್ಲಿ ಮರಳು ನೀರು ಇಂಗುವಿಕೆಗೆ ಸಹಕಾರಿಯಾಗಿದೆ ಎಂದು ಕರ್ನಾಟಕ ಅಂತರ್ಜಲ ಪ್ರಾಧಿಕಾರದ ನಿರ್ದೇಶಕ ರಾಮಚಂದ್ರಯ್ಯ ಬಿ.ಜಿ. ಹೇಳುತ್ತಾರೆ.

### ಟೆಂಡರ್ ಆಹ್ವಾನಿಸಲು ಸರ್ಕಾರಕ್ಕೆ ಪ್ರಸ್ತಾವ

ತೀರ್ಥಹಳ್ಳಿ ತಾಲ್ಲೂಕಿನ ಚಂಗಾರು ಬಳಿ ಬರಿದಾದ ಮಾಲತಿ ನದಿಯಲ್ಲಿ ಮರಳು ಗಣಿಗಾರಿಕೆ ನಡೆಸಿರುವುದು ತೀರ್ಥಹಳ್ಳಿ ತಾಲ್ಲೂಕಿನ ಹೊಳೆಕೊಪ್ಪ ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಮರಳು ಗಣಿಗಾರಿಕೆ ನಡೆಸಿರುವುದು ಗುರುದತ್ತ ಹೆಗಡೆ ಶಿವಮೊಗ್ಗ ಜಿಲ್ಲಾಧಿಕಾರಿಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಗಮನದಲ್ಲಿದೆ. ಅಕ್ರಮ ಸಾಗಣೆ ವಿರುದ್ಧ ಕಠಿಣ ಕಾನೂನು ಕ್ರಮಕ್ಕೆ ಸೂಚಿಸಲಾಗಿದೆ. 30 ಕ್ವಾರಿಗಳಿಗೆ ಬಾಕ್ಸ್ ಟೆಂಡರ್ ಆಹ್ವಾನಿಸಲು ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ.

# ಬೊಮ್ಮೆನಹಳ್ಳಿಯಲ್ಲಿ ರಾಷ್ಟ್ರೀಯ ಡೆಂಗ್ಯೂ ಮಾಸಚಾರಣೆ

• ಉದಯವಾಹಿನಿ ಚಿತ್ರದುರ್ಗ

ತಾಲ್ಲೂಕಿನ ಗೊನೂರು ಪಂಚಾಯತಿಯ ಬೊಮ್ಮೆನಹಳ್ಳಿ ಗ್ರಾಮದಲ್ಲಿ ಗುರುವಾರ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ, ಬೆಳಗಟ್ಟ ವತಿಯಿಂದ ರಾಷ್ಟ್ರೀಯ ಡೆಂಗ್ಯೂ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಆರೋಗ್ಯ ನಿರೀಕ್ಷಣಾಧಿಕಾರಿ ಮಹೇಶ್ ಡಿ. ಚಾಲನೆ ನೀಡಿ ಮಾತನಾಡಿದರು ಡೆಂಗ್ಯೂ ರೋಗ ಸಾಮಾನ್ಯವಾಗಿ ಸೋಂಕು ತಗುಲಿದ ನಂತರ ಮೂರುರಿಂದ ಹದಿನಾಲ್ಕು ದಿನಗಳಲ್ಲಿ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ. ದೇಹದಲ್ಲಿ ಹೆಚ್ಚಿನ ಜ್ವರ, ತಲೆನೋವು, ವಾಂತಿ, ಸ್ನಾಯು ಮತ್ತು ಸಂಧಿ ನೋವು, ಮತ್ತು ವಿಶಿಷ್ಟ ಚರ್ಮದ ಮೇಲೆ ದದ್ದುಗಳು ಕಾಣಿಸಿಕೊಂಡಾಗ ತಕ್ಷಣ ವೈದ್ಯರಲ್ಲಿ ಚಿಕಿತ್ಸೆ ಪಡೆಯುವುದು ಒಳ್ಳೆಯದು. ಎಂದು ಸಲಹೆ ನೀಡಿದರು. ಇದೇ ಸದರ್ಭದಲ್ಲಿ ಕಾರ್ಯಕ್ರಮದಲ್ಲಿ ಭಾಗ ವಹಿಸಿ ಮಾತನಾಡಿದ ಬಚ್ಚಬೋರಯ್ಯನಹಟ್ಟಿ ಉಪ ಕೇಂದ್ರದ ಸಮುದಾಯ ಆರೋಗ್ಯ ಅಧಿಕಾರಿ ಶ್ರೀಮತಿ ಮಂಜುಶ್ರೀ ಡೆಂಗ್ಯೂ ರೋಗ ಮುಂಜಾಗ್ರತೆ ಕ್ರಮಗಳನ್ನು ತಿಳಿಸಿಕೊಡುತ್ತಾ


ಉದಯವಾಹಿನಿ ಚಿತ್ರ

ಮನೆಗಳಲ್ಲಿ ಎಲ್ಲಾ ನೀರಿನ ತೊಟ್ಟಿ, ಡ್ರಮ್ಮು, ಬ್ಯಾರೆಲ್, ಏರ್ ಕೂಲರ್ ಇತ್ಯಾದಿಗಳನ್ನು ವಾರಕೊಮ್ಮೆ ಖಾಲಿಮಾಡಿ, ಒಣಗಿಸಿ ಮತ್ತೆ ಭರ್ತಿ ಮಾಡಿಕೊಳ್ಳುವುದು. ನೀರು ಖಾಲಿ ಮಾಡಲು ಸಾಧ್ಯವಿಲ್ಲದ ತೊಟ್ಟಿ ಮುಂತಾದವುಗಳನ್ನು ಸೊಳ್ಳೆಗಳು ಒಳಗೆ ನುಸುಳದಂತೆ ಸರಿಯಾದ ಮುಚ್ಚಳದಿಂದ ಮುಚ್ಚುವುದು.

**ಸೂಕ್ತ ವಿಲೇವಾರಿ ಮಾಡುವುದು**

ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಟೈರು, ಎಳನೀರಿನ ಚಿಪ್ಪು, ಒಡೆದ ಟಲಿ ಮುಂತಾದವುಗಳಲ್ಲಿ ಮಳೆನೀರು ಸಂಗ್ರಹ ವಾಗದಂತೆ ಎಚ್ಚರವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಯನ್ನು ಬಳಸಿ, ಸೊಳ್ಳೆಗಳು ಕಚ್ಚದಂತೆ ಎಚ್ಚರಿಕೆ ವಹಿಸುವುದು. ಕರ್ಪೂರ ಮಿಶ್ರಿತ ಬೇವಿನ ಎಣ್ಣೆಯ ದೀಪ ಹಚ್ಚುವುದರಿಂದ ಸೊಳ್ಳೆಗಳ ಸಾಂದ್ರತೆ ನಿಯಂತ್ರಿಸಬಹುದು. ಮುಸ್ಸಂಜೆಯ ವೇಳೆಯಲ್ಲಿ ಪ್ರತಿನಿತ್ಯ ಮನೆಯ ಒಳಗೆ ಮತ್ತು ಹೊರಗೆ ಬೇವಿನಸೊಪ್ಪಿನ ಹೊಗೆ ಹಾಕುವುದರಿಂದ ಸೊಳ್ಳೆಗಳ ಸಾಂದ್ರತೆ ನಿಯಂತ್ರಿಸಬಹುದು.

ಮಕ್ಕಳಿಗೆ ಕೈ-ಕಾಲುಗಳಿಗೆ ಕೊಬ್ಬರಿ ಎಣ್ಣೆ ಹಚ್ಚುವುದರಿಂದ ಸೊಳ್ಳೆಗಳು ಕಚ್ಚದಂತೆ ಎಚ್ಚರಿಕೆ ವಹಿಸುವುದು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಶುಶ್ರಕ್ಷಣಾಧಿಕಾರಿ ಶ್ರೀಮತಿ ಶುಭಶ್ರೀ ಯೋಗ ತರಬೇತಿದಾರ ರವಿಕೆ ಅಂಬೇಕರ್, ಆಶಾ ಕಾರ್ಯಕರ್ತೆ ಉಮಾಕ್ಷಿ ಅಂಗನವಾಡಿ ಕಾರ್ಯಕರ್ತೆ ಶರಣಮ್ಮ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು ಕಾರ್ಯಕ್ರಮದ ನಂತರ ಸಾರ್ವಜನಿಕರಿಗೆ ಬೆಂಗಳೂರು ಮುಂಜಾಗ್ರತ ಕ್ರಮಗಳನ್ನು ತಿಳಿಸುವ ಕರಪತ್ರಗಳನ್ನು ಸಾರ್ವಜನಿಕರಿಗೆ ಹಂಚಲಾಯಿತು.

# ಅಂಜಲಿ ಕೊಲೆಗೆ ಪೊಲೀಸರ ನಿರ್ಲಕ್ಷ್ಯವೇ ಕಾರಣ: ಶಾಸಕ ಮಹೇಶ ಟೆಂಗಿನಕಾಯಿ

• ಉದಯವಾಹಿನಿ ಹುಬ್ಬಳ್ಳಿ



ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ಪ್ರಕರಣ ಮಾಸುವ ಮುನ್ನವೇ ಅಂಜಲಿ ಅಂಬಿಗೇರ ಹತ್ಯೆ ನಡೆದಿದ್ದು ಹುಬ್ಬಳ್ಳಿಯನ್ನು ಬೆಚ್ಚಿ ಬೀಳಿಸಿದೆ. ಇದರಲ್ಲಿ ಸರ್ಕಾರದ ಲೋಪ ಎದ್ದು ಕಾಣುತ್ತಿದ್ದು, ಇನ್ನಾದರೂ ಸರ್ಕಾರ ಎಚ್ಚೆತ್ತುಕೊಳ್ಳಬೇಕಿದೆ ಎಂದು ಶಾಸಕ ಮಹೇಶ್ ಟೆಂಗಿನಕಾಯಿ ಹೇಳಿದರು.

ನಗರದಲ್ಲಿ ಹತ್ಯೆಯಾದ ಅಂಜಲಿ ನಿವಾಸಕ್ಕೆ ಗುರುವಾರ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರೋಪಿ ಬೆದರಿಕೆ ಹಾಕಿದ್ದಾಗ ಅಂಜಲಿ ಹಾಗೂ ಆಕೆಯ ಅಜ್ಜಿ ಬೆಂಡಿಗೇರಿ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ಪೊಲೀಸರು ಎಚ್ಚೆತ್ತುಕೊಂಡಿದ್ದರೇ ಈ ಘಟನೆ ನಡೆಯುತ್ತಿರಲಿಲ್ಲ ಎಂದರು.ಅಂಜಲಿ ಕೊಲೆಗೆ ಪೊಲೀಸರ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿದರು. ಘಟನೆಗೆ ಸಂಬಂಧಿಸಿದಂತೆ ಹು-ಧಾ ಪೊಲೀಸ್ ಕಮೀಷನರ್ ಅವರು ಬೆಂಡಿಗೇರಿ ಠಾಣೆಯ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಅಮಾನತು ಮಾಡಿದ್ದಾರೆ. ಸರ್ಕಾರ, ಪೊಲೀಸ್ ಇಲಾಖೆಯ ಲೋಪ ಆಗಿದ್ದು ಸ್ಪಷ್ಟವಾಗಿ ಕಂಡು ಬಂದಿದೆ ಎಂದರು. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಳ್ಳಬೇಕು. ಈಗ ಜನಾಕ್ರೋಶ ಎಷ್ಟಿದೆ ಎಂದರೆ ಇಂತಹ ಆರೋಪಿಗಳನ್ನು ಗುಂಡಕ್ಕಿ ಕೊಲ್ಲಬೇಕು ಎಂದು ಜನ ಒತ್ತಾಯ ಮಾಡುತಿದ್ದಾರೆ. ಜನರು ಕಾನೂನು ಕೈಗೆತ್ತಿಕೊಳ್ಳುವ ಮುನ್ನ ಸರ್ಕಾರವೇ ಸರಿಯಾದ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

# ಚರಂಡಿಯಲ್ಲಿ ನವಜಾತ ಗಂಡು ಶಿಶುವಿನ ಕಳೆಬರ ಪತ್ತೆ

• ಉದಯವಾಹಿನಿ ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಮುದ್ದೇಬಿಹಾಳ ತಾಲ್ಲೂಕಿನ ಆಲಕೊಪ್ಪರ ಗ್ರಾಮದ ಚರಂಡಿಯಲ್ಲಿ ನವಜಾತ ಗಂಡು ಮಗುವಿನ ಕಳೇಬರ ಗುರುವಾರ ಬೆಳಗ್ಗೆ ಪತ್ತೆಯಾಗಿದೆ

ಘಟನಾ ಸ್ಥಳಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಯೋಜನಾಧಿಕಾರಿ ಶಿವಮೂರ್ತಿ ಕುಂಬಾರ ಪಿಎಸ್ಐ ಸಂಜಯ ತಿಪ್ಪರೆಡ್ಡಿ ಹಾಗೂ ವಿಜಯಪುರ ಜಿಲ್ಲಾ ಮಕ್ಕಳ ರಕ್ಷಣಾ ಆಯೋಗದ ಬಸೀರ್ ,ರೂಡಗಿ ಗ್ರಾಪಂ ಅಧ್ಯಕ್ಷ ಬಸವರಾಜ ಬೆಲ್ಲದ ಪಿಡಿಓ ಭಾರತಿ ಚನ್ನೂರ ಭೇಟಿ ನೀಡಿ ಮಗುವಿನ ದೇಹವನ್ನು ಚರಂಡಿಯಿಂದ ತಗೆದು ಮುದ್ದೇಬಿಹಾಳ ತಾಲ್ಲೂಕು ಆಸ್ಪತ್ರೆಗೆ ರವಾನೆ ಮಾಡಿದ್ದಾರೆ. ಮಗು ಜೀವಂತವಾಗಿದ್ದಾಗಲೇ ಚರಂಡಿಗೆ ಎಸೆಯಲಾಗಿದೆಯೋ ಅಥವಾ ಸತ್ತ ಮಗುವಿನ ಕಳೆ ಬರವನ್ನು ಎಸೆಯಲಾಗಿದೆಯೋ ಸ್ಪಷ್ಟವಾಗಿಲ್ಲ ಆದರೆ ಮಗು ಪತ್ತೆಯಾದ ಚರಂಡಿ ಗ್ರಾಮದ ಮಹಿಳೆಯರು ಬರ್ಹಿದಸೆಗೆ ಹೋಗುವದಾಗಿದ್ದು ಗರ್ಭಿಣಿ ಮಹಿಳೆ ಬುಧುವಾರ ರಾತ್ರಿ ಅಥವಾ ಗುರುವಾರ ಬೆಳಗಿನ ಜಾವ ಮಲವಿಸರ್ಜನೆ ಗೆ ಬಂದಾಗ ಘಟನೆ ನಡೆದಿರಬಹುದು ಮಗುವಿನ ಹೂಕ್ಕಳ ಬಳ್ಳಿ , ಮಾಸ ಚರಂಡಿಯಲ್ಲಿ ಕಂಡು ಬಂದಿದೆ , ಬೆಳಗಿನ ಜಾವ ಗ್ರಾಮದ ಮಹಿಳೆಯರು ಶೌಚಕ್ಕೆ ಹೋದಾಗ ಪ್ರಕರಣ ಬೆಳಕಿಗೆ ಬಂದಿದೆ.

ಈ ಕುರಿತು ಸಂಬಂಧಿಸಿದ ಇಲಾಖೆಯವರು ತನಿಖೆ ಮಾಡಿದಾಗಷ್ಟೇ ಸತ್ಯಾಸತ್ಯತೆ ತಿಳಿದು ಬರಲಿದೆ ಸದ್ಯ ಈ ಸಂಬಂಧ ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅಂಜಲಿ ಹತ್ಯೆ ಆರೋಪಿಗೆ ಗಲ್ಲಿಗೆ ಹಾಕಿ

• ಉದಯವಾಹಿನಿ ಮುದ್ದೇಬಿಹಾಳ

ಹುಬ್ಬಳ್ಳಿ ನೇಹಾ ಹಿರೇಮಠ ಭೀಕರ ಹತ್ಯೆ ಮಾಸುವ ಮುನ್ನವೇ ಮತ್ತೊಂದು ಘಟನೆ ಹುಬ್ಬಳ್ಳಿಯಲ್ಲಿ ನಡೆದಿದೆ ಅಂಜಲಿ ಅಂಬಿಗೇರ ಯುವತಿಯ ಮನೆಗೆ ನುಗ್ಗಿ ಕುಟುಂಬದವರ ಮುಂದೆ ಯುವತಿಗೆ ಚಾಕು ಹಾಕಿ ಹತ್ಯೆ ಮಾಡಲಾಗಿದೆ ಆರೋಪಿ ಗಿರೀಶ ಸಾವಂತನನ್ನು ಗಲ್ಲಿಗೆ ಹಾಕಬೇಕು ಎಂದು ಮುದ್ದೇಬಿಹಾಳ ಪಟ್ಟಣದ ಸಮಾನ ಮನಸ್ಕರ ಯುವಕರ ಬಳಗದ ರಾಜಶೇಖರ ಹೋಳಿ, ಸಂಜಯ ಬಾಗೇವಾಡಿ, ಆಕಾಶ ಹಿರೇಮಠ ಆಗ್ರಹಿಸಿದರು.

ಸಾಯಂಕಾಲ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಹತ್ಯೆಯಾದ ಅಂಜಲಿ ಅಂಬಿಗೇರ ಭಾವಚಿತ್ರದ ಮುಂದೆ ಮೇಣದ ಬತ್ತಿ ಹಿಡಿದು ಶ್ರದ್ಧಾಂಜಲಿ ಅರ್ಪಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

ನಮ್ಮ ರಾಜ್ಯದಲ್ಲಿ ಏನಾಗ್ತಿದೆ ಯುವತಿಯರಿಗೆ ಮಹಿಳೆಯರಿಗೆ ರಕ್ಷಣೆ ಇಲ್ಲದಂತಾಗಿದೆ ಇದಕ್ಕೆಲ್ಲಾ ಯಾರು ಹೋಣೆ ಮನೆಗೆ ನುಗ್ಗಿ ಚಾಕುವಿನಿಂದ ಕೂಲ್ತಾರೆ ಎಂದರೆ ಕಾನೂನಿನ ಭಯ ಎಲ್ಲಿದೆ? ನಮ್ಮ ಕಾನೂನಿನಲ್ಲಿ ಇಂತಹ ಪಾತಕಿಗಳಿಗೆ ಕಠಿಣ ಶಿಕ್ಷೆ ನೀಡಲು ವಿಶೇಷ ಕಾನೂನು ಜಾರಿಗೆ ತರಬೇಕು ಯಾವುದೇ ಹೆಣ್ಣು ಮಕ್ಕಳು ಯುವತಿಯರನ್ನು ಕೆಟ್ಟದೃಷ್ಟಿಯಿಂದ ನೋಡದಂತೆ ತಕ್ಕಪಾಠ ಇಂತಹ ಪಾತಕಿಗಳಿಗೆ ಕಲಿಸಬೇಕಿದೆ. ಅಂಜಲಿ ಅಂಬಿಗೇರ ಯುವತಿಗೆ ನೇಹಾ ಹಿರೇಮಠಳಂತೆ ಹತ್ಯೆ ಮಾಡುವ ಧಮ್ಕಿ ಹಾಕಿದ್ದ ಪಾತಕಿಯ ವಿರುದ್ಧ ಅಂಜಲಿ ಕುಟುಂಬಸ್ಥರು ಬೆಂಡಿಗೇರಿ ಠಾಣೆಯಲ್ಲಿ ದೂರು ನೀಡಲು ಹೋದಾಗ ಬೈದು ಕಳಿಸಿದ್ದಾರೆಂದು ತಿಳಿದುಬರುತ್ತದೆ ತಮ್ಮ ಕರ್ತವ್ಯ ಲೋಪದಿಂದ ಒಂದು ಅಮಾಯಕ ಜೀವ ಹೋಗಿದೆ ತಪ್ಪಿತಸ್ಥ ಪೊಲೀಸರನ್ನು ಕರ್ತವ್ಯದಿಂದ ವಜಾಗೂಳಿಸಬೇಕೆಂದು ಮತ್ತು ರಾಜ್ಯ ಸರಕಾರ ಕಣ್ಮುಚ್ಚಿ ಕೂರದೆ ಮಹಿಳೆಯರ ವಿದ್ಯಾರ್ಥಿನಿಯರ ರಕ್ಷಣೆಗೆ ಕಾನೂನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಅಜೇಯ ಕರಡ್ಡಿ, ಅಭಿಷೇಕ ತಾರನಾಳ,ಆಪ್ತಾಬ್ ಮನಿಯಾರ, ವಾಸೀಮ್ ದೇಸಾಯಿ, ಜಾವೀದ ಕುಂಟೋಜಿ, ಚಂದ್ರು ಚಲವಾದಿ, ಭರತ ಬಿರಾದಾರ, ಸಿದ್ದು ಹಿರೇಮಠ, ರಘು ದಾಸರ, ಸೋಹಿಲ್ ಬೇಪಾರಿ, ಅಬ್ದುಲ್ ಮಜಿದ್, ಸಾಧೀಕ್, ಮುನಿರ ಅವಟಿಗೇರ ಮುಂತಾದವರು ಭಾಗವಹಿಸಿದ್ದರು

# ನಾಲ್ವರು ಮಕ್ಕಳು ನೀರು ಪಾಲು

• ಉದಯವಾಹಿನಿ ಹಾಸನ

ಕೆರೆ ಬಳಿ ಅಟವಾಡಲು ಹೋಗಿದ್ದ ನಾಲ್ವರು ಮಕ್ಕಳು ಸಾವನ್ನಪ್ಪಿರುವ ಘಟನೆ ಹಾಸನದಲ್ಲಿ ನಡೆದಿದೆ. ಹಾಸನದ ಅಲೂರಿನ ಮುತ್ತಿಗೆ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಬೇಸಿಗೆ ರಜೆ ನಿಮಿತ ಮಕ್ಕಳು ಈಜಾಡುವ ಸಲುವಾಗಿ ಕೆರೆಗೆ ಹೋಗಿದ್ದಾರೆ ಎನ್ನಲಾಗಿದೆ. ಮೃತ ಮಕ್ಕಳನ್ನು ಜೀವನ್, ಸಾತ್ವೀಕ್, ವಿಶ್ವ, ಪೃಥ್ವಿ ಮೃತ ಮಕ್ಕಳಾಗಿದ್ದಾರೆ. ಘಟನೆ ಸಂಬಂಧ ಅಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ಕ್ರಮವನ್ನು ಕೈಗೊಂಡಿದ್ದಾರೆ.

# ಕುಡಿಯೋದಿಕ್ಕೂ ಇಲ್ಲ, ಬಳಕೆಗೂ ಇಲ್ಲ, ನೀರು ತರೋದೆ ದಿನನಿತ್ಯದ ಕೆಲಸ ಆಗೋಗಿದೆ

• ಉದಯವಾಹಿನಿ ಬಾಗಲಕೋಟೆ


ಉದಯವಾಹಿನಿ ಚಿತ್ರ

ಜಿಲ್ಲೆಯ ಬೂದಿನಗಡ ಗ್ರಾಮದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಹೆಚ್ಚಾಗಿದ್ದು, ಜೀವಜಲಕ್ಕಾಗಿ ಮೂರು ಕಿ.ಮೀ. ದೂರ ಹೊಲಗಳಿಗೆ ಹೋಗಿ. ಜಮೀನುದಾರರ ಬಳಿ ಮನವಿ ಮಾಡಿ ನೀರು ತರುವಂತಾಗಿದೆ. ಇಲ್ಲಿ ಕುಡಿಯಲು ಮತ್ತು ಬಳಕೆಗೂ ನೀರಿಲ್ಲ. ದಿನನಿತ್ಯ ನೀರು ತರೋದೆ ಕೆಲಸವಾಗಿ ಹೋಗಿದೆ ಎಂದು ಗ್ರಾಮಸ್ಥರು ಕುಡಿಯುವ ನೀರಿಗಾಗಿ ಅಳಲು ತೋಡಿಕೊಂಡಿದ್ದಾರೆ.

ಬಾಗಲಕೋಟೆ ಜಿಲ್ಲೆ ಗುಳೇದಗುಡ್ಡ ತಾಲ್ಲೂಕಿನ ಬೂದಿನಗಡ ಗ್ರಾಮದಲ್ಲಿ ಎತ್ತಿನ ಬಂಡಿ ಸಹಾಯದಿಂದ ತಮ್ಮ ಮನೆಗಳಿಗೆ ನೀರು ತರ್ತಿರೋ ಜನರು, ಜಮೀನು ಮಾಲೀಕರಿಗೆ ದಮ್ಮಯ್ಯ ಎಂದು ಬೇಡಿ ನೀರು ತರುವಂತ ಕಠಿಣ ಪರಿಸ್ಥಿತಿ ಎದುರಾಗಿದೆ. ಕಳೆದ ನಾಲ್ಕೈದು ದಿನಗಳಿಂದ ಇದೇ ಸಮಸ್ಯೆ ಇದ್ದು, ಇದನ್ನು ಬಗೆಹರಿಸಲು ಯಾವ ಅಧಿಕಾರಿಗಳು ಸಹ ಮುಂದಾಗ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಗ್ರಾಮದಲ್ಲಿ ಜಾತ್ರೆ ಇರುವುದರಿಂದ ಮನೆಗಳಿಗೆ ಬೀಗರು, ಸಂಬಂಧಿಕರು ಬಂದಿದ್ದಾರೆ. ಗ್ರಾಮದಲ್ಲಿ ನೀರಿಗೆ ಹಾಹಾಕಾರ ಉಂಟಾಗಿದೆ. ನೀರಿನ ಸಮಸ್ಯೆ ಹಲವು ವರ್ಷಗಳಿಂದಲೂ ಇದೆ. ಆದರೆ, ಈ ಸಮಸ್ಯೆ ಮಾತ್ರ ಬಗೆ ಹರಿಯುತ್ತಿಲ್ಲ ಎಂದು ಗ್ರಾಮಸ್ಥರು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

# ವಿಧಾನಪರಿಷತ್ ಚುನಾವಣೆ; ಗರಿಗೆದರಿದ ಕಣ

• ಉದಯವಾಹಿನಿ ಚಿತ್ರದುರ್ಗ



ಲೋಕಸಭಾ ಚುನಾವಣೆಯ ಮತದಾನ ಪ್ರಕ್ರಿಯೆ ಪೂರ್ಣಗೊಂಡ ಬೆನ್ನಲ್ಲೇ ವಿಧಾನಪರಿಷತ್ ಚುನಾವಣೆಗೆ ಆಗ್ನೇಯ ಶಿಕ್ಷಕರ ಕ್ಷೇತ್ರದ ಕಣ ಗರಿಗೆದರಿದೆ. ಮತದಾರರ ಮನವೊಲಿಸುವ ಪ್ರಯತ್ನಕ್ಕೆ ರಾಜಕೀಯ ಪಕ್ಷಗಳು ಸಜ್ಜಾಗಿವೆ. ಆಗ್ನೇಯ ಶಿಕ್ಷಕರ ಕ್ಷೇತ್ರ ಪ್ರತಿನಿಧಿಸುತ್ತಿರುವ ವೈ.ಎ.ನಾರಾಯಣಸ್ವಾಮಿ ಅವರ ಅಧಿಕಾರವಧಿ ಜೂನ್ 21ಕ್ಕೆ ಕೊನೆಗೊಳ್ಳಲಿದೆ. ಈ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿದ್ದು, ಮೇ 9ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದೆ. ಕಾಂಗ್ರೆಸ್ ಅಭ್ಯರ್ಥಿಯಾಗಿ ಡಿ.ಟಿ. ಶ್ರೀನಿವಾಸ್ ಹಾಗೂ ಬಿಜೆಪಿ ಅಭ್ಯರ್ಥಿಯಾಗಿ ವೈ.ಎ. ನಾರಾಯಣಸ್ವಾಮಿ ಉಮೇದುವಾರಿಕೆ ಸಲ್ಲಿಸಿದ್ದಾರೆ.

ಚಿತ್ರದುರ್ಗ, ದಾವಣಗೆರೆ (ದಾವಣಗೆರೆ, ಹರಿಹರ, ಜಗಳೂರು), ತುಮಕೂರು, ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳು ಆಗ್ನೇಯ ಶಿಕ್ಷಕರ ಕ್ಷೇತ್ರ ವ್ಯಾಪ್ತಿಯಲ್ಲಿವೆ. ಜೂನ್ 3ರಂದು ಮತದಾನ ನಡೆಯಲಿದ್ದು, ಜೂನ್ 6ರಂದು ಫಲಿತಾಂಶ ಪ್ರಕಟಗೊಳ್ಳಲಿದೆ. ಲೋಕಸಭೆಯ ಮಾದರಿಯಲ್ಲಿ ವಿಧಾನಪರಿಷತ್ ಚುನಾವಣೆಗೂ ಬಿಜೆಪಿ-ಜೆಡಿಎಸ್ ಮೈತ್ರಿ ಮಾಡಿಕೊಂಡಿವೆ.

ವೈ.ಎ. ನಾರಾಯಣಸ್ವಾಮಿ ಅವರು 18 ವರ್ಷಗಳಿಂದ ಕ್ಷೇತ್ರ ಪ್ರತಿನಿಧಿಸುತ್ತಿದ್ದಾರೆ. ಕ್ಷೇತ್ರದ ಮೇಲೆ ಹಿಡಿತ ಸಾಧಿಸಿರುವ ಅವರಿಗೆ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ. ಶ್ರೀನಿವಾಸ್ ಪ್ರಬಲ ಎದುರಾಳಿಯಾಗಿದ್ದಾರೆ. ಪಕ್ಷೇತರ ಅಭ್ಯರ್ಥಿಯಾಗಿ 'ರುಪ್ಸಾ' ಅಧ್ಯಕ್ಷ ಲೋಕೇಶ್ ತಾಳಿಕಟ್ಟೆ ಅಖಾಡಕ್ಕೆ ಇಳಿಯುವುದಾಗಿ ಘೋಷಣೆ ಮಾಡಿದ್ದಾರೆ. ನಾಮಪತ್ರ ಸಲ್ಲಿಕೆಗೆ ಮೇ 16ರವರೆಗೆ ಅಕವಾಶವಿದ್ದು, ದಿನ ಕಳೆದಂತೆ ಚುನಾವಣಾ ಕಣ ರಂಗೇರುತ್ತಿದೆ.

# 300 ಮೀ ರಸ್ತೆಗೆ ಮೂರು ತಿಂಗಳು ಕಾಮಗಾರಿ

• ಉದಯವಾಹಿನಿ ಮಂಗಳೂರು

ಬಿಜೈ ನ್ಯೂರೊಡ್‌ನಲ್ಲಿ ರಸ್ತೆ ಕಾಂಕ್ರೀಟೀಕರಣ ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವುದರಿಂದಾಗಿ ಸ್ಥಳೀಯ ನಿವಾಸಿಗಳು ಹೈರಾಣಾಗಿದ್ದಾರೆ. ಇಲ್ಲಿನ ಮನೆಗಳೂ ಸೇರಿದಂತೆ ಹತ್ತಾರು ಅಪಾರ್ಟ್‌ಮೆಂಟ್‌ಗಳ ನಿವಾಸಿಗಳು ರಸ್ತೆ ಸಂಪರ್ಕ ಇಲ್ಲದೇ ಸಮಸ್ಯೆ ಎದುರಿಸುವಂತಾಗಿದೆ.

ಬಿಜೈ ವಾರ್ಡ್‌ನಲ್ಲಿರುವ ಬಿಜೈ ನ್ಯೂರೋಡ್‌ನಲ್ಲಿ ಸುಮಾರು 300 ಮೀ ಉದ್ದದ ರಸ್ತೆಯ ಕಾಂಕ್ರೀಟೀಕರಣದ ಕೆಲಸ ಫೆಬ್ರುವರಿ ತಿಂಗಳಲ್ಲೇ ಶುರುವಾಗಿದೆ.

ಇನ್ನೂ ಕಾಮಗಾರಿ ಪೂರ್ಣಗೊಂಡಿಲ್ಲ. ಇಲ್ಲಿನ ಹಳೆಯ ರಸ್ತೆಯನ್ನು ಅಗೆದ ಎರಡೂವರೆ ತಿಂಗಳ ಬಳಿಕ ಮಾರ್ಗದ ಒಂದು ಪಾರ್ಶ್ವದ ಕಾಂಕ್ರೀಟ್ ಹಾಕಲಾಗಿದೆ. ಇನ್ನೊಂದು ಪಾರ್ಶ್ವದ ಕಾಂಕ್ರೀಟ್ ಅನ್ನು ಇನ್ನಷ್ಟೇ ಹಾಕಬೇಕಿದೆ' ಎಂದು ಸ್ಥಳೀಯ ನಿವಾಸಿಗಳು ತಿಳಿಸಿದರು.


ಉದಯವಾಹಿನಿ ಚಿತ್ರ

ಮನೆಗೆ ಏನೇ ಅಗತ್ಯವಸ್ತು ತರುವುದಕ್ಕೂ ನಾವು ನಡೆದೇ ಹೋಗಬೇಕು. ಈ ಪ್ರದೇಶದ ಅನೇಕ ಮನೆಗಳ ಮಾಲೀಕರು ಮನೆಯಿಂದ ವಾಹನ ಹೊರಗೆ ತೆಗೆಯಲು ಸಾಧ್ಯವಾಗಿಲ್ಲ. ಈ ಕಾಮಗಾರಿ ಯಾವಾಗ ಮುಗಿಯುತ್ತೋ ಎಂದು ಕಾಯುತ್ತಿದ್ದೇವೆ' ಎಂದು ಸ್ಥಳೀಯ ನಿವಾಸಿಯೊಬ್ಬರು ತಿಳಿಸಿದರು.

ಇಲ್ಲಿ ಅಂಗನವಾಡಿ (ಪ್ರಿಸ್ಕೂಲ್), ಸೂಪರ್ ಮಾರ್ಕೆಟ್, ಕ್ಲಿನಿಕ್ ಹಾಗೂ ಅನೇಕ ಮಳಿಗೆಗಳು ಇದ್ದು, ಆಮೆಗತಿಯ ಕಾಮಗಾರಿಯ ಕಾರಣದಿಂದ ಅವುಗಳಿಗೂ ನಷ್ಟ ಉಂಟಾಗುತ್ತಿದೆ. ಅಗೆದು ಹಾಕಿದ ಈ ರಸ್ತೆಯಲ್ಲಿ ಸಾಗುವಾಗ ಅನೇಕ ದ್ವಿಚಕ್ರ ವಾಹನ ಸವಾರರು ಬಿದ್ದಿದ್ದಾರೆ.

### ವಾಹನಗಳೂ ಬಾರದ ಸ್ಥಿತಿ

ನಮ್ಮ ಅಂಗಡಿಗೆ ಎರಡೂವರೆ ತಿಂಗಳಿಂದ ವ್ಯಾಪಾರ ಇಲ್ಲ. ಅಂಗಡಿಗೆ ಸಾಮಗ್ರಿ ತರುವ ವಾಹನಗಳೂ ಬಾರದ ಸ್ಥಿತಿ ಇದೆ. ಹಾಲಿನ ಪೊಟ್ಟಣಗಳನ್ನೂ ನಾವು ಚೀಲದಲ್ಲಿ ಹಾಕಿಕೊಂಡು ಹೊತ್ತುಕೊಂಡು ಬರುತ್ತಿದ್ದೇವೆ. ಒಂದು ತಿಂಗಳಲ್ಲಿ ಮುಗಿಸಬಹುದಾದ ಕಾಮಗಾರಿಗೆ ಮೂರು ತಿಂಗಳು ತೆಗೆದುಕೊಂಡಿದ್ದಾರೆ' ಎಂದು ಇಲ್ಲಿನ ಅಂಗಡಿ ಮಳಿಗೆಯೊಂದರ ಮಹಿಳಾ ಸಿಬ್ಬಂದಿಯೊಬ್ಬರು ಅಳಲು ತೊಡಿಕೊಂಡರು.

# 2.45 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ

## ಕಳೆದ 7 ದಿನಗಳ ಅವಧಿಯಲ್ಲಿ ವಾಡಿಕೆಗಿಂತ ಶೇ 18ರಷ್ಟು ಹೆಚ್ಚಿನ ಮಳೆಯಾಗಿರುವುದು ರೈತರಲ್ಲಿ ಸಂತಸ ಮೂಡಿಸಿದೆ

• ಉದಯವಾಹಿನಿ ದಾವಣಗೆರೆ

ಜಿಲ್ಲೆಯ ಕೆಲವೆಡೆ ಪ್ರಸಕ್ತ ಸಾಲಿನ ಮುಂಗಾರು ಪೂರ್ವ ಮಳೆ ಸುರಿಯುತ್ತಿದ್ದು, ರೈತರು ಬಿತ್ತನೆಗೆ ಸಿದ್ಧತೆ ಮಾಡಿಕೊಂಡಿದ್ದಾರೆ. ಕಳೆದ ವರ್ಷ ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಬರ ಆವರಿಸಿ ನಷ್ಟ ಅನುಭವಿಸಿರುವ ರೈತರು, ಈ ಬಾರಿ ಉತ್ತಮ ಮಳೆಯಾಗಿ ಆಸರೆಯಾಗಬಲ್ಲದು ಎಂಬ ಆಶಾಭಾವ ಹೊಂದಿದ್ದಾರೆ.

ಈ ಬಾರಿ ಚುನಾವಣೆಯ ಕಾವಿನ ಜೊತೆಗೆ ಬಿಸಿಲ ಬೇಗೆಯೂ ಜಾಸ್ತಿಯಾಗಿದ್ದು, ಅಲ್ಲಲ್ಲಿ ಸುರಿದಿರುವ ಅಲ್ಪ ಮಳೆಯಿಂದಾಗಿ ರೈತರು ಕೃಷಿಯತ್ತ ದೃಷ್ಟಿ ನೆಟ್ಟಿದ್ದಾರೆ. ಭಾರಿ ಮಳೆ ಸುರಿಯುವುದನ್ನು ಎದುರು ನೋಡುತ್ತಿದ್ದಾರೆ. ಕೆಲ ದಿನಗಳ ಹಿಂದೆ ಅಲ್ಲಲ್ಲಿ ಮಳೆಯಾಗಿದ್ದು, ರೈತರು ಮಾಗಿ ಉಳುಮೆ ಮಾಡಿದ್ದಾರೆ. ಭೂಮಿ ಹಸನು ಮಾಡಿ ಕೊಟ್ಟಿಗೆ ಗೊಬ್ಬರ ಹಾಕುತ್ತಿದ್ದಾರೆ. ಕೃಷಿ ಇಲಾಖೆ ಈ ಬಾರಿ ಜಿಲ್ಲೆಯಲ್ಲಿ 2.45 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯ ಗುರಿಯನ್ನು ಇಟ್ಟುಕೊಂಡಿದೆ. ಜಿಲ್ಲೆಯಲ್ಲಿ ಪ್ರಸಕ್ತ ವರ್ಷದ

**ತಾಲ್ಲೂಕು;ಗುರಿ (ಹೆಕ್ಟೇರ್‌ಗಳಲ್ಲಿ)**

- 1 ದಾವಣಗೆರೆ; 60,426
- 2 ಹರಿಹರ; 32,280
- 3 ಜಗಳೂರು; 57,418
- 4 ಹೊನ್ನಾಳಿ; 27,990
- 5 ಚನ್ನಗಿರಿ; 46,194
- 6 ನ್ಯಾಮತಿ; 20,995

**ಶೇ.18ರಷ್ಟು ಹೆಚ್ಚಿನ ಮಳೆ**

ಜನವರಿಯಿಂದ ಮೇ 14ರವರೆಗೆ ಶೇ 42ರಷ್ಟು ಮಳೆ ಕೊರತೆಯಾಗಿದೆ. ಏಪ್ರಿಲ್ ತಿಂಗಳಲ್ಲಿ ಶೇ 33ರಷ್ಟು ಮಳೆ ಕೊರತೆಯಾಗಿದೆ. ಆದರೆ, ಕಳೆದ 7 ದಿನಗಳ ಅವಧಿಯಲ್ಲಿ ವಾಡಿಕೆಗಿಂತ ಶೇ 18ರಷ್ಟು ಹೆಚ್ಚಿನ ಮಳೆಯಾಗಿರುವುದು ರೈತರಲ್ಲಿ ಸಂತಸ ಮೂಡಿಸಿದೆ.

ಈ ಬಾರಿ ಮುಂಗಾರು ಹಂಗಾಮಿನಲ್ಲಿ ಮೆಕ್ಕೆಜೋಳಕ್ಕೆ ಅಕ್ಕಡಿ ಬೆಳೆಯಾಗಿ ತೊಗರಿ ಹಾಗೂ ಅವರೆ ಕಾಯಿಯನ್ನು ಬೆಳೆಯಲು ಪ್ರೋತ್ಸಾಹಿಸಲಾಗುವುದು. ಬೇಸಿಗೆಯಲ್ಲಿ ಮೇವಿನ ಕೊರತೆ ಆಗದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ರಾಗಿಯಲ್ಲಿ ಮೇವು ಹಾಗೂ ಕಾಳು ಜಾಸ್ತಿ ಇರುವ ತಳಿಗಳು ಹಾಗೂ ಭತ್ತದಲ್ಲಿ ಚೆಲ್ಲು ಭತ್ತ, ನಾಟಿ ಪದ್ಧತಿಯನ್ನು ಪ್ರೋತ್ಸಾಹಿಸಲಾಗುವುದು' ಎಂದು ಜಂಟಿ ಕೃಷಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್ ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

**ಹೊಸ ತಳಿ ಶೇಂಗಾ:** ಶೇಂಗಾದಲ್ಲಿ ಈ ಬಾರಿ ಹೊಸ ತಳಿ ಪರಿಚಯಿಸಲಾಗುವುದು. ಈ ತಳಿಯಲ್ಲಿ ಕಾಳು ಗಟ್ಟಿಯಾಗಿ ಬರಲಿದ್ದು, ಕಟಾವು ವೇಳೆ ಬೆಳೆಯು ಹಸಿರಾಗಿರುವುದರಿಂದ ಜಾನುವಾರುಗಳಿಗೆ ಮೇವು ಸಿಗುತ್ತದೆ. ಅಲ್ಲದೇ ಉತ್ತಮ ಇಳುವರಿಯೂ ಬರುತ್ತದೆ' ಎಂದು ತಿಳಿಸಿದರು.

ಎಂಒಪಿ 781 ಮೆಟ್ರಿಕ್ ಟನ್ ಬೇಡಿಕೆ ಇದ್ದು 1253 ಮೆಟ್ರಿಕ್ ಟನ್ ಇದೆ. ಎಸ್.ಎಸ್.ಪಿಗೆ 535 ಮೆಟ್ರಿಕ್ ಟನ್ ಬೇಡಿಕೆ ಇದ್ದು 886 ಮೆಟ್ರಿಕ್ ಟನ್ ದಾಸ್ತಾನು ಇದೆ' ಎಂದು ಅಧಿಕಾರಿಗಳು ಹೇಳಿದ್ದಾರೆ. 'ಮುಂಗಾರು ಹಂಗಾಮಿಗೆ 53238 ಮೆಟ್ರಿಕ್ ಟನ್ ಯೂರಿಯಾ 18060 ಮೆಟ್ರಿಕ್ ಟನ್ ಡಿಎಪಿ 73969 ಮೆಟ್ರಿಕ್ ಟನ್ ಎನ್.ಪಿ.ಕೆ. ಕಾಂಪ್ಲೆಕ್ಸ್ 4851 ಮೆಟ್ರಿಕ್ ಟನ್ ಎಂಒಪಿ 3565 ಟನ್ ಎಸ್‌ಒಪಿ ಸೇರಿ ಒಟ್ಟು 153683 ಮೆಟ್ರಿಕ್ ಟನ್ ಬೇಡಿಕೆ ಇದೆ

-ಶ್ರೀನಿವಾಸ್ ಚಿಂತಾಲ್, ಜಂಟಿ ಕೃಷಿ ನಿರ್ದೇಶಕ, ಹವಾಮಾನ ಇಲಾಖೆ

### ಹದ ಮಳೆಯಾದರೆ ವ್ಯವಸಾಯಕ್ಕೆ ಸಿದ್ಧತೆ


ಪ್ರಭಯ್ಯ ಬಿದರಗುಡ್ಡೆಯ ರೈತಮೂರು ಬಾರಿ ಮಳೆ ಸುರಿದಿದ್ದರೂ ನಮ್ಮ ಕಡೆ ಹದವಾಗಿ ಸುರಿದಿಲ್ಲ. ಹದ ಮಳೆಯಾದರೆ ವ್ಯವಸಾಯಕ್ಕೆ ಸಿದ್ಧತೆ ಮಾಡಿಕೊಳ್ಳಬಹುದು. ಜಗದೀಶ್ ಕಕ್ಕರಗೊಳ್ಳದ ರೈತಭೂಮಿ ಸಿದ್ಧತೆ ಮಾಡಿಕೊಳ್ಳಲು ಮಳೆ ಜೋರಾಗಿ ಬೀಳಬೇಕು. ಮಳೆ ಬಂದರೆ ಬಿತ್ತನೆ ಬೀಜ ಗೊಬ್ಬರ ತಂದು ಇಟ್ಟುಕೊಳ್ಳುತ್ತೇವೆ. ಮಳೆ ಇಲ್ಲದೇ ಈಗಾಗಲೇ ಅಡಿಕೆ ಗಿಡಗಳು ಒಣಗಿಹೋಗಿವೆ. ಶ್ರೀನಿವಾಸ್ ಚಿಂತಾಲ್ ಜಂಟಿ ಕೃಷಿ ನಿರ್ದೇಶಕಹವಾಮಾನ ಇಲಾಖೆ ಈ ಬಾರಿ ಉತ್ತಮ ಮಳೆಯಾಗುತ್ತದೆ ಎಂಬ ಆಶಾದಾಯಕ ಮುನ್ಸೂಚನೆ ನೀಡಿದ್ದು ರೈತರು ಸಿದ್ಧತೆ ಮಾಡಿಕೊಂಡಿದ್ದಾರೆ. '

# ಇದೊಂದು ಅಸಾಮಾನ್ಯವಾದ ಅಪಾಯಕಾರಿ ರಕ್ತ ರೋಗ

## ● ಅಸ್ಟ್ರಾಜೆನೆಕಾ ಕೋವಿಡ್-19 ಲಸಿಕೆ ಪಡೆದವರಲ್ಲಿ ಮತ್ತೊಂದು ಮಾರಣಾಂತಿಕ ಅಡ್ಡ ಪರಿಣಾಮ ಪತ್ತೆ

**ಹೊಸ ದಿಲ್ಲಿ:** ಬ್ರಿಟಿಷ್ - ಸ್ವೀಡನ್ ಮೂಲದ ಔಷಧ ತಯಾರಿಕಾ ಸಂಸ್ಥೆ ಅಸ್ಟ್ರಾಜೆನೆಕಾ ಅಭಿವೃದ್ಧಿಪಡಿಸಿರುವ ಕೋವಿಡ್ 19 ಲಸಿಕೆಯ ಮತ್ತೊಂದು ಮಾರಣಾಂತಿಕ ಅಡ್ಡ ಪರಿಣಾಮ ಬೆಳಕಿಗೆ ಬಂದಿದೆ. ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಅಸ್ಟ್ರಾಜೆನೆಕಾ ಅಭಿವೃದ್ಧಿಪಡಿಸಿದ್ದ ಕೋವಿಡ್ ಲಸಿಕೆಯಿಂದ ಇಮ್ಯೂನ್ ಥ್ರಂಬೋಸೈಟೋಪೆನಿಯಾ ಮತ್ತು ಥ್ರಂಬೋಸಿಸ್ ಉಂಟಾಗುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ. ಸಾಮಾನ್ಯ ಭಾಷೆಯಲ್ಲಿ ಹೇಳೋದಾದರೆ ಇದನ್ನ ರಕ್ತ ಹೆಪ್ಪುಗಟ್ಟುವ ರೋಗ ಎಂದು ಕರೆಯಬಹುದಾಗಿದೆ.

ಕೋವಿಡ್ ಸಾಂಕ್ರಾಮಿಕ ವಿಶ್ವವ್ಯಾಪಿ ಆಗಿದ್ದ ವೇಳೆ 2021ರಲ್ಲಿ ಆಕ್ಸ್‌ಫರ್ಡ್ ವಿವಿ ಹಾಗೂ ಅಸ್ಟ್ರಾಜೆನೆಕಾ ಸಂಸ್ಥೆ ಜಂಟಿಯಾಗಿ ಕೋವಿಡ್ 19 ಲಸಿಕೆ ಅಭಿವೃದ್ಧಿಪಡಿಸಿದ್ದವು. ಭಾರತದಲ್ಲಿ ಈ ಲಸಿಕೆಯನ್ನು ಸೀರಮ್ ಇನ್‌ಸ್ಟಿಟ್ಯೂಟ್ ಸಂಸ್ಥೆಯು ತಯಾರಿಸಿತ್ತು. ಇದಕ್ಕೆ ಕೋವಿಶೀಲ್ಡ್ ಎಂದು ಹೆಸರಿಡಲಾಗಿತ್ತು. ಯುರೋಪ್ ಖಂಡದಲ್ಲಿ ಇದೇ ಲಸಿಕೆಯನ್ನು ವಕ್ಸ್‌ಜೆವ್ರಿಯಾ ಅನ್ನೋ ಹೆಸರಲ್ಲಿ ತಯಾರಿಸಲಾಗಿತ್ತು. ಇದೀಗ ಈ ಫಾರ್ಮುಲಾ ಆಧಾರದ ಮೇಲೆ ತಯಾರಿಸಲಾದ ಲಸಿಕೆಯನ್ನು ಪಡೆದವರಲ್ಲಿ ವಿಐಟಿಟಿ ಹೆಸರಿನ ಹೊಸ ರೋಗ ಕಂಡು ಬಂದಿದೆ.




**ವಿಐಟಿಟಿ ಹೆಸರಿನ ಹೊಸ ರೋಗ**

ಈ ಕುರಿತಾಗಿ ಮಾಹಿತಿ ನೀಡಿರುವ ತಂತ್ರಜ್ಞರು, ಇದೊಂದು ಅಸಾಮಾನ್ಯವಾದ ಅಪಾಯಕಾರಿ ರಕ್ತ ರೋಗ ಎಂದಿದ್ದಾರೆ. ವಿಐಟಿಟಿ ರೋಗ ಕಾಣಿಸಿಕೊಂಡವರ ರಕ್ತದಲ್ಲಿ ಸ್ವಯಂ ಪ್ರತಿಕಾಯಗಳು ವಿಪರೀತವಾಗಿ ವರ್ತಿಸುತ್ತವೆ. ಇದನ್ನು ಪ್ಲೇಟ್‌ಲೆಟ್ ಫ್ಯಾಕ್ಟರ್ 4 ಎಂದು ತಜ್ಞರು ಹೆಸರಿಸಿದ್ದಾರೆ.

ಹಾಗೆ ನೋಡಿದರೆ 2023ರಲ್ಲೂ ಇದೇ ರೀತಿಯ ಪ್ರಕ್ರಿಯಾ ಫಲಿತಾಂಶ ಹೊರಬಿದ್ದಿತ್ತು. ಕೆನಡಾ, ಉತ್ತರ ಅಮೆರಿಕ, ಜರ್ಮನಿ ಹಾಗೂ ಇಟಲಿ ದೇಶಗಳ ವಿಜ್ಞಾನಿಗಳು ನಡೆಸಿದ ಜಂಟಿ ಸಂಶೋಧನೆ ವೇಳೆ ಕೆಲವು ರೋಗಿಗಳಲ್ಲಿ 'ಪ್ಲೇಟ್‌ಲೆಟ್ ಫ್ಯಾಕ್ಟರ್ 4' ಮಾರಣಾಂತಿಕವಾಗಿ ಪರಿಣಮಿಸಿತ್ತು. ಇದೀಗ ಆಸ್ಟ್ರೇಲಿಯಾದ ಫ್ಲಿಂಡರ್ಸ್ ವಿಶ್ವವಿದ್ಯಾಲಯದಲ್ಲಿ ಹಲವು ರಾಷ್ಟ್ರಗಳ ವಿಜ್ಞಾನಿಗಳ ಸಹಯೋಗದಲ್ಲಿ ನಡೆದ ಹೊಸ ಸಂಶೋಧನೆಗಳು ಪ್ಲೇಟ್‌ಲೆಟ್ ಫ್ಯಾಕ್ಟರ್ 4' ಮೇಲೆ ಮತ್ತಷ್ಟು ಬೆಳಕು ಚೆಲ್ಲಿವೆ. ವಿಐಟಿಟಿ ರೋಗ ಉಂಟಾಗುವ ಸಾಧ್ಯತೆಯನ್ನು ಪಿಎಫ್4 ಹೆಚ್ಚಳ ಮಾಡುತ್ತದೆ ಎನ್ನಲಾಗಿದ್ದು, ಈ ಕುರಿತಾದ ಸಾಕ್ಷ್ಯಗಳು ತಜ್ಞರಿಗೆ ಲಭ್ಯವಾಗಿವೆ. ಕೆಲವೇ ತಿಂಗಳ ಹಿಂದೆ ಅಸ್ಟ್ರಾಜೆನೆಕಾ ಸಂಸ್ಥೆ ತಾನು ತಯಾರಿಸಿದ ಕೋವಿಡ್ ಲಸಿಕೆ ಪಡೆದವರಲ್ಲಿ ಥ್ರಂಬೋಟಿಕ್ ಥ್ರಂಬೋಸೈಟೋಪೆನಿಕ್ ಸಿಂಡ್ರೋಮ್ ಎಂಬ ಅತಿ ವಿರಳ ಅಡ್ಡ ಪರಿಣಾಮ ಉಂಟಾಗುತ್ತದೆ ಎಂದು ಒಪ್ಪಿಕೊಂಡಿತ್ತು. ಬ್ರಿಟನ್‌ನ ಹೈಕೋರ್ಟ್‌ಗೆ ಕಳೆದ ಫೆಬ್ರವರಿಯಲ್ಲಿ ಈ ಕುರಿತಾಗಿ ಕಾನೂನಾತ್ಮಕ ದಾಖಲೆಗಳನ್ನು ಒಪ್ಪಿಸಿದ್ದ ಅಸ್ಟ್ರಾಜೆನೆಕಾ ಸಂಸ್ಥೆ, ತಮ್ಮ ಲಸಿಕೆ ಕುರಿತಾಗಿ ಸ್ಪಷ್ಟನೆ ನೀಡಿತ್ತು. ಭಾರತದಲ್ಲೂ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಇದೀಗ ಈ ಲಸಿಕೆಯಿಂದ ಮತ್ತೊಂದು ಅಡ್ಡ ಪರಿಣಾಮ ಎದುರಾಗಬಹುದು ಎಂದು ಹೇಳಲಾಗಿದ್ದು ಜನರ ಆತಂಕ ಹೆಚ್ಚಿಸಿದೆ. ಇನ್ನು ಭಾರತದಲ್ಲಿ ಲೋಕಸಭಾ ಚುನಾವಣೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಕೋವಿಡ್ 19 ಲಸಿಕೆ ವಿಚಾರವು ರಾಜಕೀಯ ಅಸ್ತ್ರವಾಗಿಯೂ ಬಳಕೆ ಆಗುತ್ತಿದೆ.

**ಅದು ರಕ್ತ ಹೆಪ್ಪುಗಟ್ಟುವ ರೋಗವಂತೆ**

**ಕೋವಿಶೀಲ್ಡ್ ಲಸಿಕೆ ಪಡೆದ ಭಾರತೀಯರು ಈಗಾಗಲೇ ಅಡ್ಡ ಪರಿಣಾಮದ ಭಯದಲ್ಲಿದ್ದಾರೆ. ಇದೀಗ ಜನರ ಆತಂಕವನ್ನು ಹೆಚ್ಚಿಸುವ ಮತ್ತೊಂದು ಅಡ್ಡ ಪರಿಣಾಮದ ಸುದ್ದಿ ಬಂದಿದೆ. ಅದು ರಕ್ತ ಹೆಪ್ಪುಗಟ್ಟುವ ರೋಗವಂತೆ ಈ ರೋಗಕ್ಕೆ ವಿಐಟಿಟಿ ಅಂತಾ ಹೆಸರಿಟ್ಟಿದ್ದಾರೆ ತಜ್ಞರು. ಈಗಾಗಲೇ ಕೋವಿಡ್ ಲಸಿಕೆ ಭಾರತದಲ್ಲಿ ಚುನಾವಣಾ ವಿಚಾರವಾಗಿದೆ. ಲೋಕಸಭಾ ಚುನಾವಣಾ ಅಖಾಡದಲ್ಲಿ ಮಾರ್ದನಿಸುತ್ತಿದೆ. ಇದೀಗ ಮತ್ತೊಂದು ಸೈಡ್ ಎಫೆಕ್ಟ್ ವಿಚಾರ ಜನರನ್ನು ಮತ್ತಷ್ಟು ಚಿಂತೆಗೀಡು ಮಾಡುವ ಆತಂಕವಿದೆ.**

- ವಿಐಟಿಟಿ ರೋಗ ಕಾಣಿಸಿಕೊಂಡವರ ರಕ್ತದಲ್ಲಿ ಸ್ವಯಂ ಪ್ರತಿಕಾಯಗಳು ವಿಪರೀತವಾಗಿ ವರ್ತಿಸುತ್ತವೆ
- ಇದನ್ನು ಪ್ಲೇಟ್‌ಲೆಟ್ ಫ್ಯಾಕ್ಟರ್ 4 ಎಂದು ತಜ್ಞರು ಹೆಸರಿಸಿದ್ದಾರೆ

# ಭಾರತ ಚಂದ್ರನೆತ್ತರಕ್ಕೆ ಬೆಳೆದಿದೆ, ನಮ್ಮ ಮಕ್ಕಳು ಗಟಾರಕ್ಕೆ ಬಿದ್ದು ಸಾಯುತ್ತಿವೆ

**ಕರಾಚಿ:** ಭಾರತ ಇಂದು ಚಂದ್ರಯಾನ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಅದ್ವಿತೀಯ ಸಾಧನೆ ಮಾಡುವತ್ತ ಮುನ್ನುಗ್ಗುತ್ತಿದೆ. ಆದರೆ ಕರಾಚಿಯಲ್ಲಿ ತೆರೆದ ಗಟಾರಕ್ಕೆ ಬಿದ್ದು ಮಕ್ಕಳು ಸಾಯುವ ಸುದ್ದಿಯನ್ನು ನಾವು ನೋಡುತ್ತಿದ್ದೇವೆ ಎಂದು ತಮ ದೇಶದ ದುಸ್ಥಿತಿಯನ್ನು ಕಂಡು ಪಾಕಿಸ್ತಾನದ ಮುತ್ತಹಿದಾ ಕ್ವಾಮಿ ಮೂವೆಂಟ್ ಪಾಕಿಸ್ತಾನ್ (ಎಂಕ್ಯೂಎಂ-ಪಿ) ಪಕ್ಷದ ಸದಸ್ಯ ಸೈಯದ್ ಮುಸ್ತಾ ಕಮಾಲ್ ಮಮಲ ಮರುಗಿದ್ದಾರೆ. ರಾಷ್ಟ್ರೀಯ ಅಸೆಂಬ್ಲಿಯನ್ನುದ್ದೇಶಿಸಿ ಮಾತನಾಡಿದ ಕಮಲ್, ಚಂದ್ರನ ಮೇಲೆ ಭಾರತವು ಲ್ಯಾಂಡಿಂಗ್ ಸೇರಿದಂತೆ ಅದ್ಭುತ ಸಾಧನೆಗಳನ್ನು ಮಾಡುತ್ತಿದೆ. ಕರಾಚಿಯ ಸ್ಥಿತಿ ಹೇಗಿದೆ ಎಂದರೆ ಜಗತ್ತೇ ಚಂದ್ರನತ್ತ ಹೋಗುತ್ತಿರುವಾಗ ಇಲ್ಲಿ ಅನೇಕ ಮಕ್ಕಳು ತೆರೆದ ಗಟಾರಕ್ಕೆ ಬಿದ್ದು ಸಾಯುತ್ತಿದ್ದಾರೆ. ಭಾರತ ಚಂದ್ರನ ಮೇಲೆ ಇಳಿದು, ಸುಮಾರು ಎರಡು ಸೆಕೆಂಡುಗಳ ನಂತರ, ಚಂದ್ರನ ನೇರ ಚಿತ್ರಣವನ್ನೂ ಜಗತ್ತೇ ವೀಕ್ಷಿಸಿದೆ. ಕರಾಚಿಯಲ್ಲಿ ಮಗುವೊಂದು ತೆರೆದ ಗಟಾರಕ್ಕೆ ಬಿದ್ದು ಸತ್ತಿತು ಎಂದು ಪಾಕಿಸ್ತಾನದ ಸ್ಥಿತಿಯನ್ನು ಹೊರ ಜಗತ್ತಿಗೆ ತಿಳಿಸುವ ಪ್ರಯತ್ನ ಮಾಡಿದ್ದಾರೆ.

ಆದರೆ 15 ವರ್ಷಗಳಿಂದ ಕರಾಚಿಗೆ ಸ್ವಲ್ಪ ಎಳ ನೀರು ಸಹ ನೀಡಲಿಲ್ಲ, ಬಂದ ನೀರನ್ನು ನೀರಿನ ಟ್ಯಾಂಕರ್ ಮಾಫಿಯಾ ಕದ್ದು ಕೂಡಿಹಾಕಿ ಕರಾಚಿ ಜನರಿಗೆ ಮಾರಾಟ ಮಾಡಿದ್ದಾರೆ. ಪಾಕಿಸ್ತಾನದಲ್ಲಿ 26.2 ಮಿಲಿಯನ್ ಮಕ್ಕಳು ಶಾಲೆಗೆ ಹೋಗುವುದಿಲ್ಲ.



ಈ ಸಂಖ್ಯೆ 70 ದೇಶಗಳ ಜನಸಂಖ್ಯೆಗಿಂತ ಹೆಚ್ಚು. ಎಷ್ಟೋ ಅಶಿಕ್ಷಿತ ಮಕ್ಕಳು ನಮ ಸಂಪೂರ್ಣ ಆರ್ಥಿಕ ಅಭಿವೃದ್ಧಿಯನ್ನು ನಾಶಪಡಿಸುತ್ತಾರೆ ಎಂದು ಕಮಲ್ ಹೇಳಿದ್ದಾರೆ. ಸಿಂಧ್‌ನಲ್ಲಿ ಮಾತ್ರ 48,000 ಶಾಲೆಗಳಿವೆ, ಆದರೆ ಅವುಗಳಲ್ಲಿ 11,000 ಭೂತ ಶಾಲೆಗಳು ಪ್ರಾಂತ್ಯದ 70 ಲಕ್ಷ ಮಕ್ಕಳು ಶಾಲೆಗಳಿಗೆ ಹೋಗಿಲ್ಲ. ಯುನಿಸೆ ಪ್ರಕಾರ, ಪಾಕಿಸ್ತಾನವು ವಿಶ್ವದ ಎರಡನೇ ಅತಿ ಹೆಚ್ಚು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಹೊಂದಿದೆ, ಅಂದಾಜು 5-16 ವರ್ಷ ವಯಸ್ಸಿನ 22.8 ಮಿಲಿಯನ್ ಮಕ್ಕಳು ಶಾಲೆಗೆ ಹೋಗುತ್ತಿಲ್ಲ, ಈ ವಯಸ್ಸಿನ ಒಟ್ಟು ಜನಸಂಖ್ಯೆಯ 44 ಪ್ರತಿಶತವನ್ನು ಪ್ರತಿನಿಧಿಸುತ್ತದೆ. ಸಿಂಧ್‌ನಲ್ಲಿ 52 ಪ್ರತಿಶತದಷ್ಟು ಬಡ ಮಕ್ಕಳು (ಶೇ. 58 ಹುಡುಗಿಯರು) ಶಾಲೆಯಿಂದ ಹೊರಗುಳಿದಿದ್ದಾರೆ ಮತ್ತು ಬಲೂಚಿಸ್ತಾನದಲ್ಲಿ 78 ಪ್ರತಿಶತ ಹುಡುಗಿಯರು ಶಾಲೆಯಿಂದ ಹೊರಗಿದ್ದಾರೆ. ಏತನಧ್ಯೆ, ಪಾಕಿಸ್ತಾನವು ಹೆಚ್ಚಿನ ಹಣದುಬ್ಬರ ಮತ್ತು ಹೆಚ್ಚುತ್ತಿರುವ ಸಾಲ ಸೇರಿದಂತೆ ಆರ್ಥಿಕ ಸವಾಲುಗಳನ್ನು ಎದುರಿಸುತ್ತಿದೆ ಎಂದು ವಿಷಾದಿಸಿದ್ದಾರೆ.

> **ಭಾರತವು ಈಗ ಚಂದ್ರನ ಅನ್ವೇಷಿಸದ ದಕ್ಷಿಣ ಧ್ರುವವನ್ನು ತಲುಪಿದ ಮೊದಲ ರಾಷ್ಟ್ರವಾಗಿದೆ. ಚಂದ್ರನ ಮೇಲ್ಮೈಯಲ್ಲಿ ಮೃದುವಾದ ಇಳಿಯುವಿಕೆಯನ್ನು ಕೈಗೊಳ್ಳಲು ಅಗ್ರ ನಾಲ್ಕು ರಾಷ್ಟ್ರಗಳಲ್ಲಿ ಸ್ಥಾನ ಪಡೆದಿದೆ. ನಮ ದೇಶವು ಎರಡು ಬಂದರುಗಳನ್ನು ಹೊಂದಿದೆ, ಅವು ಕರಾಚಿಯಲ್ಲಿವೆ. ನಗರವು ಇಡೀ ಪಾಕಿಸ್ತಾನ, ಮಧ್ಯ ಏಷ್ಯಾ, ಆಫ್ಘನಿಸ್ತಾನಕ್ಕೆ ಹೆಬ್ಬಾಗಿಲು. ನಾವು ನಗರದಿಂದ ಸುಮಾರು 68 ಪ್ರತಿಶತ ಆದಾಯವನ್ನು ಸಂಗ್ರಹಿಸಿ ಅದನ್ನು ರಾಷ್ಟ್ರಕ್ಕೆ ನೀಡುತ್ತೇವೆ**
>
> **- ಸೈಯದ್ ಮುಸ್ತಾ ಕಮಾಲ್ ಮಮಲ ಪಾಕ್ ಸದಸ್ಯ**

ಅಂತರರಾಷ್ಟ್ರೀಯ ಹಣಕಾಸು ನಿಧಿಯ ವಿಸ್ತೃತ ನಿಧಿ ಸೌಲಭ್ಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಲ್ಲಿ ಪುನರಾವರ್ತಿತ ವಿಳಂಬಗಳು ಮತ್ತು ಬಾಹ್ಯ ಹಣಕಾಸು ಒಳಹರಿವಿನ ಸಂಬಂಧಿತ ಕುಸಿತವು ವಿಶ್ವ ನಿಷೇಧದ ಪ್ರಕಾರ, ಹೆಚ್ಚಿನ ಹಣದುಬ್ಬರ ಮತ್ತು ತೀವ್ರ ಕರೆನ್ಸಿ ಸವಕಳಿಯ ನಡುವೆ ವಿದೇಶಿ ಮೀಸಲುಗಳು ವಿಮರ್ಶಾತಕವಾಗಿ ಕಡಿಮೆ ಮಟ್ಟಕ್ಕೆ ಕುಸಿಯುವ ಮೂಲಕ ಪಾಕ್ ತತ್ತರಿಸಿ ಹೋಗಿದೆ.

# ಬಿಜೆಡಿ ಕಾರ್ಯಕರ್ತರ ಜೊತೆ ಮಾರಾಮಾರಿ ಬಿಜೆಪಿ ಕಾರ್ಯಕರ್ತ ಸಾವು

**ಬೆಹರ್ಾಂಪುರ:** ಒಡಿಶಾದ ಗಂಜಾಂ ಜಿಲ್ಲೆಯಲ್ಲಿ ಆಡಳಿತಾರೂಢ ಬಿಜೆಡಿ, ಕೇಸರಿ ಪಕ್ಷದ ಬೆಂಬಲಿಗರ ನಡುವಿನ ಘರ್ಷಣೆಯಲ್ಲಿ ಬಿಜೆಪಿ ಕಾರ್ಯಕರ್ತರೊಬ್ಬರು ಸಾವನ್ನಪ್ಪಿದ್ದಾರೆ ಮತ್ತು ಏಳು ಮಂದಿ ಗಾಯಗೊಂಡಿದ್ದಾರೆ. ಕಲ್ಲಿಕೋಟೆ ಪೊಲೀಸ್ ಠಾಣಾ ವ್ಯಾಪ್ತಿಯ ಶ್ರೀಕಷ್ಣ ಶರಣಾಪುರ ಗ್ರಾಮದಲ್ಲಿ ತಡರಾತ್ರಿ ಚುನಾವಣಾ ಪ್ರಚಾರಕ್ಕಾಗಿ ಭಿತ್ತಿಪತ್ರಗಳನ್ನು ಹಾಕುವ ವಿಚಾರವಾಗಿ ಈ ಘಟನೆ ನಡೆದಿದೆ. ಮತರನ್ನು ಗ್ರಾಮದ ನಿವಾಸಿ ದಿಲೀಪ್ ಕುಮಾರ್ ಪಹಾನ (28) ಎಂದು ಗುರುತಿಸಲಾಗಿದೆ. ಗಾಯಗೊಂಡ ಅವರು ಇಲ್ಲಿನ ಎಂಕೆಸಿಜಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ತನಿಖೆಯ ಪ್ರಕಾರ, ಅಭ್ಯರ್ಥಿಯ ಪೋಸ್ಟರ್‌ಗಳನ್ನು ಹಾಕುವ ವಿಚಾರದಲ್ಲಿ ಘರ್ಷಣೆ ಸಂಭವಿಸಿದೆ ಮತ್ತು ಹೊಡೆದಾಟದಲ್ಲಿ ಎರಡೂ ಕಡೆಯವರು ಹರಿತವಾದ ಆಯುಧಗಳನ್ನು ಬಳಸಿ ದ್ದಾರೆ, ಗಾಯಗೊಂಡ ವ್ಯಕ್ತಿಗಳು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ, ಅವರ ಸ್ಥಿತಿ ಸ್ಥಿರವಾಗಿದೆ ಎಂದು ಅವರು ಹೇಳಿದರು. ಕಲ್ಲಿಕೋಟೆ ವಿಧಾನಸಭಾ ಕ್ಷೇತ್ರದ ಬಿಜೆಡಿ ಅಭ್ಯರ್ಥಿ ಹಾಗೂ ಹಾಲಿ ಶಾಸಕಿ ಸೂರ್ಯಮಣಿ ಬೈದ್ಯ ಅವರ ಮನೆ ಬಳಿ ನಿಲ್ಲಿಸಲಾಗಿದ್ದ ಹಲವು ವಾಹನಗಳನ್ನು ಧ್ವಂಸಗೊಳಿಸಿ ಆಕ್ರೋಶಗೊಂಡ ಬಿಜೆಪಿ



ಕಾರ್ಯಕರ್ತರು ಪೊಲೀಸ್ ಠಾಣೆ ಬಳಿ ರಸ್ತೆ ತಡೆ ನಡೆಸಿದರು. ಅವರು ಶಾಸಕ ಮತ್ತು ಅವರ ಪತಿ ಡೈಟರಿ ಬೆಹೆರಾ ಅವರನ್ನು ಬಂಧಿಸುವಂತೆ ಒತ್ತಾಯಿಸಿದರು.

ಬೈದ್ಯ ಕ್ಷೇತ್ರದಿಂದ ಪುನರಾಯ್ಕೆ ಬಯಸುತ್ತಿದ್ದರೆ, ಬಿಜೆಪಿಯು ಕ್ಷೇತ್ರದಲ್ಲಿ ಮಾಜಿ ಶಾಸಕ ಪೂರ್ಣಚಂದ್ರ ಸೇಠಿ ಅವರನ್ನು ನಾಮನಿರ್ದೇಶನ ಮಾಡಿದೆ. ಅಸ್ಕಾ ಸಂಸದೀಯ ಕ್ಷೇತ್ರಕ್ಕೆ ಒಳಪಡುವ ಎಸ್‌ಸಿ-ಮೀಸಲಾತಿ ಕಲ್ಲಿಕೋಟೆಗೆ ಏಕಕಾಲದಲ್ಲಿ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆ ಮೇ 20 ರಂದು ನಡೆಯಲಿದೆ. ಏತನಧ್ಯೆ, ರಾಜ್ಯ ಮುಖ್ಯ ಚುನಾವಣಾಧಿಕಾರಿ (ಸಿಇಒ) ನಿಕುಂಜ ಬಿಹಾರಿ ಧಾಲ್ ಅವರು ಘಟನೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ ಮತ್ತು ತಕ್ಷಣ ಶಾಂತಿಯನ್ನು ಪುನಃಸ್ಥಾಪಿಸಲು ಜಿಲ್ಲಾಧಿಕಾರಿ ಮತ್ತು ಪೊಲೀಸ್ ವರಿಷ್ಠಾಧಿಕಾರಿಯನ್ನು ಕೇಳಿದರು ಮತ್ತು ಚುನಾವಣಾ ಹಿಂಸಾಚಾರವನ್ನು ತಡೆಯಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

# 4ನೇ ಆರೋಪಿ ನ್ಯಾಯಾಲಯಕ್ಕೆ ಹಾಜರು

**ಒಟ್ಟಾವಾ:** ಖಾಲಿಸ್ತಾನ ಪರ ಹೋರಾಟಗಾರ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಪ್ರಕರಣ ಸಂಬಂಧ ಬಂಧಿಸಲಾಗಿರುವ ಭಾರತ ಮೂಲದ 4ನೇ ಆರೋಪಿಯನ್ನು ಕೆನಡಾದ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದೆ. ಶಂಕಿತ ಆರೋಪಿ, ಅಮನ್‌ದೀಪ್ ಸಿಂಗ್‌ನನ್ನು (22) ಬುಧವಾರ ಸರ್ರೆ ನ್ಯಾಯಾಲಯದಲ್ಲಿ ವಿಡೀಯೊ ಕಾನ್ಸರೆನ್ಸ್ ಮೂಲಕ ಹಾಜರುಪಡಿಸಲಾಗಿತ್ತು. ವಿಚಾರಣೆಯನ್ನು ಮುಂದಿನ ವಾರಕ್ಕೆ ಮುಂದೂಡಲಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಪ್ರಕರಣದಲ್ಲಿ ಈವರೆಗೆ ಬಂಧಿತರಾಗಿರುವ ಮೂವ ರು ಆರೋಪಿಗಳೊಂದಿಗೆ ಮತ್ತೆ ವಿಚಾರಣೆಗೆ ಹಾಜರಾಗುವಂತೆ ನ್ಯಾಯಾಲಯ ಆದೇಶಿಸಿದೆ. ಕೆನಡಾ ನಿವಾಸಿ ಹರ್ದೀಪ್ ಸಿಂಗ್ ನಿಜ್ಜರ್‌ನನ್ನು 2023ರ ಜೂನ್ 18ರಂದು ಹತ್ಯೆಗೈಯಲಾಗಿತ್ತು. ಈ ಹಿನ್ನೆಲೆಯಲ್ಲಿ ಭಾರತ, ಕೆನಡಾ ನಡುವಣ ದ್ವಿಪಕ್ಷೀಯ ಸಂಬಂಧ ಹದಗೆಟ್ಟಿತ್ತು.

ಪ್ರಕರಣ ಸಂಬಂಧ ಮೇ 21ರಂದು ಕರಣ್ ಬ್ರಾರ್ (22), ಕಮಲ್‌ಪ್ರೀತ್ ಸಿಂಗ್ (22) ಮತ್ತು ಕರಣ್ ಪ್ರೀತ್ ಸಿಂಗ್ (28) ಎಂಬ ಮೂವರು ಭಾರತೀಯ ಪ್ರಜೆಗಳನ್ನು ಬಂಧಿಸಲಾಗಿದೆ. ಇವರ ವಿರುದ್ಧ ಕೊಲೆ ಮತ್ತು ಕೊಲೆಗೆ ಸಂಚು ಆರೋಪ ಹೊರಿಸಲಾಗಿದೆ. ಅಲ್ಲದೇ ಪ್ರಕರಣದಲ್ಲಿ ನಾಲ್ಕನೇ ಆರೋಪಿ ಅಮನ್‌ದೀಪ್‌ನನ್ನು ಮೇ 11ರಂದು ಬಂಧಿಸಲಾಗಿದೆ. ಈತನ ವಿರುದ್ಧವೂ ಕೊಲೆ ಮತ್ತು ಕೊಲೆಗೆ ಸಂಚು ರೂಪಿಸಿದ ಆರೋಪ ಹೊರಿಸಲಾಗಿದೆ.

# ಸ್ಲೋವಾಕಿಯ ಪ್ರಧಾನಿ ಮೇಲೆ ಗುಂಡಿನ ದಾಳಿ

**ಪ್ರೇಗ್:** ರಾಜಕೀಯ ಪ್ರೇರಣೆ ಹಿನ್ನೆಲೆಯಲ್ಲಿ ಸ್ಲೋವಾಕಿಯಾ ಪ್ರಧಾನಿ ರಾಬರ್ಟ್ ಫಿಕೋ ಅವರ ಮೇಲೆ ನಡೆಸಲಾದ ಗುಂಡಿನ ದಾಳಿ ಯುರೂಪಿನಾದ್ಯಂತ ಅಲ್ಲೋಲಕಲ್ಲೋಲ ಸೃಷ್ಟಿಸಿದೆ. ರಷ್ಯಾ ಪರ ನಿಲುವು ಹೊಂದಿರುವ ಫಿಕೋ ಅವರ ಮೇಲೆ ಹಲ ವಾರು ಬಾರಿ ಗುಂಡು ಹಾರಿಸಲಾಗಿದೆ. ಗುಂಡಿನ ದಾಳಿಯಿಂದ ಗಂಭೀರವಾಗಿ ಗಾಯಗೊಂಡಿರುವ ಅವರ ಪ್ರಾಣ ರಕ್ಷಣೆಗೆ ವೈದ್ಯರು ಹರಸಾಹಸ ನಡೆಸುತ್ತಿದ್ದಾರೆ.



ರಾಜ ಧಾನಿ ಪ್ರೇಗ್‌ನಿಂದ ಈಶಾನ್ಯಕ್ಕೆ ಸುಮಾರು 140 ಕಿಲೋ ಮೀಟರ್ (85 ಮೈಲುಗಳು) ದೂರದಲ್ಲಿರುವ ಹ್ಯಾಂಡ್ಲೋವಾ ಪಟ್ಟಣದ ಸಾಂಸ್ಕೃತಿಕ ಕೇಂದ್ರದ ಹೊರಗೆ ಬೆಂಬಲಿಗರೊಂದಿಗೆ ಸಭೆ ನಡೆ ಸುತ್ತಿದ್ದ ಫಿಕೋ ಅವರ ಮೇಲೆ ಕನಿಷ್ಠ ನಾಲ್ಕು ಸುತ್ತು ಗುಂಡು ಹಾರಿಸಲಾಗಿದೆ. ಶಂಕಿತನೊಬ್ಬ ಬಂಧನದಲ್ಲಿದ್ದು, ಆರಂಭಿಕ ತನಿಖೆಯಲ್ಲಿ ಹತ್ಯೆಯ ಯತ್ನದ ಹಿಂದೆ ಸ್ಪಷ್ಟ ರಾಜಕೀಯ ಪ್ರೇರಣೆ ಕಂಡುಬಂದಿದೆ ಎಂದು ಆಂತರಿಕ ಸಚಿವ ಮಾಟಸ್ ಸುತಾಜ್ ಎಸ್ಟೋಕ್ ಅವರು ರಕ್ಷಣಾ ಸಚಿವರೊಂದಿಗೆ ಸುದ್ದಿಗಾರರಿಗೆ ತಿಳಿಸಿದರು.

ಫಿಕೊ ಬಹಳ ಹಿಂದಿನಿಂದಲೂ ಸ್ಲೋವಾಕಿಯಾ ಮತ್ತು ಅದರಾಚೆಗೂ ವಿಭಜಿತ ವ್ಯಕ್ತಿಯಾಗಿದ್ದಾನೆ, ಆದರೆ ಕಳೆದ ವರ್ಷ ಅಧಿಕಾರಕ್ಕೆ ಮರಳಿದ ಅವರು ರಷ್ಯಾದ ಪರ ಹಾಗೂ ಅಮೇರಿಕನ್ ವಿರೋಧಿ ನಿಲುವು ಹೊಂದಿದ್ದರು. ಅವರ ಸರ್ಕಾರವು ಉಕ್ರೇನ್‌ಗೆ ಶಸ್ತ್ರಸ ವಿತರಣೆಯನ್ನು ಸ್ಥಗಿತಗೊಳಿಸಿತು ಮತ್ತು ನ್ಯಾಟೋಗೆ ಸೇರಿದ 5.4 ಮಿಲಿಯನ್ ಜನರಿರುವ ಸ್ಲೋವಾಕಿಯಾವನ್ನು ಅವರು ಪಾಶ್ಚಿಮಾತ್ಯ ಪರವಾದ ಹಾದಿಯನ್ನು ತ್ಯಜಿಸಲು ಮತ್ತು ಜನಪ್ರಿಯ ಪ್ರಧಾನ ಮಂತ್ರಿ ವಿಕ್ಟರ್ ಓರ್ಬನ್ ಅವರ ಅಡಿಯಲ್ಲಿ ಹಂಗೇರಿಯ ಹೆಜ್ಜೆಗಳನ್ನು ಅನುಸರಿಸಲು ಮುಂದಾಗಿದ್ದರು.

ಫಿಕೋ ನೀತಿಗಳನ್ನು ಪ್ರತಿಭಟಿಸಲು ಸಾವಿರಾರು ಜನರು ಪದೇ ಪದೇ ರಾಜಧಾನಿಯಲ್ಲಿ ಮತ್ತು ಸ್ಲೋವಾಕಿಯಾದಾದ್ಯಂತ ರ‍್ಯಾಲಿ ಮಾಡಿದ್ದರು. ಇಂತಹ ಸಂದರ್ಭದಲ್ಲೇ ಅವರ ಮೇಲಿನ ಗುಂಡಿನ ದಾಳಿ ಹಿಂದೆ ರಾಜಕೀಯ ಪಿತೂರಿ ಇರುವುದು ಸಾಬೀತಾಗಿರುವುದು ಕೆಲ ದೇಶಗಳ ನಡುವಿನ ಕದನಕ್ಕೆ ಕಾರಣವಾದರೂ ಅಚ್ಚರಿಪಡುವಂತಿಲ್ಲ.

# ಸುಪ್ರೀಂಕೋರ್ಟ್‌ನಲ್ಲಿ ಕೇಜ್ರಿವಾಲ್ ಮಧ್ಯಂತರ ಜಾಮೀನು ಪ್ರಶ್ನಿಸಿದ ಇಡಿ

**ನವದೆಹಲಿ:** ದೆಹಲಿ ಅಬಕಾರಿ ಪರಿಷ್ಕರಣೆಯಲ್ಲಿ ಕಿಕ್ ಬ್ಯಾಕ್ ಪಡೆದ ಆರೋಪದಡಿ ಬಂಧನಕ್ಕೆ ಒಳಗಾಗಿದ್ದ ಸಿಎಂ ಅರವಿಂದ್ ಕೇಜ್ರಿವಾಲ್‌ಗೆ ಮಧ್ಯಂತರ ಜಾ ಮೀನು ನೀಡಿರುವುದನ್ನು ಜಾರಿ ನಿರ್ದೇಶನಾಲಯ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದೆ. ಆರೋಪಿ ಸ್ಥಾನದಲ್ಲಿರುವ ಪ್ರಮುಖ ಆರೋಪಿಗೆ ಷರತ್ತುಬದ್ಧ ಮಧ್ಯಂತರ ಜಾಮೀನು ನೀಡಿದ ನಂತರ ಚುನಾವಣಾ ಪ್ರಚಾರದಲ್ಲಿ ಅವರ ಭಾಷಣಗಳು ವ್ಯವಸ್ಥೆಯ ಮುಖಕ್ಕೆ ಕಪಾಳಮೋಕ್ಷ ಮಾಡಿದಂತಿದೆ ಎಂದು ಇಡಿ ಪರ ವಕೀಲರು ಅಪಸ್ವರ ತೆಗೆದಿದ್ದಾರೆ.

ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಸುಪ್ರೀಂಕೋರ್ಟ್ ನಾವು ನೀಡಿರುವ ಆದೇಶ ಸ್ಪಷ್ಟವಾಗಿದೆ. ಮಧ್ಯಂತರ ಜಾಮೀನು ನೀಡುವಾಗ ನಾವು ಯಾವುದೇ ಆರೋಪಿಗೆ ವಿನಾಯಿತಿ ನೀಡಿಲ್ಲ, ತೀರ್ಪಿನ ಬಗ್ಗೆ ವಿಶ್ಲೇಷಣೆ ನಡೆದಿರುವುದು ಸ್ವಾಗತಾರ್ಹ ಬೆಳವಣಿಗೆ ಎಂದಷ್ಟೇ ಪ್ರತಿಕ್ರಿಯಿಸಿದೆ. ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ, ದೀಪಾಂಕುರ್ ದತ್ತ ಅವರನ್ನೊಳಗೊಂಡ ದ್ವಿಸದಸ್ಯ ಪೀಠದ ಮುಂದೆ ಇಡಿ ಪರ ವಕೀಲರು ಹಾಜರಾಗಿ ಅರವಿಂದ್ ಕೇಜ್ರಿವಾಲ್‌ಗೆ ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿದೆ. ಆದರೆ ಅವರು ಚುನಾವಣಾ ಪ್ರಚಾರದಲ್ಲಿ ಏನು ಭಾಷಣ ಮಾಡುತ್ತಿದ್ದಾರೆ ಅವರ ಒಂದೊಂದು ಹೇಳಿಕೆಗಳು ನ್ಯಾಯಾಲಯದ ಆದೇಶದ ಉಲ್ಲಂಘನೆ ಎಂದು ಆರೋಪಿಸಿದರು. ಇಡಿ ಪರವಾಗಿ ಹಾಜರಾದ ಕೇಂದ್ರ ಸರ್ಕಾರದ ಸಾಲಿ ಸೀಟರ್ ಜನರಲ್ ತುಷಾರ್ ಮೆಹ್ತಾ ಅವರು ಅರವಿಂದ್ ಕೇಜ್ರಿ ವಾಲ್ ಅವರು ರ‍್ಯಾಲಿಗಳಲ್ಲಿ ಮಾಡುತ್ತಿರುವ ಭಾಷಣಗಳ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ ಅಭಿಷೇಕ್ ಮನುಸಿಂಗ್ವಿಯವರು ಸುಪ್ರೀಂಕೋರ್ಟ್ ಅರವಿಂದ್ ಕೇಜ್ರಿವಾಲ್‌ಗೆ ಮಧ್ಯಂತರ ಜಾಮೀನು ನೀಡಿರುವುದರ ಕುರಿತು ಕೇಂದ್ರದ ಹಿರಿಯ ಸಚಿವರೊಬ್ಬರು ನೀಡಿರುವ ಹೇಳಿಕೆಯನ್ನು ಪೀಠದ ಗಮನಕ್ಕೆ ತಂದರು. ಇದಕ್ಕೂ ಸಹ ನ್ಯಾಯಮೂರ್ತಿಗಳು ಯಾವುದೇ ಪ್ರತಿಕ್ರಿಯೆ ಕೊಡಲಿಲ್ಲ. ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರು, ನಾವು ಯಾರಿಗೂ ಕೂಡ ವಿನಾಯಿತಿ ಕೊಟ್ಟಿಲ್ಲ. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಟೀಕೆಗಳನ್ನು ನಾವು ಸ್ವಾಗತಿಸುತ್ತೇವೆ. ಟೀಕೆ ಗಳ ಬಗ್ಗೆ ನಾವು ತಲೆಕೆಡಿಸಿಕೊಳ್ಳುವುದಿಲ್ಲ. ಕೇಜ್ರಿವಾಲ್ ಯಾವಾಗ ನ್ಯಾಯಾಲಯಕ್ಕೆ ಶರಣಾಗಬೇಕು ಎಂಬುದನ್ನು ಸ್ಪಷ್ಟವಾಗಿ ಸೂಚಿಸಲಾಗಿದೆ. ಇದರ ಹೊರತು ಇನ್ನೇನೂ ಹೇಳಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.



> **ಜೂ. 5 ರಂದು ನಾನು ಜೈಲಿನಿಂದ ಬಿಡುಗಡೆ ಯಾಗುತ್ತೇನೆ ಎಂದು ಹೇಳಿದರೆ ಜನತೆಗೆ ನ್ಯಾಯಾಂಗ ವ್ಯವಸ್ಥೆಯ ಬಗ್ಗೆ ಗೌರವ ಇರುತ್ತದೆಯೇ ಇದರಿಂದ ಸಮಾಜಕ್ಕೆ ಏನು ಸಂದೇಶ ಹೋಗುತ್ತದೆ ಎಂದು ಪ್ರಶ್ನೆ ಮಾಡಿದರು. ಈ ವೇಳೆ ಕೇಜ್ರಿವಾಲ್ ಪರ ಹಿರಿಯ ವಕೀಲ ಅಭಿಷೇಕ್ ಮನುಸಿಂಗ್ವಿ, ನನ್ನ ಕಕ್ಷಿದಾರರು ಈ ಮಾತನ್ನು ಹೇಳಿದ್ದಾರೆ? ಇದು ನನ್ನ ಗಮನಕ್ಕೆ ಬಂದಿಲ್ಲ**

# ಬಜೆಟ್‌ನಲ್ಲಿ ಮುಸ್ಲಿಂರಿಗೆ 15% ಮೀಸಲಾತಿ ಆರೋಪ ಸಂಪೂರ್ಣ ಸುಳ್ಳು ; ಚಿದಂಬರಂ

**ನವದೆಹಲಿ:** ಹಿಂದಿನ ಕಾಂಗ್ರೆಸ್ ಸರ್ಕಾರವು ಮುಸ್ಲಿಮರಿಗೆ ಬಜೆಟ್‌ನಲ್ಲಿ ಶೇ.15 ರಷ್ಟು ಮೀ ಸಲಿಡಲು ಬಯಸಿತ್ತು ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆ ಸಂಪೂರ್ಣ ಸುಳ್ಳು ಎಂದು ಕಾಂಗ್ರೆಸ್ ಹಿರಿಯ ನಾಯಕ ಪಿ.ಚಿದಂಬರಂ ಹೇಳಿ ದ್ದಾರೆ. ಹಿಂದೂ-ಮುಸ್ಲಿಂರ ನಡುವೆ ಬಿರುಕು ಮೂಡಿಸುವವರು ಸಾರ್ವಜನಿಕ ಜೀವನದಲ್ಲಿ ಇರಲು ಯೋಗ್ಯರಲ್ಲ ಎಂದು ಪ್ರಧಾನಿ ಪ್ರತಿಪಾದಿಸಿದ ಮರುದಿನವೇ ಅವರು ಹಿಂದೂ, ಮುಸ್ಲಿಮರನ್ನು ವಿಭ ಜಿಸುವ ತಮ್ಮ ಎಂದಿನ ಆಟವನ್ನು ಆಡಿದ್ದಾರೆ ಎಂದು ಚಿದಂಬರಂ ಆರೋಪಿಸಿದ್ದಾರೆ.



ಗೌರವಾನ್ವಿತ ಪ್ರಧಾನ ಮಂತ್ರಿಯವರ ಹೇಳಿಕೆಗಳು ಹೆಚ್ಚು ವಿಲಕ್ಷಣವಾಗಿವೆ ಮತ್ತು ಅವರ ಭಾಷಣ ಬರಹಗಾರರು ತಮ್ಮ ಸಮತೋಲನವನ್ನು ಕಳೆದುಕೊಂಡಿದ್ದಾರೆ ಎಂಬುದನ್ನು ತೋರಿಸುತ್ತದೆ ಎಂದು ಅವರು ಎಕ್ಸ್ ಮಾಡಿದ್ದಾರೆ. ಕೇಂದ್ರ ಬಜೆಟ್‌ನ ಶೇ.15ರಷ್ಟನ್ನು ಮುಸ್ಲಿಮರಿಗೆ ಮಾತ್ರ ಮೀಸಲಿಡಲು ಡಾ. ಮನಮೋಹನ್ ಸಿಂಗ್ ಯೋಜನೆ ರೂಪಿಸಿದ್ದರು ಎಂಬ ಗೌರವಾನ್ವಿತ ಪ್ರಧಾನಿ ಯವರ ಆರೋಪ ಸಂಪೂರ್ಣ ಸುಳ್ಳು. ಕಾಂಗ್ರೆಸ್ ಮುಸ್ಲಿಂ ಬಜೆಟ್, ಹಿಂದೂ ಬಜೆಟ್ ಮಂಡಿಸಲಿದೆ ಎಂಬ ಅವರ ಮುಂದಿನ ಆರೋಪ ಅತಿರೇಕವಾಗಿದೆ. ಇದನ್ನು ಕೇವಲ ಭ್ರಮೆ ಎಂದು ನಿರೂಪಿಸಬಹುದು ಎಂದು ಮಾಜಿ ಹಣಕಾಸು ಸಚಿವರು ಹೇಳಿದರು.


ಭಾರತದ ಸಂವಿಧಾನದ 112 ನೇ ವಿಧಿಯು ಒಂದು ವಾರ್ಷಿಕ ಹಣಕಾಸು ಹೇಳಿಕೆಯನ್ನು ಮಾತ್ರ ಪರಿಗಣಿ ಸುತ್ತದೆ, ಅದು ಕೇಂದ್ರ ಬಜೆಟ್ ಆಗಿದೆ ಎಂದು ಚಿ ದಂಬರಂ ಹೇಳಿದರು ಮತ್ತು ಎರಡು ಬಜೆಟ್‌ಗಳು ಹೇಗೆ ಇರುತ್ತವೆ ಎಂದು ಕೇಳಿದರು.

# ನ್ಯೂ ಕೆಲೆಡೋನಿಯಾ ದ್ವೀಪದಲ್ಲಿ ತುರ್ತು ಪರಿಸ್ಥಿತಿ ಘೋಷಣೆ

## ಪ್ರತಿಭಟನೆ ಮತ್ತಷ್ಟು ಹಿಂಸಾ ಸ್ವರೂಪಕ್ಕೆ, ಫ್ರೆಂಚ್ ಪ್ರಜೆಗಳಿಗೆ ಮತದಾನದ ಹಕ್ಕು ನೀಡುವ ವಿಧೇಯಕದ ವಿರುದ್ಧ ಪ್ರತಿಭಟನೆ

**ಪ್ಯಾರಿಸ್:** ಫ್ರಾನ್ಸ್‌ನ ನ್ಯೂ ಕೆಲೆಡೋನಿಯಾದಲ್ಲಿ ಜನರು ದಂಗೆ ಎದ್ದಿದ್ದು, ಸತತ ಮೂರನೇ ರಾತ್ರಿಯೂ ನಡೆದ ಹಿಂಸಾತ್ಮಕ ಸಂಘರ್ಷಗಳಲ್ಲಿ ನಾಲ್ಕು ಮಂದಿ ಮೃತಪಟ್ಟಿದ್ದಾರೆ. ಎರಡು ವಿಮಾನ ನಿಲ್ದಾಣಗಳು ಮತ್ತು ಒಂದು ಬಂದರಿಗೆ ಸೇನಾ ಪಡೆಗಳು ಬಿಗಿ ಭದ್ರತೆ ಒದಗಿಸಿವೆ ಎಂದು ಪೆಸಿಫಿಕ್ ಐಲ್ಯಾಂಡ್‌ನ ಹಿರಿಯ ಫ್ರೆಂಚ್ ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ. ಗಲಭೆಗೆ ಕುಮ್ಮಕ್ಕು ನೀಡಿದ ಕನಿಷ್ಠ ನಾಲ್ವರನ್ನು ಗೃಹ ಬಂಧನದಲ್ಲಿ ಇರಿಸಲಾಗಿದೆ.

ಫ್ರಾನ್ಸ್ ಆಡಳಿತವಿರುವ ದ್ವೀಪದ ರಾಜಧಾನಿ ನೌಮಿಯಾದಲ್ಲಿ 3 ರಿಂದ 4 ಸಾವಿರ ಸೇರಿದಂತೆ ಕನಿಷ್ಠ ಮೂರು ಮುನಿಸಿಪಾಲಿಟಿಗಳು ಹಾಗೂ ಅರೆಸೇನಾ ಪಡೆಗಳ ವಿರುದ್ಧ ಸುಮಾರು 5 ಸಾವಿರ ಮಂದಿ ಧಂಗೆ ಎದ್ದಿದ್ದಾರೆ ಎಂದು ಫ್ರಾನ್ಸ್‌ನ ಹೈ ಕಮಿಷನರ್ ಲೂಯಿಸ್ ಲೆ ಫ್ರಾನ್ಸ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ. ಸುಮಾರು



**ಜನರ ದಂಗೆಗೆ ಕಾರಣ ವೇನು?**

200 ಮಂದಿಯನ್ನು ಬಂಧಿಸಲಾಗಿದೆ. 64 ಮಂದಿ ಅರೆ ಸೇನಾ ಪಡೆ ಸಿಬ್ಬಂದಿ, ಪೊಲೀಸರು ಗಾಯಗೊಂಡಿದ್ದಾರೆ. ಪ್ರತಿಭಟ ನಾಕಾರರು ರಸ್ತೆಗಳಿಗೆ ತಡೆಯೊಡಿದ್ದು, ಇದರಿಂದ ಜನರಿಗೆ ಔಷಧ, ಆಹಾರ ಪೂರೈಕೆ ಕಾರ್ಯ ನಡೆಸುವುದಕ್ಕೆ ತೀವ್ರ ಅಡ್ಡಿಯಾಗಿದೆ ಎಂದು ಅವರು ಹೇಳಿದ್ದಾರೆ. ಗುರುವಾರ ಬೆಳಿಗ್ಗೆ 5 ಗಂಟೆಯಿಂದ ಜಾರಿಗೆ ಬರುವಂತೆ ನ್ಯೂ ಕೆಲೆಡೋನಿಯಾದಲ್ಲಿ ಫ್ರಾನ್ಸ್ ತುರ್ತು ಪರಿಸ್ಥಿತಿ ಘೋಷಣೆ ಮಾಡಿದೆ. ಗುಂಪು ಸೇರುವಿಕೆಯನ್ನು ನಿಷೇಧಿಸುವ ಮತ್ತು ದ್ವೀಪದಲ್ಲಿ ಜನರು ಓಡಾಡುವುದನ್ನು ನಿರ್ಬಂಧಿಸುವ ಹೆಚ್ಚುವರಿ ಅಧಿಕಾರವನ್ನು ಅಲ್ಲಿನ ಆಡಳಿತಕ್ಕೆ ನೀಡಿದೆ. ದ್ವೀಪದಲ್ಲಿ ಸಾಮಾನ್ಯವಾಗಿ 1800 ಪೊಲೀಸ್ ಸಿಬ್ಬಂದಿ ಇದ್ದು, ಹೆಚ್ಚುವರಿ 500 ಸಿಬ್ಬಂದಿಯನ್ನು ಕಳುಹಿಸಲಾಗಿದೆ. ಗಲಭೆಕೋರರು ವಾಹನಗಳಿಗೆ ಮತ್ತು ಉದ್ದಿಮೆಗಳಿಗೆ ಬೆಂಕಿ ಹಚ್ಚಿ, ಅಂಗಡಿಗಳನ್ನು ಲೂಟಿ ಹೊಡೆದ ಬಳಿಕ ಭದ್ರತಾ ಪಡೆಗಳನ್ನು ಹೆಚ್ಚಿಸಲಾಗಿದೆ. ದ್ವೀಪ ಪ್ರದೇಶದ ರಾಜಕೀಯ ಅಧಿಕಾರವನ್ನು ನಿರ್ಬಂಧಿಸಲು, ಸ್ಥಳೀಯ ಸರ್ಕಾರಗಳ ಚುನಾವಣೆಯಲ್ಲಿ ಮತದಾರರ ಪಟ್ಟಿಯನ್ನು ತಗ್ಗಿಸುವ ವಿಧೇಯಕ ಈ ಹೊಸ ಗಲಭೆಗೆ ಕಾರಣವಾಗಿದೆ. ಪ್ಯಾರಿಸ್ ಸಂಸತ್‌ನಲ್ಲಿ ಮಂಗಳವಾರ ಹೊಸ ವಿಧೇಯಕ ಅಂಗೀಕಾರವಾಗಿದೆ. ನ್ಯೂ ಕೆಲಡೋನಿಯಾದಲ್ಲಿ 10 ವರ್ಷಗಳಿಂದ ವಾಸವಿರುವ ಫ್ರೆಂಚ್ ಪ್ರಜೆಗಳಿಗೂ ಪ್ರಾಂತೀಯ ಚುನಾವಣೆಗಳಲ್ಲಿ ಮತದಾನದ ಹಕ್ಕು ನೀಡಲು ನಿರ್ಧರಿಸಲಾಗಿದೆ. ಇದು ಸ್ಥಳೀಯ ಕನಾಕ್ ಸಮುದಾಯದ ಮತಗಳನ್ನು ಒಡೆಯಲಿದೆ ಎನ್ನುವುದು ಕೆಲವು ಸ್ಥಳೀಯ ನಾಯಕರ ಆತಂಕ. ಈ ವಿಧೇಯಕದ ವಿರುದ್ಧ ದ್ವೀಪದಲ್ಲಿ ಗಲಭೆ ಸೃಷ್ಟಿಯಾಗಿದೆ. ಸಂಘರ್ಷಗಳಲ್ಲಿ ಮೂವರು ಕನಾಕ್ ಯುವಕರು ಬಲಿಯಾಗಿದ್ದಾರೆ. ಗುಂಡೇಟಿನಿಂದ 24 ವರ್ಷದ ಪೊಲೀಸ್ ಅಧಿಕಾರಿ ಮೃತಪಟ್ಟಿದ್ದಾರೆ. 12 ದಿನಗಳ ಕಾಲ ತುರ್ತು ಪರಿಸ್ಥಿತಿ ಜಾರಿಗೊಳಿಸಲಾಗಿದೆ.

ಟಿಕ್‌ಟಾಕ್‌ನಲ್ಲಿ ವಿಡಿಯೋ ಹಂಚಿಕೊಳ್ಳುವುದನ್ನು ನಿಷೇಧಿಸಲಾಗಿದೆ.

**ಗಲಭೆ ಏಕೆ?**

**ಪೆಸಿಫಿಕ್ ಸಮುದ್ರದಲ್ಲಿನ ಫ್ರಾನ್ಸ್‌ನ ಭಾಗವಾಗಿರುವ ನ್ಯೂ ಕೆಲೆಡೋನಿಯಾ ದ್ವೀಪವು ಜಗತ್ತಿನ ಮೂರನೇ ಅತಿ ದೊಡ್ಡ ನಿಕ್ಕಲ್ ಉತ್ಪಾದಕವಾಗಿದೆ. ಪೆಸಿಫಿಕ್‌ನಲ್ಲಿ ಫ್ರಾನ್ಸ್‌ನ ಪ್ರಭಾವ ಹೆಚ್ಚಿಸಲು ಈ ದ್ವೀಪವನ್ನು ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರಾನ್ ಮುಖ್ಯ ಕೇಂದ್ರವನ್ನಾಗಿಸಿಕೊಂಡಿದ್ದಾರೆ. 1853ರಲ್ಲಿ ಫ್ರಾನ್ಸ್ ವಸಾಹತುವಾದ ದ್ವೀಪವು ಕಳೆದ ಒಂದು ಶತಮಾನದಲ್ಲಿ ಸಾಕಷ್ಟು ಗಲಭೆಗಳನ್ನು ಕಂಡಿದೆ. ಫ್ರಾನ್ಸ್ ಹಿಡಿತದಿಂದ ಬಿಡುಗಡೆ ನೀಡಬೇಕು ಎಂದು ಅಲ್ಲಿನ ಜನರು ಹೋರಾಟಗಳನ್ನು ನಡೆಸಿದ್ದಾರೆ.**

**ಹಿಂಸಾತ್ಮಕ ಪ್ರತಿಭಟನೆ**

**ಪೆಸಿಫಿಕ್ ಸಾಗರದಲ್ಲಿನ ಫ್ರಾನ್ಸ್‌ನ ವಸಾಹತು ದ್ವೀಪ ನ್ಯೂ ಕೆಲೆಡೋನಿಯಾದಲ್ಲಿ ಹಿಂಸಾತ್ಮಕ ಪ್ರತಿಭಟನೆಗಳು ನಡೆಯುತ್ತಿದ್ದು, ಈವರೆಗೂ ನಾಲ್ಕು ಮಂದಿ ಮೃತಪಟ್ಟಿದ್ದಾರೆ. ಪರಿಸ್ಥಿತಿ ಕೈ ಮೀರಿ ಹೋಗುತ್ತಿರುವ ಹಿನ್ನೆಲೆಯಲ್ಲಿ ಫ್ರಾನ್ಸ್ ಸರ್ಕಾರವು ದ್ವೀಪದಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮಾಡಿದೆ.**

# ಮಿನಿ ನ್ಯೂಸ್

## ವಿಮಾನ ನಿಲ್ದಾಣದಲ್ಲಿ ಆತಂಕ ಸೃಷ್ಟಿಸಿದ ಬಾಂಬ್ ಎಂದು ಬರೆದ ಟಿಶ್ಯೂ ಪೇಪರ್

**ನವದೆಹಲಿ:** ಇಲ್ಲಿನ ಐಜಿಐ ವಿಮಾನ ನಿಲ್ದಾಣದಲ್ಲಿ ದೆಹಲಿ-ವಡೋದರಾ ಏರ್ ಇಂಡಿಯಾ ವಿಮಾನದ ವಾಶ್‌ರೂಮ್‌ನಲ್ಲಿ ಸಿಬ್ಬಂದಿಯೊಬ್ಬರು ಬಾಂಬ್ ಎಂದು ಬರೆದಿರುವ ಟಿಶ್ಯೂ ಪೇಪರ್ ಕಂಡ ನಂತರ ಆ ತಂಕ ಎದುರಾಗಿತ್ತು. ತಕ್ಷಣ ವಿಮಾನವನ್ನು ಹುಡುಕಲಾಯಿತು ಆದ ರೆ ಅನುಮಾನಾಸ್ಪದ ವಸ್ತು ಯಾವುದು ಕಂಡುಬಂದಿಲ್ಲ ಎಂದು ತಿಳಿದ ನಂತರ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ಸಂಜೆ 7 ಗಂಟೆಗೆ ಟಿಶ್ಯೂ ಪೇಪರ್ ಅನ್ನು ಸಿಬ್ಬಂದಿ ಗುರುತಿಸಿದಾಗ ವಿಮಾನವು ಟೇಕ್-ಆಫ್‌ಗೆ ಸಿದ್ಧವಾಗಿತ್ತು ಎಂದು ತಿಳಿದುಬಂದಿದೆ. ಸೆಂಟ್ರಲ್ ಇಂಡಸ್ಟ್ರಿಯಲ್ ಸೆಕ್ಯುರಿಟಿ ಫೋರ್ಸ್ ಮತ್ತು ದೆಹಲಿ ಪೊಲೀಸರಿಗೆ ಮಾಹಿತಿ ನೀಡಲಾಯಿತು ಮತ್ತು ಪ್ರಯಾಣಿಕರನ್ನು ವಿಮಾನದಿಂದ ಕೆಳಗಿಳಿಸಿ ವಿಮಾನವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ ಆದರೆ ಏನೂ ಕಂಡುಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಯಾಣಿಕರು ನಂತರ ಮತ್ತೊಂದು ವಿಮಾನದಲ್ಲಿ ತಮ ಗಮ್ಯಸ್ಥಾನಕ್ಕೆ ತೆರಳಿದರು.

## ಎರಡು ಟ್ರಕ್‌ಗಳ ನಡುವೆ ಕಾರು ಸಿಲುಕಿ ಆರು ಮಂದಿ ಸಾವು

**ಕಿಯೋಂಜಾರ್:** ಒಡಿಶಾದ ಕಿಯೋಂಜಾರ್ ಜಿಲ್ಲೆಯಲ್ಲಿ ಎರಡು ಟ್ರಕ್‌ಗಳ ನಡುವೆ ಕಾರು ಸಿಕ್ಕಿ ಅದರಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಮಹಿಳೆಯರು ಸೇರಿದಂತೆ ಕನಿಷ್ಠ ಆರು ಜನರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಚಂಪೂವಾ ಪ್ರದೇಶದಲ್ಲಿ ಎನ್‌ಎಚ್ 520 ರಲ್ಲಿ ಈ ಅಪಘಾತ ಸಂಭವಿಸಿದ್ದು, ಕಾರಿನ ಮುಂದೆ ಚಲಿ ಸುತ್ತಿದ್ದ ಟ್ರಕ್ ಹಠಾತ್ ಬ್ರೇಕ್ ಹಾಕಿದಾಗ ಕಾರು ಹಿಂಬದಿಯಿಂದ ಡಿಕ್ಕಿ ಹೊಡೆದಿದೆ. ಕಾರಿನ ಹಿಂದೆ ಬರುತ್ತಿದ್ದ ಮತ್ತೊಂದು ಟ್ರಕ್ ಅದಕ್ಕೆ ಡಿಕ್ಕಿ ಹೊಡೆದು ಸಣ್ಣ ವಾಹನದಲ್ಲಿದ್ದ ಆರು ಮಂದಿ ಮತಪಟ್ಟಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮತರು ಕುಟುಂಬದ ಸದಸ್ಯರಾಗಿದ್ದು, ಅವರ ದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಲಾಗಿದೆ ಎಂದು ಅವರು ಹೇಳಿದರು.

## ಪೊಲೀಸರಂತೆ ನಟಿಸಿ ಕೆಫೆ ಮಾಲೀಕರ ಮನೆಗೆ ನುಗ್ಗಿ 25 ಲಕ್ಷ ರೂ. ಲೂಟಿ

**ಮುಂಬೈ:** ಅಪರಾಧ ವಿಭಾಗದ ಪೊಲೀಸರೆಂದು ಹೇಳಿಕೊಂಡು ಆರು ಮಂದಿ ದರೋಡೆಕೋರರು ಮುಂಬೈನ ಸಿಯಾನ್ ಪ್ರದೇಶದಲ್ಲಿ ಕೆಫೆ ಮಾಲೀಕರ ಮನೆಗೆ ನುಗ್ಗಿ 25 ಲಕ್ಷ ರೂಪಾಯಿ ದೋಚಿದ್ದಾರೆ. ಈ ಪೈಕಿ ನಾಲ್ವರನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ನಗರದ ಮಾಟುಂಗಾ ಪ್ರದೇಶದಲ್ಲಿ ಜನಪ್ರಿಯ ಕೆಫೆ ನಡೆಸುತ್ತಿರುವ ವ್ಯಾಪಾರಿ ಮನೆಗೆ ಪೊಲೀಸರೆಂದು ಹೇಳಿ 6 ಮಂದಿ ಬಂದು, ತಾವು ಚುನಾವಣಾ ಕರ್ತವ್ಯದಲ್ಲಿದ್ದೇವೆ ಮತ್ತು ಲೋಕಸಭೆ ಚುನಾವಣೆಗೆ ಸಂಬಂಧಿಸಿದಂತೆ ಹಣ ಇಟ್ಟುಕೊಂಡಿರುವ ಬಗ್ಗೆ ಮಾಹಿತಿ ಇದೆ ತಪಾಸಣೆ ನಡೆಸಬೇಕಿದೆ ಎಂದು ನುಗ್ಗಿದ್ದಾರೆ.


ತನ್ನ ವ್ಯಾಪಾರದಿಂದ ಕೇವಲ 25 ಲಕ್ಷ ರೂಪಾಯಿ ನಗದು ಹೊಂದಿದ್ದು, ಚುನಾವಣೆಗೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಮನೆಯವರು ತಿಳಿಸಿದ್ದಾರೆ.ಆದರೆ, ಆರೋಪಿಗಳು ಹಣ ಕಿತ್ತುಕೊಂಡು ತಮ ಮೇಲೆ ಪ್ರಕರಣ ದಾಖಲಿಸಲಾಗುವುದು ಎಂದು ಬೆದರಿಸಿ ಅಲ್ಲಿಂದ ಪರಾರಿಯಾಗಿದ್ದಾರೆ. ನಂತರ ಅನುಮಾನಗೊಂಡು ಕೂಡಲೆ ಕೆಫೆ ಮಾಲೀಕರು ಸಿಯೋನ್ ಪೊಲೀಸ್ ಠಾಣೆಯನ್ನು ಸಂಪರ್ಕಿಸಿ ದೂರು ನೀಡಿದರು ತಕ್ಷಣ ತನಿಖೆ ಕೈಗೊಂಡು ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ. ಅಪರಾಧದಲ್ಲಿ ನಿವೃತ್ತ ಪೊಲೀಸ್ ಪೇದೆ ಮತ್ತು ಪೊಲೀಸ್ ಮೋಟಾರು ಸಾರಿಗೆ ಇಲಾಖೆಯ ಸಿಬ್ಬಂದಿ ಭಾಗಿಯಾಗಿದ್ದಾರೆ ಎಂದು ಪೊಲೀಸರು ಶಂಕಿಸಿದ್ದಾರೆ. ಪರಾರಿ ಯಾಗಿರುವ ತಂಡದ ಇತರೆ ಆರೋಪಿಗಳ ಪತ್ತೆಗೆ ಬಲೆ ಬೀಸಲಾಗಿದೆ.ಮುಂಬೈನಲ್ಲಿ ಮೇ 20 ರಂದು ಐದನೇ ಹಂತದ ಸಾರ್ವತ್ರಿಕ ಚುನಾವಣೆ ನಡೆಯಲಿದೆ.

## ಇಂದೋರ್‌ನಲ್ಲಿ ಭೀಕರ ರಸ್ತೆ ಅಪಘಾತ, 8 ಮಂದಿ ಸಾವು

**ಇಂದೋರ್:** ಮಧ್ಯಪ್ರದೇಶದ ಇಂದೋರ್ ಜಿಲ್ಲೆಯಲ್ಲಿ ತಡರಾತ್ರಿ ಎರಡು ವಾಹನಗಳ ನಡುವೆ ಡಿಕ್ಕಿ ಸಂಭವಿಸಿ ಎಂಟು ಜನರು ಸಾವನ್ನಪ್ಪಿದ್ದಾರೆ. ಇಂದೋರ್-ಅಹಮದಾಬಾದ್ ರಾಷ್ಟ್ರೀಯ ಹೆದ್ದಾರಿಯ ಘಾಟಾಬಿಲ್ಲೋಡ್ ಬಳಿ ಜೀಪ್‌ಗೆ ಅಪರಿಚಿತ ವಾಹನಕ್ಕೆ ಡಿಕ್ಕಿ ಹೊಡೆದು ಈ ಅಪಘಾತ ಸಂಭವಿಸಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ) ರೂಪೇಶ್ ಕುಮಾರ್ ದ್ವಿವೇದಿ ತಿಳಿಸಿದ್ದಾರೆ. ಎಂಟು ಮಂದಿ ಮೃತಪಟ್ಟಿರುವುದು ದೃಢಪಟ್ಟಿದ್ದು, ಮತ್ತೊಬ್ಬರು ಗಾಯಗೊಂಡಿದ್ದು ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಮತ್ತು ಅಪಘಾತದ ನಂತರ ಅಪರಿಚಿತ ವಾಹನದ ಚಾಲಕ ಪರಾರಿಯಾಗಿದ್ದಾನೆ ಎಂದು ಹೇಳಿದ್ದಾರೆ. ಮೃತರೆಲ್ಲರೂ ಗುನಾ ಜಿಲ್ಲೆಗೆ ಸೇರಿದವರೆಂದು ತಿಳಿದು ಬಂದಿದ್ದು, ಗುರುತು ಪತ್ತೆ ಹಚ್ಚಲಾಗುತ್ತಿದೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ಕಳುಹಿಸಲಾಗಿದೆ ಎಂದು ತಿಳಿಸಿದರು.

## ಕೀಟನಾಶಕ: ಎವರೆಸ್ಟ್ ಮಸಾಲೆ ಉತ್ಪನ್ನಗಳ ಪರಿಶೀಲನೆ

**ಹೈದರಾಬಾದ್:** ಭಾರತದ ಎಂಡಿಎಚ್ ಹಾಗೂ ಎವರೆಸ್ಟ್‌ನ ಮಸಾಲೆ ಉತ್ಪನ್ನಗಳಲ್ಲಿ ವಿಷಕಾರಿ ಅಂಶ ಇರುವ ಬಗ್ಗೆ ಪರಿಶೀಲನೆ ನಡೆಸ ಲಾಗುತ್ತಿದೆ ಎಂದು ನ್ಯೂಜಿಲೆಂಡ್‌ನ ಆಹಾರ ಸುರಕ್ಷತಾ ನಿಯಂತ್ರಕ ಹೇಳಿದೆ. ಈ ಬಗ್ಗೆ ಬೇರೆ ದೇಶಗಳಲ್ಲಿ ತೆಗೆದುಕೊಂಡಿರುವ ನಿರ್ಧಾರದ ಬಗ್ಗೆ ನಮಗೆ ಅರಿವಿದೆ ಎಂದು ನ್ಯೂಜಿಲೆಂಡ್‌ನ ಆಹಾರ ಸುರಕ್ಷತಾ ನಿಯಂತ್ರಕ ರಾಯಿಟರ್ಸ್‌ಗೆ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ ತಿಳಿಸಿದೆ. ಅಮೆರಿಕ ಹಾಗೂ ಆಸ್ಟ್ರೇಲಿಯಾ ಕೂಡ ಈ ಬಗ್ಗೆ ಪರಿಶೀಲನೆ ನಡೆಸುತ್ತಿದೆ. ಈ ಎರಡು ಕಂಪನಿಗಳ ಮಸಾಲೆ ಉತ್ಪನ್ನಗಳಲ್ಲಿ ಕ್ಯಾನ್ಸರ್‌ಕಾರಕ ಕೀಟನಾಶಕ, ಎಥಿಲೀನ್ ಆಕ್ಸೆಡ್ ಇದೆ ಎಂದು ಹಾಂಕಾಂಗ್ ಕಳೆದ ತಿಂಗಳು ನಿಷೇಧ ಹೇರಿತ್ತು. ಎವರೆಸ್ಟ್ ಸಾಂಬಾರು ಪದಾರ್ಥಗಳ ಮಿಶ್ರಣವನ್ನು ಸಿಂಗಪುರ ವಾಪಸ್ ಪಡೆದಿತ್ತು. ಎಥಿಲೀನ್ ಆಕ್ಸೆಡ್ ಮಾನವರಲ್ಲಿ ಕ್ಯಾನ್ಸರ್‌ಗೆ ಕಾರಣವಾಗುತ್ತದೆ. ಅದನ್ನು ಕ್ರಿಮಿನಾಶಕವಾಗಿ ಬಳಕೆ ಮಾಡುವುದನ್ನು ನ್ಯೂಜಿಲೆಂಡ್ ಹಾಗೂ ಇತರ ದೇಶಗಳಲ್ಲಿ ನಿಷೇಧಿಸಲಾಗಿದೆ. ಎಂಡಿಎಚ್ ಹಾಗೂ ಎವರೆಸ್ಟ್ ನ್ಯೂಜಿಲೆಂಡ್‌ನಲ್ಲಿಯೂ ಇರುವುದರಿಂದ ನಾವು ಈ ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇವೆ ಎಂದು ನ್ಯೂಜಿಲೆಂಡ್‌ನ ಆಹಾರ ಸುರಕ್ಷತೆ ನಿಯಂತ್ರಕದ ಹಂಗಾಮಿ ಉಪನಿರ್ದೇಶಕ ಜೆನ್ನಿ ಬಿಷಪ್ ಹೇಳಿದ್ದಾರೆ. ಭಾರತದಲ್ಲೂ ಈ ಕಂಪನಿಗಳ ಮಸಾಲೆ ಉತ್ಪನ್ನಗಳ ಮಾದರಿಗಳ ಪರಿಶೀಲನೆಗೆ ಪ್ರಯೋಗಾಲಯಕ್ಕೆ ಕಳುಹಿಸಲಾಗಿದ್ದರೂ, ಈವರೆಗೂ ಅವುಗಳ ಫಲಿತಾಂಶ ಬಹಿರಂಗಗೊಂಡಿಲ್ಲ.






# ನಾಳೆ ಆರ್‌ಸಿಬಿ ವಿರುದ್ಧ ಸಿಎಸ್‌ಕೆ ಕಾಳಗ




ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಚೆನ್ನೈ ಸೂಪರ್ ಕಿಂಗ್ಸ್ ನಡುವೆ ಮೇ 18ರಂದು ಉದ್ಯಾನ ನಗರಿ ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಹೈ ವೋಲ್ಟೇಜ್ ಪಂದ್ಯದ ಕಾವು ದಿನೇ ದಿನೇ ಹೆಚ್ಚಾಗುತ್ತಿದೆ. ಪಂದ್ಯಕೆ ಮಳೆ ಭೀತಿ ಇದ್ದರೂ ಕೂಡ ಪಂದ್ಯಕ್ಕೆ ಯಾವುದೇ ಅಡಚಣೆ ಆಗದೇ ಇರಲಿ ಎಂದು ಕ್ರಿಕೆಟ್ ಅಭಿಮಾನಿಗಳು ಪ್ರಾರ್ಥನೆ ಶುರು ಮಾಡಿದ್ದಾರೆ. ಇನ್ನು ಮಹತ್ವದ ಪಂದ್ಯಕ್ಕೂ ಮುನ್ನ ವಿರಾಟ್ ಕೊಹ್ಲಿ ಅವರ ವಿಶೇಷ ಅಂಕಿ ಅಂಶಗಳು ಸೋಷಿಯಲ್ ಮೀಡಿಯಾಗಳಲ್ಲಿ ಭಾರಿ ಸದ್ದು ಮಾಡಿವೆ.

ಆರ್‌ಸಿಬಿ ತಂಡದ ಮಾಜಿ ನಾಯಕ, ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಐಪಿಎಲ್ 2024 ಟೂರ್ನಿಯಲ್ಲಿ 13 ಪಂದ್ಯಗಳಲ್ಲಿ 650ಕ್ಕೂ ಹೆಚ್ಚು ರನ್ ಬಾರಿಸಿ ಆರೆಂಜ್ ಕ್ಯಾಪ್ ಹೊಂದಿದ್ದಾರೆ. ಇನ್ನು 18ನೇ ನಂಬರ್ ಜರ್ಸಿ ಹೊಂದಿರುವ ವಿರಾಟ್ ಕೊಹ್ಲಿ, 18ನೇ ತಾರೀಖು ನಡೆಯುವಂತಹ ಪಂದ್ಯಗಳಲ್ಲಿ ವಿಶೇಷ ಪ್ರದರ್ಶನಗಳನ್ನು ನೀಡಿದ್ದಾರೆ. ಐಪಿಎಲ್ ಇತಿಹಾಸ ಕೆದಕಿದರೆ 18ನೇ ತಾರೀಖಿನಲ್ಲಿ ವಿರಾಟ್ ಕೊಹ್ಲಿ ಎರಡು ಮನಮೋಹಕ ಶತಕಗಳನ್ನು ಬಾರಿಸಿರುವುದು ಕಾಣಿಸುತ್ತದೆ. ವಿರಾಟ್ ಕೊಹ್ಲಿ ಅವರ ಈ ವಿಶೇಷ ಅಂಕಿ ಅಂಶಗಳು ಎದುರಾಳಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮನದಲ್ಲಿ ಭಯ ಹುಟ್ಟುವಂತೆ ಮಾಡಿದೆ. 18ರ **ಜೊತೆಗೆ ವಿರಾಟ್ ಕೊಹ್ಲಿ ವಿಶೇಷ ನಂಟು:** ಆರ್‌ಸಿಬಿ, ಸಿಎಸ್‌ಕೆ ನಡುವಣ ಮುಖಾಮುಖಿ ಇತಿಹಾಸದಲ್ಲಿ ಮೊದಲ ಬಾರಿ 18ರ ನಂಟು ಶುರುವಾಗಿದ್ದು 2013ರಲ್ಲಿ ಅಂದು ಆರ್‌ಸಿಬಿ ತಂಡ ಸಿಎಸ್‌ಕೆ ಎದುರು 24 ರನ್‌ಗಳ ಜಯ ದಾಖಲಿಸಿತ್ತು. ವಿರಾಟ್ ಕೊಹ್ಲಿ ಆ ಪಂದ್ಯದಲ್ಲಿ 29 ಎಸೆತಗಳಲ್ಲಿ ಅಜೇಯ 56 ರನ್ ಸಿಡಿಸಿ ಅಬ್ಬರಿಸಿದ್ದರು. ಬಳಿಕ 2014ರಲ್ಲೂ ಸಿಎಸ್‌ಕೆ ಎದುರು ಮೇ 18ರಂದೇ ನಡೆದ ಪಂದ್ಯದಲ್ಲಿ ಆರ್‌ಸಿಬಿ 5 ವಿಕೆಟ್‌ಗಳ ಜಯ ದಾಖಲಿಸಿತ್ತು. ಆ ಪಂದ್ಯದಲ್ಲಿ ಜವಾಬ್ದಾರಿಯುತವಾಗಿ ಬ್ಯಾಟ್ ಮಾಡಿದ್ದ ವಿರಾಟ್ ಕೊಹ್ಲಿ 29 ಎಸೆತಗಳಲ್ಲಿ 27 ರನ್‌ಗಳ ಅಮೂಲ್ಯ ಕೊಡುಗೆ ಕೊಟ್ಟಿದ್ದರು. ವಿರಾಟ್ ಕೊಹ್ಲಿ ಮೇ 18ರಂದು ವಿಶೇಷ ದಾಖಲೆ ಹೊಂದಿರುವುದು ಚೆನ್ನೈ ಸೂಪರ್ ಕಿಂಗ್ಸ್ ತಂಡಕ್ಕೆ ತಲೆ ಬಿಸಿ ತಂದಿದೆ. ಹೀಗಾಗಿ ಮಳೆಯಾದರೆ ಸುಲಭವಾಗಿ ಒಂದು ಅಂಕ ಪಡೆದು ಒಟ್ಟಾರೆ 15 ಅಂಕಗಳೊಂದಿಗೆ ಪ್ಲೇ-ಆಫ್ಸ್‌ಗೆ ಕಾಲಿಡಬಹುದು ಎಂದು ಸೂಪರ್ ಕಿಂಗ್ಸ್ ಅಭಿಮಾನಿಗಳು ಮನದಲ್ಲೇ ಮಂಡಕ್ಕಿ ತಿನ್ನುತ್ತಿದ್ದಾರೆ. ಇದಕ್ಕೆ ಪೂರಕ ಎಂಬಂತೆ ಶನಿವಾರ (ಮೇ 18) ಮಳೆಯಾಗುವ ಸಾಧ್ಯತೆ ಕೂಡ ಶೇ. 80ರಷ್ಟಿದೆ. ಕಾಟ ಕೊಡದೆ ಪಂದ್ಯ ನಡೆದದ್ದೇ ಆದರೆ ಸಾಂಪ್ರದಾಯಿಕ ಎದುರಾಳಿಗಳ ನಡುವೆ ಮತ್ತೊಂದು ಹೈ ಸ್ಕೋರಿಂಗ್ ಪಂದ್ಯವನ್ನು ಅಭಿಮಾನಿಗಳು ಕಣ್ತುಂಬಿಕೊಳ್ಳಬಹುದು.

ಇಂಡಿಯನ್ ಪ್ರೀಮಿಯರ್ ಲೀಗ್ ಅಂತಿಮ ಹಂತಕ್ಕೆ ತಲುಪಿದೆ. ಎಲ್ಲಾ ತಂಡಗಳ ಕೊನೆ ಪಂದ್ಯಗಳು ಈ ವಾರ ನಡೆಯಲಿವೆ. ಎರಡೂ ತಂಡಗಳ ಪ್ಲೇ ಆಫ್ ಭವಿಷ್ಯವನ್ನ ನಿರ್ಧರಿಸಲಿದೆ. 13 ಪಂದ್ಯಗಳಿಂದ 14 ಅಂಕ ಹೊಂದಿರುವ ಸಿಎಸ್‌ಕೆ ಪ್ಲೇ ಆಫ್‌ಗೆ ತುಂಬಾ ಹತ್ತಿರವಿದೆ. ಬೆಂಗಳೂರು ತಂಡವನ್ನೂ ಹೇಗೇ ಸೋಲಿಸಿದರೂ ಪ್ಲೇ ಆಫ್ ಪ್ರವೇಶಿಸುವ ಅವಕಾಶವಿದೆ. ಇಲ್ಲ ಸಣ್ಣ ಅಂತರದಲ್ಲಿ ಸೋತರೂ ರನ್ ರೇಟ್ ಆಧಾರದಲ್ಲಿ ಪ್ಲೇ ಆಫ್ ಪ್ರವೇಶಿಸುತ್ತದೆ. ಆದರೆ ಆರ್‌ಸಿಬಿ ಕಥೆ ಬೇರೆ ಇದೆ. ಈ ಪಂದ್ಯದಲ್ಲಿ ಆರ್‌ಸಿಬಿ ನೆಟ್ ರನ್‌ರೇಟ್‌ನಲ್ಲಿ ಗೆಲ್ಲಬೇಕಿದೆ.

### ಎರಡೂ ತಂಡಗಳ ಮುಖಾಮುಖಿ

**ಪ್ಲೇ ಆಫ್ ನಿರ್ಧರಿಸುವ ಪಂದ್ಯದಿಂದಲೇ ಹೊರಗಳಿಯುತ್ತಿರುವುದು ಆರ್‌ಸಿಬಿಗೆ ನುಂಗಲಾದ ತುತ್ತಾಗಿದೆ. ಈ ಹಿನ್ನಲೆಯಲ್ಲಿ ಎರಡೂ ತಂಡಗಳ ಮುಖಾಮುಖಿ ನೋಡುವುದಾದರೆ, 15 ಆವೃತ್ತಿಯಲ್ಲಿ ಸಿಎಸ್‌ಕೆ, ಆರ್‌ಸಿಬಿ ಒಟ್ಟು 31 ಪಂದ್ಯಗಳಲ್ಲಿ ಮುಖಾಮುಖಿಯಾಗಿವೆ. ಸಿಎಸ್‌ಕೆ ಪ್ರಾಬಲ್ಯ ಮೆರೆದಿದೆ. ಸಿಎಸ್‌ಕೆ 20 ಪಂದ್ಯಗಳನ್ನು ಗೆದ್ದಿದೆ, ಆರ್‌ಸಿಬಿ 10 ಅನ್ನು ಗೆದ್ದಿದೆ. ಇನ್ನು ಕಳೆದ ಐದು ಪಂದ್ಯಗಳಲ್ಲಿ ಚೆನ್ನೈ ತಂಡ 4-1ರ ಮುನ್ನಡೆ ಪಡೆದುಕೊಂಡಿದೆ. ಆರ್‌ಸಿಬಿಯ ತವರು ಮೈದಾನವಾಗಿರುವ ಎಂ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಉಭಯ ತಂಡಗಳು 10 ಬಾರಿ ಮುಖಾಮುಖಿಯಾಗಿದ್ದು, ಆತಿಥೇಯ ಆರ್‌ಸಿಬಿಗಿಂತ ಸಿಎಸ್‌ಕೆ ಒಂದು ಪಂದ್ಯ ಹೆಚ್ಚಾಗಿ ಗೆದ್ದಿದೆ. ಇಲ್ಲಿಯವರೆಗೂ ಆಡಿರುವ 10 ಪಂದ್ಯಗಳಲ್ಲಿ 5ರಲ್ಲಿ ಸಿಎಸ್‌ಕೆ, 4ರಲ್ಲಿ ಆರ್‌ಸಿಬಿ ಗೆಲುವು ಸಾಧಿಸಿದೆ.**

# ಟೀಂ ಇಂಡಿಯಾಗೆ ಆರಂಭದಲ್ಲೇ ವಿಘ್ನ

## ಬಿಸಿಸಿಐ ಮನವಿ ಒಪ್ಪದ ಐಸಿಸಿ



ಟೀಂ ಇಂಡಿಯಾ ನ್ಯೂಯಾರ್ಕ್‌ನಲ್ಲಿ ಅಭ್ಯಾಸ ಪಂದ್ಯ ಆಡಿದರೆ ಅದು ತಂಡಕ್ಕೆ ನಿಸ್ಸಂಶಯವಾಗಿ ಲಾಭ ತರಲಿದೆ. ಏಕೆಂದರೆ ಇದೇ ಮೈದಾನದಲ್ಲಿ ರೋಹಿತ್ ಪಡೆ, ಪಾಕಿಸ್ತಾನದ ವಿರುದ್ಧ ಪಂದ್ಯ ಆಡಬೇಕಿದೆ.

ಒಂದು ವೇಳೆ ಈ ಮೈದಾನದಲ್ಲಿ ಅಭ್ಯಾಸ ಪಂದ್ಯ ನಡೆದರೆ, ಪಾಕ್ ವಿರುದ್ಧದ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾ ಆಟಗಾರರು ನ್ಯೂಯಾರ್ಕ್‌ನ ಪರಿಸ್ಥಿತಿಗೆ ಹೊಂದಿಕೊಳ್ಳಲು ಸಾಧ್ಯವಾಗುತ್ತದೆ. ಆದರೆ ಐಸಿಸಿ ಅದಕ್ಕೆ ಅವಕಾಶ ನೀಡುತ್ತಿಲ್ಲ.

ಟಿ20 ವಿಶ್ವಕಪ್‌ಗೆ ಕೌಂಟ್‌ಡೌನ್ ಶುರುವಾಗಿದೆ. ಜೂನ್ 2 ರಿಂದ ಮಿನಿ ವಿಶ್ವಸಮರ 20 ತಂಡಗಳ ನಡುವೆ ಪ್ರಾರಂಭವಾಗಲಿದೆ. ಟೀಂ ಇಂಡಿಯಾದ ಮೊದಲ ಪಂದ್ಯ ಜೂನ್ 5 ರಂದು ಐರ್ಲೆಂಡ್ ವಿರುದ್ಧ ನಡೆಯಲಿದೆ. ಈ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾ ಅಭ್ಯಾಸ ಪಂದ್ಯ ಆಡಬೇಕಿದೆ. ಕುತೂಹಲಕಾರಿ ಸಂಗತಿಯೆಂದರೆ ಟೀಂ ಇಂಡಿಯಾ ಈ ಅಭ್ಯಾಸ ಪಂದ್ಯವನ್ನು ನ್ಯೂಯಾರ್ಕ್‌ನಲ್ಲಿ ಆಡಲು ಬಯಸಿದೆ. ಆದರೆ ಟೀಂ ಇಂಡಿಯಾದ ಈ ಮನವಿಯನ್ನು ತಿರಸ್ಕರಿಸಿರುವ ಐಸಿಸಿ, ಅಭ್ಯಾಸ ಪಂದ್ಯವನ್ನು ಫ್ಲೋರಿಡಾದಲ್ಲಿ ಆಯೋಜನೆ ಮಾಡುತ್ತಿದೆ. ವಾಸ್ತವವಾಗಿ ಟೀಂ ಇಂಡಿಯಾ ತನ್ನ ಮೊದಲ 4 ಪಂದ್ಯಗಳಲ್ಲಿ 3 ಪಂದ್ಯಗಳನ್ನು ನ್ಯೂಯಾರ್ಕ್‌ನಲ್ಲಿ ಆಡಬೇಕಾಗಿದೆ. ಹೀಗಾಗಿ ಟಿ20 ವಿಶ್ವಕಪ್‌ಗೂ ಮುನ್ನ ಟೀಂ ಇಂಡಿಯಾ ನ್ಯೂಯಾರ್ಕ್‌ನಲ್ಲಿ ಅಭ್ಯಾಸ ಪಂದ್ಯಗಳನ್ನು ಆಡಲು ಬಯಸಿದೆ. ಆದರೆ ವರದಿಗಳ ಪ್ರಕಾರ ಐಸಿಸಿ ಮತ್ತು ವೆಸ್ಟ್ ಇಂಡೀಸ್ ಕ್ರಿಕೆಟ್, ಬಿಸಿಸಿಐನ ಈ ಮನವಿಗೆ ಗ್ರೀನ್ ಸಿಗ್ನಲ್ ನೀಡುತ್ತಿಲ್ಲ ಎಂದು ವರದಿಯಾಗಿದೆ.

**ಐಸಿಸಿ ವಿರೋಧಕ್ಕೆ ಕಾರಣವೇನು:** ಟೀಂ ಇಂಡಿಯಾ ನ್ಯೂಯಾರ್ಕ್‌ನಲ್ಲಿ ಅಭ್ಯಾಸ ಪಂದ್ಯ ಆಡಿದರೆ ಅದು ತಂಡಕ್ಕೆ ನಿಸ್ಸಂಶಯವಾಗಿ ಲಾಭ ತರಲಿದೆ. ಏಕೆಂದರೆ ಇದೇ ಮೈದಾನದಲ್ಲಿ ರೋಹಿತ್ ಪಡೆ, ಪಾಕಿಸ್ತಾನದ ವಿರುದ್ಧ ಪಂದ್ಯ ಆಡಬೇಕಿದೆ. ಒಂದು ವೇಳೆ ಈ ಮೈದಾನದಲ್ಲಿ ಅಭ್ಯಾಸ ಪಂದ್ಯ ನಡೆದರೆ, ಪಾಕ್ ವಿರುದ್ಧದ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾ ಆಟಗಾರರು ನ್ಯೂಯಾರ್ಕ್‌ನ ಪರಿಸ್ಥಿತಿಗೆ ಹೊಂದಿಕೊಳ್ಳಲು ಸಾಧ್ಯವಾಗುತ್ತದೆ. ಆದರೆ ಐಸಿಸಿ ಅದಕ್ಕೆ ಅವಕಾಶ ನೀಡುತ್ತಿಲ್ಲ. ವಾಸ್ತವವಾಗಿ ಬಿಸಿಸಿಐ ಮನವಿಯನ್ನು ಐಸಿಸಿ ತಿರಸ್ಕರಿಸಲು ಬಲವಾದ ಕಾರಣವೂ ಇದೆ. ಆ ಕಾರಣವೆಂದರೆ, ಟೀಂ ಇಂಡಿಯಾಗೆ ಈ ಮೈದಾನದಲ್ಲಿ ಅಭ್ಯಾಸ ಪಂದ್ಯ ಆಡಲು ಅವಕಾಶ ಕೊಟ್ಟರೆ, ಇದರಿಂದ ತಂಡಕ್ಕೆ ಲಾಭವಾಗುವ ಸಾಧ್ಯತೆಗಳಿವೆ. ಅಲ್ಲದೆ ಈ ವಿಚಾರದಲ್ಲಿ ವಿವಾದ ಉಂಟಾಗಬಹುದು ಎಂಬುದು ಐಸಿಸಿಯ ಈ ವಿರೋಧಕ್ಕೆ ಕಾರಣವಾಗಿದೆ.

# ದಕ್ಷಿಣ ಆಫ್ರಿಕಾ ಟಿ20 ತಂಡದಲ್ಲಿ ಏಕೈಕ ಕಪ್ಪು ವರ್ಣೀಯ; ಅಸಮಾಧಾನ ಸ್ಫೋಟ

ವಾಸ್ತವವಾಗಿ ಮುಂಬರುವ ಟಿ20 ವಿಶ್ವಕಪ್ ತಂಡಕ್ಕೆ ಕ್ರಿಕೆಟ್ ದಕ್ಷಿಣ ಆಫ್ರಿಕಾ ಪ್ರಕಟಿಸಿರುವ ತನ್ನ 15 ಸದಸ್ಯರ ತಂಡದಲ್ಲಿ ಕಗಿಸೊ ರಬಾಡ ರೂಪದಲ್ಲಿ ಏಕೈಕ ಕಪ್ಪು ವರ್ಣೀಯ ಆಟಗಾರನನ್ನು ಮಾತ್ರ ಆಯ್ಕೆ ಮಾಡಲಾಗಿದೆ. ಈ ತಾರತಮ್ಯದಿಂದಾಗಿ ಕ್ರಿಕೆಟ್ ದಕ್ಷಿಣ ಆಫ್ರಿಕಾ ಇದೀಗ ಭಾರಿ ಟೀಕೆಗೆ ಗುರಿಯಾಗಿದೆ. ಅಲ್ಲದೆ ಟಿ20 ವಿಶ್ವಕಪ್ ತಂಡದ ಬಗ್ಗೆ ದಕ್ಷಿಣ ಆಫ್ರಿಕಾದ ಮಾಜಿ ಕ್ರೀಡಾ ಸಚಿವರು ಆರೋಪಗಳ ಸುರಿಮಳೆಗೈದಿದ್ದಾರೆ.

ಕಳೆದ ವರ್ಷವಷ್ಟೇ ಭಾರತದಲ್ಲಿ ನಡೆದ ಏಕದಿನ ವಿಶ್ವಕಪ್ ಸಮಯದಲ್ಲಿ ದಕ್ಷಿಣ ಆಫ್ರಿಕಾದ 15 ಸದಸ್ಯರ ಸಂಭಾವ್ಯ ತಂಡದಲ್ಲಿ ರಬಾಡ ಸೇರಿದಂತೆ ಆರು ಕಪ್ಪು ವರ್ಣೀಯ ಆಟಗಾರರು ಸ್ಥಾನ ಪಡೆದಿದ್ದರು .

ಸಿಎಸ್‌ಎ ನಿಯಮದ ಪ್ರಕಾರ ದಕ್ಷಿಣ ಆಫ್ರಿಕಾ ತಂಡದಲ್ಲಿ ಆರು ಕಪ್ಪು ವರ್ಣೀಯ ಆಟಗಾರರಿಗೆ ಅವಕಾಶ ನೀಡಲೇಬೇಕಾಗಿದೆ. ಆದರೆ ಇದೀಗ ಟಿ20 ವಿಶ್ವಕಪ್‌ಗೆ ಆಯ್ಕೆಯಾಗಿರುವ ತಂಡದಲ್ಲಿ ಕಗಿಸೋ ರಬಾಡ ಮಾತ್ರ ಸ್ಥಾನ ಪಡೆದಿರುವ ಏಕೈಕ ಆಫ್ರಿಕನ್ ಕಪ್ಪು ವರ್ಣೀಯ ಆಟಗಾರನಾಗಿದ್ದಾರೆ. ಇದು ಅನುಭವಿಗಳ ಅಸಮಾಧಾನಕ್ಕೆ ಕಾರಣವಾಗಿದೆ. ದಕ್ಷಿಣ ಆಫ್ರಿಕಾದ ಮಾಜಿ ಕ್ರೀಡಾ ಸಚಿವ ಫಿಕಿಲೆ ಎಂಬಾಲುಲಾ ತಂಡದ ಆಯ್ಕೆಯ ಬಗ್ಗೆ ಪ್ರಶ್ನೆಗಳನ್ನು ಎತ್ತಿದ್ದು, 'ಮುಂಬರುವ ಟಿ20 ವಿಶ್ವಕಪ್‌ಗೆ ದಕ್ಷಿಣ ಆಫ್ರಿಕಾ ತಂಡದಲ್ಲಿ ಏಕೈಕ ಆಫ್ರಿಕನ್ ಆಟಗಾರನನ್ನು ಮಾತ್ರ ಆಯ್ಕೆ ಮಾಡಲಾಗಿದೆ. ಕೇವಲ ಒಬ್ಬ ಕಪ್ಪು ವರ್ಣೀಯ ಆಟಗಾರನನ್ನು ತಂಡಕ್ಕೆ ಆಯ್ಕೆ ಮಾಡುವ ನಿರ್ಧಾರವು ವಿಶ್ವಕಪ್ ತಂಡದಲ್ಲಿ ಎಲ್ಲಾ ದಕ್ಷಿಣ ಆಫ್ರಿಕನ್ನರನ್ನು ಪ್ರತಿನಿಧಿಸುವುದಿಲ್ಲ. ಅಲ್ಲದೆ ಈ ನಿರ್ಧಾರ ಖಂಡಿತವಾಗಿಯೂ ಬದಲಾವಣೆಯ



ಹಾದಿಯಲ್ಲಿ ಹಿಮ್ಮುಖವಾಗಿ ಹೆಜ್ಜೆ ಹಾಕಿದಂತಿದೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ.

ಇನ್ನು ಈ ಬಗ್ಗೆ ಎಸ್‌ಎಬಿಸಿ ಸ್ಪೋರ್ಟ್‌ನಲ್ಲಿ ಅಭಿಪ್ರಾಯ ಹಂಚಿಕೊಂಡಿರುವ ಸಿಎಸ್‌ಎ ಮತ್ತು ಅಂತಾರಾಷ್ಟ್ರೀಯ ಕ್ರಿಕೆಟ್ ಕೌನ್ಸಿಲ್ (ಐಸಿಸಿ) ಮಾಜಿ ಅಧ್ಯಕ್ಷ ರೇ ಮಾಲ್ಲಿ, 'ಜಗತ್ತು ಸಾಕಷ್ಟು ಬದಲಾಗಿದೆ. ಆದರೆ ಕ್ರಿಕೆಟ್ ವಿಚಾರದಲ್ಲಿ ಮಾತ್ರ ನಾವು ಸಾಕಷ್ಟು ಹಿಂದುಳಿದಿದ್ದೇವೆ. ಮುಂದೆ ಸಾಗುವ ಬದಲು ಒಂದು ಹೆಜ್ಜೆ ಹಿಂದೆ ಇಟ್ಟಿದ್ದೇವೆ.

ಇತ್ತೀಚಿನ ದಿನಗಳಲ್ಲಿ ದಕ್ಷಿಣ ಆಫ್ರಿಕಾದ ಕ್ರಿಕೆಟ್ ತಂಡದಲ್ಲಿ ಹೆಚ್ಚು ಕಪ್ಪು ವರ್ಣೀಯ ಆಟಗಾರರನ್ನು ಏಕೆ ಇರಿಸಿಕೊಳ್ಳಲು ಸಾಧ್ಯವಿಲ್ಲ ಎಂದು ನನಗೆ ಅರ್ಥವಾಗುತ್ತಿಲ್ಲ. ಇದು ಸ್ವೀಕಾರಾರ್ಹವಲ್ಲ. ಈ ದೇಶದ ಏಕತೆಗಾಗಿ ಮಾತುಕತೆ ನಡೆಸುವಂತೆ ನಮ್ಮನ್ನು ಕೇಳಿದ ಜನರಿಗೆ ನಾವು ದ್ರೋಹ ಮಾಡಿದ್ದೇವೆ ಎನಿಸುತ್ತಿದೆ. ಹೀಗಾಗಿ ಆಯ್ಕೆ ಸಮಿತಿ ಈ ಬಗ್ಗೆ ಮರುಪರಿಶೀಲನೆ ನಡೆಸಬೇಕು' ಎಂದಿದ್ದಾರೆ.

ವಾಸ್ತವವಾಗಿ ಕ್ರಿಕೆಟ್ ದಕ್ಷಿಣ ಆಫ್ರಿಕಾ ಆಯ್ಕೆ ಸಮಿತಿಯನ್ನು ಹೊಂದಿಲ್ಲ.

ಹೀಗಾಗಿ ಟಿ20 ವಿಶ್ವಕಪ್ ತಂಡವನ್ನು ಮುಖ್ಯ ತರಬೇತುದಾರರಾದ ಶುಕ್ರಿ ಕಾನ್ರಾಡ್ (ಟೆಸ್ಟ್) ಮತ್ತು ರಾಬ್ ವಾಲ್ಟರ್ (ಸೀಮಿತ ಓವರ್) ಆಯ್ಕೆ ಮಾಡಿದ್ದಾರೆ. ಇನ್ನು ಈ ವಿವಾದದ ಬಗ್ಗೆ ಮಾತನಾಡಿದ ವಾಲ್ಟರ್, ಟಿ20 ವಿಶ್ವಕಪ್ ತಂಡಕ್ಕೆ ಆಟಗಾರರನ್ನು ಆಯ್ಕೆ ಮಾಡಲು ನಮ್ಮಲ್ಲಿ ಪ್ರತಿಭಾವಂತ ದೇಶೀಯ ಪ್ರತಿಭೆಗಳ ಕೊರತೆ ಇದೆ. ಅಲ್ಲದೆ ಲುಂಗಿ ಎನ್‌ಗಿಡಿ ಕೂಡ ಒಬ್ಬ ಕಪ್ಪು ಆಫ್ರಿಕನ್ ಆಗಿದ್ದು, ಅವರು ಮೀಸಲು ಆಟಗಾರನಾಗಿ ತಂಡದೊಂದಿಗೆ ಇರುತ್ತಾರೆ. ಆದರೆ ಅವರು ಮುಖ್ಯ ತಂಡದ ಭಾಗವಾಗಿಲ್ಲ ಎಂದರು.



# ಕಾನ್ಸ್ ರೆಡ್ ಕಾರ್ಪೆಟ್ ದೀಪಿಕಾ ಸ್ಟೈಲ್ ಕಾಪಿ

ಕಾನ್ಸ್ ಫಿಲ್ಮ್ಸ್ ಫೆಸ್ಟಿವಲ್ ಈಗಾಗಲೇ ಆರಂಭವಾಗಿದೆ. ಎಲ್ಲಾ ಚಿತ್ರರಂಗದ ಸ್ಟಾರ್ ನಟ-ನಟಿಯರು ಈ ಕಾರ್ಯಕ್ರಮಕ್ಕೆ ಹಾಜರಿ ಹಾಕುತ್ತಿದ್ದಾರೆ. ಇದರ ನಡುವೆ ಕನ್ನಡದ 'ಐರಾವತ' ಬೆಡಗಿ ಊರ್ವಶಿ ರೌಟೇಲಾ ಸ್ಟೈಲ್ ಎಲ್ಲರ ಗಮನ ಸೆಳೆದಿದೆ. ಜೊತೆಗೆ ದೀಪಿಕಾ ಪಡುಕೋಣೆ ಸ್ಟೈಲ್ ಅನ್ನೇ ಊರ್ವಶಿ ಕಾಪಿ ಮಾಡಿದ್ದಾರೆ ಎಂದು ನೆಟ್ಟಿಗರು ಕಾಲೆಳೆದಿದ್ದಾರೆ.

ಕಾನ್ಸ್ ಚಲನಚಿತ್ರೋತ್ಸವದ ಮೊದಲ ದಿನವೇ 'ಐರಾವತ' ನಟಿ ಎಂಟ್ರಿ ಕೊಟ್ಟಿದ್ದಾರೆ. ಪಿಂಕ್ ಬಣ್ಣದ ಡ್ರೆಸ್‌ನಲ್ಲಿ ನಟಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ರೆಡ್ ಕಾರ್ಪೆಟ್ ಮೇಲೆ ಹೆಜ್ಜೆ ಹಾಕಿ ಮುದ್ದಾದ ನಗು ಬೀರಿದ್ದಾರೆ. ಬಾರ್ಬಿ ಡಾಲನಂತೆ ನಟಿ ಕಾಣಿಸಿಕೊಂಡಿದ್ದಾರೆ.

ಊರ್ವಶಿ ಧರಿಸಿದ ಪಿಂಕ್ ಬಣ್ಣದ ಗೌನ್ ಅನ್ನು ದೀಪಿಕಾ ಪಡುಕೋಣೆ ಧರಿಸಿದ ಉಡುಗೆಗೆ ಹೋಲಿಸಿದ್ದಾರೆ ನೆಟ್ಟಿಗರು. 2018ರಲ್ಲಿ ನಡೆದ ಕಾನ್ಸ್ ಫಿಲ್ಮ್ಸ್ ಫೆಸ್ಟಿವಲ್‌ನಲ್ಲಿ ದೀಪಿಕಾ ಪಿಂಕ್ ಕಲರ್ ಡ್ರೆಸ್‌ನಲ್ಲಿ ಕಾಣಿಸಿಕೊಂಡಿದ್ದರು. ಈಗ ಅದೇ ರೀತಿ ಗೆಟಪ್‌ನಲ್ಲಿ ಊರ್ವಶಿ ಕೂಡ ಹೋಲುತ್ತಿರೋದನ್ನು ನೋಡಿ ದೀಪಿಕಾ ಸ್ಟೈಲ್ ಕಾಪಿ ಮಾಡಿದ್ದಾರೆ ಎಂದು ನೆಟ್ಟಿಗರು ಕಾಮೆಂಟ್ ಮಾಡಿದ್ದಾರೆ.

ಸದ್ಯ ಬಾಲಯ್ಯ ಜೊತೆ ಹೊಸ ಸಿನಿಮಾದಲ್ಲಿ ಊರ್ವಶಿ ನಟಿಸುತ್ತಿದ್ದಾರೆ. ಸೌತ್ ಮತ್ತು ಹಿಂದಿ ಸಿನಿಮಾಗಳು ಊರ್ವಶಿ ಕೈಯಲ್ಲಿವೆ.

# ಅವಕಾಶ ಸಿಕ್ಕರೆ ಕನ್ನಡದಲ್ಲಿ ನಟಿಸ್ತೇನೆ




ಅವಕಾಶ ಸಿಕ್ಕರೆ ಮತ್ತೆ ಕನ್ನಡ ಚಿತ್ರಗಳಲ್ಲಿ ನಟಿಸುವುದಾಗಿ ಹೇಳಿದ್ದಾರೆ ನಟಿ ಚಾಂದನಿ. ಹಲವಾರು ವರ್ಷಗಳಿಂದ ಸಿನಿಮಾ ರಂಗದಿಂದ ದೂರವಿದ್ದ ನಟಿ, ಇದೀಗ ಅವರ ನಟನೆಯ 'ಎ' ಸಿನಿಮಾ ಬಿಡುಗಡೆ ಆಗುವ ಹೊತ್ತಿನಲ್ಲಿ ಮತ್ತೆ ವಾಪಸ್ಸು ಸಿನಿಮಾಗೆ ಬರುವ ಮಾತುಗಳನ್ನು ಆಡಿದ್ದಾರೆ. ಜೊತೆಗೆ ತಮ್ಮ 'ಎ' ಚಿತ್ರದ ನೆನಪುಗಳನ್ನೂ ಹಂಚಿಕೊಂಡಿದ್ದಾರೆ.

ಕನ್ನಡ ಚಿತ್ರರಂಗದ ಸರ್ವಕಾಲಿಕ ಸೂಪರ್ ಹಿಟ್ ಚಿತ್ರ, ಉಪೇಂದ್ರ ನಿರ್ದೇಶನದ 'ಎ'. ಉಪೇಂದ್ರ ಅವರು ನಿರ್ದೇಶನದೊಂದಿಗೆ ನಾಯಕನಾಗೂ ನಟಿಸಿದ್ದ ಈ ಚಿತ್ರದ ನಾಯಕಿಯಾಗಿ ಚಾಂದಿನಿ ಅಭಿನಯಿಸಿದ್ದರು. 2024ರ ಮೇ 17 ರಂದು 'A' ಚಿತ್ರ ರೀ ರಿಲೀಸ್ ಆಗುತ್ತಿದೆ.

ಇದು ನಾಯಕಿ ಚಾಂದಿನಿ ಜೀವನವನ್ನೇ ಬದಲಿಸಿದ ಒಂದು ಸಿನಿಮಾ. ಕನ್ನಡ ಚಿತ್ರರಂಗದ ಒಂದು ಮೈಲಿಗಲ್ಲು ಸಿನಿಮಾ ಅಂದರೆ ತಪ್ಪಾಗಲಾರದು. ಈ ರೀತಿಯಲ್ಲೂ ಸಿನಿಮಾ ಮಾಡಬಹುದು ಅಂತ ಸಿನಿಮಾ ಜಗತ್ತಿಗೆ ಉಪೇಂದ್ರ ರವರು ತೋರಿಸಿಕೊಟ್ಟರು. ಈ ಸಿನಿಮಾ ಆ ಕಾಲಕ್ಕೆ ಹೇಗೆ ಪ್ರಸ್ತುತವೋ, ಈ ಕಾಲಕ್ಕೂ ಕೂಡ ಈ ಸಿನಿಮಾ ಸಲ್ಲುತ್ತದೆ. ನಾಯಕಿ ಚಾಂದಿನಿ 'A' ಸಿನಿಮಾದಲ್ಲಿ ಹೇಗಿದ್ದರೋ, ಈಗಲು ಹಾಗೆ ಇದ್ದಾರೆ. ಅದಕ್ಕೆ ಅವರು ನೀಡುವ ಕಾರಣ, ನನ್ನ ಜೀವನವನ್ನೇ ಬದಲಿಸಿದಂತಹ ಸಿನಿಮಾ ಅದು. ಅದರಿಂದ ನನಗೆ ಸಿಕ್ಕ ಕನ್ನಡ ಜನರ ಪ್ರೀತಿ ಹಾಗು ಆ ಸಿನಿಮಾದ ಅ ಒಂದು ಫೇಮಸ್ ಡೈಲಾಗ್ ಅನ್ನುವ ಹಾಗೆ, ಈ ಎರೆಡರ ಆಶೀರ್ವಾದದಿಂದ ನಾನು ಇವತ್ತಿಗೂ 'ಎ' ಚಾಂದಿನಿ ರೀತಿಯಲ್ಲೆ ಇದ್ದೀನಿ. ಕಾಲಘಟ್ಟವನ್ನೂ ಮೀರಿದ ಒಂದು ಅಪ್ರತಿಮ ಪ್ರೇಮ ಕಥೆ ಎ ಅಂತಾರೆ ನಾಯಕಿ.



# ಮ್ಯಾಕ್ಸ್ ಶೂಟಿಂಗ್ ಮುಗಿಸಿದ ಕಿಚ್ಚ



ಸ್ಯಾಂಡಲ್‌ವುಡ್ ನಟ ಕಿಚ್ಚ ಸುದೀಪ್ ಇದೀಗ 'ಮ್ಯಾಕ್ಸ್' ಸಿನಿಮಾದ ಮೂಲಕ ಎಂಟ್ರಿ ಕೊಡುತ್ತಿದ್ದಾರೆ. 'ಮ್ಯಾಕ್ಸ್' ಚಿತ್ರದ ಕೊನೆಯ ದಿನದ ಶೂಟಿಂಗ್ ವಿಡಿಯೋವನ್ನು ಹಂಚಿಕೊಂಡು ಚಿತ್ರತಂಡಕ್ಕೆ ಸುದೀಪ್ ಧನ್ಯವಾದ ತಿಳಿಸಿದ್ದಾರೆ.

ಈ ಚಿತ್ರದಲ್ಲಿ ಪೊಲೀಸ್ ಅಧಿಕಾರಿ ಅರ್ಜುನ್ ಮಹಾಕ್ಷಯ್ ಪಾತ್ರದಲ್ಲಿ ಸುದೀಪ್ ನಟಿಸಿದ್ದಾರೆ. ಮಹಾಬಲಿಪುರಂನಲ್ಲಿ ಮ್ಯಾಕ್ಸ್ ಚಿತ್ರದ ಶೂಟಿಂಗ್ ಭರದಿಂದ ಸಾಗುತ್ತಿದೆ. ಈ ಬಗ್ಗೆ ಸೋಷಿಯಲ್ ಮೀಡಿಯಾದಲ್ಲಿ ಸುದೀಪ್ ಮಾಹಿತಿ ಹಂಚಿಕೊಂಡಿದ್ದಾರೆ. ಇದು ಸುದೀರ್ಘ 10 ತಿಂಗಳ ಪ್ರಯಾಣವಾಗಿದೆ. ನಾನು ಪ್ರತಿ ಕ್ಷಣ ಎಂಜಾಯ್ ಮಾಡಿದ್ದೇನೆ. ಅದ್ಭುತ ತಂಡ ಮತ್ತು ಕಲಾವಿದರ ಜೊತೆ ಕೆಲಸ ಮಾಡಿರೋದಾಗಿ ತಿಳಿಸಿದ್ದಾರೆ. ನನ್ನ ಚೆನ್ನಾಗಿ ಹೋಸ್ಟ್ ಮಾಡಿದ್ದಕ್ಕಾಗಿ ಧನ್ಯವಾದಗಳು ಧನು ಸರ್ ಎಂದು ಸುದೀಪ್ ಬರೆದುಕೊಂಡಿದ್ದಾರೆ. ನಿರ್ದೇಶಕ ವಿಜಯ್‌ಗೆ ಸುದೀಪ್ ಥ್ಯಾಂಕ್ಯೂ ಎಂದಿದ್ದಾರೆ. ಈ ಮೂಲಕ 'ಮ್ಯಾಕ್ಸ್' ಸಿನಿಮಾ ಕಡೆಯ ದಿನ ಶೂಟಿಂಗ್ ವಿಡಿಯೋ ಶೇರ್ ಮಾಡಿದ್ದಾರೆ.

ಅಂದಹಾಗೆ, ಸುದೀಪ್ ಜೊತೆ ವರಲಕ್ಷ್ಮಿ ಶರತ್ ಕುಮಾರ್, ಸಂಯುಕ್ತಾ ಹೊರನಾಡ್, ಸುಕೃತಾ, ಅನಿರುದ್ಧ ಭಟ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಅಂದಹಾಗೆ, ವಿಕ್ರಾಂತ್ ರೋಣ ಚಿತ್ರದ ನಂತರ 'ಮ್ಯಾಕ್ಸ್' ಸಿನಿಮಾದ ಮೂಲಕ ಬರುತ್ತಿರೋ ಸುದೀಪ್ ನಟನೆಯ ಈ ಚಿತ್ರದ ಮೇಲೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ.

ಸಿನಿ ವಾಹಿನಿ

# ವಿಜಯ್ ದೇವರಕೊಂಡಗೆ ಸಾಯಿ ಪಲ್ಲವಿ ನಾಯಕಿ



'ಪ್ರೇಮಂ' ಬೆಡಗಿ ಸಾಯಿ ಪಲ್ಲವಿ ಇದೀಗ ಬಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ರಾಮಾಯಣ ಸಿನಿಮಾದ ಶೂಟಿಂಗ್ ತೊಡಗಿಸಿಕೊಂಡಿರುವ ಸಾಯಿ ಪಲ್ಲವಿ ಈಗ ತೆಲುಗಿನ ಹೊಸ ಚಿತ್ರಕ್ಕೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ರೌಡಿ ಬಾಯ್‌ಗೆ ಸಾಯಿ ಪಲ್ಲವಿ ನಾಯಕಿಯಾಗಲು ಸಜ್ಜಾಗಿದ್ದಾರೆ. ಖುಷಿ, ಫ್ಯಾಮಿಲಿ ಸ್ಟಾರ್ ನಟ ವಿಜಯ್ ದೇವರಕೊಂಡ ನಟನೆಯ ಹೊಸ ಚಿತ್ರಕ್ಕೆ ಸಾಯಿ ಪಲ್ಲವಿ ನಾಯಕಿ ಎಂದು ಸುದ್ದಿ ಹರಿದಾಡುತ್ತಿದೆ. ವಿಜಯ್ ಜೊತೆ ಸಾಯಿ ಪಲ್ಲವಿ ಜೋಡಿಯಾಗಿ ತೋರಿಸಲು ಡೈರೆಕ್ಟರ್ ರವಿ ಕಿರಣ್ ಕೋಲಾ ಪ್ಲ್ಯಾನ್ ಮಾಡಿದ್ದಾರೆ ಎನ್ನಲಾಗಿದೆ. ಒಂದು ವಿಭಿನ್ನ ಕಥೆಯನ್ನು ತೋರಿಸಲು ರವಿಕಿರಣ್ ಹೊರಟಿದ್ದಾರೆ. ವಿಜಯ್‌ಗೆ ಸಾಯಿ ಪಲ್ಲವಿ ಸೂಕ್ತ ನಾಯಕಿ ಎಂದು ಚಿತ್ರತಂಡ ಯೋಚಿಸಿ ನಟಿಯನ್ನು ಸಂಪರ್ಕಿಸಿದೆ.

ಸಾಯಿ ಪಲ್ಲವಿ ಕೂಡ ಕಥೆ ಕೇಳಿ ಓಕೆ ಎಂದಿದ್ದಾರೆ ಎನ್ನಲಾಗಿದೆ. ಆದರೆ ಈ ಬಗ್ಗೆ ಚಿತ್ರತಂಡ ಅಧಿಕೃತ ಮಾಹಿತಿ ನೀಡಿಲ್ಲ. ಇನ್ನೂ ಆಮೀರ್ ಖಾನ್ ಪುತ್ರನಿಗೆ ನಾಯಕಿಯಾಗಿ ಬಾಲಿವುಡ್‌ಗೆ ಸಾಯಿ ಪಲ್ಲವಿ ಪಾದಾರ್ಪಣೆ ಮಾಡುತ್ತಿದ್ದಾರೆ. ಯಶ್ ಸಹ-ನಿರ್ಮಾಣದ 'ರಾಮಾಯಣ' ಚಿತ್ರದಲ್ಲಿ ಸೀತೆಯಾಗಿ ನಟಿಸುತ್ತಿದ್ದಾರೆ. ನಾಗಚೈತನ್ಯ ಜೊತೆ ತಾಂಡೇಲ್ ಸಿನಿಮಾ ಮಾಡಿ ಮುಗಿಸಿದ್ದಾರೆ. ಹೀಗೆ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ.

# ನಿರ್ದೇಶನದತ್ತ ಐಶಾನಿ: ಜೂನ್‌ನಲ್ಲಿ ಚಿತ್ರದ ಬಗ್ಗೆ ಘೋಷಣೆ

ಸ್ಯಾಂಡಲ್‌ವುಡ್ ಶಾಕುಂತಲೆ ಐಶಾನಿ ಶೆಟ್ಟಿ ಇದೀಗ ನಟನೆಯಿಂದ ನಿರ್ದೇಶನದತ್ತ ಹೊರಟಿದ್ದಾರೆ. ತಾವೇ ಬರೆದ ಕಥೆಯನ್ನು ದೃಶ್ಯ ರೂಪದಲ್ಲಿ ತೋರಿಸಲು ಸಜ್ಜಾಗಿದ್ದಾರೆ. ಈ ಮೂಲಕ ನಟಿ ಡೈರೆಕ್ಷನ್ ಕ್ಯಾಪ್ ತೊಟ್ಟಿದ್ದಾರೆ. 'ವಾಸ್ತು ಪ್ರಕಾರ' ಸಿನಿಮಾದ ನಟಿ ಐಶಾನಿ ಶೆಟ್ಟಿಗೆ ತಾವು ಬಹುದಿನಗಳಿಂದ ನಿರ್ದೇಶಕಿ ಆಗಬೇಕು ಎಂಬ ಕನಸಿತ್ತು. ಈಗ ಆ ಕನಸಿನತ್ತ ಹೆಜ್ಜೆ ಇಡ್ತಿದ್ದಾರೆ. ಅದಕ್ಕಾಗಿ 2 ವರ್ಷಗಳ ಕಾಲ ಶ್ರಮಿಸಿದ್ದಾರೆ. ಎರಡು ವರ್ಷಗಳ ಹಿಂದೆ ಹೊಳೆದ ಕಥೆಯ ಮೇಲೆ ಕೆಲಸ ಮಾಡಿ ಈಗ ನಟನೆಯ ಜೊತೆಗೆ ನಿರ್ದೇಶನ ಮಾಡಲು ರೆಡಿಯಾಗಿದ್ದಾರೆ.

ಈ ಹಿಂದೆ ಐಶಾನಿ ಕಾಜಿ ಎಂಬ ಕಿರುಚಿತ್ರ ನಿರ್ದೇಶನ ಮಾಡಿದ್ದರು. ಅದು ಹಲವು ಚಿತ್ರೋತ್ಸವದಲ್ಲಿ ಆಯ್ಕೆಯಾಗಿ, ಮೆಚ್ಚುಗೆ ಕೂಡ ಪಡೆಯಿತು. ಈಗ ಮೊದಲ ಚಲನಚಿತ್ರ ನಿರ್ದೇಶನ ಮಾಡಲು ತಯಾರಿ ಮಾಡಿಕೊಂಡಿದ್ದಾರೆ. ನಮ್ಮೂರಿನ ಭಾಗದಲ್ಲಿ ನಡೆಯುವ ಕಥೆಯಿದು. ಕಂಟೆಂಟ್ ಇರುವಂಥ ಕಮರ್ಷಿಯಲ್ ಚಿತ್ರವಿದು. ಇದರಲ್ಲಿ ಹೀರೊ ಅಥವಾ ಹೀರೋಯಿನ್ ಇರುವುದಿಲ್ಲ. ಕಥೆಯೇ ಮುಖ್ಯ ಪಾತ್ರ. ಸದ್ಯಕ್ಕೆ ಈ ಚಿತ್ರದ ಫೈನಲ್ ಡ್ರಾಫ್ಟ್ ರೆಡಿಯಾಗಿದ್ದು, ಶೀಘ್ರದಲ್ಲೇ ಪ್ರಿ ಪ್ರೊಡಕ್ಷನ್ ಕೆಲಸ ಶುರುವಾಗಲಿದೆ ಎಂದು ಐಶಾನಿ ತಮ್ಮ ಮುಂದಿನ ಯೋಜನೆಗಳ ಬಗ್ಗೆ ಹಂಚಿಕೊಂಡಿದ್ದಾರೆ. ನಮ್ಮ ಸಿನಿಮಾ ಹೆಣ್ಣು ಮಕ್ಕಳ ಪರವಾಗಿ ಇರುವಂತಹ ಕಥೆ. ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನಲ್ಲಿ ಚಿತ್ರೀಕರಣ ನಡೆಯಲಿದೆ. ಇದೇ ಜೂನ್ ಅಂತ್ಯದಲ್ಲಿ ಸಿನಿಮಾ ಬಗ್ಗೆ ಅಧಿಕೃತ ಮಾಹಿತಿ ನೀಡೋದಾಗಿ ನಟಿ ತಿಳಿಸಿದ್ದಾರೆ. 'ವಾಸ್ತು ಪ್ರಕಾರ' ಸಿನಿಮಾದ ಮೂಲಕ ಪರಿಚಿತರಾದ ಐಶಾನಿ, ಪ್ಲಸ್, ರಾಕೆಟ್, ನಡುವೆ ಅಂತರವಿರಲಿ, ನಮ್ ಗಣಿ ಬಿಕಾಂ ಪಾಸ್, ಧರಣಿ ಮಂಡಲ ಮಧ್ಯದೊಳಗೆ, ಹೊಂದಿಸಿ ಬರೆಯಿರಿ ಸಿನಿಮಾಗಳಲ್ಲಿ ನಾಯಕಿಯಾಗಿ ನಟಿಸಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**